ಸಂಪುಟ: 04 ಸಂಚಿಕೆ: 199 ಪುಟಗಳು: 08 ಮಂಗಳವಾರ 01 ಅಕ್ಟೋಬರ್ 2024 www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಬಲಿಷ್ಠತೆ ಎನ್ನುವುದು ನಿಮ್ಮ ದೈಹಿಕ ಸಾಮರ್ಥ್ಯದಿಂದ ಬರುವಂಥದಲ್ಲ; ಅದು ಅದಮ್ಯ ಅಂತಃಶಕ್ತಿಯಿಂದ ಬರುವಂಥದ್ದು.

## ಲೋಕಾಯುಕ್ತ ಕೆಲಸಕ್ಕೆ ಅಡ್ಡಿ ಪಡಿಸಿದರೆ ಪೊಲೀಸರಿಂದ ಕ್ರಮ

• ಉದಯವಾಹಿನಿ, ಬೆಂಗಳೂರು

ಲೋಕಾಯುಕ್ತ ಎಸ್‌ಐಟಿ ಕೆಲಸಕ್ಕೆ ಅಡ್ಡಿಪಡಿಸಿದರೆ ಪೊಲೀಸರು ಕ್ರಮ ಕೈಗೊಳ್ಳಲಿದ್ದಾರೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ಕೇಂದ್ರ ಸಚಿವ ಕುಮಾರಸ್ವಾಮಿ ಹಾಗೂ ಎಡಿಜಿಪಿ ಚಂದ್ರಶೇಖರ್ ಜಟಾಪಟಿ ವಿಚಾರವಾಗಿ ಪ್ರತಿಕ್ರಿಯಿಸಿರುವ ಗೃಹ ಸಚಿವರು, ಚಂದ್ರಶೇಖರ್ ನೇತೃತ್ವದಲ್ಲಿ ಎಸ್ ಐಟಿಯನ್ನು ಕಾನೂನು ಪ್ರಕಾರ ರಚಿಸಲಾಗಿದೆ. ಅವರು ಅವರ ಕೆಲಸ ಮಾಡುತ್ತಿದ್ದಾರೆ. ಕೆಲಸಕ್ಕೆ ಅಡ್ಡಿಪಡಿಸಿದರೆ ಪೊಲೀಸರು ಕ್ರಮ ಕೈಗೊಳ್ಳುತ್ತಾರೆ ಎಂದು ಎಚ್ಚರಿಸಿದರು. ಚಂದ್ರಶೇಖರ್ ತಮ್ಮ ಪತ್ರದಲ್ಲಿ ಬರ್ನಾರ್ಡ್ ಷಾ ಹೇಳಿಕೆ ಉಲ್ಲೇಖಿಸಿದ್ದಾರೆ. ಅದನ್ನು ಕುಮಾರಸ್ವಾಮಿ ತನಗೇ ಹೇಳಿದ್ದು ಎಂದು ಯಾಕೆ ಭಾವಿಸಬೇಕು ಕುಮಾರಸ್ವಾಮಿ ಉದ್ದೇಶಿಸಿ ಹೇಳಿಲ್ಲ ಎಂದು ತಿಳಿಸಿದರು.

## ಪ್ರಧಾನಿ ಮೋದಿ ಭಾರತವನ್ನು ನಂ.1 ಸ್ಥಾನಕ್ಕೆ ಕೊಂಡೊಯ್ಯಬೇಕು

• ಉದಯವಾಹಿನಿ, ಬೆಂಗಳೂರು

ಪ್ರಧಾನಿ ನರೇಂದ್ರಮೋದಿ ಅವರು ಭಾರತವನ್ನು ವಿಶ್ವಮುಂಚೂಣಿಯಲ್ಲಿ ನಂಬರ್ 1 ಸ್ಥಾನಕ್ಕೆ ಕೊಂಡೊಯ್ಯಬೇಕು, ಅದನ್ನು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಅಭಿನಂದಿಸುವುದನ್ನು ನಾವು ನೋಡಬೇಕು ಎಂದು ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದ್ದಾರೆ. ಈ ಸಂಬಂಧ ಎಕ್ಸ್‌ನಲ್ಲಿ ಟ್ವೀಟ್ ಮಾಡಿರುವ ಅವರು, ಹಿರಿಯರಾದ ಮಲ್ಲಿಕಾರ್ಜುನ ಖರ್ಗೆ ಅವರು ನೂರ್ಕಾಲ ಬಾಳಬೇಕು, ಸುದೀರ್ಘ ರಾಜಕೀಯ ಜೀವನ ಸಾಗಿಸಬೇಕು ಎನ್ನುವುದು ನಮ್ಮ ಪ್ರಾಮಾಣಿಕ ಅಪೇಕ್ಷೆ ಹಾಗೂ ಪ್ರಾರ್ಥನೆ ಎಂದಿದ್ದಾರೆ. ಖರ್ಗೆ ಅವರ ಕಣ್ಣ ಮುಂದೆಯೇ ಹೆಮ್ಮೆಯ ಪ್ರಧಾನಿ ನರೇಂದ್ರ ಜೀ ಅವರು ಭಾರತವನ್ನು ವಿಶ್ವಮುಂಚೂಣಿಯಲ್ಲಿ ನಂಬರ್ 1 ಸ್ಥಾನಕ್ಕೆ ಕೊಂಡೊಯ್ಯಬೇಕು, ಅದನ್ನು ಖರ್ಗೆ ಅವರು ಅಭಿನಂದಿಸುವುದನ್ನು ನೋಡಬೇಕೆಂಬುದು ನಮ್ಮ ಹೆಬ್ಬಯಕೆ ಎಂದು ಹೇಳಿದ್ದಾರೆ. ಕೆಳಗಿಳಿಸುವವರ ವ್ಯೂಹ ಬೇಧಿಸಿ ಮೂರನೆ ಬಾರಿಯೂ ಮೇಲೆದ್ದು ನಿಂತ ಪ್ರಧಾನಿ ಮೋದಿಯವರ ಈವರೆಗಿನ ನಡೆ, ಸಾಧಿಸಿರುವ ಸಾಧನೆಗಳು ಶತಕೋಟಿ ಭಾರತೀಯರ ಕನಸನ್ನು ನನಸಾಗಿಸುತ್ತಿದೆ ಈ ನಿಟ್ಟಿನಲ್ಲಿ ಭಾರತ ಜಗತ್ತಿನ ಮುಂದೆ ನಂ.1 ಸ್ಥಾನದಲ್ಲಿ ತಲೆ ಎತ್ತಿ ನಿಲ್ಲುವುದರಲ್ಲೂ ನಮಗೆ ಯಾವುದೇ ಅನುಮಾನವಿಲ್ಲ ಎಂದಿದ್ದಾರೆ.

## ರಾಜಕೀಯ ಬದುಕಿನಲ್ಲಿ ನಯಾ ಪೈಸೆ 'ಭ್ರಷ್ಟ' ಹಣಕ್ಕಾಗಿ ಕೈಚಾಚಿಲ್ಲ

• ಉದಯವಾಹಿನಿ, ಬೆಂಗಳೂರು

ನನ್ನ ರಾಜಕೀಯ ಬದುಕಿನಲ್ಲಿ ನಯಾಪೈಸೆ ಭ್ರಷ್ಟ ಹಣಕ್ಕಾಗಿ ಕೈಚಾಚಿಲ್ಲ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ. ನನ್ನ ರಾಜಕೀಯ ಬದುಕಿನಲ್ಲಿ ನಯಾಪೈಸೆ ಭ್ರಷ್ಟ ಹಣಕ್ಕಾಗಿ ಕೈಚಾಚಿಲ್ಲ. ಆತ್ಮಸಾಕ್ಷಿಯಾಗಿ ನಾನು ಸರಿಯಾಗಿದ್ದೀನಿ. ಹೀಗಾಗಿ ನಾನು ಹೆದರುವ, ಜಗ್ಗುವ-ಬಗ್ಗುವ ಪ್ರಶ್ನೆಯೇ ಇಲ್ಲ. ಹೆಚ್ಚೆಂದರೆ ರಾಜಕೀಯವಾಗಿ ಒಂದೆರಡು ತಿಂಗಳು ನನಗೆ ತೊಂದರೆ ಕೊಡಬಹುದು, ಆದರೆ ಕಾನೂನಾತ್ಮಕವಾಗಿ ಗೆದ್ದೇ ಗೆಲ್ಲುತ್ತೇನೆ ಎಂದು ಸಿಎಂ ಸಿದ್ದರಾಮಯ್ಯ ವಿಶ್ವಾಸ ವ್ಯಕ್ತಪಡಿಸಿದರು.


## ರಾಜಕೀಯವಾಗಿ ಕುಮಾರಸ್ವಾಮಿ ಮುಗಿಸಲು ಕಾಂಗ್ರೆಸ್ ಸಂಚು

• ಉದಯವಾಹಿನಿ, ಬೆಂಗಳೂರು

ಕೇಂದ್ರ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ ಅವರನ್ನು ರಾಜಕೀಯವಾಗಿ ಮುಗಿಸಲು ರಾಜ್ಯದ ಕಾಂಗ್ರೆಸ್ ಸರ್ಕಾರ ಸಂಚು ರೂಪಿಸಿದೆ ಎಂದು ವಿಧಾನಪರಿಷತ್ ಜೆಡಿಎಸ್ ಉಪನಾಯಕ ಟಿ.ಎ.ಶರವಣ ಗಂಭೀರ ಆರೋಪ ಮಾಡಿದ್ದಾರೆ. ರಾಜ್ಯದ ಪೊಲೀಸ್ ವ್ಯವಸ್ಥೆ ದುರ್ಬಳಕೆ ಮಾಡಿಕೊಂಡು ಕುಮಾರಸ್ವಾಮಿ ಅವರನ್ನು ಕಾನೂನು ಬಲೆಯಲ್ಲಿ ಸಿಲುಕಿಸಲು ಕಾಂಗ್ರೆಸ್ ನಾಯಕರು ನಡೆಸಿದ್ದಾರೆ ಎಂದು ಆಪಾದಿಸಿರುವ ಅವರು, ಪಿತೂರಿಗೆ ಜೆಡಿಎಸ್ ಜಗ್ಗುವುದಿಲ್ಲ ಎಂದು ವಾಗ್ದಾಳಿ ನಡೆಸಿದ್ದಾರೆ. ಈ ಸಂಬಂಧ ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿರುವ ಅವರು, ಕುಮಾರಸ್ವಾಮಿ ಅವರನ್ನು ನಿಂದಿಸುವ ಪತ್ರ ಬರೆದಿರುವ ಲೋಕಾಯುಕ್ತ ಹಿರಿಯ ಅಧಿಕಾರಿ ಚಂದ್ರ ಶೇಖರ್ ಅವರನ್ನು ತಕ್ಷಣ ಅಮಾನತು ಮಾಡಲು ಕ್ರಮ ಕೈಗೊಳ್ಳಬೇಕು. ಚುನಾಯಿತ ನಾಯಕರ ವಿರುದ್ಧವೇ ಪಿತೂರಿ ನಡೆಸಿರುವ ಈ ಪೊಲೀಸ್ ಅಧಿಕಾರಿ ಮೇಲಿರುವ ಆರೋಪಗಳ ಬಗ್ಗೆ ತನಿಖೆಯಾಗಬೇಕು ಎಂದು ಅವರು ಆಗ್ರಹಿಸಿದ್ದಾರೆ. ಹಿಮಾಚಲ ಪ್ರದೇಶದ ಕೇಡರ್ ಅಧಿಕಾರಿಯಾದ ಚಂದ್ರಶೇಖರ್ ಅವರು, ಇಷ್ಟೊಂದು ದೀರ್ಘ ಕಾಲ ರಾಜ್ಯದಲ್ಲೇ ನೆಲೆ ಕಂಡು ಕೊಳ್ಳಲು ನೆರವು ನೀಡಿದವರು ಯಾರು ಚಂದ್ರಶೇಖರ್ ಅವರಿಗೂ ಈ ಪ್ರಭಾವಿ ನಾಯಕರಿಗೂ ಇರುವ ನಂಟೇನು ಎಂಬುದು ಬಯಲಾಗಬೇಕು. ಒಬ್ಬ ಐಪಿಎಸ್ ಅಧಿಕಾರಿ ತನ್ನ ಸಹೋದ್ಯೋಗಿಗಳಿಗೆ ಕುಮಾರಸ್ವಾಮಿ ವಿರುದ್ಧ ಬರೆಯುವ ಪತ್ರ ಕಾಂಗ್ರೆಸ್ ಕಚೇರಿಯಿಂದ ಹೇಗೆ ಲೀಕ್ ಆಯಿತು ಎಂದು ಅವರು ಪ್ರಶ್ನಿಸಿದ್ದಾರೆ. ಚಂದ್ರಶೇಖರ್ ಅವರ ಆಸ್ತಿ-ಪಾಸ್ತಿ ಬಗ್ಗೆಯೂ ತನಿಖೆಯಾಗಬೇಕು ಎಂದರು.

**ರಾಜ್ಯ ರಾಜಕೀಯದಲ್ಲಿ ನಡೆಯುತ್ತಿರುವ ಬೆಳವಣಿಗೆಗಳ ನಡುವೆ ಡಿಸಿಎಂ ಡಿಕೆ ಶಿವಕುಮಾರ್ ಮತ್ತು ಗೃಹ ಸಚಿವ ಡಾ. ಜಿ ಪರಮೇಶ್ವರ್ ಅವರು ಪ್ರತ್ಯೇಕವಾಗಿ ಭೇಟಿ ಮಾಡಿ ಮಾತುಕತೆ ನಡೆಸಿರುವುದು ಕುತೂಹಲಕ್ಕೆ ಕಾರಣವಾಗಿದೆ. ರಾಜಕೀಯ ಸೂಕ್ಷ್ಮ ಸನ್ನಿವೇಶದಲ್ಲಿ ಈ ಇಬ್ಬರೂ ನಾಯಕರ ಭೇಟಿ ತೀವ್ರ ಕುತೂಹಲ ಕೆರಳಿಸಿದೆ. ಖುದ್ದು ಡಿ.ಕೆ.ಶಿವಕುಮಾರ್‌ರವರೇ ಪರಮೇಶ್ವರ್ ಅವರ ಮನೆಗೆ ಭೇಟಿ ನೀಡಿ, ಮಾತುಕತೆ ನಡೆಸಿದ್ದು, ನಾನಾ ವ್ಯಾಖ್ಯಾನಗಳಿಗೆ ಕಾರಣವಾಗಿದೆ.**


# ಸಿಎಂ ಸೀಟ್ ಕೈಯಲ್ಲಿ ಟವೆಲ್




## ಸಿಎಂ ಯಾರು.. ಚರ್ಚೆ ಬಲು ಜೋರು

**ಕಾಂಗ್ರೆಸ್‌ನಲ್ಲಿ ಸಿಎಂ ಬದಲಾವಣೆಗೆ ಚರ್ಚೆ, ಡಿಕೆಶಿ - ಪರಮೇಶ್ವರ್ ಪ್ರತ್ಯೇಕ ಭೇಟಿ**

**ರಾಜಕಾರಣದಲ್ಲಿ ಕುತೂಹಲ ಕೆರಳಿಸಿದ ಡಿಕೆಶಿ - ಪರಂ ಮಾತುಕತೆ**



• ಉದಯವಾಹಿನಿ, ಬೆಂಗಳೂರು

ಡಿ.ಕೆ.ಶಿವಕುಮಾರ್‌ರವರು, ರಾಜ್ಯದಲ್ಲಿ ಮಳೆ ಕಡಿಮೆಯಾಗುತ್ತಿದೆ. ತುಮಕೂರು, ಬೆಂಗಳೂರು, ಮಂಡ್ಯ ಜಿಲ್ಲೆಗಳಲ್ಲಿ ನೀರಿನ ಸಮಸ್ಯೆ ಶುರುವಾಗಿದೆ. ಎತ್ತಿನಹೊಳೆಯಿಂದ ನೀರನ್ನು ಹೊರಗೆ ತೆಗೆಯಲಾಗಿದೆ. ಬಾಕಿ ಕಾಮಗಾರಿ ಮುಂದುವರೆಸಲು ಅರಣ್ಯ ಭೂಮಿ ಅಡ್ಡ ಬಂದಿದೆ. ಅದಕ್ಕೆ ಪರ್ಯಾಯ ಜಾಗ ನೀಡಲು ತುಮಕೂರು ಮತ್ತು ಹಾಸನದಲ್ಲಿ ಜಿಲ್ಲಾಡಳಿತಗಳು ಸ್ಥಳ ಗುರುತಿಸಿವೆ. ಮುಂದಿನ ವರ್ಷದೊಳಗೆ ತುಮಕೂರಿಗೆ ನೀರು ಒದಗಿಸಬೇಕಿದೆ. ಈ ನಿಟ್ಟಿನಲ್ಲಿ ಮುಖ್ಯಮಂತ್ರಿಯವರು ಪ್ರತ್ಯೇಕ ಸಭೆ ನಡೆಸಲಿದ್ದಾರೆ ಎಂದರು.

ಹಿಂದಿನ ಬಿಜೆಪಿ ಸರ್ಕಾರ ಬೈರಗೊಂಡ್ಲು ಜಲಾಶಯದ ಯೋಜನೆಯನ್ನು ಬದಲಾವಣೆ ಮಾಡಿದೆ. ದೊಡ್ಡಬಳ್ಳಾಪುರ ಮತ್ತು ತುಮಕೂರು ಜಿಲ್ಲೆಯ ಕೊರಟಗೆರೆ ಗಡಿಭಾಗವಾಗಿರುವುದರಿಂದ ಪರಿಹಾರ ವಿಚಾರವಾಗಿ ತಗಾದೆಗಳಿವೆ.ಪರಮೇಶ್ವರ್ ಮತ್ತು ತಾವು ಎತ್ತಿನಹೊಳೆಯಿಂದ ಯೋಜನೆಯುದ್ದಕ್ಕೂ ದಸರಾ ಮುಗಿದ ಬಳಿಕ ವೈಮಾನಿಕ ಸಮೀಕ್ಷೆ ನಡೆಸುತ್ತೇವೆ. ನಾನು ಬೈರಗೊಂಡ್ಲು ಜಲಾಶಯದ ಸ್ಥಳವನ್ನು ಪರಿಶೀಲನೆ ನಡೆಸುತ್ತೇನೆ ಎಂದು ಹೇಳಿದರು. ಈ ನಡುವೆ ಸಂಪರ್ಕ ಕಾಲುವೆಗಳ ಬಗ್ಗೆ ಸಮಿತಿ ರಚಿಸಲಾಗಿದೆ. ತಮ್ಮ ಸರ್ಕಾರ ಕುಡಿಯುವ ನೀರು ಪೂರೈಸುವ ಭರವಸೆ ಈಡೇರಿಸಲು ಬದ್ಧತೆ ತೋರಿಸುತ್ತೇವೆ ಎಂದರು.

ಈ ವೇಳೆ ರಾಜಕೀಯ ಕುರಿತು ಚರ್ಚೆಯಾಗಿದೆಯೇ ಎಂಬ ಪ್ರಶ್ನೆಗೆ ಖಾರವಾಗಿ ಪ್ರತಿಕ್ರಿಯಿಸಿದ ಡಿ.ಕೆ.ಶಿವಕುಮಾರ್, ಪತ್ರಕರ್ತರಿಗೆ ರಾಜಕೀಯ ಬಿಟ್ಟು ಬೇರೆ ಗೊತ್ತಿಲ್ಲವೇ, ಜನ ನಮಗೆ ಅಧಿಕಾರ ನೀಡಿದ್ದಾರೆ. ಕೊಟ್ಟ ಭರವಸೆಗಳನ್ನು ಈಡೇರಿಸುವತ್ತ ಮತ್ತು ಪ್ರಣಾಳಿಕೆಯಲ್ಲಿನ ಆಶ್ವಾಸನೆಗಳನ್ನು ಪೂರ್ಣಗೊಳಿಸಲು ಹೆಚ್ಚಿನ ಆದ್ಯತೆ ನೀಡುತ್ತೇವೆ. ಮುಂದಿನ ದಿನಗಳಲ್ಲಿ ಜನರಿಗೆ ನಾವು ಏನು ಮಾಡಿದ್ದೇವೆ ಎಂದು ಹೇಳಿಕೊಳ್ಳುವ ಅಗತ್ಯವಿದೆ. ಆದ್ದರಿಂದ ಅಭಿವೃದ್ಧಿ ವಿಚಾರವನ್ನು ಆಯ್ಕೆ ಮಾಡಿದ್ದೇವೆ. ರಾಜಕೀಯ ಕುರಿತು ಪ್ರತಿದಿನವೂ ಮಾತನಾಡುತ್ತಲೇ ಇರುತ್ತೇವೆ ಎಂದು ಹೇಳಿದರು.ಹಗಲು-ರಾತ್ರಿ ಸಮಯ ಓಡುತ್ತಿದೆ. ಅಭಿವೃದ್ಧಿಯ ಕುರಿತು ಹೆಚ್ಚಿನ ಒತ್ತು ನೀಡುತ್ತಿದ್ದೇವೆ ಎಂದರು. ನಾವಿಬ್ಬರೂ ಸಭೆ ನಡೆಸಿದ್ದು, ಅಧಿಕಾರಿಗಳಿಲ್ಲದೇ ಇರುವುದು ದೊಡ್ಡ ವಿಚಾರವಲ್ಲ.

ಕಾಂಗ್ರೆಸ್‌ನಲ್ಲಿ 136 ಜನ ಶಾಸಕರು ಒಟ್ಟಾಗಿದ್ದೇವೆ. ಅಧಿಕಾರಕ್ಕಾಗಿ ಯಾವುದೇ ಸಂಧಾನವಿಲ್ಲ ಎಂದು ಹೇಳಿದರು. ನಾಯಕತ್ವ ಸದೃಢವಾಗಿದ್ದ ಮೇಲೆ ಅಧಿಕಾರಿಗಳ ಅಗತ್ಯವಿಲ್ಲ, ನಾವೇ ಚರ್ಚೆ ಮಾಡಬಹುದು. ಹೀಗಾಗಿ ಈ ಸಭೆಗೆ ಯಾವ ಅಧಿಕಾರಿಗಳನ್ನು ಕರೆದಿಲ್ಲ. ನಾವೇ ಆಲೋಚನೆ ಮಾಡಿ ನಿರ್ಧಾರ ತೆಗೆದುಕೊಳ್ಳುತ್ತೇವೆ ಎಂದರು.

ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿಯವರಿಗೆ ಮಾಹಿತಿ ಸೋರಿಕೆಯಾಗುತ್ತಿರುವ ಬಗ್ಗೆ ಪ್ರತಿಕ್ರಿಯಿಸಿದ ಡಿ.ಕೆ.ಶಿವಕುಮಾರ್, ಪ್ರಧಾನಮಂತ್ರಿ ನರೇಂದ್ರ ಮೋದಿ ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿಯವರಿಗೆ ಉತ್ತಮ ಖಾತೆಯನ್ನು ನೀಡಿದ್ದಾರೆ. ಅನಗತ್ಯವಾದ ಚರ್ಚೆಗಳನ್ನು ಬಿಟ್ಟು ಲಕ್ಷ ಜನರಿಗೆ ಉದ್ಯೋಗ ನೀಡುವ ಯೋಜನೆಗಳನ್ನು ತರಲು ಪ್ರಯತ್ನ ಮಾಡಲಿ. ಹಾಸನ, ಮಂಡ್ಯ, ಬೆಂಗಳೂರು, ಬೀದರ್, ಗುಲ್ಬರ್ಗದಂತಹ ಜಿಲ್ಲೆಗಳಲ್ಲಿ ನೆನಪಿನಲ್ಲಿ ಉಳಿಯುವಂತಹ ಕೆಲಸಗಳನ್ನು ಮಾಡಲಿ. ನಮ್ಮ ಸರ್ಕಾರ ಕೂಡ ಸಹಕಾರ ನೀಡಲಿದೆ. ರಾಜಕಾರಣ ಇದ್ದಿದ್ದೇ ಎಂದು ಸಲಹೆ ನೀಡಿದರು.

ಎಡಿಜಿಪಿ ಚಂದ್ರಶೇಖರ್ ಅವರು ಎಚ್.ಡಿ.ಕುಮಾರಸ್ವಾಮಿಯವರ ಕುರಿತು ಬರೆದಿರುವ ಪತ್ರ ಕೆಪಿಸಿಸಿ ಕಚೇರಿಯಲ್ಲಿ ತಯಾರಾಗಿದೆ ಎಂಬುದಕ್ಕೆ ಪ್ರತಿಕ್ರಿಯಿಸಲು ನಿರಾಕರಿಸಿದರು. ಅದು ಅವರಿಬ್ಬರಿಗೂ ಸೇರಿದ ವಿಚಾರ. ತನಿಖೆ ಮಾಡುವವರು, ವರದಿ ನೀಡುವವರು ಚಂದ್ರಶೇಖರ್. ನಮಗೂ ಅದಕ್ಕೂ ಸಂಬಂಧವಿಲ್ಲ ಎಂದರು. ರಾಜ್ಯ ಸರ್ಕಾರವನ್ನು ಪತನಗೊಳಿಸಲು 1,200 ಕೋಟಿ ರೂ. ಸಿದ್ಧವಿದೆ ಎಂದು ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹೇಳಿದ್ದಾರೆ. ಇದನ್ನು ಕಾಂಗ್ರೆಸ್ ಗಂಭೀರವಾಗಿ ಪರಿಗಣಿಸಿದೆ. ಹೈಕಮಾಂಡ್‌ಗೂ ಈ ವಿಚಾರವನ್ನು ತಿಳಿಸಲಾಗಿದ್ದು, ಪಕ್ಷದ ಕಾನೂನು ತಜ್ಞರ ಜೊತೆ ಚರ್ಚೆ ಮಾಡಿದ್ದೇವೆ. ಕಾನೂನು ಪ್ರಕಾರ ಆದಾಯ ತೆರಿಗೆ ಅಧಿಕಾರಿಗಳು ತನಿಖೆ ಮಾಡಬೇಕಿದೆ ಎಂದು ಒತ್ತಾಯಿಸಿದರು.

**1** ಡಿಸಿಎಂ ಡಿಕೆ ಶಿವಕುಮಾರ್ ಮತ್ತು ಗೃಹ ಸಚಿವ ಡಾ. ಜಿ ಪರಮೇಶ್ವರ್ ಪ್ರತ್ಯೇಕ ಭೇಟಿ

**2** ಈ ವೇಳೆ ರಾಜಕೀಯ ಮಾತುಕತೆ ನಡೆದಿಲ್ಲ ಎಂದು ಹೇಳುತ್ತಿದ್ದಾರೆ

**3** ಎತ್ತಿನಹೊಳೆ ಯೋಜನೆ ವಿಚಾರ ಚರ್ಚಿಸಲು ಡಿಕೆಶಿ ಬಂದಿದ್ದರು: ಪರಮೇಶ್ವರ್

**ಕಾಂಗ್ರೆಸ್‌ನಲ್ಲಿ ಸಿಎಂ ಕುರ್ಚಿ ಫೈಟ್**

### ಬೇರೆ ಅರ್ಥ ಕಲ್ಪಿಸುವುದು ಬೇಡ

**ಭೇಟಿ ವಿಚಾರವಾಗಿ ಮಾತನಾಡಿ, ಡಾ. ಜಿ ಪರಮೇಶ್ವರ್, ಎತ್ತಿನಹೊಳೆ ಯೋಜನೆ ವಿಚಾರವಾಗಿ ಚರ್ಚಿಸಲು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಆಗಮಿಸಿದ್ದರು. ಇದಕ್ಕೆ ಬೇರೆ ಅರ್ಥ ಕಲ್ಪಿಸುವ ಅವಶ್ಯಕತೆ ಇಲ್ಲ ಎಂದರು. ಎತ್ತಿನಹೊಳೆ ಯೋಜನೆ ವೇಗವಾಗಿ ಆಗುತ್ತಿಲ್ಲ. ಹಣ ಬಿಡುಗಡೆ ಆಗಬೇಕಿದೆ. ದೊಡ್ಡಬಳ್ಳಾಪುರದಲ್ಲಿ ನೀರು ಸಂಗ್ರಹಕ್ಕೆ ಐದು ಸಾವಿರ ಎಕರೆ ಭೂಮಿ ಪ್ರಸ್ತಾಪ ಮಾಡಲಾಗಿತ್ತು. ಅದರಲ್ಲಿ 2500 ಎಕರೆ ಭೂಮಿ ಕೊರಟಗೆರೆ ಕ್ಷೇತ್ರದ ವ್ಯಾಪ್ತಿಗೆ ಬರುತ್ತದೆ. ಹಿಂದಿನ ಸರ್ಕಾರ ಇದನ್ನು ಬದಲಾಯಿಸಿ, ನಿಲ್ಲಿಸಿತ್ತು. ಅದು ಆಗಬಾರದು ಎಂಬ ಚರ್ಚೆ ನಡೆಯುತ್ತಿತ್ತು. ಮುಂದಿನ ವರ್ಷಕ್ಕಾದರೂ ಜಿಲ್ಲೆಗೆ ನೀರು ಬರಬೇಕು. ಈ ಬಗ್ಗೆ ಚರ್ಚಿಸಲು ಭೇಟಿ ಮಾಡುವುದಾಗಿ ಡಿಸಿಎಂ ಅವರಿಗೆ ಹೇಳಿದ್ದೆ. ಡಿಸಿಎಂ ಅವರು ನಾನೇ ಬರುತ್ತೇನೆ, ಮಾತಾಡೋಣ ಎಂದಿದ್ದರು. ಬನ್ನಿ ಎಂದು ಕರೆದಿದ್ದೆ ಎಂದು ತಿಳಿಸಿದರು.**

### ತನಿಖೆ ಎದುರಿಸಲು ಮುಂದಾದ ಸಿಎಂ

**ಮುಡಾ ಪ್ರಕರಣದಲ್ಲಿ ಲೋಕಾಯುಕ್ತ ತನಿಖೆ ನಿಷ್ಪಕ್ಷಪಾತ, ನ್ಯಾಯಸಮತವಾಗಿ ಎದುರಿಸಲು ನಿರ್ಧರಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಕಾನೂನಾತಕವಾಗಿ ಹೋರಾಟ ಕೈಬಿಟ್ಟಿದ್ದಾರೆ. ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು ಮುಖ್ಯ ಮಂತ್ರಿ ವಿರುದ್ಧ ವಿಚಾರಣೆ ಹಾಗೂ ಅಭಿಯೋಜನೆಗೆ ಪೂರ್ವಾನುಮತಿ ನೀಡಿದ್ದರು. ಇದನ್ನು ಪ್ರಶ್ನಿಸಿ ಸಿದ್ದರಾಮಯ್ಯ ಹೈಕೋರ್ಟ್‌ನಲ್ಲಿ ರಿಟ್ ಅರ್ಜಿ ಸಲ್ಲಿಸಿದ್ದರು. ನ್ಯಾ.ನಾಗಪ್ರಸನ್ನ ಅವರ ಏಕಸದಸ್ಯ ಪೀಠ ರಾಜ್ಯಪಾಲರ ಪೂರ್ವಾನುಮತಿ ಎತ್ತಿಹಿಡಿದಿತ್ತು. ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ 218 ರಡಿ ತನಿಖೆಗೆ ರಾಜ್ಯಪಾಲರು ನೀಡಿದ್ದ ಆದೇಶವನ್ನು ಅಮಾನ್ಯಗೊಳಿಸಿ, ಭ್ರಷ್ಟಾಚಾರ ತಡೆ ಕಾಯಿದೆ 17ಎ ಅಡಿ ತನಿಖೆಗೆ ಅವಕಾಶ ನೀಡಿತ್ತು. ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದಲ್ಲಿ ಮೈಸೂರು ಲೋಕಾಯುಕ್ತ ಪೊಲೀಸರಿಗೆ ಪ್ರಕರಣ ದಾಖಲಿಸಿ ತನಿಖೆ ನಡೆಸಲು ಸೂಚನೆ ನೀಡಿದ ಅನುಸಾರ ಈಗಾಗಲೇ ಎಫ್‌ಐಆರ್ ದಾಖಲಾಗಿದೆ.**

### ತಂತ್ರಕ್ಕೆ ಮೊರೆ ಹೋದ ಲೋಕಾಯುಕ್ತ ಪೊಲೀಸರು

**ಸಿಎಂ ಸಿದ್ದರಾಮಯ್ಯ ವಿರುದ್ಧ ಎಫ್‌ಐಆರ್ ಪ್ರಕರಣಕ್ಕೆ ಸಂಬಂಧಿಸಿದಂತೆ ಲೋಕಾಯುಕ್ತ ಪೊಲೀಸರು ಕಾದು ನೋಡುವ ತಂತ್ರಕ್ಕೆ ಮೊರೆ ಹೋಗಿದ್ದಾರೆ. ಸಿಎಂ ಕಾನೂನು ನಡೆ ಬಹಿರಂಗವಾಗಲಿದೆ. ಹೀಗಾಗಿ ಎಚ್ಚರಿಕೆಯಿಂದ ಮುಂದಿನ ಹೆಜ್ಜೆ ಇಡಲು ಚಿಂತನೆ ನಡೆದಿದೆ. ಒಂದೆಡೆ ಲೋಕಾಯುಕ್ತ ತನಿಖೆ ಪ್ರಶ್ನಿಸಿ ದೂರುದಾರ ಸ್ನೇಹಮಯಿ ಕೃಷ್ಣ ಹೈಕೋರ್ಟ್ ಮೊರೆ ಹೋಗಲಿದ್ದು, ತನಿಖೆಯನ್ನು ಸಿಬಿಐ ವಹಿಸುವಂತೆ ಕೋರ್ಟ್‌ಗೆ ಮನವಿ ಮಾಡಲಿದ್ದಾರೆ. ಮತ್ತೊಂದೆಡೆ ಜನಪ್ರತಿನಿಧಿಗಳ ನ್ಯಾಯಾಲಯದ ತೀರ್ಪು ಪ್ರಶ್ನಿಸಿ ಸಿಎಂ ಸಿದ್ದರಾಮಯ್ಯ ಮೇಲ್ಮನವಿ ಸಲ್ಲಿಸುವ ಸಾಧ್ಯತೆ ಇದೆ.**



## ನವರಾತ್ರಿಯ ದಿನ ಅ.3ರಂದು ಬಳ್ಳಾರಿಗೆ ಭೇಟಿ

• ಉದಯವಾಹಿನಿ, ಬೆಂಗಳೂರು

ನವರಾತ್ರಿ ಅಕ್ಟೋಬರ್ 3ರಂದು ಆರಂಭವಾಗಲಿದೆ. ಇದೇ ಗುರುವಾರ ಬೆಳಿಗ್ಗೆ ಬಳ್ಳಾರಿಗೆ ಭೇಟಿ ಕೊಡಲಿದ್ದೇನೆ ಎಂದು ಶಾಸಕ ಮತ್ತು ಮಾಜಿ ಸಚಿವ ಜನಾರ್ದನ ರೆಡ್ಡಿ ಅವರು ತಿಳಿಸಿದರು.

ನಗರದ ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಅವರು, 14 ವರ್ಷಗಳ ನಂತರ ಬಳ್ಳಾರಿಗೆ ತೆರಳಲು ಅನುಮತಿ ನೀಡಿ ಸುಪ್ರೀಂ ಕೋರ್ಟ್ ಆದೇಶ ಬಂದಿದೆ.ಕೊನೆಯ ಉಸಿರು ಇರುವವರೆಗೂ ಬಳ್ಳಾರಿಯಲ್ಲಿ ಇರುತ್ತೇನೆ ಎಂದು ಭಾವುಕರಾಗಿ ನುಡಿದರು. ಬಳ್ಳಾರಿಯಲ್ಲಿ ವಿವಿಧ ಪ್ರಮುಖ ದೇವಸ್ಥಾನಗಳಿಗೆ ತೆರಳಿ ಪ್ರಾರ್ಥನೆ ಸಲ್ಲಿಸುವುದಾಗಿ ತಿಳಿಸಿದರು.

ಜನ್ಮ ಸ್ಥಳ ಪ್ರತಿಯೊಬ್ಬನಿಗೂ ಮುಖ್ಯವಾಗುತ್ತದೆ. ಯಾವುದೇ ಊರಿಗಿಂತ ನಮ್ಮ ಹುಟ್ಟೂರು ನಮಗೆ ಮೇಲು ಎಂಬುದು ಹಿರಿಯರ ಮಾತು. ಮೊದಲು ಗಂಗಾವತಿಗೆ ತೆರಳಿ, ಹನುಮಂತನ ದರ್ಶನ ಪಡೆದು ರಾಜಕೀಯ ಪುನರ್ ಜನ್ಮ ನೀಡಿದ ಜನರ ಜೊತೆ ಮಾತನಾಡುವೆ ಎಂದು ತಿಳಿಸಿದರು. ನಾನು ಬಿಜೆಪಿಯ ಸಾಮಾನ್ಯ ಕಾರ್ಯಕರ್ತ. ಮುಂದೆ ನಾನು ಎಲ್ಲಿ ಸ್ಪರ್ಧಿಸಬೇಕು ಎಂಬುದನ್ನು ಪಕ್ಷ



ನಿರ್ಧರಿಸಲಿದೆ. ಅದರಂತೆ ನಡೆದುಕೊಳ್ಳುವೆ ಎಂದು ಅವರು ಪ್ರಶ್ನೆಗೆ ಉತ್ತರ ಕೊಟ್ಟರು. ಕಷ್ಟಗಳು ಬಂದಾಗ, ಶ್ರೀಮನ್ನಾರಾಯಣ, ಶ್ರೀ ರಾಮಚಂದ್ರನನ್ನು ನಾವು ನೆನೆಸಿಕೊಳ್ಳುತ್ತೇವೆ. ಅವರಿಗೇ ಸಂಕಷ್ಟಗಳು ತಪ್ಪಿಲ್ಲ ಎಂದ ಮೇಲೆ ನಾವು ಯಾವ ಲೆಕ್ಕಕ್ಕೆ ಅಂದುಕೊಳ್ಳುತ್ತೇವೆ ಎಂದು ವಿಶ್ಲೇಷಿಸಿದರು. ಬಳ್ಳಾರಿಗೆ ಅನೇಕ ಒಳ್ಳೆಯ ಕೆಲಸ ಮಾಡಿದ್ದು, ಅದು ಜನರಿಗೂ ಗೊತ್ತಿದೆ. ಯಡಿಯೂರಪ್ಪ ಅವರು ಮುಖ್ಯಮಂತ್ರಿ ಆಗಿದ್ದಾಗ ದೊಡ್ಡ ಪ್ರಮಾಣದ ಅಭಿವೃದ್ಧಿ ಕೆಲಸಗಳು ಆಗಿದ್ದವು. ಬಳ್ಳಾರಿಯ ಅಭಿವೃದ್ಧಿ ವಿಚಾರದಲ್ಲಿ ಸಾಕಷ್ಟು ಕನಸುಗಳಿವೆ ಎಂದು ಇನ್ನೊಂದು ಪ್ರಶ್ನೆಗೆ ಉತ್ತರ ನೀಡಿದರು. ಮುಂದಿನ ದಿನಗಳಲ್ಲಿ ಬಳ್ಳಾರಿ ಜನರ ಕನಸುಗಳನ್ನು ಈಡೇರಿಸಲು ಶ್ರಮಿಸುವೆ ಎಂದು ತಿಳಿಸಿದರು.

**14 ವರ್ಷಗಳ ನಂತರ ಬಳ್ಳಾರಿಗೆ ತೆರಳಲು ಅನುಮತಿ**

## ಅಕ್ರಮವಾಗಿ ನೆಲೆಸಿದ್ದ ಪಾಕ್, ಬಾಂಗ್ಲಾ ಪ್ರಜೆಗಳ ವಿರುದ್ಧ ಕಠಿಣ ಕ್ರಮ

### ಕೇಂದ್ರ ಸರ್ಕಾರದ ಸಹಭಾಗಿತ್ವದಲ್ಲಿ ಕಠಿಣ ಕ್ರಮ ಜರುಗಿಸುವುದಾಗಿ ಗೃಹಸಚಿವ ಡಾ.ಜಿ ಪರಮೇಶ್ವರ್

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನಲ್ಲಿ ನೆಲೆಸಿದ್ದ ಪಾಕಿಸ್ತಾನದ ಪ್ರಜೆ ಹಾಗೂ ಹಲವು ಬಾಂಗ್ಲ ದೇಶೀಯರ ಬಗ್ಗೆ ತನಿಖೆ ನಡೆಯುತ್ತಿದ್ದು, ಕೇಂದ್ರ ಸರ್ಕಾರದ ಸಹಭಾಗಿತ್ವದಲ್ಲಿ ಕಠಿಣ ಕ್ರಮ ಜರುಗಿಸುವುದಾಗಿ ಗೃಹಸಚಿವ ಡಾ.ಜಿ ಪರಮೇಶ್ವರ್ ತಿಳಿಸಿದ್ದಾರೆ.

ನನಗೆ ಬಂದಿರುವ ಮಾಹಿತಿ ಪ್ರಕಾರ ಹತ್ತು ವರ್ಷದಿಂದ ಭಾರತದಲ್ಲಿದ್ದಾರೆ. ನಾಲ್ವರನ್ನು ಪೊಲೀಸರು ವಶಕ್ಕೆ ತೆಗೆದುಕೊಂಡಿದ್ದು, ವಿಚಾರಣೆ ನಡೆಸುತ್ತಿದ್ದಾರೆ. ಯಾವ ಉದ್ದೇಶದಿಂದ ಬೆಂಗಳೂರಿಗೆ ಬಂದಿದ್ದರು ಎಂಬುದು ಹೊರಬರಲಿದೆ. ಹತ್ತು ವರ್ಷದ ಹಿಂದೆ ಭಾರತಕ್ಕೆ ಬಂದಿದ್ದರು ಎಂಬುದು ಸತ್ಯವಾಗಿದ್ದರೆ, ಕೇಂದ್ರ ಗುಪ್ತದಳದ ಗಮನಕ್ಕೆ ಬರಲಿಲ್ಲ. ಬಂಧಿತರು ಪಾಸ್‌ಪೋರ್ಟ್ ಮಾಡಿಸಿಕೊಳ್ಳುವ ಮಟ್ಟಕ್ಕೆ ಹೋಗಿದ್ದರು. ಹೆಸರು ಬದಲಾಯಿಸಿಕೊಂಡಿದ್ದಾರೆ. ತನಿಖೆಯಲ್ಲಿ ಏನೆಲ್ಲ ಮಾಹಿತಿಗಳು ಹೊರಬರುತ್ತವೆ ಎಂಬುದನ್ನು ನೋಡೋಣ ಎಂದು ತಿಳಿಸಿದರು. ಬಹಳ ಜನ ಬಾಂಗ್ಲಾದೇಶದವರು ಬಂದಿದ್ದಾರೆ. ಪ್ರತಿನಿತ್ಯ ಅವರನ್ನು ವಶಕ್ಕೆ ಪಡೆದು ವರದಿ ನೀಡುತ್ತಿದ್ದೇವೆ. ಬಾಂಗ್ಲಾ ಗಡಿಯಲ್ಲಿ ನುಸುಳದಂತೆ ಬಂದೋಬಸ್ತ್ ಹೆಚ್ಚಿಸಬೇಕು. ಕೇಂದ್ರ ಸರ್ಕಾರದ ಗಮನಕ್ಕೆ ತರುವ ಕೆಲಸ ನಿರಂತರವಾಗಿ ನಡೆಯುತ್ತಿದೆ. ಬಾಂಗ್ಲಾದೇಶದ ಹೈಕಮೀಷನ್‌ಗೂ ಮಾಹಿತಿ ನೀಡುತ್ತೇವೆ ಎಂದರು.

**ನಾಲ್ವರನ್ನು ಪೊಲೀಸರು ವಶಕ್ಕೆ**

ಎತ್ತಿನಹೊಳೆ ಯೋಜನೆ ವಿಚಾರವಾಗಿ ಚರ್ಚಿಸಲು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಆಗಮಿಸಿದ್ದರು. ಇದಕ್ಕೆ ಬೇರೆ ಅರ್ಥ ಕಲ್ಪಿಸುವ ಅವಶ್ಯಕತೆ ಇಲ್ಲ ಎಂದು ಗೃಹ ಸಚಿವರು ಹೇಳಿದರು.

ಎತ್ತಿನಹೊಳೆ ಯೋಜನೆ ವೇಗವಾಗಿ ಆಗುತ್ತಿಲ್ಲ. ಹಣ ಬಿಡುಗಡೆ ಆಗಬೇಕಿದೆ. ದೊಡ್ಡಬಳ್ಳಾಪುರದಲ್ಲಿ ನೀರು ಸಂಗ್ರಹಕ್ಕೆ ಐದು ಸಾವಿರ ಎಕರೆ ಭೂಮಿ ಪ್ರಸ್ತಾಪ ಮಾಡಲಾಗಿತ್ತು. ಅದರಲ್ಲಿ 2,500 ಎಕರೆ ಭೂಮಿ ಕೊರಟಗೆರೆ ಕ್ಷೇತ್ರದ ವ್ಯಾಪ್ತಿಗೆ ಬರುತ್ತದೆ. ಹಿಂದಿನ ಸರ್ಕಾರ ಇದನ್ನು ಬದಲಾಯಿಸಿ, ನಿಲ್ಲಿಸಿತ್ತು. ಅದು ಆಗಬಾರದು ಎಂಬ ಚರ್ಚೆ ನಡೆಯುತ್ತಿತ್ತು.ಮುಂದಿನ ವರ್ಷಕ್ಕಾದರು ಜಿಲ್ಲೆಗೆ ನೀರು ಬರಬೇಕು. ಈ ಬಗ್ಗೆ ಚರ್ಚಿಸಲು ಭೇಟಿ ಮಾಡುವುದಾಗಿ ಡಿಸಿಎಂ ಅವರಿಗೆ ಹೇಳಿದ್ದೆ. ಡಿಸಿಎಂ ಅವರು ನಾನೇ ಬರುತ್ತೇನೆ, ಮಾತಾಡೋಣ ಎಂದಿದ್ದರು. ಬನ್ನಿ ಎಂದು ಕರೆದೆ ಎಂದು ಸ್ಪಷ್ಟನೆ ನೀಡಿದರು. ಡಿ.ಕೆ.ಶಿವಕುಮಾರ್ ಅವರು ಕೆಪಿಸಿಸಿ ಅಧ್ಯಕ್ಷರಿದ್ದಾರೆ. ನಾವು ಮಾತಾಡಿಕೊಳ್ಳದಿದ್ದರೆ ಇನ್ನ್ಯಾರು ಮಾತಾಡಿಕೊಳ್ಳಬೇಕು ನಮ್ಮ ಸಮಸ್ಯೆಗಳ ಬಗ್ಗೆ ನಾವೇ ಚರ್ಚೆ ಮಾಡಬೇಕು. ನಾನು ಮತ್ತು ಡಿ.ಕೆ.ಶಿವಕುಮಾರ್ ಅವರು ಹೊಸದಾಗಿ ಭೇಟಿ ಆಗುತ್ತಿದ್ದೇವೆಯೇ ಎಂದು ಪ್ರಶ್ನಿಸಿದರು.

ಯತ್ನಾಳ್ ಹೇಳಿಕೆಯ ಕುರಿತು ಪ್ರತಿಕ್ರಿಯಿಸಿದ ಅವರು, ನಾನು ಸಾವಿರ ಕೋಟಿ ರೂ. ನೋಡಿಲ್ಲ. ಸರ್ಕಾರ ಅಸ್ಥಿರಗೊಳಿಸಲು ಸಾವಿರ ಕೋಟಿ ರೂ. ಎಲ್ಲಿಟ್ಟಿದ್ದಾರೆ ಎಂಬುದನ್ನು ಯತ್ನಾಳ್ ಅವರನ್ನೇ ಕೇಳಬೇಕು. ಸಾವಿರ ಕೋಟಿ ಎಲ್ಲಿಟ್ಟಿದ್ದಾರೆ ಎಂಬುದರ ಬಗ್ಗೆ ತನಿಖೆಯಾಗಬೇಕು. ಸುಮೋಟೋ ಪ್ರಕರಣ ದಾಖಲಿಸುವ ಬಗ್ಗೆ ಪರಿಶೀಲಿಸಲಾಗುವುದು. ಸಂದರ್ಭ ಬಂದರೆ ದಾಖಲಿಸಬೇಕಾಗುತ್ತದೆ ಎಂದು ತಿಳಿಸಿದರು.ಫ್ರೇಜರ್ ಟೌನ್‌ನಲ್ಲಿ ಪೊಲೀಸ್ ವಸತಿಗೃಹಗಳ ದುಸ್ಥಿತಿಯನ್ನು ಪರಿಶೀಲಿಸಲು ಹಿರಿಯ ಅಧಿಕಾರಿಗಳನ್ನು ಸ್ಥಳಕ್ಕೆ ಕಳುಹಿಸುತ್ತೇನೆ. ಸಾಧ್ಯವಾದರೆ ಭೇಟಿ ನೀಡಿ, ಸೂಕ್ತ ನಿರ್ದೇಶನ ನೀಡುತ್ತೇನೆ ಎಂದು ಹೇಳಿದರು. ಹಿರಿಯ ಅಧಿಕಾರಿ ಏನು ಪದ ಬಳಕೆ ಮಾಡಿದ್ದಾರೆ. ಬರ್ನಾಡ್ ಷಾ ಆ ರೀತಿ ಹೇಳಿದ್ದಾರೆ ಅಂತ ಹೇಳಿದ್ದಾರೆಯೇ ಹೊರತು, ಕುಮಾರಸ್ವಾಮಿ ಅವರಿಗೆ ರೆಫರ್ ಮಾಡಿ ಹೇಳಿಲ್ಲವಲ್ಲ. ನಮಗೆ ಓದುವುದಕ್ಕೆ ಬರಬೇಕಲ್ಲ. ಓದುವುದಕ್ಕೆ, ಅರ್ಥ ಮಾಡಿಕೊಳ್ಳಲು ಬಂದರೆ ಈ ರೀತಿ ಪ್ರಶ್ನೆಯೇ ಬರುವುದಿಲ್ಲ ಎಂದರು.



### ವರದಿ ಬಂದ ಮೇಲೆ ಮುಂದುವರಿಯುತ್ತದೆ

**ಡಿಸಿಎಂ ಭೇಟಿಯನ್ನು ಬೇರೆ ರೀತಿಯ ದೃಷ್ಟಿಕೋನದಲ್ಲಿ ನೋಡಬೇಕಿಲ್ಲ. ನಮ್ಮ ಕೆಲಸ ಕಾರ್ಯಗಳಾಗಬೇಕಾಗುತ್ತದೆ. ಗುಬ್ಬಿಯಿಂದ ಕುಣಿಗಲ್‌ವರೆಗೆ ಎಕ್ಸ್‌ಪ್ರೆಸ್ ಕೆನಲ್ ಮಾಡಲು ಅನುಮತಿ ಸಿಕ್ಕಿದೆ. ಕೆಲಸ ಆರಂಭಿಸುವಾಗ ಜನರು ತಡೆದಿದ್ದಾರೆ. ಈ ಬಗ್ಗೆಯೂ ಚರ್ಚಿಸಲಾಗಿದೆ. ನೀರಾವರಿ ಸಚಿವರಾದ ಡಿ.ಕೆ.ಶಿವಕುಮಾರ್ ಅವರು ತಾಂತ್ರಿಕ ಸಮಿತಿ ಮಾಡಿದ್ದಾರೆ. ಅದರ ವರದಿ ಬಂದ ಮೇಲೆ ಮುಂದುವರಿಯುತ್ತದೆ. ಭೇಟಿ ಮಾಡುವುದಕ್ಕೆ ಬೇರೆಬೇರೆ ಅರ್ಥ ಕಲ್ಪಿಸುವ ಅವಶ್ಯಕತೆ ಇಲ್ಲ ಎಂದು ಸ್ಪಷ್ಟಪಡಿಸಿದರು.**

**ಈ ದಿನದ ದರ** ಪೆಟ್ರೋಲ್: 103.44 ₹/L ಡೀಸೆಲ್ : 89.97 ₹/L ಬಂಗಾರ: ₹7,724/Gram24ct ₹7,080/Gram22ct ಬೆಳ್ಳಿ: ₹95.00/Gram



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
**ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ ರಾಮೋಹಳ್ಳಿ**

## ಬುದ್ಧ, ಮಹಿಷ, ಅಂಬೇಡ್ಕರ್, ಪುಷ್ಪಾರ್ಚನೆ

ನಿನ್ನೆ ಮೈಸೂರಿನಲ್ಲಿ ಮಹಿಷ ದಸರಾ ಆಚರಣೆ ಸಮಿತಿ ಮಹಿಷ ಮಂಡಲೋತ್ಸವದಲ್ಲಿ ಬುದ್ಧ ಮಹಿಷ ಅಂಬೇಡ್ಕರ್ ಪ್ರತಿಮೆಗಳಿಗೆ ಪುಷ್ಪಾರ್ಚನೆ ಮಾಡಿದೆ. ಬುದ್ಧನ ತ್ಯಾಗ ವಿಶ್ವಕ್ಕೆ ಮಾದರಿ. ಆತನ ಧ್ಯಾನ ಜ್ಞಾನ ಶಾಂತಿಸಂದೇಶ ಬದುಕಿಗೆ ದಾರಿದೀಪ. ಅಂಬೇಡ್ಕರ್ ಮಹಾನ್ ಜ್ಞಾನಿ. ಅವರು ನೀಡಿದ ಭಾರತದ ಸಂವಿಧಾನ ಜಗತ್ತಿನ ಅತ್ಯಂತ ದೃಢ ವಿಸ್ತೃತ ಲಿಖಿತ ಸಂವಿಧಾನ. ಇವರ ಆರಾಧನೆ, ವಿಚಾರಧಾರೆಗಳ ಪಾಲನೆ ಶ್ಲಾಘನೀಯ. ಆದರೆ ಮಹಿಷ ಆರಾಧನೆ ಏಕೆಂಬುದು ತಿಳಿದಿಲ್ಲ. ಮಹಿಷ ನಮ್ಮ ನೆಲದವ ಎಂಬ ಏಕೈಕ ಕಾರಣ ಸರಿಯಲ್ಲ. ಮಹಿಷ ರಾಕ್ಷಸ = ದುರ್ಗುಣದವ ಸಜ್ಜನಪೀಡಕ ಆದ್ದರಿಂದ ದೇವತೆಗಳು = ಸಜ್ಜನರು ವಿಶೇಷ ಶಕ್ತಿಯಿಂದ ದೇವಿಯ ಸ್ತ್ರೀಶಕ್ತಿಯ ಮೂಲಕ ಮಹಿಷನನ್ನು ಸಂಹರಿಸಲಾಯಿತು. ದುಷ್ಟಶಕ್ತಿಗಿಂತ ದೇಹಶಕ್ತಿಗಿಂತ ಶಿಷ್ಟಶಕ್ತಿ ಮಾನಸಿಕ ಹಾಗೂ ಆಧ್ಯಾತ್ಮಿಕ ಶಕ್ತಿ ದೊಡ್ಡದು. ಇಂದಿಗೂ ಭಾರತೀಯ ಸೇನೆ ಕಾರ್ಯಾಚರಣೆಯ ವೇಳೆಯಲ್ಲಿ ಹರ ಹರ ಮಹಾದೇವ, ಜೈ ಭಜರಂಗಿ ಇತ್ಯಾದಿ ಘೋಷ ಕೂಗಿ ಉತ್ತೇಜಿತರಾಗುವುದನ್ನು ಮನಗಾಣಬೇಕು. ಮಹಿಷನ ಆರಾಧನೆ ಏಕೆಂದು ತಿಳಿಸಬೇಕು.

## ಹರಿದಾಸ ವೈಭವ ಗಾಯನ

• ಉದಯವಾಹಿನಿ, ಬೆಂಗಳೂರು



ಜಯನಗರ ಐದನೇ ಬಡಾವಣೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ1008 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶಾನುಸಾರ ಶ್ರೀ ಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್ ಕೆ ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ಅಕ್ಟೋಬರ್ 3, ಗುರುವಾರ ಸಂಜೆ 7-30ಕ್ಕೆ ಶ್ರೀಮತಿ ಶ್ರೀವಿದ್ಯಾ ದೇಸಾಯಿ ಇವರಿಂದ ಹರಿದಾಸ ವೈಭವ ಗಾಯನ ಕಾರ್ಯಕ್ರಮ ಏರ್ಪಡಿಸಿದ್ದು, ಇವರ ಗಾಯನಕ್ಕೆ ಹಾರ್ಮೋನಿಯಂ ವಾದನದಲ್ಲಿ ಕು॥ಸೃಷ್ಟಿ ದೇಸಾಯಿ ಮತ್ತು ತಬಲಾ ವಾದನದಲ್ಲಿ ಚಿ॥ ಋತುಪರ್ಣ ದೇಸಾಯಿ ಸಾಥ್ ನೀಡಲಿದ್ದಾರೆ ಎಂದು ಶ್ರೀ ನಂದಕಿಶೋರ್ ಆಚಾರ್ ತಿಳಿಸಿದ್ದಾರೆ. ಸ್ಥಳ : ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, 11ನೇ ಮುಖ್ಯರಸ್ತೆ, 45ನೇ ಅಡ್ಡರಸ್ತೆ, ಜಯನಗರ 5ನೇ ಬಡಾವಣೆ, ಬೆಂಗಳೂರು-41

## ನಟ ದರ್ಶನ್ ಜಾಮೀನು ಅರ್ಜಿ ವಿಚಾರಣೆ ಅ.4ಕ್ಕೆ ಮುಂದೂಡಿಕೆ

• ಉದಯವಾಹಿನಿ, ಬೆಂಗಳೂರು

ರೇಣುಕಸ್ವಾಮಿ ಕೊಲೆ ಪ್ರಕರಣದ 2ನೇ ಆರೋಪಿ ದರ್ಶನ್ ಜಾಮೀನು ಅರ್ಜಿ ವಿಚಾರಣೆಯನ್ನು ನ್ಯಾಯಾಲಯ ಅ.4ಕ್ಕೆ ಮುಂದೂಡಿದೆ.ಸೋಮವಾರ ಅರ್ಜಿ ವಿಚಾರಣೆ ಕೈಗೆತ್ತಿಕೊಂಡ ಬೆಂಗಳೂರಿನ 57ನೇ ಸಿಟಿ ಸಿವಿಲ್ ನ್ಯಾಯಾಲಯ ದರ್ಶನ್ ಪರ ವಕೀಲರು ವಾದ ಮಂಡಿಸಲು ಸಮಯ ಅವಕಾಶ ಬೇಕೆಂದು



ನ್ಯಾಯಾಧೀಶರಿಗೆ ಮನವಿ ಮಾಡಿದರು. ಇದನ್ನು ಮನ್ನಿಸಿದ ನ್ಯಾಯಾಲಯ ಮುಂದಿನ ಅರ್ಜಿ ವಿಚಾರಣೆಯನ್ನು ಅ.4ಕ್ಕೆ ಮುಂದೂಡಿತು. ಇದರಿಂದಾಗಿ ದರ್ಶನ್ ಅಲ್ಲಿಯ ವರೆಗೂ ಬಳ್ಳಾರಿ ಜೈಲೇ ಗಟ್ಟಿ. ಈಗಾಗಲೇ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಪೊಲೀಸರು ವಿಚಾರಣೆಯನ್ನು ಪೂರ್ಣಗೊಳಿಸಿ ನ್ಯಾಯಾಲಯಕ್ಕೆ ದೋಷಾರೋಪ ಪಟ್ಟಿ ಸಲ್ಲಿಸಿದ್ದಾರೆ. ತನಿಖೆ ಮುಗಿದ ಹಿನ್ನಲೆಯಲ್ಲಿ ತಮಗೆ ಜಾಮೀನು ನೀಡಬೇಕೆಂದು ನ್ಯಾಯಾಲಯಕ್ಕೆ ಮೇಲನವಿ ಅರ್ಜಿ ಸಲ್ಲಿಸಿದ್ದಾರೆ. ಆದರೆ ಈಗಾಗಲೇ ವಿಶೇಷ ಸಾರ್ವಜನಿಕ ಅಭಿಯೋಜಕ ಪ್ರಸನ್ನ ಅವರು, ಆಕ್ಷೇಪಣೆ ಸಲ್ಲಿಸಿ ಜಾಮೀನು ನೀಡದಂತೆ ಮನವಿ ಮಾಡಿದ್ದಾರೆ.ನಾಗೇಶ್ ಪರ ವಕೀಲರು ವಾದ ಮಂಡಿಸಿದ ನಂತರ ನ್ಯಾಯಾಲಯ ನೀಡುವ ತೀರ್ಪು ದರ್ಶನ್ ಜಾಮೀನು ಭವಿಷ್ಯವನ್ನು ನಿರ್ಧರಿಸುತ್ತದೆ.

## ಬಿಎಂಟಿಸಿಗೆ ಮತ್ತೊಂದು ಬಲಿ : ಬಸ್ ಚಕ್ರದ ಅಡಿ ಸಿಲುಕಿ ಸವಾರ ದುರ್ಮರಣ!

• ಉದಯವಾಹಿನಿ, ಬೆಂಗಳೂರು

ನಿರ್ಲಕ್ಷದ ಚಾಲನೆ ಹಾಗೂ ಅತಿ ವೇಗದ ಚಾಲನೆಯಿಂದ ಬೆಂಗಳೂರಿನಲ್ಲಿ ಬಿಎಂಟಿಸಿ ಬಸ್‌ಗೆ ಅನೇಕರು ಬಲಿಯಾಗುತ್ತಿರುತ್ತಾರೆ. ಇದೀಗ ಇಂದು ಬಿಎಂಟಿಸಿಗೆ ಮತ್ತೊಂದು ಜೀವ ಹೋಗಿದ್ದು, ಬಿಎಂಟಿಸಿ ಚಕ್ರದ ಅಡಿ ಸಿಲುಕಿ ಬೈಕ್ ಸವಾರ ಸಾವನಪ್ಪಿರುವ ಘಟನೆ ಬೆಂಗಳೂರಿನ ಯಶವಂತಪುರದ ಬಳಿ ನಡೆದಿದೆ. ಹೌದು ಬೆಂಗಳೂರಿನಲ್ಲಿ ಕಿಲ್ಲರ್ ಬಿಎಂಟಿಸಿಗೆ ಮತ್ತೊಂದು ಬಲಿಯಾಗಿದೆ. ಯಶವಂತಪುರದ ಮಾರಮ್ಮ ದೇವಸ್ಥಾನದ ಬಳಿ ಈ ಒಂದು ಅಪಘಾತ ಸಂಭವಿಸಿದೆ. ಎಂಎಸ್ ಪಾಳ್ಯದಿಂದ ಯಶವಂತಪುರ ಕಡೆಗೆ ಬಿಎಂಟಿಸಿ ಬಸ್ ಬರುತ್ತಿತ್ತು, ಈ ವೇಳೆ ಬೈಕ್ ಸವಾರನೊಬ್ಬ ಕಾರಿಗೆ ತನ್ನ ಬೈಕ್ ಟಚ್ ಮಾಡಿದ್ದರಿಂದ ಬಸ್ ಚಕ್ರದ ಕೆಳಗೆ ಬೈಕ್ ಸವಾರ ಬಿದ್ದಿದ್ದಾನೆ.ಈ ವೇಳೆ ಬಿಎಂಟಿಸಿ ಬಸ್ ಬೈಕ್ ಸವಾರನ ಮೇಲೆ ಹರಿದು ಸ್ಥಳದಲ್ಲೇ ಸವಾರ ಮೃತಾಪಟ್ಟಿದ್ದಾನೆ ಎಂದು ತಿಳಿದುಬಂದಿದೆ. ಘಟನಾ ಸ್ಥಳಕ್ಕೆ ಯಶವಂತಪುರ ಸಂಚಾರಿ ಠಾಣೆ ಪೊಲೀಸರು ಭೇಟಿ ನೀಡಿದ್ದು, ಪರಿಶೀಲನೆ ನಡೆಸುತ್ತಿದ್ದಾರೆ. ಯಶವಂತಪುರ ಸಂಚಾರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ನಾಲ್ವರು ಪಾಕ್ ಪ್ರಜೆಗಳ ಬಂಧನ ಕೇಸ್ ವಿಚಾರಣೆಯಲ್ಲಿ ಸ್ಫೋಟಕ ಮಾಹಿತಿ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನಲ್ಲಿ ಅಕ್ರಮವಾಗಿ ನೆಲೆಸಿದ್ದ ಪಾಕಿಸ್ತಾನದ ಪ್ರಜೆ ಸೇರಿ ನಾಲ್ವರು ವಿದೇಶಿಗರನ್ನು ಪೊಲೀಸರು ಬಂಧಿಸಿದ್ದಾರೆ. ವಿಚಾರಣೆ ವೇಳೆ ಸ್ಫೋಟಕ ಮಾಹಿತಿ ಬಹಿರಂಗವಾಗಿದೆ. ಬೆಂಗಳೂರು ನಗರ ಜಿಲ್ಲೆಯ ಆನೇಕಲ್ ತಾಲ್ಲೂಕಿನ ಜಿಗಣಿಯಲ್ಲಿ ಅಕ್ರಮವಾಗಿ ನೆಲೆಸಿದ್ದ ಪಾಕ್ ಪ್ರಜೆ ಸೇರಿ ನಾಲ್ವರು ವಿದೇಶಿಗರನ್ನು ಪೊಲೀಸರು ಬಂಧಿಸಿದ್ದಾರೆ. ನಾಲ್ವರು ಆರೋಪಿಗಳು ಹೆಸರು ಬದಲಾಯಿಸಿಕೊಂಡಿದ್ದರು. ಆರೋಪಿಗಳಾದ ರಶೀದ್ ಎಂಬಾತ ಶಂಕರ್ ಶರ್ಮಾ ಎಂದು ಹೆಸರು ಬದಲಾಯಿಸಿಕೊಂಡಿದ್ದರೆ. ಮೊಹಮ್ಮದ್ ಹನೀಫ್ ಎಂಬಾತ ಬಾಬಾ ಶರ್ಮಾ ಎಂದು ಹೆಸರು ಬದಲಾಯಿಸಿಕೊಂಡಿದ್ದ. ಆರೋಪಿ ಗಳ ಮನೆಯಲ್ಲಿ ಲ್ಯಾಪ್ ಟಾಪ್ ಸೀಜ್ ಮಾಡಲಾಗಿದ್ದು, ಪರಿಶೀಲನೆ ನಡೆಸಲಾಗುತ್ತಿದೆ.ನಕಲಿ ಭಾರತೀಯ ಪಾಸ್‌ಪೋರ್ಟ್ ಹೊಂದಿದ್ದ ಆರೋಪದ ಮೇಲೆ ಬೆಂಗಳೂರು ಗ್ರಾಮಾಂತರದಿಂದ ಬಂಧಿತರಾಗಿರುವ 4 ಜನರ ಬಗ್ಗೆ ಕರ್ನಾಟಕ ಗೃಹ ಸಚಿವ ಜಿ ಪರಮೇಶ್ವರ ಅವರು ಪ್ರತಿಕ್ರಿಯೆ ನೀಡಿದ್ದು, ನನಗೆ ಬಂದ ಮಾಹಿತಿಯ ಪ್ರಕಾರ, ಅವರು ಕಳೆದ 10 ವರ್ಷಗಳಿಂದ ಭಾರತದಲ್ಲಿದ್ದಾರೆ. ಅವರು ಒಂದು ವರ್ಷದ ಹಿಂದೆ ಬೆಂಗಳೂರಿಗೆ ಬಂದಿದ್ದಾರೆ. ಅವರು ಇಲ್ಲಿಗೆ ಏಕೆ ಬಂದರು ಎಂದು ಪೊಲೀಸರು ತನಿಖೆ ನಡೆಸಲಿದ್ದಾರೆ.ಜಿಗಣಿ ಪೊಲೀಸರು ಇಂದು ಭರ್ಜರಿ ಕಾರ್ಯಾಚರಣೆ ನಡೆಸಿದ್ದು, ಜಿಗಣಿ ಅಪಾರ್ಟ್ ಮೆಂಟ್‌ನಲ್ಲಿ ಇಬ್ಬರು ಮಕ್ಕಳು ಹಾಗೂ ಪತ್ನಿಯೊಂದಿಗೆ ವಾಸವಾಗಿದ್ದ ಪಾಕ್ ಪ್ರಜೆ ಸೇರಿ ನಾಲ್ವರು ವಿದೇಶಿಗರನ್ನು ಪೊಲೀಸರು ಬಂಧಿಸಿದ್ದು, ವಿಚಾರಣೆ ನಡೆಸುತ್ತಿದ್ದಾರೆ.

# ಹೆಚ್‌ಡಿಕೆ ರಾಜಕಾರಣ ಬಿಟ್ಟು ರಾಜ್ಯದಲ್ಲಿ ಉದ್ಯೋಗ ಸೃಷ್ಟಿ ಮಾಡಲಿ

### ಸರ್ಕಾರ ಬೇಕಾದಂತಹ ಸಹಕಾರ ನೀಡುತ್ತದೆ ಎಂದು ಡಿಸಿಎಂ ಹೇಳಿಕೆ, ಚರ್ಚೆ ಬಳಿಕ ಮಾಧ್ಯಮಗಳ ಪ್ರಶ್ನೆಗಳಿಗೆ ಪ್ರತಿಕ್ರಿಯೆ

• ಉದಯವಾಹಿನಿ, ಬೆಂಗಳೂರು

**ರಾಜಕೀಯ ಚರ್ಚೆ ಜೋರು**

ಕುಮಾರಸ್ವಾಮಿ ಅವರು ರಾಜಕಾರಣ, ಬೇರೆ ಮಾತು ಎಲ್ಲವನ್ನು ಬಿಟ್ಟು ರಾಜ್ಯದಲ್ಲಿ 50 ಸಾವಿರದಿಂದ 1 ಲಕ್ಷ ಜನರಿಗೆ ಉದ್ಯೋಗ ನೀಡುವಂತಹ ಕೆಲಸ ಮಾಡಲಿ. ಕಾಂಗ್ರೆಸ್ ಸರ್ಕಾರ ಅವರಿಗೆ ಬೇಕಾದಂತಹ ಸಹಕಾರ ನೀಡುತ್ತದೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಹೇಳಿದರು. ಸರ್ಕಾರದ ಮಟ್ಟದಲ್ಲಿ ಅಧಿಕಾರಿಗಳಿಂದ ಮಾಹಿತಿ ಸೋರಿಕೆಯಾಗುತ್ತಿದೆ.

ನನಗೆ ಉತ್ತಮವಾಗಿ ಗುಪ್ತಚರ ಮಾಹಿತಿ ದೊರಕುತ್ತದೆ ಎನ್ನುವ ಕುಮಾರಸ್ವಾಮಿ ಹೇಳಿಕೆ ಬಗ್ಗೆ ಡಿಸಿಎಂ ಉತ್ತರಿಸಿದ್ದು ಹೀಗೆ; ಎತ್ತಿನಹೊಳೆ ವಿಚಾರವಾಗಿ ಸದಾಶಿವನಗರದಲ್ಲಿ ಗೃಹ ಸಚಿವ ಡಾ.ಜಿ. ಪರಮೇಶ್ವರ ಅವರೊಟ್ಟಿಗೆ ಚರ್ಚೆ ಬಳಿಕ ಮಾಧ್ಯಮಗಳ ಪ್ರಶ್ನೆಗಳಿಗೆ ಸೋಮವಾರ ಪ್ರತಿಕ್ರಿಯೆ ನೀಡಿದ ಅವರು, ಕುಮಾರಸ್ವಾಮಿಗೆ ಮೋದಿ ಅವರು ಉಕ್ಕು, ಕೈಗಾರಿಕೆ ಎನ್ನುವ ದೊಡ್ಡ ಹಾಗೂ ಉತ್ತಮ ಖಾತೆ ಕೊಟ್ಟಿದ್ದಾರೆ. ಅವರಿಗೆ ಸಿಕ್ಕಿರುವ ಒಳ್ಳೇ ಅವಕಾಶ ಬಳಸಿಕೊಳ್ಳಲಿ ಎಂದರು.

ಯೋಗಕ್ಕಿಂತ ಯೋಗಕ್ಷೇಮ ಮುಖ್ಯವಾದುದು. ಹಾಸನ, ಬೆಂಗಳೂರು, ಮಂಡ್ಯ, ಬೀದರ್, ಕಲಬುರ್ಗಿ ಸೇರಿದಂತೆ ಇತರೇ ಭಾಗಗಳಿಗೆ ಉತ್ತಮ ಕೆಲಸ ಮಾಡಿ, ಏನಾದರೂ ಸಾಕ್ಷಿ ಬಿಟ್ಟು ಹೋಗಲಿ. ರಾಜಕೀಯ ಇದ್ದಿದ್ದೇ? ಏಕೆ ಇಂತಹ ಅವಕಾಶವನ್ನು ಕಳೆದುಕೊಳ್ಳುತ್ತಾ ಇದ್ದಾರೆ ಎಂದು ವ್ಯಂಗ್ಯವಾಡಿದರು. ನಿಮ್ಮ ಗೃಹ ಸಚಿವರಾದ ಪರಮೇಶ್ವರ್ ಅವರ ನಡುವೆ ರಾಜಕೀಯ ಚರ್ಚೆ ನಡೆಯಿತೇ ಎಂದು ಕೇಳಿದಾಗ, ನಿಮಗೆ ರಾಜಕೀಯ ಬಿಟ್ಟು ಬೇರೆ ವಿಚಾರಗಳು ಕಾಣಿಸುವುದಿಲ್ಲವೇ?. ಜನರು ನಮ್ಮ ಮೇಲೆ ವಿಶ್ವಾಸವನ್ನಿಟ್ಟು ಅಧಿಕಾರ ಕೊಟ್ಟಿದ್ದಾರೆ, ಅವರ ಆಶೋತ್ತರಗಳನ್ನು ಈಡೇರಿಸಬೇಕು ಎಂದರು. ನಾವೆಲ್ಲಾ ಪ್ರತಿದಿನ ರಾಜಕೀಯ ಮಾಡುತ್ತಲೇ ಇರುತ್ತೇವೆ. ಅಭಿವೃದ್ಧಿಯಿದ್ದರೇ ತಾನೇ ರಾಜಕೀಯ. ಐದು ಗ್ಯಾರಂಟಿಗಳನ್ನು ಈಡೇರಿಸಿದ್ದೇವೆ. ಎತ್ತಿನ ಹೊಳೆ ಕೆಲಸ ಮುಗಿಸಬೇಕು, ಪ್ರಣಾಳಿ ಕೆಗಳಲ್ಲಿ ನೀಡಿರುವ ಭರವಸೆಗಳನ್ನು ಈಡೇರಿಸಬೇಕು. ಪ್ರತಿದಿನ ಸಮಯ ಓಡುತ್ತಿರುತ್ತದೆ ಎಂದರು. ಅಧಿಕಾರಿಗಳು ಇಲ್ಲದೇ ಪರಮೇಶ್ವರ, ನೀವು ಮಾತ್ರ ಒಟ್ಟಿಗೆ ಸೇರಿದ್ದೀರಿ ಎಂದು ಕೇಳಿದಾಗ, ನಾವು 136 ಕಾಂಗ್ರೆಸ್ ಶಾಸಕರು ಒಟ್ಟಿಗೆ ಇದ್ದೇವೆ. ಇಲ್ಲಿ ಚರ್ಚೆ ಮಾಡುವಾಗ ಅಧಿಕಾರಿಗಳು ಬೇಕಾಗಿಲ್ಲ. ನಾಯಕರ ಹಿಂದೆ ಅಧಿಕಾರಿಗಳು ಬೇಕಾಗಿಲ್ಲ. ನಾವು ಆಲೋಚಿಸುತ್ತೇವೆ, ಚರ್ಚೆ ಮಾಡುತ್ತೇವೆ, ಅಭಿಪ್ರಾಯ ಕೇಳುತ್ತೇವೆ. ಮಾತನಾಡುವವರು ಹಾಗೂ ತೀರ್ಮಾನಿಸುವವರು ಒಬ್ಬರೇ ಎಂದು ಹೇಳಿದರು. ಎಡಿಜಿಪಿ ಚಂದ್ರಶೇಖರ್ ಅವರ ವಿರುದ್ಧ ಕುಮಾರಸ್ವಾಮಿ ಅವರ ಆರೋಪದ ಬಗ್ಗೆ ಕೇಳಿದಾಗ, ತನಿಖೆ ಮಾಡುವವರು ಅವರು, ತನಿಖೆಗೆ ಒಳಗಾಗುವವರು ಅವರು. ಅದಕ್ಕೂ ನನಗೂ ಸಂಬಂಧವಿಲ್ಲ ಎಂದು ಸ್ಪಷ್ಟಪಡಿಸಿದರು. ಸರ್ಕಾರ ಬೀಳಿಸಲು 1 ಸಾವಿರ ಕೋಟಿ ಮೀಸಲಿಡಲಾಗಿದೆ ಎನ್ನುವ ಯತ್ನಾಳ್ ಅವರ ಹೇಳಿಕೆ ಬಗ್ಗೆ ಕೇಳಿದಾಗ, ಇದರ ಬಗ್ಗೆ ಈಗಾಗಲೇ ಹೈಕಮಾಂಡ್ ಗಮನಕ್ಕೆ ತರಲಾಗಿದೆ. ಪಕ್ಷ ಹಾಗೂ ಸರ್ಕಾರ ಉರುಳಿಸಲು ಈ ಕೆಲಸ ಮಾಡಲಾಗುತ್ತಿದೆ. ನಮ್ಮ ಕಾನೂನು ಸಲಹೆಗಾರರ ಬಳಿ ಚರ್ಚೆ ನಡೆಸಲಾಗುವುದು. ಈ ಕೃತ್ಯ ಐಟಿಯವರಿಂದ ತನಿಖೆಗೆ ಒಳಗಾಗಬೇಕು ಎಂದರು.



> **ಮಳೆ ಕಡಿಮೆಯಾಗುತ್ತಿದೆ, ತುಮಕೂರು, ಬೆಂಗಳೂರು ಗ್ರಾಮಾಂತರ, ರಾಮನಗರ, ಮಂಡ್ಯ ಭಾಗದಲ್ಲಿ ಕುಡಿಯುವ ನೀರಿಗೆ ತೊಂದರೆಯಾಗುತ್ತಿದೆ. ಬಿಜೆಪಿ ಅವಧಿಯಲ್ಲಿ ಕೊರಟಗೆರೆ ಬಳಿಯ ಬೈರಗೊಂಡ್ಲು ಜಲಾಶಯದ ನಿರ್ಮಾಣ ಯೋಜನೆಯನ್ನು ಬದಲಾವಣೆ ಮಾಡಿದ್ದರು. ಈ ಕಾರಣಕ್ಕೆ ಸ್ಥಳ ವೀಕ್ಷಣೆ ಮಾಡಬೇಕು. ಇಲ್ಲಿ ದೊಡ್ಡಬಳ್ಳಾಪುರದ ಒಂದಷ್ಟು ಭಾಗವೂ ಸೇರಿಕೊಂಡಿದೆ. ಪರಿಹಾರ ವಿಚಾರದಲ್ಲಿ ವ್ಯಾಜ್ಯಗಳಿವೆ. ಈ ಭಾಗದ ರೈತರು ಒಂದೇ ರೀತಿಯ ಪರಿಹಾರ ನೀಡಿ ಎಂದು ಹೇಳುತ್ತಿದ್ದಾರೆ. ದಸರಾ ನಂತರ ಎತ್ತಿನಹೊಳೆಯಿಂದ ಬೈರಗೊಂಡ್ಲುವರೆಗೂ ಸ್ಥಳ ವೀಕ್ಷಣೆ ನಡೆಸಿ ತೊಂದರೆಗಳನ್ನು ಪರಿಶೀಲನೆ ಮಾಡಲಾಗುವುದು ಎಂದು ತಿಳಿಸಿದರು.**

> **ಮುಂದಿನ 2025 ರ ವೇಳೆಗೆ ತುಮಕೂರಿಗೆ ಎತ್ತಿನಹೊಳೆ ನೀರನ್ನು ಹರಿಸಲು ಪ್ರಯತ್ನ ಮಾಡಲಾಗುವುದು. ಈಗಾಗಲೇ ಎತ್ತಿನಹೊಳೆ ನೀರನ್ನು ಮೇಲಕ್ಕೆ ಎತ್ತಿ ಸಂಗ್ರಹ ಮಾಡಲಾಗಿದೆ. ತುಮಕೂರು , ಹಾಸನ ಜಿಲ್ಲೆಯಲ್ಲಿ ಅರಣ್ಯ ಭೂಮಿಯನ್ನು ಗುರುತಿಸಲಾಗಿದೆ. ಇದನ್ನು ನೀರಾವರಿ ಇಲಾಖೆಗೆ ವರ್ಗಾವಣೆ ಮಾಡಬೇಕು. ಈ ವಿಚಾರವಾಗಿ ಪ್ರತ್ಯೇಕ ಸಭೆಯನ್ನು ನಡೆಸಲಾಗುವುದು ಎಂದು ಮುಖ್ಯಮಂತ್ರಿಗಳು ತಿಳಿಸಿದ್ದಾರೆ. ಅರಣ್ಯ ಸಚಿವರ ಬಳಿಯೂ ಮಾತನಾಡಲಾಗವುದು ಎಂದರು.**

## ಎಡಿಜಿಪಿ ಚಂದ್ರಶೇಖರ ಅಮಾನತುಗೊಳಿಸಿ

• ಉದಯವಾಹಿನಿ, ಬೆಂಗಳೂರು

ಕೇಂದ್ರ ಸಚಿವ ಹೆಚ್‌ಡಿ ಕುಮಾರಸ್ವಾಮಿ ವಿರುದ್ಧ ಅವಾಚ್ಯ, ಅಸಭ್ಯ ಮತ್ತು ಅವಹೇಳನಕಾರಿ ಪದಬಳಕೆ ಮಾಡಿ ಅವರ ವ್ಯಕ್ತಿತ್ವಕ್ಕೆ ಧಕ್ಕೆ ತಂದಿರುವ ಹಿನ್ನೆಲೆಯಲ್ಲಿ ಲೋಕಾಯುಕ್ತ ಎಸ್‌ಐಟಿ ಎಡಿಜಿಪಿ ಎಂ.ಚಂದ್ರಶೇಖರ್ ವಿರುದ್ಧ ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸಿ.ಬಿ.ಸುರೇಶ್ ಬಾಬು ನೇತೃತ್ವದ ಜೆಡಿಎಸ್ ನಿಯೋಗ ಮುಖ್ಯ ಕಾರ್ಯದರ್ಶಿ ಅವರಿಗೆ ದೂರು ನೀಡಿ, ಅಮಾನತುಗೊಳಿಸುವಂತೆ ಒತ್ತಾಯಿಸಿದೆ.

ಹೌದು ಕೇಂದ್ರ ಸಚಿವ ಹೆಚ್‌ಡಿ ಕುಮಾರಸ್ವಾಮಿ ವಿರುದ್ಧ ಅವಾಚ್ಯ, ಅಸಭ್ಯ ಮತ್ತು ಅವಹೇಳನಕಾರಿ ಪದಬಳಕೆ ಮಾಡಿ ಅವರ ವ್ಯಕ್ತಿತ್ವಕ್ಕೆ ಧಕ್ಕೆ ತಂದಿರುವ ಹಿನ್ನೆಲೆಯಲ್ಲಿ ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಭಾರತೀಯ ಪೊಲೀಸ್ ಸೇವೆಯಿಂದ ಅಮಾನತ್ತುಗೊಳಿಸಿ ಎಂದು ವಿಧಾನಸೌಧದಲ್ಲಿ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಭೇಟಿಯಾಗಿ ಮನವಿ ಪತ್ರ ಸಲ್ಲಿಸಿದರು.

ಹಾಗಾಗಿ ಚಂದ್ರಶೇಖರ ವಿರುದ್ಧ ಉನ್ನತ ಮಟ್ಟದ ತನಿಖೆ ನಡೆಸಲು ಅಗತ್ಯವಿರುವ ದಾಖಲಾತಿಗಳೊಂದಿಗೆ ಭಾರತೀಯ ಪೊಲೀಸ್ ಸೇವೆಗಳ ವೃಂದದ ಪ್ರಾಧಿಕಾರವಾಗಿರುವ ಕೇಂದ್ರ ಗೃಹ ಮಂತ್ರಾಲಯಕ್ಕೆ ಪ್ರಸ್ತಾವನೆಯನ್ನು ಸೂಕ್ತ ಶಿಫಾರಸ್ಸಿನೊಂದಿಗೆ ಕಳುಹಿಸಬೇಕೆಂದು ಒತ್ತಾಯಿಸಿದ್ದಾರೆ.



ಉದಯವಾಹಿನಿ ಚಿತ್ರ

> **ಮನವಿ ಪತ್ರದಲ್ಲಿ ಎಂ.ಚಂದ್ರಶೇಖರ್ ಮೂಲತಃ ಹಿಮಾಚಲ ಪ್ರದೇಶ ಐ.ಪಿ.ಎಸ್ ಕೇಡರ್‌ಗೆ ಸೇರಿದವರಾಗಿದ್ದಾರೆ. ನಂತರ, ತನ್ನ ಪತ್ನಿಯ ಅನಾರೋಗ್ಯ ಮತ್ತು ಹಿಮಾಚಲ ಪ್ರದೇಶದ ವಾತಾವರಣ ಮತ್ತು ಹವಾಗುಣ ಹೊಂದುವುದಿಲ್ಲ ಎನ್ನುವ ಕುಂಟು ನೆಪ ಹೇಳಿ ಮತ್ತು ಸುಳ್ಳು ದಾಖಲೆಗಳನ್ನು ಸೃಷ್ಟಿಸಿ ಹಾಗೂ ರಾಜಕೀಯ ಪ್ರಭಾವ ಬೀರಿ ಕರ್ನಾಟಕ ರಾಜ್ಯಕ್ಕೆ ವರ್ಗಾವಣೆಗೊಂಡು, ತದನಂತರ ಕರ್ನಾಟಕ ಐ.ಪಿ.ಎಸ್ ಕೇಡರ್‌ನಲ್ಲಿ ವಿಲೀನಗೊಂಡಿದ್ದಾರೆ ಎಂದು ಆರೋಪಿಸಿದ್ದಾರೆ.**

## ಮಣ್ಣಿನಲ್ಲಿ ಜೀವಂತ ಹೂತಿದ್ದ ಗಂಡು ಮಗು ಪತ್ತೆ!, ಬದುಕಿದ್ದ ಕಂದಮ್ಮ

• ಉದಯವಾಹಿನಿ, ಬೆಂಗಳೂರು

ಮಕ್ಕಳಿಲ್ಲ...ಮಕ್ಕಳಿಲ್ಲ... ಎಂದು ಕೊರಗುವ, ಕಂಡ ಕಂಡ ದೇವರಿಗೆ ಹರಕೆ ಹೊತ್ತು ಮಕ್ಕಳು ಬೇಕೆನ್ನುವವರನ್ನು, ಮಕ್ಕಳಿಲ್ಲ ಬದುಕು ಕಳೆಯುವವರನ್ನು ನಾವು ನೋಡಿದ್ದೇವೆ. ಆದರೆ ಬೆಂಗಳೂರಿನ ಸಮೀಪ ನಿರ್ಜನ ಪ್ರದೇಶದಲ್ಲಿ ಹುಟ್ಟಿದ ಒಂದೇ ದಿನಕ್ಕೆ ಹಸಿಗೂಸನ್ನು (ಮಗು) ಜೀವಂತವಾಗಿ ಮಣ್ಣಲ್ಲಿ ಹೂತಿಟ್ಟು ಪಾಪಿಗಳು ಪರಾರಿಯಾದ ಅಮಾನವೀಯ ಘಟನೆ ನಡೆದಿದೆ.

ಹೌದು, ಈ ಘಟನೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಆನೇಕಲ್ ತಾಲ್ಲೂಕಿನ ಕತ್ರಿಗುಪ್ಪೆ ದಿನ್ನೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ನಡೆದಿದೆ.

ಇಲ್ಲಿನ ನೀಲಗಿರಿಯ ತೋಪಿನಲ್ಲಿ ನಿರ್ಜನ ಪ್ರದೇಶದಲ್ಲಿ ಮಗುವನ್ನು ಜೀವಂತವಾಗಿ ಹೂತು ಹಾಕಲಾಗಿದೆ. ಸೋಮವಾರ (ಸೆಪ್ಟಂಬರ್ 30) ಆಟೋ ಚಾಲಕರು ಬಹಿರ್ದೆ ಸೆಗೆ ತೆರಳಿದ್ದ ವೇಳೆ ಮಗು ಅಳುವ ಶಬ್ದ ಕೇಳಿ ವಿಷಯ ಗೊತ್ತಾಗಿದೆ. ಕೂಡಲೇ ಮಗುವನ್ನು ರಕ್ಷಿಸಿದ ಸ್ಥಳೀಯರು ಮಕ್ಕಳ ರಕ್ಷಣಾ ವೇದಿಕೆಗೆ ಹಾಗೂ ಪೊಲೀಸರಿಗೆ ಕರೆ ಮಾಡಿ ಮಾಹಿತಿ ನೀಡಲಾಗಿದೆ.



ಉದಯವಾಹಿನಿ ಚಿತ್ರ

ಸ್ಥಳೀಯರ ಸಮಯ ಪ್ರಜ್ಞೆಯಿಂದ ಮಗು ಜೀವಂತವಾಗಿ ಸಿಕ್ಕಿದ್ದು, ಸಣ್ಣ ಪುಟ್ಟ ಗಾಯಗಳಾಗಿವೆ. ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಲಾಗುತ್ತಿದೆ. ಹುಟ್ಟಿದ ಒಂದೇ ದಿನದ ಕಂದಮ್ಮನಿಗೆ ಈ ಗತಿ ತಂದಿಟ್ಟ ಪಾಪಿಗಳಿಗೆ ಕಠಿಣ ಶಿಕ್ಷೆ ಆಗಬೇಕು ಎಂದು ಆಗ್ರಹಿಸಲಾಗುತ್ತಿದೆ. ಮಗು ಬೇಕು ಎಂದುಕೊಂಡ ಅದೆಷ್ಟೋ ದಂಪತಿಗಳಿಗೆ ಮಕ್ಕಳಿಲ್ಲದ ಕೊರಗಿನಲ್ಲಿ ಜೀವನ ಕಳೆಯುತ್ತಾರೆ. ಆದರೆ ಜೀವಂತವಾಗಿ ಮಣ್ಣಲ್ಲಿ ಮಗು ಹೂತ ಪಾಪಿಗಳಿಗೆ ದೇವರು ಕರುಣಿಸಿದರೂ ಇಂಥ ಹೇಯ ಕೃತ್ಯ ಮಾಡಿದ್ದಾರೆ ಎಂದು ಸ್ಥಳೀಯರು ಕಳವಳ ವ್ಯಕ್ತಪಡಿಸಿದ್ದಾರೆ. ಬೆಳಗ್ಗೆ 7 ಗಂಟೆಗೆ ಆಟೋ ಚಾಲಕರು ನೀಲಗಿರಿ ತೋಪಿನಲ್ಲಿ ಬಹಿರ್ದೆಸೆಗೆ ಹೋಗಾಗ ಘಟನೆ ಬೆಳಕಿಗೆ ಬಂದಿದೆ. ಪೊಲೀಸರಿಗೆ ದೂರು ನೀಡಲಿದ್ದೇವೆ. ಇಂತಹ ಘಟನೆಗೆ ಕಾರಣವಾದವರನ್ನು ಹುಡುಕಿಸಿ ತಕ್ಕ ಶಿಕ್ಷೆ ಕೊಡಿಸುವ ಕೆಲಸವಾಗುತ್ತದೆ. ಇದೊಂದು ನಡೆಯ ಬಾರದ ಅಮಾನವೀಯ ಘಟನೆಯಾಗಿದ್ದು, ಸಮಾಜವೇ ತಲೆ ತಗ್ಗಿಸುವ ಪ್ರಕರಣ ಇದಾಗಿದೆ ಎಂದು ಆಶಾ ಅವರು ಕಳವಳ ವ್ಯಕ್ತಪಡಿಸಿದ್ದಾರೆ.

> **ಸದ್ಯ ಪ್ರಕರಣವು ಸರ್ಜಾಪುರ ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದು, ಸ್ಥಳೀಯರು ದೂರು ದಾಖಲಿಸಿದ್ದಾರೆ. ಮಗುವನ್ನು ಮಣ್ಣಲ್ಲಿ ಹೂತು ಹಾಕಿದ್ದ ಪರಿಣಾಮ ಉಸಿರಾಟ ಸಮಸ್ಯೆ ಕಾಣಿಸಿಕೊಂಡಿದೆ, ಚಿಕ್ಕಪುಟ್ಟ ಗಾಯಗಳಾಗಿದ್ದು, ಮಕ್ಕಳ ಆಸ್ಪತ್ರೆಗೆ ಸೇರಿಸಲಾಗುವುದು ಎಂದು ಮಕ್ಕಳ ರಕ್ಷಣಾ ವೇದಿಕೆ ಮುಖ್ಯಸ್ಥೆ ಆಶಾ ಎಂಬವವರು ತಿಳಿಸಿದ್ದಾರೆ.**

## ಆಡಳಿತಾಧಿಕಾರಿ ಹುದ್ದೆಗಳ ಕಡ್ಡಾಯ ಕನ್ನಡ ಪರೀಕ್ಷೆಯಲ್ಲಿ ಎಡವಟ್ಟು!

• ಉದಯವಾಹಿನಿ, ಬೆಂಗಳೂರು

ರಾಜ್ಯದಾದ್ಯಂತ ಭಾನುವಾರ ನಡೆದ ಗ್ರಾಮ ಆಡಳಿತಾಧಿಕಾರಿ (1,000 ಹುದ್ದೆ) ಜಿಟಿಟಿಸಿಯ (98 ಹುದ್ದೆ) ಹುದ್ದೆಗಳ ಕಡ್ಡಾಯ ಕನ್ನಡ ಪರೀಕ್ಷೆಯಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರ (ಎಇಂ) ಎಡವಟ್ಟು ಮಾಡಿದೆ. ಕಡ್ಡಾಯ ಕನ್ನಡ ಭಾಷಾ ಪ್ರಶ್ನೆ ಪತ್ರಿಕೆಯ ಮುಖಪುಟದಲ್ಲಿ ದೋಷಗಳು ಕಂಡು ಬಂದಿದ್ದು, ಪರೀಕ್ಷೆ ಬರೆದ ಅಭ್ಯರ್ಥಿಗಳು ಅಸಮಾಧಾನ ಹೊರಹಾಕಿದ್ದಾರೆ.

ಪ್ರಶ್ನೆ ಪತ್ರಿಕೆಯನ್ನು ನಿಮಗೆ ಬೆಳಿಗ್ಗೆ 10:25ರ ನಂತರ ಕೊಡಲಾಗುತ್ತದೆ' ಎಂದು ಮುದ್ರಿಸುವ ಬದಲು 'ಮಧ್ಯಾಹ್ನ 10:25 ರ ನಂತರ ಕೊಡಲಾಗುತ್ತದೆ' ಎಂದು ಮುದ್ರಿಸಲಾಗಿದೆ! 'ಪ್ರಶ್ನೆ ಪತ್ರಿಕೆ ಕೊಟ್ಟ ನಂತರ ಮೂರನೇ ಬೆಲ್ ಬೆಳಿಗ್ಗೆ 10:30ಕ್ಕೆ ಆಗುತ್ತದೆ' ಎಂದು ಮುದ್ರಿಸುವ ಬದಲು 'ಮಧ್ಯಾಹ್ನ 10:30 ಕ್ಕೆ ಆಗುತ್ತದೆ' ಎಂದು ಮುದ್ರಿಸಲಾಗಿದೆ 'ಕೊನೆಯ ಬೆಲ್ ಮಧ್ಯಾಹ್ನ 12:30ಕ್ಕೆ ಆದ ನಂತರ ಉತ್ತರಿಸುವುದನ್ನು ನಿಲ್ಲಿಸಿ' ಎಂದು ಮುದ್ರಿಸುವ ಬದಲು ಸಂಜೆ 12:30 ಆದ ನಂತರ ಉತ್ತರಿಸುವುದನ್ನು ನಿಲ್ಲಿಸಿ' ಎಂದು ಮುದ್ರಿಸಲಾಗಿದೆ ಇನ್ನು, ಓಎಂಆರ್ ಶೀಟ್‌ನ ಕನ್ನಡ ಅಕ್ಷರಗಳಲ್ಲೂ ದೋಷಗಳಾಗಿದ್ದು ಕಂಡು ಬಂದಿದೆ. ಮಾಡಬೇಕು ಎಂಬುದನ್ನು 'ಮಾಡಬೇಡು', ಕಪ್ಪು ಎನ್ನುವುದನ್ನು 'ಕಪ್ಪು', ಮೊದಲು ಎನ್ನುವುದನ್ನು 'ಮೊದಲಾ' ಎಂದು ಮುದ್ರಿಸಲಾಗಿದೆ. ಇತ್ತೀಚೆಗೆ ಗೆಜೆಟೆಡ್ ಪ್ರೊಬೇಷನರಿ ಪೂರ್ವಭಾವಿ ಪರೀಕ್ಷೆಯ ಪ್ರಶ್ನೆಗಳ ಅನುವಾದದಲ್ಲಿ ಕೆಪಿಎಸ್‌ಸಿ ತಪ್ಪು ಮಾಡಿದ್ದರೂ ಕೆಇಎ ಎಚ್ಚೆತ್ತುಕೊಂಡಿಲ್ಲ. ಕನ್ನಡ ಪರೀಕ್ಷೆಯಲ್ಲಿಯೇ ಹೀಗೆ ಕನ್ನಡವನ್ನು ತಪ್ಪು ತಪ್ಪಾಗಿ ಮುದ್ರಿಸಲಾಗಿದೆ. ಇದರಿಂದ ಸಾಕಷ್ಟು ಗೊಂದಲವಾಗಿತ್ತು ಎಂದು ಕೆಲ ಅಭ್ಯರ್ಥಿಗಳು ಕೆಇಎ ವಿರುದ್ಧ ಆಕ್ರೋಶ ಹೊರಹಾಕಿದ್ದಾರೆ. ಕಡ್ಡಾಯ ಕನ್ನಡ ಪರೀಕ್ಷೆಗೆ 5.75 ಲಕ್ಷ ಅಭ್ಯರ್ಥಿಗಳು ನೋಂದಣಿ ಮಾಡಿಕೊಂಡಿದ್ದರು. 1,410 ಕೇಂದ್ರಗಳಲ್ಲಿ ಪರೀಕ್ಷೆ ನಡೆದಿದೆ. ಶೇ 50 ರಷ್ಟು ಅಂಕ ಪಡೆದವರು ಮಾತ್ರ ಮುಖ್ಯ ಪರೀಕ್ಷೆಗೆ ಅರ್ಹರಾಗುತ್ತಾರೆ. ಗ್ರಾಮ ಆಡಳಿತಾಧಿಕಾರಿ ಮುಖ್ಯ ಪರೀಕ್ಷೆ ಅಕ್ಟೋಬರ್ 27ಕ್ಕೆ ನಿಗದಿಯಾಗಿದೆ.

## ಪರಮೇಶ್ವರ್ ಭೇಟಿಯ ರಹಸ್ಯ ಬಿಚ್ಚಿಟ್ಟ ಡಿಕೆ ಶಿವಕುಮಾರ್

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಮುಖ್ಯಮಂತ್ರಿ ರಾಜೀನಾಮೆಗೆ ವಿಪಕ್ಷಗಳು ಒತ್ತಾಯಿಸುತ್ತಿರುವ ಬೆನ್ನಲ್ಲೇ ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರು ಗೃಹ ಸಚಿವರಾದ ಪರಮೇಶ್ವರ್ ಅವರನ್ನ ಭೇಟಿ ಮಾಡಿರುವುದು ತೀವ್ರ ಕುತೂಹಲಕ್ಕೆ ಕಾರಣವಾಗಿದೆ. ಗೃಹ ಸಚಿವ ಜಿ ಪರಮೇಶ್ವರ , ಡಿಸಿಎಂ ಡಿಕೆ ಶಿವಕುಮಾರ್ ಭೇಟಿಯಾಗಿ ಮಹತ್ವದ ವಿಚಾರಗಳ ಬಗ್ಗೆ ಚರ್ಚೆ ನಡೆಸಿದ್ದಾರೆ. ಈ ಭೇಟಿ ಬಗ್ಗೆ ಬಹಳಷ್ಟು ಊಹಾಪೋಹಗಳು ಹರಡಿದ್ದವು.

ಆದರೆ, ಅವೆಲ್ಲದಕ್ಕೆ ಈಗ ಡಿಕೆ ಶಿವಕುಮಾರ್ ತೆರೆ ಎಳೆದಿದ್ದಾರೆ.


ನಿಮಗೆ ರಾಜಕೀಯ ಬಿಟ್ಟು ಬೇರೆ ವಿಚಾರಗಳು ಕಾಣಿಸುವುದಿಲ್ಲವೇ?. ಜನರು ನಮ್ಮ ಮೇಲೆ ವಿಶ್ವಾಸವನ್ನಿಟ್ಟು ಅಧಿಕಾರ ಕೊಟ್ಟಿದ್ದಾರೆ, ಅವರ ಆಶೋತ್ತರಗಳನ್ನು ಈಡೇರಿಸಬೇಕು ಎಂದು ಡಿ ಕೆ ಶಿವಕುಮಾರ್ ಹೇಳಿದರು. ನಾವೆಲ್ಲಾ ಪ್ರತಿದಿನ ರಾಜಕೀಯ ಮಾಡುತ್ತಲೇ ಇರುತ್ತೇವೆ.

ಅಭಿವೃದ್ಧಿಯಿದ್ದರೇ ತಾನೇ ರಾಜಕೀಯ. ಐದು ಗ್ಯಾರಂಟಿಗಳನ್ನು ಈಡೇರಿಸಿದ್ದೇವೆ. ಎತ್ತಿನ ಹೊಳೆ ಕೆಲಸ ಮುಗಿಸಬೇಕು, ಪ್ರಣಾಳಿಕೆಗಳಲ್ಲಿ ನೀಡಿರುವ ಭರವಸೆಗಳನ್ನು ಈಡೇರಿಸಬೇಕು. ಪ್ರತಿದಿನ ಸಮಯ ಓಡುತ್ತಿರುತ್ತದೆ ಎಂದು ಉಪಮುಖ್ಯಮಂತ್ರಿ ಕೆಪಿಸಿಸಿ ಅಧ್ಯಕ್ಷ ಡಿಕೆಶಿವಕುಮಾರ್ ಹೇಳಿದರು. ಅಧಿಕಾರಿಗಳು ಇಲ್ಲದೇ ಪರಮೇಶ್ವರ ನೀವು ಮಾತ್ರ ಒಟ್ಟಿಗೆ ಸೇರಿದ್ದೀರಿ ಎಂದು ಕೇಳಿದಾಗ, ನಾವು 136 ಕಾಂಗ್ರೆಸ್ ಶಾಸಕರು ಒಟ್ಟಿಗೆ ಇದ್ದೇವೆ. ಇಲ್ಲಿ ಚರ್ಚೆ ಮಾಡುವಾಗ ಅಧಿಕಾರಿಗಳು ಬೇಕಾಗಿಲ್ಲ. ನಾಯಕರ ಹಿಂದೆ ಅಧಿಕಾರಿಗಳು ಬೇಕಾಗಿಲ್ಲ. ನಾವು ಆಲೋಚಿಸುತ್ತೇವೆ, ಚರ್ಚೆ ಮಾಡುತ್ತೇವೆ, ಅಭಿಪ್ರಾಯ ಕೇಳುತ್ತೇವೆ. ಮಾತನಾಡುವವರು ತೀರ್ಮಾನಿಸುವವರು ಒಬ್ಬರೇ ಎಂದು ಹೇಳಿದರು.

## ನಾಲಿಗೆ ಹಾರಿಬಿಡುವ ಬಿಜೆಪಿ
## ಭಿನ್ನಮತೀಯರಿಗೆ ಹೈಕಮಾಂಡ್ ವಾರ್ನಿಂಗ್

• ಉದಯವಾಹಿನಿ, ಬೆಂಗಳೂರು

ಪಕ್ಷದಲ್ಲಿ ನಡೆಯುತ್ತಿರುವ ಬೆಳೆವಣಿಗೆಗಳನ್ನು ಸೂಕ್ಷ್ಮವಾಗಿ ಗಮನಿಸುತ್ತಿರುವ ದೆಹಲಿ ಬಿಜೆಪಿ ನಾಯಕರು ಭಿನ್ನಮತೀಯ ನಾಯಕರ ಚಟುವಟಿಕೆಗಳಿಗೆ ಸಂಪೂರ್ಣವಾಗಿ ಕಡಿವಾಣ ಹಾಕಲು ಮುಂದಾಗಿದ್ದಾರೆ. ಇನ್ನು ಮುಂದೆ ಪ್ರತ್ಯೇಕವಾಗಿ ಯಾವುದೇ ನಾಯಕರು ಸಭೆ ನಡೆಸುವುದು, ಇಲ್ಲವೇ ಪಕ್ಷದ ಅನುಮತಿ ಇಲ್ಲದೆ ಬಾಯಿಗೆ ಬಂದಂತೆ ಮಾಧ್ಯಮಗಳ ಮುಂದೆ ಹೇಳಿಕೆ ನೀಡಿದರೆ ಅದನ್ನು ಅಶಿಸ್ತು ಎಂದು ಪರಿಗಣಿಸುವುದಾಗಿ ಎಚ್ಚರಿಕೆ ಕೊಟ್ಟಿದೆ.



ಇನ್ನು ಮುಂದೆ ಪಕ್ಷದ ಅಧಿಕೃತ ಆದೇಶವಿಲ್ಲದೆ ಯಾರೊಬ್ಬರು ಸಭೆ ನಡೆಸುವಂತಿಲ್ಲ. ಏನೇ ಇದ್ದರೂ ಪಕ್ಷದ ಚೌಕಟ್ಟಿನೊಳಗೆ ನಡೆಯಬೇಕು. ಸ್ವಪಕ್ಷೀಯರ ವಿರುದ್ಧವೇ ಬಹಿರಂಗ ಹೇಳಿಕೆ ನೀಡಿದರೆ ಶಿಸ್ತು ಕ್ರಮ ಜರುಗಿಸಬೇಕಾಗುತ್ತದೆ ಎಂಬ ಎಚ್ಚರಿಕೆ ಸಂದೇಶವನ್ನು ರವಾನಿಸಿದೆ. ಬಿಜೆಪಿಯ ಖಾಯಂ ಭಿನ್ನಮತೀಯ ಎಂದು ಗುರುತಿಸಿಕೊಂಡಿರುವ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್, ಶಾಸಕರಾದ ಬಿ.ಪಿ.ಹರೀಶ್, ರಮೇಶ್ ಜಾರಕಿಹೊಳಿ, ಮಾಜಿ ಸಚಿವರಾದ ಪ್ರತಾಪ್ ಸಿಂಹ, ಜಿ.ಎಂ.ಸಿದ್ದೇಶ್ವರ್, ಅಣ್ಣಾ ಸಾಹೇಬ್ ಜೊಲ್ಲೆ ಜೊತೆ ಸಭೆ ನಡೆಸಿದ ಬೆನ್ನಲ್ಲೇ ಎಚ್ಚೆತ್ತುಕೊಂಡಿರುವ ವರಿಷ್ಠರು ಭಿನ್ನಮತೀಯ ಚಟುವಟಿಕೆಗಳಿಗೆ ಕಡಿವಾಣ ಹಾಕಲು ಮುಂದಾಗಿದ್ದಾರೆ. ಕರ್ನಾಟಕದಲ್ಲಿ ನಡೆಯುತ್ತಿರುವ ಬೆಳವಣಿಗೆಗಳು ನಮಗೆ ನೋವು ತಂದಿದೆ. ಸಂಘ ಪರಿವಾರದ ನಾಯಕರು ಮಧ್ಯಪ್ರವೇಶ ಮಾಡಿ ಸಭೆ ನಡೆಸಿದ ಮೇಲು ಈ ರೀತಿ ಪ್ರತ್ಯೇಕ ಸಭೆ ನಡೆಸುವುದು ಸರಿಯಲ್ಲ.ಪಕ್ಷದ ಚೌಕಟ್ಟಿನೊಳಗೆ ನಡೆಸಬೇಕಾದ ಚಟುವಟಿಕೆಗಳನ್ನು ಪ್ರತ್ಯೇಕವಾಗಿ ನಡೆಸುತ್ತಿರುವ ಔಚಿತ್ಯವಾದರೂ ಏನು ರಾಷ್ಟ್ರೀಯ ನಾಯಕರು ಪ್ರಶ್ನಿಸಿದ್ದಾರೆ ಎಂದು ತಿಳಿದುಬಂದಿದೆ.ಯಾವುದೇ ರಾಜ್ಯದಲ್ಲೂ ಇರದ ಇಕ್ಕಟ್ಟು-ಬಿಕ್ಕಟ್ಟು ಕರ್ನಾಟಕದಲ್ಲಿದೆ.

ರಾಜ್ಯಾಧ್ಯಕ್ಷರು ಪದಾಧಿಕಾರಿಗಳ ಸಮಿತಿ ಇರುವಾಗ ಗುಂಪು ಕಟ್ಟಿಕೊಂಡು ಪ್ರತ್ಯೇಕ ಸಭೆ ನಡೆಸುವುದರಿಂದ ನೀವು ಏನನ್ನೂ ಸಾಧಿಸುತ್ತೀರಿ, ಸಂಘ ಪರಿವಾರದ ನಾಯಕರ ಜೊತೆ ಸಂಧಾನ ಸಭೆ ನಡೆಸಿದಾಗ ಕೊಟ್ಟ ಮಾತು ಮರೆತಿದೆಯೇ ಎಂದು ಪ್ರಶ್ನೆ ಮಾಡಿದ್ದಾರೆ. ಆಡಳಿತಾರೂಢ ಕಾಂಗ್ರೆಸ್‌ನಲ್ಲಿ ಸಾಕಷ್ಟು ಸಮಸ್ಯೆಗಳು ಉಲ್ಬಣಗೊಂಡಿವೆ. ಈ ಸಂದರ್ಭದಲ್ಲಿ ಒಗ್ಗಟ್ಟು ತೋರಿಸಬೇಕಾದವರು ಬಿಕ್ಕಟ್ಟನ್ನು ಸೃಷ್ಟಿಸುತ್ತಿದ್ದೀರಿ, ಪಕ್ಷದ ಬ್ಯಾನರ್‌ನಡಿ ಪಾದಯಾತ್ರೆ ಮಾಡಿ ಎಂದರೆ ನಾವು ರಾಜ್ಯಾಧ್ಯಕ್ಷರನ್ನು ಹೊರಗಿಟ್ಟು, ಪಾದಯಾತ್ರೆ ಮಾಡುತ್ತೇವೆ ಎಂದರೆ ಅದಕ್ಕೆ ಅನುಮತಿ ನೀಡುವುದಾದರೂ ಹೇಗೆ ಎಂದು ರಾಜ್ಯ ಉಸ್ತುವಾರಿ ರಾಧಾ ಮೋಹನ್‌ದಾಸ್ ಅಗರ್‌ವಾಲ್ ಅವರು ಯತ್ನಾಳ್‌ಗೆ ಪ್ರಶ್ನೆ ಮಾಡಿರುವುದಾಗಿ ತಿಳಿದುಬಂದಿದೆ.

# ಎಚ್‌ಡಿಕೆ ಜಾಮೀನು ರದ್ದು ಕೋರಿ ಕೋರ್ಟ್‌ಗೆ ಎಸ್‌ಐಟಿ ಅರ್ಜಿ

### ಎಡಿಜಿಪಿ ಚಂದ್ರಶೇಖರ್ ವಿರುದ್ಧ ಕೆಲವು ಗಂಭೀರ ಆರೋಪ, ಕಾನೂನು ತಜ್ಞರ ಜೊತೆ ಸಾಧಕ-ಬಾಧಕಗಳ ಬಗ್ಗೆ ಚರ್ಚೆ

• ಉದಯವಾಹಿನಿ, ಬೆಂಗಳೂರು

ಸಾಯಿ ಮಿನರಲ್ಸ್ ಪ್ರಕರಣದಲ್ಲಿ ಲೋಕಾಯುಕ್ತ ನ್ಯಾಯಾಲಯದಿಂದ ನಿರೀಕ್ಷಣಾ ಜಾಮೀನು ಪಡೆದಿದ್ದ ಕೇಂದ್ರ ಸಚಿವ ಎಚ್.ಡಿ.ಕುಮಾರ ಸ್ವಾಮಿಯವರ ಜಾಮೀನು ರದ್ದು ಕೋರಿ ಎಸ್‌ಐಟಿ ಹೈಕೋರ್ಟ್ ಮೆಟ್ಟಿಲೇರಲು ಮುಂದಾಗಿದೆ. ಗಮನಿಸಬೇಕಾದ ಅಂಶವೆಂದರೆ ಮೂರು ದಿನಗಳ ಹಿಂದಷ್ಟೇ ಕುಮಾರಸ್ವಾಮಿಯವರು ಲೋಕಾಯುಕ್ತ ಎಡಿಜಿಪಿ ಚಂದ್ರಶೇಖರ್ ವಿರುದ್ಧ ಕೆಲವು ಗಂಭೀರ ಆರೋಪಗಳನ್ನು ಮಾಡಿದ್ದರು.

ಇದರ ಬೆನ್ನಲೇ ಎಸ್‌ಐಟಿ ಲೋಕಾಯುಕ್ತ ನ್ಯಾಯಾಲಯ ನೀಡಿರುವ ನಿರೀಕ್ಷಣಾ ಜಾಮೀನು ರದ್ದುಪಡಿಸಲು ಮೇಲನವಿ ಅರ್ಜಿ ಸಲ್ಲಿಕೆಗೆ ತಯಾರಿ ನಡೆಸಿದೆ. ಲೋಕಾಯುಕ್ತ ನ್ಯಾಯಾಲಯದಲ್ಲಿ ಪ್ರಕರಣ ಸಂಬಂಧ ವಿಚಾರಣೆಗೆ ಹಾಜರಾಗಿದ್ದ ಕುಮಾರಸ್ವಾಮಿ, ಲೋಕಾಯುಕ್ತ ಡಿವೈಎಸ್ಪಿ ಕವಿತಾ ಮತ್ತು ತನಿಖಾಧಿಕಾರಿಗಳು ಮುಂದಿಟ್ಟ ಕೆಲವು ಪ್ರಶ್ನೆಗಳಿಗೆ ಅಸಮರ್ಪಕ ಉತ್ತರ ನೀಡಿದ್ದಾರೆ ಎನ್ನಲಾಗಿದೆ. ವಿಚಾರಣೆಗೆ ಅಸಹಕಾರ ತೋರಿದ ಹಿನ್ನಲೆಯಲ್ಲಿ ನಿರೀಕ್ಷಣಾ ಜಾಮೀನು ರದ್ದು ಕೋರಿ ಮೇಲನವಿ ಸಲ್ಲಿಸಲು ಎಸ್‌ಐಟಿ ತೀರ್ಮಾನಿಸಿದೆ.

ಈ ಸಂಬಂಧ ಸೋಮವಾರ ಕಾನೂನು ತಜ್ಞರ ಜೊತೆ ಸಾಧಕಬಾಧಕಗಳ ಬಗ್ಗೆ ಚರ್ಚೆ ನಡೆಸಲಾಗಿದೆ. ಲೋಕಾಯುಕ್ತ ಎಡಿಜಿಪಿ ಚಂದ್ರಶೇಖರ್ ವಿರುದ್ಧ ಕುಮಾರಸ್ವಾಮಿ ಮಾಡಿದ ಆರೋಪಕ್ಕೆ ಇದು ಕರ್ತವ್ಯಕ್ಕೆ ಅಡ್ಡಿಪಡಿಸುವ ತಂತ್ರವಾಗಿದೆ. ಅವರು ಎಷ್ಟೇ ಆರೋಪ ಮಾಡಿದರೂ ಆರೋಪಿ ಆರೋಪಿಯೇ ಎಂದು ತಿರುಗೇಟು ನೀಡಿದ್ದರು. ಲೋಕಾಯುಕ್ತ ಪೊಲೀಸ್ ವರಿಷ್ಠಾಧಿಕಾರಿ 2023ರ ಸೆಪ್ಟೆಂಬರ್‌ನಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರಿಗೆ ಪತ್ರ ಬರೆದಿದ್ದರು. 2006ರಲ್ಲಿ ಬಿಜೆಪಿ-ಜೆಡಿಎಸ್ ಸಮಿಶ್ರ ಸರ್ಕಾರವಿದ್ದಾಗ ಮುಖ್ಯಮಂತ್ರಿಯಾಗಿದ್ದ ಎಚ್ ಕುಮಾರ ಸ್ವಾಮಿ ಅವರು ಎಂಸಿಆರ್ ನಿಯಮಾವಳಿಗಳನ್ನು ಉಲ್ಲಂಘಿಸಿ ವಾಣಿಜ್ಯ ಮತ್ತು ಕೈಗಾರಿಕೆ ಹಾಗೂ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಅಧಿಕಾರಿಗಳ ಜೊತೆಗೂಡಿ ವಿನೋದ್ ಗೋಯಲ್ ಎಂಬ ವ್ಯಕ್ತಿಗೆ ಬಳ್ಳಾರಿ ಜಿಲ್ಲೆಯ ಸಂಡೂರು ತಾಲ್ಲೂಕಿನ ಎನ್ ಇಬಿ ರೇಂಜ್‌ನಲ್ಲಿನ 550 ಎಕರೆ ಭೂಮಿ ಮಂಜೂರು ಮಾಡಲು ಒಳಸಂಚು ರೂಪಿಸಿದ್ದಾರೆ ಎಂಬುದು ಆರೋಪವಾಗಿದೆ.



ಉದಯವಾಹಿನಿ ಚಿತ್ರ

ಸಾಯಿ ವೆಂಕಟೇಶ್ವರ ಮಿನರಲ್‌ಸ ಮಾಲೀಕ ವಿನೋದ್ ಗೋಯಲ್ ಎಂದು ಸುಳ್ಳು ದಾಖಲೆಗಳನ್ನು ಸೃಷ್ಟಿಸಲು ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ಕಾರ್ಯದರ್ಶಿ ಕೆ.ಜಯಚಂದ್ರ ಮತ್ತು ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಪ್ರಥಮ ದರ್ಜೆ ಸಹಾಯಕ ಬಿ ಟಿ ಜವರೇಗೌಡ ಸಹಕರಿಸಿದ ಆರೋಪಕ್ಕೆ ಗುರಿಯಾಗಿದ್ದಾರೆ.

ಈ ಪ್ರಕರಣದಲ್ಲಿ ಎಸ್‌ಐಟಿ ಅಧಿಕಾರಿಗಳು ವಿನೋದ್ ಗೋಯಲ್ ಅವರನ್ನು ಪ್ರಥಮ ಆರೋಪಿಯೆಂದೂ, ಎಚ್ .ಡಿ. ಕುಮಾರಸ್ವಾಮಿ ಅವರನ್ನು 2ನೇ ಆರೋಪಿಯೆಂದೂ, ಕೆ.ಜಯಚಂದ್ರ ಹಾಗೂ ಜವರೇಗೌಡ ಅವರನ್ನು ಕ್ರಮವಾಗಿ ಮೂರು ಮತ್ತು ನಾಲ್ಕನೇ ಆರೋಪಿಗಳನ್ನಾಗಿ ದಾಖಲಿಸಿದ್ದಾರೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಐಪಿಸಿ ಸೆಕ್ಷನ್‌ಗಳಾದ 420, 465, 468, 409 ಜೊತೆಗೆ 120ಬಿ ಮತ್ತು ಐಪಿಸಿ ಸೆಕ್ಷನ್ 511, ಭ್ರಷ್ಟಾಚಾರ ನಿರೋಧಕ ಕಾಯಿದೆ ಸೆಕ್ಷನ್ 13(2) ಜೊತೆಗೆ 13(1)(ಡಿ) ಮತ್ತು ಎಂಎಂಆರ್‌ಡಿ ಕಾಯಿದೆಯ ಸೆಕ್ಷನ್‌ಗಳಾದ 21(2) ಮತ್ತು 23 ಅಡಿ ದಾಖಲಾಗಿರುವ ಪ್ರಕರಣದಲ್ಲಿ ಸಂಬಂಧಿತ ನ್ಯಾಯಾಲಯಕ್ಕೆ ಆರೋಪ ಪಟ್ಟಿಸಲು ಅಭಿಯೋಜನಾ ಮಂಜೂರಾತಿ ನೀಡುವಂತೆ ರಾಜ್ಯಪಾಲರಿಗೆ ಲೋಕಾಯುಕ್ತ ಪೊಲೀಸರು 2023ರ ಸೆಪ್ಟೆಂಬರ್‌ನಲ್ಲಿ ಮನವಿ ಮಾಡಿದ್ದಾರೆ.

> **ಬಳ್ಳಾರಿ ಜಿಲ್ಲೆಯ ಸಂಡೂರು ತಾಲ್ಲೂಕಿನ ಎನ್‌ಇಬಿ ರೇಂಜ್ ಪ್ರದೇಶದಲ್ಲಿ ಮೆಸರ್ಸ್ ಚೌಗಲೆ ಮತ್ತು ಕಂಪನಿಯು ಗಣಿಗಾರಿಕೆಗೆ ಮಂಜೂರಾತಿ ಪಡೆದು ಆನಂತರ ಸರ್ಕಾರಕ್ಕೆ 550 ಎಕರೆ ಅಧ್ಯರ್ಪಣೆ ಮಾಡಿದ ಪ್ರದೇಶಕ್ಕೆ ಗಣಿ ಗುತ್ತಿಗೆ ಮಂಜೂರಾತಿಗಾಗಿ 2006ರ ಏಪ್ರಿಲ್ ತಿಂಗಳಲ್ಲಿ ಒಟ್ಟು 29 ಅರ್ಜಿದಾರರು ತಮ ಸಂಸ್ಥೆ, ಕಂಪನಿ ಹೆಸರಿನಲ್ಲಿ ಬೇರೆ ಬೇರೆ ವಿಸ್ತೀರ್ಣಗಳಿಗೆ ಅರ್ಜಿ ಸಲ್ಲಿಸಿದ್ದವು.**

> **ಶ್ರೀ ಸಾಯಿ ವೆಂಕಟೇಶ್ವರ ಮಿನರಲ್‌ಸ ಹೆಸರಿನಡಿ ಎಸ್ ವಿ ಸಾಕ್ರೆ ಸಲ್ಲಿಸಿದ್ದ ಅರ್ಜಿಯಲ್ಲಿ ಶ್ರೀ ಸಾಯಿ ವೆಂಕಟೇಶ್ವರ ಮಿನರಲ್‌ಸ ಸಂಸ್ಥೆಯ ರೂಪುರೇಷೆಗಳು ಪಾಲುದಾರರ ಬಗ್ಗೆ ಇರುವ ಅಸ್ಪಷ್ಟತೆಯ ಲಾಭ ಪಡೆಯುವ ಉದ್ದೇಶದಿಂದ ವಿನೋದ್ ಗೋಯಲ್ ಎಂಬ ವ್ಯಕ್ತಿಯು ಸರ್ಕಾರಿ ಅಧಿಕಾರಿಗಳಾದ ಜಯಚಂದ್ರ ಮತ್ತು ಜವರೇಗೌಡ ಜೊತೆ ಶಾಮೀಲಾಗಿ, ಸುಳ್ಳು ದಾಖಲೆಗಳನ್ನು ಸೃಷ್ಟಿಸಿ, ಆ ದಾಖಲೆಗಳನ್ನು ಆಧರಿಸಿ, ಹೈಕೋರ್ಟ್‌ನಲ್ಲಿ ದಾವೆ ಹೂಡಿ, ಶ್ರೀ ಸಾಯಿ ವೆಂಕಟೇಶ್ವರ ಮಿನರಲ್ಸ್ ಹೆಸರಿಗೆ ಗಣಿ ಗುತ್ತಿಗೆ ನೀಡುವಂತೆ ಮತ್ತು ಎಸ್.ವಿ.ಸಾಕ್ರೆ ಹೆಸರಿನ ಬದಲು ವಿನೋದ್ ಗೋಯೆಲ್ ಶ್ರೀ ಸಾಯಿ ವೆಂಕಟೇಶ್ವರ ಮಿನರಲ್‌ಸ ಮಾಲೀಕರು ಎಂದು ಮಾಡಿ, ಆ ಮೂಲಕ ಗಣಿ ಗುತ್ತಿಗೆ ಪಡೆಯಲು ಯತ್ನಿಸಿದ್ದಾರೆ ಎಂಬುದು ಆರೋಪವಾಗಿದೆ.**

ಉದಯವಾಹಿನಿ
ಪ್ರಾದೇಶಿಕ
ಮಂಗಳವಾರ 01 ಅಕ್ಟೋಬರ್ 2024


# ಕೊಡಗು ಜಿಲ್ಲೆಗೆ ಹೆಚ್ಚಿನ ವೈದ್ಯಕೀಯ ಸೇವೆ: ಡಾ.ಶರಣಪ್ರಕಾಶ್ ಪಾಟೀಲ

## ಕೊಡಗಿನಲ್ಲಿ ಹೃದ್ರೋಗ ಚಿಕಿತ್ಸಾ ಕೇಂದ್ರ, ತುರ್ತು ಚಿಕಿತ್ಸಾ ಕೇಂದ್ರವನ್ನು ಅತಿ ಶೀಘ್ರದಲ್ಲಿ ಆರಂಭಿಸಲಾಗುವುದು

• **ಉದಯವಾಹಿನಿ ಮಡಿಕೇರಿ**

ಕೊಡಗಿನಲ್ಲಿ ಹೃದ್ರೋಗ ಚಿಕಿತ್ಸಾ ಕೇಂದ್ರ, ತುರ್ತು ಚಿಕಿತ್ಸಾ ಕೇಂದ್ರ (ಟ್ರಾಮಾ)ವನ್ನು ಅತಿ ಶೀಘ್ರದಲ್ಲಿ ಆರಂಭಿಸಲಾಗುವುದು ಎಂದು ವೈದ್ಯಕೀಯ ಶಿಕ್ಷಣ ಸಚಿವರಾದ ಡಾ.ಶರಣ ಪ್ರಕಾಶ ಪಾಟೀಲ ತಿಳಿಸಿದರು.

**ಪ್ರತಿ ಜಿಲ್ಲೆಯಲ್ಲಿಯೂ ವೈದ್ಯಕೀಯ ಕಾಲೇಜು**

ವೈದ್ಯಕೀಯ ಶಿಕ್ಷಣ ಇಲಾಖೆ, ಕೊಡಗು ವೈದ್ಯ ಕೀಯ ವಿಜ್ಞಾನ ಸಂಸ್ಥೆ ವತಿಯಿಂದ ಇಲ್ಲಿನ ಜಿಲ್ಲಾಸ್ಪತ್ರೆಯಲ್ಲಿ ಎಂಆರ್‌ಐ ಸ್ಕ್ಯಾನಿಂಗ್ ಕೇಂದ್ರವನ್ನು ಉದ್ಘಾಟಿಸಿ ಅವರು ಮಾತನಾಡಿದರು.ಖಾಸಗಿ ಮತ್ತು ಸಾರ್ವಜನಿಕ ಸಹಭಾಗಿತ್ವದಲ್ಲಿ ಹೃದ್ರೋಗ ಚಿಕಿತ್ಸಾ ಕೇಂದ್ರ ಆದಷ್ಟು ಶೀಘ್ರ ಕಾರ್ಯಾರಂಭ ಮಾಡಲಿದೆ. ಆಸ್ಪತ್ರೆಯ ನೂತನ ಕಟ್ಟಡದ ಕಾಮಗಾರಿಗೆ ಇನ್ನೂ 50ರಿಂದ 60 ಕೋಟಿ ಬೇಕಿದೆ. ಇದಕ್ಕಾಗಿ ಹಣಕಾಸು ಇಲಾಖೆಗೆ ಮನವಿ ಮಾಡಲಾಗಿದೆ ಎಂದರು. ಕೊಡಗು ಜಿಲ್ಲೆಯ ಹಲವು ವರ್ಷಗಳ ಬೇಡಿಕೆಯಾದ ಎಂಆರ್‌ಐ ಸ್ಕ್ಯಾನಿಂಗ್ ಯಂತ್ರವನ್ನು ಈಗ ಅಳವಡಿಸಲಾಗಿದೆ. ಇಬ್ಬರು ವೈದ್ಯಕೀಯ ತಾಂತ್ರಿಕರನ್ನು ನೇಮಿಸಲು ತುರ್ತು ಕ್ರಮ ವಹಿಸಲಾಗುವುದು ಎಂದೂ ಅವರು ಹೇಳಿದರು.ಇದೆಲ್ಲವೂ ಕೊಡಗು ಜಿಲ್ಲೆಯ ಮತದಾರರು ಕಳೆದ ವಿಧಾನಸಭಾ ಚುನಾವಣೆಯಲ್ಲಿ ಇಬ್ಬರು ಯುವ ಹಾಗೂ ಸುಶಿಕ್ಷಿತ ಜನಪ್ರತಿನಿಧಿಗಳನ್ನು ಆಯ್ಕೆ ಮಾಡಿದ್ದರ ಫಲ ಎಂದ ಅವರು, ಇನ್ನು ಮುಂದೆಯೂ ಕೊಡಗು ಜಿಲ್ಲೆಯ ವೈದ್ಯಕೀಯ ಕ್ಷೇತ್ರಕ್ಕೆ ಸಾಕಷ್ಟು ನೆರವು ನೀಡಲಾಗುವುದು ಎಂದು ತಿಳಿಸಿದರು.

ಸರ್ಕಾರ ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಿದೆ. ಆ ನಿಟ್ಟಿನಲ್ಲಿ ಕೊಡಗು ವೈದ್ಯಕೀಯ ವಿಜ್ಞಾನ ಸಂಸ್ಥೆ ವ್ಯಾಪ್ತಿಯಲ್ಲಿ ವಿದ್ಯಾರ್ಥಿ ನಿಲಯ, ವಸತಿ ಗೃಹ ಸೇರಿದಂತೆ ಹಲವು ಮೂಲ ಸೌಲಭ್ಯ ಕಲ್ಪಿಸಲು ಪ್ರಯತ್ನಿಸಲಾಗುವುದು ಎಂದು ಭರವಸೆ ನೀಡಿದರು. ರಾಜ್ಯದಲ್ಲಿ 22 ಸರ್ಕಾರಿ ವೈದ್ಯಕೀಯ ಕಾಲೇಜುಗಳು, 2 ಇಎಸ್‌ಐ ಆಸ್ಪತ್ರೆಗಳು ಸೇರಿ ಒಟ್ಟು 24 ಸರ್ಕಾರಿ ವೈದ್ಯಕೀಯ ಆಸ್ಪತ್ರೆಗಳು ಹಾಗೂ 71 ವೈದ್ಯಕೀಯ ಕಾಲೇಜುಗಳು ಇವೆ ಎಂದರು. ಬಡವರ ಮಕ್ಕಳು ವೈದ್ಯರಾಗಬೇಕು ಎಂಬ ಉದ್ದೇಶದಿಂದ ಪ್ರತಿ ಜಿಲ್ಲೆಯಲ್ಲಿಯೂ ವೈದ್ಯಕೀಯ ಕಾಲೇಜು ಆರಂಭಿಸಲು ಸರ್ಕಾರ ಪ್ರಯತ್ನಿಸಿದೆ ಎಂದರು.


ಉದಯವಾಹಿನಿ ಚಿತ್ರ

ಹಲವು ವರ್ಷಗಳ ಬೇಡಿಕೆ ಈಡೇರಿಸಲು ಪ್ರಯತ್ನಿಸಲಾಗಿದೆ. ಎಂಆರ್‌ಐ ಸ್ಕ್ಯಾನಿಂಗ್‌ಗಾಗಿ ಮೈಸೂರು ಮಂಗಳೂರು ಹಾಗೂ ಸುಳ್ಯಕ್ಕೆ ಹೋಗುವುದು ಇದರಿಂದ ತಪ್ಪಲಿದೆ
-ಡಾ.ಮಂತರ್‌ಗೌಡ, ಶಾಸಕ

ಬಡವರು ಹೃದಯ, ನರ ವಿಜ್ಞಾನ, ವಿಕಿರಣ ವಿಭಾಗದಲ್ಲಿ ದುಬಾರಿ ವೆಚ್ಚದಲ್ಲಿ ಚಿಕಿತ್ಸೆ ಪಡೆಯುವುದು ಕಷ್ಟಸಾಧ್ಯ, ಆದ್ದರಿಂದ ಉಚಿತವಾಗಿ ಆರೋಗ್ಯ ಸೌಲಭ್ಯಗಳು ತಲುಪಬೇಕು ಎಂಬ ಉದ್ದೇಶದಿಂದ ಸರ್ಕಾರ ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣ ಇಲಾಖೆಗಳು ಒಟ್ಟುಗೂಡಿ ಆರೋಗ್ಯ ಸೌಲಭ್ಯ ಕಲ್ಪಿಸಲು ಮುಂದಾಗಿದೆ ಎಂದರು. ವೈದ್ಯಕೀಯ ಶಿಕ್ಷಣ ಇಲಾಖೆಯ ಮುಖ್ಯ ಕಾರ್ಯದರ್ಶಿ ಮೊಹಮ್ಮದ್ ಮೊಸಿನ್ ಅವರು ಜಿಲ್ಲೆಯಲ್ಲಿ ಕ್ರಿಟಿಕಲ್ ಕೇರ್ ಸೆಂಟರ್ ಶೀಘ್ರ ಆರಂಭವಾಗಲಿದೆ ಎಂದು ತಿಳಿಸಿದರು. ಹೆಚ್ಚುವರಿ ಜಿಲ್ಲಾಧಿಕಾರಿ ಆರ್.ಐಶ್ವರ್ಯ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾ ಅಧ್ಯಕ್ಷ ಧರ್ಮಜ ಉತ್ತಪ್ಪ, ಕೊಡಗು ವೈದ್ಯಕೀಯ ವಿಜ್ಞಾನ ಸಂಸ್ಥೆಯ ಮುಖ್ಯ ಆಡಳಿತ ಅಧಿಕಾರಿ ಕೆ.ಎಂ.ರೋಹಿಣಿ, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ನಂಜುಂಡಯ್ಯ, ವೈದ್ಯಕೀಯ ಅಧೀಕ್ಷಕ ಡಾ.ಎಚ್.ಕೆ.ಸೋಮಶೇಖರ ಭಾಗವಹಿಸಿದ್ದರು. ಎ.ಎಸ್.ಪೊನ್ನಣ್ಣ, ಶಾಸಕಸರ್ಕಾರ ವೈದ್ಯಕೀಯ ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರಕ್ಕೆ ಹೆಚ್ಚಿನ ಒತ್ತು ನೀಡಿದೆ. ಕೋವಿಡ್ ಸಂದರ್ಭದಲ್ಲಿ ವೈದ್ಯರು ಮತ್ತು ಶುಶ್ರೂಷಕರು ಹೆಚ್ಚಿನ ವೈದ್ಯಕೀಯ ಸೇವೆ ಸಲ್ಲಿಸಿರುವುದು ಶ್ಲಾಘನೀಯ ಡಾ.ವಿಶಾಲ್‌ಕುಮಾರ್, ಡೀನ್ ಮತ್ತು ನಿರ್ದೇಶಕ ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ.ಟೆಲಿ ರೇಡಿಯೊಲಜಿ ಮೂಲಕ ಎಂಆರ್‌ಐ ಕಾರ್ಯನಿರ್ವಹಿಸಲಿದೆ. ಇದು ಅನೇಕ ಕಾಯಿಲೆಗಳನ್ನು ಪತ್ತೆ ಹಚ್ಚುವುದಕ್ಕೆ ಅನುಕೂಲಕರ. ವೈದ್ಯಕೀಯ ಶಿಕ್ಷಣ ಖಾತೆ ಸಚಿವ ಡಾ.ಶರಣಪ್ರಕಾಶ್ ಪಾಟೀಲ ಅವರು ಭಾನುವಾರ ಮಡಿಕೇರಿಯ ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಬೋಧಕ ಆಸ್ಪತ್ರೆಯಲ್ಲಿ ಎಂಆರ್‌ಐ ಸ್ಕ್ಯಾನಿಂಗ್ ಯಂತ್ರವನ್ನು ಬಳಕೆಗೆ ಮುಕ್ತಗೊಳಿಸಿದರು.

### ತಾಂತ್ರಿಕ ಸಿಬ್ಬಂದಿಯನ್ನು ನಿಯೋಜಿಸಬೇಕು

ಎಂಆರ್‌ಐ ಸ್ಕ್ಯಾನಿಂಗ್ ಮಾಡಿಸುವುದರಿಂದ ಯಾವುದೇ ರೀತಿಯ ತೊಂದರೆ ಆಗುವುದಿಲ್ಲ ಪಾರ್ಶ್ವವಾಯು ಮೂಳೆ ಸೇರಿದಂತೆ ದೇಹದಲ್ಲಿ ಎಲ್ಲಾ ರೀತಿಯ ರೋಗವನ್ನು ಪತ್ತೆಹಚ್ಚಲು ಇದು ಸಹಕಾರಿಯಾಗಿದೆ. ಕೂಡಲೇ ಇಬ್ಬರು ತಾಂತ್ರಿಕ ಸಿಬ್ಬಂದಿಯನ್ನು ನಿಯೋಜಿಸಬೇಕು ಎಂದು ಸಚಿವರಲ್ಲಿ ಮನವಿ ಮಾಡಿದರು. ಕೊಡಗು ವೈದ್ಯಕೀಯ ವಿಜ್ಞಾನ ಸಂಸ್ಥೆ (ಜಿಲ್ಲಾಸ್ಪತ್ರೆ) ಜಾಗವನ್ನು ದಾನವಾಗಿ ನೀಡಿದ ಮಹನೀಯರನ್ನು ಸ್ಮರಿಸುವಂತಹ ಕಾರ್ಯ ಮಾಡಬೇಕು ಎಂದೂ ಅವರು ಮನವಿ ಮಾಡಿದರು.

# ಮಿನಿ ನ್ಯೂಸ್

## ಡಿಕೆ ಹಳ್ಳಿ ಬಳಿ ಕೆರೆಯಲ್ಲಿ ತುರ್ತು ಭೂಸ್ಪರ್ಶ ಮಾಡಿದ ಹೆಲಿಕಾಫ್ಟರ್

• **ಉದಯವಾಹಿನಿ ಬಂಗಾರಪೇಟೆ**

ತಾಲ್ಲೂಕಿನ ಡಿಕೆ ಹಳ್ಳಿ ಕೆರೆಯಲ್ಲಿ ತಾಂತ್ರಿಕ ದೋಷದಿಂದ ತುರ್ತು ಭೂಸ್ಪರ್ಷ ಮಾಡಿದ ಇಂಡಿಯನ್ ಏರ್ ಫೋರ್ಸ್ ಹೆಲಿಕಾಪ್ಟರ್ ಸುದ್ದಿ ಕೇಳಿ ಸುತ್ತ ಮುತ್ತಲಿನ ಗ್ರಾಮಸ್ಥರು ಸ್ಥಳಕ್ಕೆ ದೌಡಾಯಿಸತೊಡಗಿದರು.


ಉದಯವಾಹಿನಿ ಚಿತ್ರ

ಹೆಲಿಕಾಪ್ಟರ್ ನೋಡಿದ ಗ್ರಾಮಸ್ಥರು ಅದರ ಬಳಿ ಹೋಗಿ ಸೆಲ್ಫಿ ತೆಗೆದುಕೊಳ್ಳಲು ಮುಗಿಬಿದ್ದರು. ಈ ವೇಳೆ ಸೇನೆಯ ಸಿಬ್ಬಂದಿ ಹೆಲಿಕಾಪ್ಟರ್ ಹತ್ತಿರ ಸುಳಿಯಬೇಡಿ ಎಂದು ಮನವಿ ಮಾಡಿದ್ದಾರೆಂದು ತಿಳಿದು ಬಂದಿದೆ. ಇನ್ನು ಈ ಸುದ್ದಿಯನ್ನು ಮೇಲಧಿಕಾರಿಗಳಿಗೆ ರವಾನಿಸಲಾಗಿದ್ದು, ಹೆಲಿಕಾಪ್ಟರ್ ತುರ್ತು ಭೂಸ್ಪರ್ಶವಾದ ಸ್ಥಳಕ್ಕೆ ಕೆಜಿಎಫ್ ಪೊಲೀಸ್ ಎಸ್ ಪಿ ಶಾಂತರಾಜು ಭೇಟಿ ನೀಡಿದ್ದಾರೆ. ಇನ್ನು ಸೇನಾ ಸಿಬ್ಬಂದಿ ಸಹ ದೌಡಾಯಿಸುತ್ತಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ. ಈ ಘಟನೆ ಕುರಿತು ಇನ್ನಷ್ಟು ಮಾಹಿತಿ ತಿಳಿದುಬರಬೇಕಾಗಿದ್ದು, ಸದ್ಯ ಹೆಲಿಕಾಪ್ಟರ್ ಲ್ಯಾಂಡ್ ಆದ ಸ್ಥಳದಲ್ಲಿ ಜನಸಾಗರವೇ ಹರಿದು ಬರುತ್ತಿದೆ. ಅದೃಷ್ಟವಶಾತ್ ತುರ್ತು ಭೂಸ್ಪರ್ಶದ ವೇಳೆ ಯಾವುದೇ ಅನಾಹುತ ಆಗಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ರಸ್ತೆ ಮೇಲೆ ಹರಿದ ಚರಂಡಿ ನೀರು

• **ಉದಯವಾಹಿನಿ ಬಿಡದಿ**

ಪಟ್ಟಣದ ಬೆಂಗಳೂರು-ಮೈಸೂರು ಹೆದ್ದಾರಿ ಮೇಲೆ ಚರಂಡಿ ನೀರು ಹರಿಯುತ್ತಿದ್ದು ದುರ್ನಾತ ಬೀರುತ್ತಿದೆ. ಇದರಿಂದ ಸಾಂಕ್ರಾಮಿಕ ರೋಗ ಹರಡುವ ಭೀತಿ ಇದೆ. ಕಳೆದ ಒಂದು ವಾರದಿಂದ ಪಟ್ಟಣದ ಹೃದಯ ಭಾಗವಾದ ಬಿಡದಿ ಬಸ್ ನಿಲ್ದಾಣ ಮುಂದೆ ಚರಂಡಿ ನೀರು ಹರಿಯುತ್ತಿದೆ. ಪುರಸಭೆ ಅಧಿಕಾರಿಗಳು ಕಣ್ಮುಚ್ಚಿ ಕುಳಿತಿದ್ದಾರೆ.

ಇದೇ ರಸ್ತೆಯಲ್ಲಿ ಪ್ರತಿನಿತ್ಯ ಶಾಲಾ-ಕಾಲೇಜಿಗೆ ವಿದ್ಯಾರ್ಥಿಗಳು ಹೋಗೇಬೇಕು. ಭೈರಮಂಗಲ, ಹಾರೋಹಳ್ಳಿ ಹಾಗೂ ಬಿಡದಿ ಕೈಗಾರಿಕಾ ಪ್ರದೇಶಕ್ಕೆ ಸಾವಿರಾರು ಕಾರ್ಮಿಕರು ತೆರಳಬೇಕು. ಪುರಸಭೆ ಅಧಿಕಾರಿಗಳ ನಿರ್ಲಕ್ಷ್ಯದಿಂದ ರೋಗ ಹರಡುವ ಭೀತಿ ಎದುರಾಗಿದೆ ಎನ್ನುತ್ತಾರೆ ಸ್ಥಳೀಯ ಆಟೊ ಚಾಲಕ ಕುಮಾರ್. ಬಸ್ ನಿಲ್ದಾಣದ ಪಕ್ಕದಲ್ಲಿ ಇಂದಿರಾ ಕ್ಯಾಂಟೀನ್ ನಿರ್ಮಾಣವಾಗುತ್ತಿದೆ. ನಿರ್ಮಾಣದ ಸಮಯದಲ್ಲಿ ಚರಂಡಿಗೆ ಮಣ್ಣು ಹಾಗೂ ಹಳೆ ಕಟ್ಟಡದ ತ್ಯಾಜ್ಯ ಸುರಿಯಲಾಗಿದೆ' ಎಂದು ಪ್ರಯಾಣಿಕ ಮಂಜುನಾಥ್ ದೂರಿದ್ದಾರೆ.

## ಲೋಕಾ ಬಲೆಗೆ ಆರ್.ಐ ಕೇಸ್ ವರ್ಕರ್

• **ಉದಯವಾಹಿನಿ ಕೋಲಾರ**

ಭೂಮಿ ಪರಿವರ್ತನೆ ಮಾಡಿಕೊಡಲು ಆರ್.ಐ ಮತ್ತು ಕೇಸ್ ವರ್ಕರ್, ರೈತರೊಬ್ಬರ ಬಳಿ ಲಕ್ಷಾಂತರ ರೂಪಾಯಿ ಲಂಚ ಪಡೆಯುತ್ತಿದ್ದ ವೇಳೆ ಲೋಕಾಯುಕ್ತ ಅಧಿಕಾರಿಗಳ ಬಲೆಗೆ ರೆಡ್ ಹ್ಯಾಂಡ್ ಆಗಿ ಸಿಗಿ ಬಿದ್ದಿರುವ ಘಟನೆ ಕೋಲಾರ ಜಿಲ್ಲೆಯಲ್ಲಿ ನಡೆದಿದೆ. ಹೌದು ಆರ್.ಐ ಗೋಪಾಲಕೃಷ್ಣ ಹಾಗೂ ಕೇಸ್ ವರ್ಕರ್ ನಾಗೇಂದ್ರ ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ.ಭೂಮಿ ಪರಿವರ್ತನೆಗೆ 8.5 ಲಕ್ಷ ಲಂಚ ಪಡೆಯುವಾಗ ಲೋಕಾಯುಕ್ತ ಬೆಲೆಗೆ ಬಿದ್ದಿದ್ದಾರೆ ಎಂದು ತಿಳಿದುಬಂದಿದೆ. ಹೊಸಕೋಟೆ ಮೂಲದ ಮಹೇಶ್ ಎಂಬವರಿಂದ ಇವರು ಲಂಚ ಸ್ವೀಕರಿಸುತ್ತಿದ್ದರು ಎಂದು ತಿಳಿದುಬಂದಿದೆ. ಆಲಂಬಾಡಿ ಗ್ರಾಮದ 5 ಎಕರೆ ಭೂಮಿ ಪರಿವರ್ತನೆಗಾಗಿ ಲಂಚಕ್ಕೆ ಬೇಡಿಕೆ ಇಟ್ಟಿದ್ದರು.ಕೋಲಾರ ಜಿಲ್ಲೆಯ ಮಾಲೂರು ತಾಲ್ಲೂಕಿನ ಆಲಂಬಾಡಿ ಗ್ರಾಮದ 5 ಎಕರೆ ಭೂಮಿ ಪರಿವರ್ತನೆಗಾಗಿ ಲಂಚಕ್ಕೆ ಬೇಡಿಕೆ ಇಟ್ಟಿದ್ದರು. ಲಂಚ ಸ್ವೀಕರಿಸುತ್ತಿದ್ದ ವೇಳೆ ಗೋಪಾಲಕೃಷ್ಣ ಹಾಗೂ ಕೇಸ್ ವರ್ಕರ್ ನಾಗೇಂದ್ರನನ್ನು ಲೋಕಾಯುಕ್ತ ಅಧಿಕಾರಿಗಳು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ.

## ಗ್ರಾಂಡ್ ಮಿಲಾದ್ ಬೃಹತ್ ರ‍್ಯಾಲಿ

• **ಉದಯವಾಹಿನಿ ಕುಶಾಲನಗರ**

ಜಿಲ್ಲಾ ಎಸ್.ವೈ.ಎಸ್ ಭಾನುವಾರ ಪಟ್ಟಣದಲ್ಲಿ ಗ್ರಾಂಡ್ ಮಿಲಾದ್ ರ‍್ಯಾಲಿ ಹಾಗೂ ಮೌಲಿದ್ ಮಜ್ಲಿಸ್ ನಡೆಸಲಾಯಿತು. ಜಿಲ್ಲಾ ಯುವ ಜನ ಸಂಘದ ವತಿಯಿಂದ ಸ್ನೇಹ, ಸಹೋದರತ್ವ, ಸಮತ್ವ ಹಾಗೂ ಸಹಿಷ್ಣುತೆ ಸಾರುವ ಬೃಹತ್ ಮಿಲಾದ್ ಮೆರವಣಿಗೆಯಲ್ಲಿ ನೂರಾರು ಕಾರ್ಯಕರ್ತರು ಪಾಲ್ಗೊಂಡಿದ್ದರು. ಪಟ್ಟಣದ ಬೈಚನಹಳ್ಳಿ ಬ್ಲೂಮೂನ್ ಪೆಟ್ರೋಲ್ ಬಂಕ್ ಬಳಿಯಿಂದ ಆರಂಭಗೊಂಡ ಮೆರವಣಿಗೆ ಬಿಎಂ ರಸ್ತೆಯಲ್ಲಿ ಸಾಗಿ ಕಾರ್ಯಪ್ಪ ವೃತ್ತದ ಮೂಲಕ ಕಾರು ನಿಲ್ದಾಣದಲ್ಲಿ ಸಮಾವೇಶಗೊಂಡಿತು. ಮೆರವಣಿಗೆಯಲ್ಲಿ ಆಕರ್ಷಕ ಉಡುಗೆಗಳನ್ನು ತೊಟ್ಟ ಮದ್ರಸಾ ವಿದ್ಯಾರ್ಥಿಗಳಿಂದ ದಫ್ ಪ್ರದರ್ಶಿಸಲಾಯಿತು.

ಮೌಲಿದ್ ಮಜ್ಲಿಸ್ ನಂತರ ಕಾರ್ಯಕ್ರಮ ಆರಂಭಗೊಂಡಿತು. ಕೊಡಗು ಜಿಲ್ಲಾ ಕಾಝಿ ಅಬ್ದುಲ್ಲಾ ಫೈಜಿ ಸಮಾವೇಶ ಉದ್ಘಾಟಿಸಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಕೊಡಗು ಜಿಲ್ಲಾ ಉಪ ಕಾಝಿ ಶೇಕುನಾ ಅಬ್ದುಲ್ಲಾ ಫೈಝಿ ಹಾಗೂ ಎಸ್.ವೈ.ಎಸ್ ಸಂಘಟನೆಯ ಪದಾಧಿಕಾರಿಗಳು, ಉಸ್ಮಾನ್ ಫೈಜಿ ಪಾಲ್ಗೊಂಡಿದ್ದರು.


# 27ನೇ ವರ್ಷದ ಗಣೇಶೋತ್ಸವ, ಶ್ರೀ ಗಂಗಾಧರೇಶ್ವರ ಸ್ವಾಮಿಯ ಉತ್ಸವ

• **ಉದಯವಾಹಿನಿ, ಶಿಡ್ಲಘಟ್ಟ**

ತಾಲ್ಲೂಕಿನ ಜಂಗಮಕೋಟೆಯಲ್ಲಿ ಶ್ರೀ ಪ್ರಸನ್ನ ಗಂಗಾಧರೇಶ್ವರ ಗೆಳೆಯರ ಬಳಗ ವತಿಯಿಂದ 27ನೇ ವರ್ಷದ ಗಣೇಶೋತ್ಸವ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ಪ್ರತಿ ವರ್ಷವೂ ವಿಭಿನ್ನ ರೀತಿಯ ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸುತ್ತಿದ್ದು, ಈ ಬಾರಿ ಅನಂತಪದ್ಮನಾಭಸ್ವಾಮಿ ರೂಪದ ಗಣೇಶ ಮೂರ್ತಿಯನ್ನು ಪ್ರತಿಷ್ಠಾಪಿಸಿ, ವಿಸರ್ಜನಾ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದರು.

ಈ ಕಾರ್ಯಕ್ರಮಕ್ಕೆ ಮೆರಗು ನೀಡಲು ರಾಣಿ ಬೆನ್ನೂರಿನಿಂದ ಆನೆಯನ್ನು ತರಿಸಿ, ಆನೆಯ ಮೇಲೆ ಶ್ರೀ ಗಂಗಾಧರೇಶ್ವರ ಸ್ವಾಮಿಯ ಉತ್ಸವ ಮೂರ್ತಿಯನ್ನು ಮೆರವಣಿಗೆ ಹಾಗೂ ಗ್ರಾಮ ದೇವತೆಗಳ ಉತ್ಸವ ಮೂರ್ತಿಗಳನ್ನು ಪಲ್ಲಕ್ಕಿಗಳಲ್ಲಿಟ್ಟು ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮಾಡಲಾಯಿತು.

ಈ ಕಾರ್ಯಕ್ರಮದಲ್ಲಿ ಶಾಸಕ ಬಿ ಎನ್ ರವಿಕುಮಾರ್, ಕಾಂಗ್ರೆಸ್ ಮುಖಂಡರಾದ ಪುಟ್ಟು ಆಂಜಿನಪ್ಪ ,ರಾಜೀವ್ ಗೌಡರು ಭಾಗಿಯಾಗಿ ದೇವರಿಗೆ ವಿಶೇಷ ಪೂಜೆಗಳನ್ನು ಸಲ್ಲಿಸಿ ಕ್ಷೇತ್ರದ ಒಳಿತಿಗಾಗಿ ಪ್ರಾರ್ಥಿಸಿ ಮೆರವಣಿಗೆ ಕಾರ್ಯಕ್ರಮಕ್ಕೆ ಎಲ್ಲರೂ ಒಟ್ಟಿಗೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ರಾಜೀವ್ ಗೌಡರು, ಜಂಗಮಕೋಟೆಯಲ್ಲಿ ಹಬ್ಬದ ವಾತಾವರಣ ಸೃಷ್ಟಿಯಾಗಿದ್ದು, ಜಂಗಮ್ಮಕೋಟೆ ಗ್ರಾಮಸ್ಥರೆಲ್ಲ ಒಗ್ಗಟ್ಟಾಗಿ ಗಣೇಶ ಮೂರ್ತಿಯನ್ನು ಪ್ರತಿಷ್ಠಾಪಿಸಿ ವಿಸರ್ಜನೆ ಮಾಡುತ್ತಿರುವುದು, ಗಜಮುಖನ ಆಶೀರ್ವಾದದಿಂದ ಕ್ಷೇತ್ರದ ಜನತೆಗೆ ಸುಖ ಶಾಂತಿ ನೆಮ್ಮದಿ ಕೊಟ್ಟು ಕಾಪಾಡಲಿ ಎಂದು ಶುಭ ಹಾರೈಸಿದರು.



ಉದಯವಾಹಿನಿ ಚಿತ್ರ

ಮುತ್ಯಾಲಮ್ಮ ದೇವಾಲಯದ ಅರ್ಚಕರು ಮಾತನಾಡಿ, ಜಂಗಮಕೋಟೆ ಗ್ರಾಮದಲ್ಲಿ ಶ್ರೀ ಪ್ರಸನ್ನ ಗಂಗಾಧರೇಶ್ವರ ಗೆಳೆಯರ ಬಳಗ ವತಿಯಿಂದ ಪ್ರತಿ ವರ್ಷದಂತೆ ಈ ವರ್ಷವೂ ವಿಶೇಷ ಗಣೇಶ ಮೂರ್ತಿಯನ್ನು ಪ್ರತಿಷ್ಠಾಪಿಸಿ, ವಿಶೇಷ ಪೂಜಾ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ವಿಸರ್ಜನೆ ಮಾಡುತ್ತಿದ್ದು, ಈ ಕಾರ್ಯಕ್ರಮದಲ್ಲಿ ಹಿಂದೂ ಮುಸ್ಲಿಮರು ಒಗ್ಗಟ್ಟಿನಿಂದ ಭಾಗವಹಿಸುವುದು ಮತ್ತಷ್ಟು ವಿಶೇಷವಾಗಿದೆ ಎಂದು ತಿಳಿಸಿದರು. ಮೆರವಣಿಗೆಗೆ ಮತ್ತಷ್ಟು ಮೆರಗು ನೀಡಲು ಗ್ರಾಮ ಪಂಚಾಯತಿ ಸದಸ್ಯ ಕೋಳಿ ಪಯಾಸ್ ರವರಿಂದ ಮುಸ್ಲಿಂ ಬಾಂಧವರು ಕವಾಲಿ ಗೆ ಬಳಸುವ ವಿಶೇಷ ವಾದ್ಯವನ್ನು ತರಿಸಿ ಹಿಂದೂ ಮುಸ್ಲಿಮರು ಒಂದೇ ಎಂಬ ಭಾವೈಕ್ಯತೆ ಮೆರೆದರು.

ಈ ಕಾರ್ಯಕ್ರಮದಲ್ಲಿ ತಾಲ್ಲೂಕಿನ ಕಾಂಗ್ರೆಸ್ ಹಾಗೂ ಜೆಡಿಎಸ್ ಮುಖಂಡರು,ಗಂಗಾಧರೇಶ್ವರ ಗೆಳೆಯರ ಬಳಗದ ಯುವಕರು ಹಾಗೂ ಜಂಗಮಕೋಟೆ ಗ್ರಾಮಸ್ಥರು ಭಾಗವಹಿಸಿದ್ದರು.

ಜಂಗಮಕೋಟೆ ಗ್ರಾಮದಲ್ಲಿ ಹಿಂದೂ ಮುಸ್ಲಿಮರು ಬೇಧ ಭಾವ ಮಾಡದೆ ಎಲ್ಲರೂ ಒಗ್ಗಟ್ಟಾಗಿ ಗಣೇಶ್ ಹಬ್ಬದಂದು ಗಣೇಶ ಮೂರ್ತಿಯನ್ನು ಪ್ರತಿಷ್ಠಾಪಿಸಿ ವಿಶೇಷ ಪೂಜಾ ಕಾರ್ಯಕ್ರಮಗಳು ನೆರವೇರಿಸಿ ವಿಸರ್ಜನೆ ಮಾಡುತ್ತಿರುವುದು ಬಹಳ ವಿಶೇಷವಾಗಿದ್ದು ಈ ಕಾರ್ಯಕ್ರಮಕ್ಕೆ ಮತ್ತಷ್ಟು ಮೆರಗು ನೀಡಲು ಆನೆಯ ಮೇಲೆ ಗ್ರಾಮದ ಗಂಗಾಧರೇಶ್ವರ ಸ್ವಾಮಿಯ ಉತ್ಸವ ಮೂರ್ತಿಯನ್ನು ಮೆರವಣಿಗೆ ಮಾಡುತ್ತಿರುವುದು. ಇದಕ್ಕೆ ಗ್ರಾಮದ ಯುವಕರ ಶ್ರಮ ಬಹಳಷ್ಟಿದ್ದು,ವಿಘ್ನೇಶ್ವರನ ಆಶೀರ್ವಾದದಿಂದ ತಾಲ್ಲೂಕಿನ ಸರ್ವಾಂಗೀಣ ಅಭಿವೃದ್ಧಿಹೊಂದಿ ಎಲ್ಲರ ಮನೆಯಲ್ಲಿ ಸುಖ ಶಾಂತಿ ಸಂತೋಷ ಮೂಡಲಿ.
-ಆಂಜಿನಪ್ಪ ಪುಟ್ಟು, ಕಾಂಗ್ರೆಸ್ ಮುಖಂಡರು

# ಕುಲಾಂತರಿ ಆಹಾರದ ವಿರುದ್ಧ ಸತ್ಯಾಗ್ರಹ ಆರಂಭ


ಉದಯವಾಹಿನಿ ಚಿತ್ರ

• **ಉದಯವಾಹಿನಿ ತುಮಕೂರು**

ಕುಲಾಂತರಿ ತಳಿಯ ಆಹಾರ (ಜಿಎಂಒ) ವಿರುದ್ಧದ ಸತ್ಯಾಗ್ರಹಕ್ಕೆ ತಾಲ್ಲೂಕಿನ ದೊಡ್ಡ ಹೊಸೂರಿನ ಗಾಂಧೀಜಿ ಸಹಜ ಬೇಸಾಯ ಆಶ್ರಮದಲ್ಲಿ ಚಾಲನೆ ದೊರೆಯಿತು. ಸಿದ್ಧಗಂಗಾ ಮಠದ ಸಿದ್ಧಲಿಂಗ ಸ್ವಾಮೀಜಿ ಸತ್ಯಾಗ್ರಹ ಉದ್ಘಾಟಿಸಿದರು.ಕುಲಾಂತರಿ ಕಾಯ್ದೆ ತಿರಸ್ಕರಿಸಿ, ಬಹುರಾಷ್ಟ್ರೀಯ ಕಂಪನಿಗಳನ್ನು ಕೃಷಿ ಕ್ಷೇತ್ರದಿಂದ ಬಹಿಷ್ಕರಿಸುವಂತೆ ಒತ್ತಾಯಿಸಿ ಅ.2ರವರೆಗೆ ಸತ್ಯಾಗ್ರಹ ನಡೆಯಲಿದೆ.

ಪ್ರತಿ ದಿನ ರಾಜ್ಯದ ವಿವಿಧ ಜಿಲ್ಲೆಗಳ ರೈತರು ಭಾಗವಹಿಸಲಿದ್ದಾರೆ. ಕುಲಾಂತರಿ ಆಹಾರ ಬಳಕೆಯಿಂದ ಕೃಷಿ ಹಾಗೂ ಜನರ ಆರೋಗ್ಯದ ಮೇಲೆ ಆಗುವ ವ್ಯತಿರಿಕ್ತ ಪರಿಣಾಮ ಸೇರಿ ಹಲವು ವಿಷಯಗಳು ಕುರಿತು ಚರ್ಚೆ ನಡೆಯಲಿದೆ. ಸತ್ಯಾಗ್ರಹದ ಮೊದಲ ದಿನ ಮಂಡ್ಯ, ಮೈಸೂರು, ಚಾಮರಾಜನಗರ, ದಾವಣಗೆರೆ ಮತ್ತು ತುಮಕೂರಿನ ರೈತರು ಪಾಲ್ಗೊಂಡಿದ್ದರು. ಕುಲಾಂತರಿ ತಳಿಯ ದುಷ್ಪರಿಣಾಮ ಕುರಿತು ಮನವರಿಕೆ ಮಾಡಿಕೊಡಲಾಯಿತು.

### ಹೋರಾಟ ರೂಪಿಸುವ ಬಗ್ಗೆ ನಿರ್ಣಯ

ಸಾವಯವ ಮಾದರಿಯಲ್ಲಿ ಅಡಿಕೆ, ತೆಂಗು ಬೆಳೆಯುವುದು, ಬಹು ಬೆಳೆ ಪದ್ಧತಿ, ನೀರಿನ ಬಳಕೆ ಬಗ್ಗೆ ತಿಳಿಸಲಾಯಿತು. ಕುಂಬುಚಾ, ಮಜ್ಜಿಗೆ ಪಂಚಗವ್ಯ ಇತರೆ ಸಾವಯವ ಒಳ ಸುರಿಗಳ ತಯಾರಿಕೆ, ಜೈವಿಕ ಗೊಬ್ಬರ, ಕೀಟನಾಶಕದ ಬಗ್ಗೆ ಮಾಹಿತಿ ನೀಡಲಾಯಿತು. ಆಯಾ ಜಿಲ್ಲೆಗಳಲ್ಲಿ ಸಹಜ ಕೃಷಿ ಅಳವಡಿಕೆ, ಕುಲಾಂತರಿ ಆಹಾರದ ವಿರುದ್ಧ ಹೋರಾಟ ರೂಪಿಸುವ ಬಗ್ಗೆ ನಿರ್ಣಯ ಕೈಗೊಳ್ಳಲಾಯಿತು.

# ಕೆಆರ್‌ಎಸ್ ಜಲಾಶಯದ ಹಿನ್ನೀರಿನಲ್ಲಿ ನಡೆಯುತ್ತಿದ್ದ ಪಾರ್ಟಿ ಮೇಲೆ ದಾಳಿ: ಪಿಎಸ್‌ಐ ಸಸ್ಪೆಂಡ್

• **ಉದಯವಾಹಿನಿ, ಮೈಸೂರು**

ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ನಾಡಹಬ್ಬ ದಸರಾ ಮಹೋತ್ಸವಕ್ಕೆ ಅದ್ದೂರಿ ತಯಾರಿ ನಡೆಯುತ್ತಿರುವ ಬೆನ್ನಲ್ಲೇ ನಗರದ ಹೊರವಲಯದ ಕೆಆರ್‌ಎಸ್ ಬ್ಯಾಕ್ ವಾಟರ್‌ನಲ್ಲಿ ನೂರಕ್ಕೂ ಅಧಿಕ ಯುವತಿ-ಯುವತಿಯರಿಂದ ರೇವ್ ಪಾರ್ಟಿ ಮಾಡಲಾಗಿದೆಯಾ ಎಂಬ ಅನುಮಾನಗಳು ವ್ಯಕ್ತವಾಗಿದ್ದವು. ಸದ್ಯ ಪಾರ್ಟಿ ವೇಳೆ ದಾಳಿ ಮಾಡಿದ್ದ ಪಿಎಸ್‌ಐ ಅವರನ್ನು ಅಮಾನತ್ತು ಮಾಡಲಾಗಿದೆ.

ಇಲವಾಲ ಠಾಣೆ ವ್ಯಾಪ್ತಿಯಲ್ಲಿ ಸೆ. 28ರಂದು ಮೈಸೂರು ತಾಲ್ಲೂಕಿನ ಮೀನಾಕ್ಷಿಪುರದ ಬಳಿ ಅನುಮತಿ ಇಲ್ಲದೆ ನಡೆಯುತ್ತಿದ್ದ ಪಾರ್ಟಿ ಮೇಲೆ ದಾಳಿ ಮಾಡಿದ್ದ ಮೈಸೂರು ತಾಲ್ಲೂಕಿನ ಇಲವಾಲ ಠಾಣೆ ಕಖಖ ಮಂಜುನಾಥ ನಾಯಕ್‌ರನ್ನು ಕರ್ತವ್ಯಲೋಪ ಆರೋಪದಡಿ ಅಮಾನತ್ತು ಮಾಡಿ ಎಸ್‌ಪಿ ವಿಷ್ಣುವರ್ಧನ್ ಆದೇಶ ಹೊರಡಿಸಿದ್ದಾರೆ. ಅದ್ದೂರಿ ಪಾರ್ಟಿಯಲ್ಲಿ ಯುವಕರು, ಯುವತಿಯರು ಭಾಗಿಯಾಗಿದ್ದರು. ದಾಳಿ ವೇಳೆ ಪಿಎಸ್ ಐ ಮೇಲೆ ಹಲ್ಲೆ ನಡೆಸಿ ಯುವಕರು ಪರಾರಿಯಾಗಿದ್ದರು. ನಂತರ ಮಂಜುನಾಥ ನಾಯಕ್ ಆಸ್ಪತ್ರೆಗೆ ದಾಖಲಾಗಿದ್ದರು.

ಇದೀಗ ದಿಢೀರ್ ಆಗಿ ಅಮಾನತು ಮಾಡಿರುವುದು ಅಚ್ಚರಿಗೆ ಕಾರಣವಾಗಿದೆ. ಮಂಜುನಾಥ ನಾಯಕ್ ಆಸ್ಪತ್ರೆಗೆ ದಾಖಲಾದ ನಂತರ ಎಎಸ್‌ಪಿ ನಾಗೇಶ್ ನೇತೃತ್ವದಲ್ಲಿ ಕಾರ್ಯಾಚರಣೆ ನಡೆಸಿ ಯುವಕರು, ಯುವತಿಯರನ್ನು ವಶಕ್ಕೆ ಪಡೆದು 64 ಜನರ ವಿರುದ್ಧ ಎಫ್‌ಐಆರ್‌ದಾಖಲಿಸಲಾಗಿತ್ತು.

ಪಾರ್ಟಿ ಆಯೋಜಿಸಿದ್ದ ಐವರನ್ನು ನ್ಯಾಯಾಂಗ ಬಂಧನಕ್ಕೆ ಕಳಿಸಲಾಗಿತ್ತು. ಉಳಿದವರಿಗೆ ನೋಟಿಸ್ ನೀಡಿಲಾಗಿತ್ತು.

# ಅದ್ದೂರಿ ವಾಲ್ಮೀಕಿ ಜಯಂತಿ ಆಚರಣೆಗೆ ಮುಖಂಡರ ನಿರ್ಧಾರ

• **ಉದಯವಾಹಿನಿ, ಕೋಲಾರ**

ಜಿಲ್ಲಾಡಳಿತ ಹಾಗೂ ಜಿಲ್ಲಾ ವಾಲ್ಮೀಕಿ ನಾಯಕ ಸಂಘಟನೆಗಳ ಸಮನ್ವಯ ಸಮಿತಿಯ ಸಹಕಾರದೊಂದಿಗೆ ಅ.17 ರಂದು ನಡೆಯಲಿರುವ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ನಗರದಲ್ಲಿ ಅದ್ದೂರಿಯಾಗಿ ಆಚರಿಸಲು ವಾಲ್ಮೀಕಿ ಸಮುದಾಯದ ಮುಖಂಡರು ಸಭೆಯಲ್ಲಿ ತೀರ್ಮಾನಿಸಲಾಯಿತು.

ನಗರದ ಹೊರವಲಯದ ಶ್ರೀನಿವಾಸಪುರ ರಸ್ತೆಯ ಆರ್.ಜಿ ಲೇಔಟ್ ನಲ್ಲಿರುವ ಮಹರ್ಷಿ ವಾಲ್ಮೀಕಿ ಸಮುದಾಯ ಭವನದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಮುಖಂಡರು ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಪ್ರತಿ ವರ್ಷದಂತೆ ಈ ಬಾರಿಯು ಅರ್ಥಪೂರ್ಣವಾಗಿ ಅದ್ದೂರಿಯಾಗಿ ಆಯೋಜನೆ ಮಾಡಬೇಕು ಜಿಲ್ಲಾಡಳಿತ ಕಾರ್ಯಕ್ರಮದಲ್ಲಿ ಸ್ಥಳೀಯ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.


ಉದಯವಾಹಿನಿ ಚಿತ್ರ

**ಭಾವಚಿತ್ರದ ಪಲ್ಲಕ್ಕಿಗಳ ಮೆರವಣಿಗೆ**

ಕಾರ್ಯಕ್ರಮದಲ್ಲಿ ಕೋಲಾರ ತಾಲೂಕಿನಿಂದ ಸುಮಾರು 120ಕ್ಕೂ ಹೆಚ್ಚು ಮಹರ್ಷಿ ವಾಲ್ಮೀಕಿ ಅವರ ಭಾವಚಿತ್ರದ ಪಲ್ಲಕ್ಕಿಗಳ ಮೆರವಣಿಗೆಯನ್ನು ಸಹ ಅದ್ದೂರಿಯಾಗಿ ನಡೆಸಲು ಪ್ರತಿ ಹಳ್ಳಿಯಿಂದ ಬರುವಂತೆ ನೋಡಿಕೊಳ್ಳಬೇಕು ಜಯಂತಿಯನ್ನು ಒಂದು ವರ್ಗಕ್ಕೆ ಸೀಮಿತಗೊಳಿಸದೆ ಎಲ್ಲಾ ಸಮುದಾಯ ಮುಖಂಡರನ್ನು ಹಾಗೂ ಸಂಘಟನೆಗಳನ್ನು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವ ಮೂಲಕ ಸೌಹಾರ್ದ ಪರಂಪರೆಯ ನಾಡು ಎಂಬುವ ಸಂದೇಶವನ್ನು ಸಾರುವ ರೀತಿಯಲ್ಲಿ ಆಚರಿಸೋಣ ಎಂದರು. ಜಿಲ್ಲಾಡಳಿತ ನೇತೃತ್ವದಲ್ಲಿ ನಡೆಯಲಿರುವ ಜಯಂತಿಯ ಪೂರ್ವಭಾವಿ ಸಭೆಯಲ್ಲಿ ವಾಲ್ಮೀಕಿ ಸಮುದಾಯದ ಮುಖಂಡರು ಭಾಗವಹಿಸಿ ಕಾರ್ಯಕ್ರಮದ ರೂಪರೇಷೆಗಳನ್ನು ಚರ್ಚಿಸಬೇಕು ಜೊತೆಗೆ ಸಮುದಾಯದ ಸಮಸ್ಯೆಗಳ ಬಗ್ಗೆ ಜಿಲ್ಲಾಧಿಕಾರಿಗಳ ಗಮನಕ್ಕೆ ಸಭೆಯಲ್ಲಿ ತರುವಂತೆ ನಿರ್ಧರಿಸಲಾಯಿತು.

ಸಭೆಯಲ್ಲಿ ನಗರಸಭೆ ಸದಸ್ಯ ಎನ್ ಅಂಬರೀಷ್, ಮುಖಂಡರಾದ ಬಾಲಗೋವಿಂದ್, ಮಾಲೂರು ಎನ್ ವೆಂಕಟರಾಮ್, ಕುಡುವನಹಳ್ಳಿ ಆನಂದ್, ಕೋಟೆ ಶ್ರೀನಿವಾಸ್, ರಾಜಣ್ಣ, ಬೈರಂಡಹಳ್ಳಿ ನಾಗೇಶ್, ಅಡ್ಡಗಲ್ ನರೇಶ್, ನರಸಿಂಹಪ್ಪ, ಕಮಾಂಡಹಳ್ಳಿ ನಾರಾಯಣಸ್ವಾಮಿ, ಭುವನಹಳ್ಳಿ ನಾರಾಯಣಸ್ವಾಮಿ ಮುಂತಾದವರು ಇದ್ದರು.

# ಕಾಯಿಲೆಗಳಿಗೆ ಸರ್ಕಾರ ನಿಗದಿಪಡಿಸಿದ್ದ ಶುಲ್ಕಕ್ಕಿಂತ ಹೆಚ್ಚು ಹಣ ವಸೂಲಿ

• **ಬಂಗಾರಪೇಟೆ, ಉದಯವಾಹಿನಿ**

ತಾಲ್ಲೂಕು ಹಾಗೂ ಪಟ್ಟಣದಾದ್ಯಂತ ಖಾಸಗಿ ಆಸ್ಪತ್ರೆಗಳಲ್ಲಿ ಡೆಂಗ್ಯೂ, ಚಿಕನ್‌ಗುನ್ಯಾ, ಮಲೇರಿಯಾ, ಟೈಫಾಡ್, ಮುಂತಾದ ಕಾಯಿಲೆಗಳಿಗೆ ಸರ್ಕಾರ ನಿಗಧಿಪಡಿಸಿದ್ದ ಶುಲ್ಕಕ್ಕಿಂತಲೂ ಅತಿ ಹೆಚ್ಚು ಹಣವನ್ನು ವಸೂಲಿ ಮಾಡಿ ಹಗಲು ದರೋಡೆ ನಡೆಸಲಾಗುತ್ತಿದೆ ಎಂದು ಕರ್ನಾಟಕ ದಲಿತ ರೈತಸೇನೆ ಸಂಸ್ಥಾಪಕ ಅಧ್ಯಕ್ಷ ಹುಣಸನಹಳ್ಳಿ ಎನ್. ವೆಂಕಟೇಶ್ ಕಿಡಿಕಾರಿದರು.

ಪಟ್ಟಣದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಸುನೀಲ್‌ಕುಮಾರ್ ಅವರ ಕಛೇರಿ ಬಳಿ ಮನವಿ ಸಲ್ಲಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ಡೆಂಗ್ಯೂ, ಚಿಕನ್‌ಗೂನ್ಯ, ಮಲೇರಿಯಾ, ಟೈಪಾಡ್, ವೈರಲ್ ಫೀವರ್‌ನಂತಹ ಕಾಯಿಲೆಗಳು ಹೆಚ್ಚಾಗುತ್ತಿದ್ದು, ತಾಲ್ಲೂಕಿನ ಅತಿ ಹೆಚ್ಚು ಜನರು ಖಾಸಗಿ ಆಸ್ಪತ್ರೆಗಳನ್ನು ಅವಲಂಭಿಸಿದ್ದಾರೆ. ಖಾಸಗಿ ಆಸ್ಪತ್ರೆ ಮತ್ತು ಲ್ಯಾಬೋರೆಟರಿ ಮಾಲೀಕರು ಒಳ ಒಪ್ಪಂದ ಮಾಡಿಕೊಂಡು ಸರ್ಕಾರ ನಿಗಧಿಪಡಿಸಿದ ಧರಕ್ಕಿಂತಲೂ ಹೆಚ್ಚು ಹಣವನ್ನು ಪಡೆಯಲಾಗುತ್ತಿದೆ.


ಉದಯವಾಹಿನಿ ಚಿತ್ರ

**ಲ್ಯಾಬೋರೆಟರಿ ಮಾಲೀಕರು ಒಳ ಒಪ್ಪಂದ**

ಆದ್ದರಿಂದ ತಾಲ್ಲೂಕು ವೈದ್ಯಾಧಿಕಾರಿಗಳು ಈ ಕೂಡಲೇ ಗಮನಹರಿಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಂಡು ಸಾರ್ವಜನಿಕರಿಗೆ ನ್ಯಾಯ ಒದಗಿಸಿಕೊಡಬೇಕೆಂದು ಆಗ್ರಹಿಸಿದರು.

**ನುರಿತ ತಜ್ಞರಿಲ್ಲದ ಲ್ಯಾಬೋರೆಟರಿ, ಆತಂಕದ ಸ್ಥಿತಿಯಲ್ಲಿ ರೋಗಿಗಳು:** ನುರಿತ ತಜ್ಞರಿಲ್ಲದ ಲ್ಯಾಬೋರೇಟರಿಗಳಲ್ಲಿ ಪ್ರಶಿಕ್ಷಣಾರ್ಥಿಗಳಿಂದ ಮತ್ತು ರಕ್ತ ಪರೀಕ್ಷೆ ಮಾಡುವ ಸಿಬ್ಬಂದಿಯೂ ಲ್ಯಾಬ್ ಟೆಕ್ನಿಷಿಯನ್ ಪದವಿಯನ್ನು ಪಡೆಯದೇ ಇರುವ ಸರ್ಕಾರದಿಂದ ಮಾನ್ಯತೆಯನ್ನು ಹೊಂದಿರದ ಸಿಬ್ಬಂದಿಗಳಿಂದ ಮತ್ತು ಆಸ್ಪತ್ರೆಗಳಲ್ಲಿ ತಮ್ಮ ಮನಸೋ ಇಚ್ಛೆಯಂತೆ ಜಿಎನ್‌ಎಂ, ಎಎನ್‌ಎಂ ನರ್ಸಿಂಗ್ ಮಾಡಿರುವ ಅಭ್ಯರ್ಥಿಗಳನ್ನು ರಕ್ತ ಪರೀಕ್ಷೆ ಮಾಡಲು ಬಳಸಿಕೊಳ್ಳುತ್ತಿದ್ದು, ಇದರಿಂದ ಕೆಲವೊಮ್ಮೆ ಯಾವುದೇ ರಿಪೋರ್ಟ್ ಬದಲಾಗಿ ಮತ್ತೊಂದು ರಿಪೋರ್ಟ್ ನೀಡಲಾಗುತ್ತಿದೆ ಎಂದು ಸಾರ್ವಜನಿಕರು ಆತಂಕ ವ್ಯಕ್ತಪಡಿಸಿದ್ದಾರೆ. ಆದ್ದರಿಂದ ತಾವು ಈ ಕೂಡಲೇ ಖಾಸಗಿ ಆಸ್ಪತ್ರೆಗಳಿಗೆ ಭೇಟಿ ಕೊಟ್ಟು ಪರಿಶೀಲಿಸಿ ಕ್ರಮ ಕೈಗೊಳ್ಳಬೇಕು. ಈ ಸಂದರ್ಭದಲ್ಲಿ ಗೌರವಾಧ್ಯಕ್ಷ ಹುಳದೇನಹಳ್ಳಿ ವೆಂಕಟೇಶ್, ಹುಣಸನಹಳ್ಳಿ ಸತೀಶ್, ಹಿರೇಕರಪನಹಳ್ಳಿ ಮುನಿರಾಜು, ಕೀಲುಕೊಪ್ಪ ಮುನಿರಾಜ್, ಅರವಿಂದಮಾರಾ ಉಪಸ್ಥಿತರಿದ್ದರು.

# ದಯಮಾಡಿ ಇಂತಹ ಆರೋಪ, ತೇಜೋವಧೆ ಮಾಡಬೇಡಿ: ಮುಡಾ ಅಧ್ಯಕ್ಷ ಕೆ. ಮರೀಗೌಡ

• **ಉದಯವಾಹಿನಿ, ಮೈಸೂರು**

ಮುಡಾ ಅಧ್ಯಕ್ಷರಾದ ಕೆ. ಮರೀಗೌಡ ನಾನು ಯಾರಿಗೂ ಸಹ ದ್ರೋಹ ಮಾಡಿಲ್ಲ. ನನ್ನ ಮನೆ ದೇವರ ಮೇಲೆ ಆಣೆ ಮಾಡಿ ಹೇಳ್ತೀನಿ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೂ ದ್ರೋಹ ಬಗೆದಿಲ್ಲ ಎಂದು ಹೇಳಿದರು.



ಪಕ್ಷದ ಮುಖಂಡರು, ಕಾರ್ಯಕರ್ತರು ನನ್ನ ಮೇಲೆ ಆರೋಪ ಮಾಡ್ತಿದ್ದಾರೆ. ನಾನು ಅಧ್ಯಕ್ಷ ಆದ ಮೇಲೆ ಸಿದ್ದರಾಮಯ್ಯ ಅವರಿಗೆ ಇಂತಹ ಸ್ಥಿತಿ ಬಂತು ಎಂದು ಹೇಳುತ್ತಿದ್ದಾರೆ. ದಯಮಾಡಿ ಇಂತಹ ಆರೋಪ ತೆಜೋವಧೆ ಮಾಡಬೇಡಿ. ಹರೀಶ್‌ಗೌಡ, ಬಿಜೆಪಿ ಶಾಸಕ ಶ್ರೀವತ್ಸ ಅವರು ಪತ್ರ ಕೊಟ್ಟಿದ್ದರು. 50:50 ಅನುಪಾತ ಮಾಡದಂತೆ ಶಾಸಕರು ಮನವಿ ಮಾಡಿದರು. ನಾನು ಕೂಡ ಆಯುಕ್ತರಿಗೆ 50ರ ಅನುಪಾತ ಮಾಡದಂತೆ ಸೂಚಿಸಿದ್ದೆ' ಎಂದು ತಿಳಿಸಿದರು. ಇಷ್ಟಾದರೂ ಸಹ ಆಯುಕ್ತರು ಯಾರ ಮಾತು ಕೇಳದೆ 50:50 ಅನುಪಾತ ಮಾಡಿದರು. ನನಗೆ 73 ವರ್ಷ, ಅನಾರೋಗ್ಯದಿಂದ ಬಳಲುತ್ತಿದ್ದೇನೆ. ನನ್ನ ಪಕ್ಷದಿಂದಲೇ ನನಗೆ ನಿರಂತರ ತೇಜೋವಧೆ ಆಗ್ತಿದೆ. ಬೇರೆ ಪಕ್ಷದವರು ನನ್ನ ವಿರುದ್ಧ ಮಾತಾಡ್ತಿಲ್ಲ. ಆದ್ರೆ, ನಮ್ಮವರೇ ನನ್ನ ವಿರುದ್ಧ ಮಾತಾಡುತ್ತಿದ್ದಾರೆ. ಕಾಂಗ್ರೆಸ್ ಅಧ್ಯಕ್ಷರು ಇಂತವರ ವಿರುದ್ಧ ಕ್ರಮ ಕೈಗೊಳ್ಳಿ. ನಾನು ಪಕ್ಷಕ್ಕಾಗಿ ಸಾಕಷ್ಟು ದುಡಿದ್ದಿದ್ದೇನೆ' ಎಂದು ಬೇಸರ ವ್ಯಕ್ತಪಡಿಸಿದರು.

# ಟಾರ್ಗೆಟ್ ರಾಜಕಾರಣಕ್ಕೆ ಕಾಲವೇ ಉತ್ತರ ಕೊಡಲಿದೆ

## • ಜನ ತೀರ್ಮಾನ ಮಾಡಿದರೆ ಏನು ಬೇಕಾದರೂ ನಡೆಯುತ್ತದೆ: ನಿಖಿಲ್ ಕುಮಾರಸ್ವಾಮಿ

• **ಉದಯವಾಹಿನಿ, ಕನಕಪುರ**

ಕನಕಪುರದಲ್ಲಿ ಟಾರ್ಗೆಟ್ ರಾಜಕಾರಣ ನಡೆಯುತ್ತಿದೆ. ನಮ್ಮ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರನ್ನು ಹೇಗೆ ನಡೆಸಿಕೊಳ್ಳುತ್ತಿದ್ದಾರೆ ಎಂಬುದು ಗೊತ್ತಿದೆ. ಇದಕ್ಕೆ ಕಾಲವೇ ಉತ್ತರ ಕೊಡಲಿದೆ' ಎಂದು ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಡಿ.ಕೆ. ಸಹೋದರರ ವಿರುದ್ಧ ವಾಗ್ದಾಳಿ ನಡೆಸಿದರು.

ಪಟ್ಟಣದಲ್ಲಿ ಜಿಲ್ಲಾ ಮಟ್ಟದ ಸದಸ್ಯತ್ವ ನೋಂದಣಿ ಅಭಿಯಾನದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, 'ಜನ ತೀರ್ಮಾನ ಮಾಡಿದರೆ ಏನು ಬೇಕಾದರೂ ನಡೆಯುತ್ತದೆ. ಇದಕ್ಕೆ ಕಳೆದ ಲೋಕಸಭಾ ಚುನಾವಣೆಯಲ್ಲಿ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಫಲಿತಾಂಶವೇ ಸಾಕ್ಷಿ ಎಂದರು.

ಗ್ರಾಮಾಂತರದಲ್ಲಿಎನ್‌ಡಿಎ ಅಭ್ಯರ್ಥಿಯಾಗಿದ್ದ ಡಾ. ಸಿ.ಎನ್. ಮಂಜುನಾಥ್ ಅವರ ಗೆಲುವಿಗೆ ಕನಕಪುರದ ಪ್ರಬುದ್ಧ ಮತದಾರರ ಸಹಕಾರ ಅಮೂಲ್ಯವಾದುದು. ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಕ್ಷೇತ್ರದಲ್ಲೇ ಮಂಜುನಾಥ್ ಅವರಿಗೆ 80 ಸಾವಿರಕ್ಕೂ ಅಧಿಕ ಮತಗಳು ಬಂದಿವೆ. ಈ ಮತಗಳು ಮುಂದೆ ಇನ್ನೂ ಹೆಚ್ಚಾಗಬಹುದು' ಎಂದು ಹೇಳಿದರು.

ಕುಮಾರಸ್ವಾಮಿ ಅವರು ಜಿಲ್ಲೆ ಬಿಟ್ಟು ಹೋಗಿದ್ದಾರೆಂಬ ಭಾವನೆ ಯಾರಿಗೂ ಬೇಡ. ಅವರು ಎಂದಿಗೂ ಜಿಲ್ಲೆಯವರೇ ಆಗಿರಲಿದ್ದಾರೆ. ಮಂಡ್ಯದಲ್ಲಿ ರಾಜಕೀಯ ಷಡ್ಯಂತ್ರಕ್ಕೆ ಬಲಿಯಾಗಿ ನಾನು ಸೋತರೂ, ಅಲ್ಲಿನ 5 ಲಕ್ಷ ಜನ ಮತ ಹಾಕಿದ್ದರು. ಆ ಕ್ಷೇತ್ರವನ್ನು ಉಳಿಸಿಕೊಳ್ಳುವುದಕ್ಕಾಗಿ ಕುಮಾರಸ್ವಾಮಿ ಅವರು ಮಂಡ್ಯಕ್ಕೆ ಹೋಗುವ ಅನಿವಾರ್ಯತೆ ಬಂತು ಅಷ್ಟೆ ಎಂದರು. ನನಗೆ ಈಗಲೇ ಶಾಸಕನಾಗಬೇಕೆಂಬ ಆಸೆ ಇಲ್ಲ. ಚನ್ನಪಟ್ಟಣ ಉಪ ಚುನಾವಣೆಯಲ್ಲಿ ಸ್ಪರ್ಧಿಸುತ್ತೇನೆ ಎಂಬ ಚರ್ಚೆ ಇದೆ.

ಆದರೆ ನನ್ನ ತಾತ ಎಚ್.ಡಿ. ದೇವೇಗೌಡರು ಕರೆದು, ಬೂತ್ ಮಟ್ಟದ ಸದಸ್ಯತ್ವ ನೋಂದಣಿ ಅಭಿಯಾನ ಶುರು ಮಾಡು ಎಂದು ಸೂಚನೆ ನೀಡಿದರು. ಅದನ್ನು ಯಶಸ್ವಿಯಾಗಿ ಮಾಡುತ್ತಾ, ಪಕ್ಷ ಕಟ್ಟಲು ಹೊರಟಿದ್ದೇನೆ. ಮುಂದೆ ನಮ್ಮ ಪಕ್ಷ ಅಧಿಕಾರಕ್ಕೆ ಬರುವುದು ನಿಶ್ಚಿತ' ಎಂದು ವಿಶ್ವಾಸ ವ್ಯಕ್ತಪಡಿಸಿದರು.ನಿಖಿಲ್ ಕುಮಾರಸ್ವಾಮಿ, ಅಧ್ಯಕ್ಷ, ಜೆಡಿಎಸ್ ಯುವ ಘಟಕ ಚನ್ನಪಟ್ಟಣ ಉಪ ಚುನಾವಣೆ ಟಿಕೆಟ್ ವಿಷಯದಲ್ಲಿ ಬಿಜೆಪಿ-ಜೆಡಿಎಸ್ ಮಧ್ಯೆ ಗೊಂದಲವಿಲ್ಲ. ಯಾರೇ ಅಭ್ಯರ್ಥಿಯಾದರೂ ಒಗ್ಗಟ್ಟಾಗಿ ಕೆಲಸ ಮಾಡಿ ಗೆಲ್ಲಿಸುತ್ತೇವೆ.

ಎನ್‌ಡಿಎ ಅಭ್ಯರ್ಥಿಗೆ ಜನ ಆಶೀರ್ವಾದ ಮಾಡಲಿದ್ದಾರೆ. ಕಾಂಗ್ರೆಸ್ ಸರ್ಕಾರ ವರ್ಗಾವಣೆ ದಂದೆಯಲ್ಲಿ ಮುಳುಗಿದೆ.

ಅಧಿಕಾರಿಗಳು ವರ್ಗಾವಣೆಗೆ ದುಡ್ಡು ಕೊಡಬೇಕು. ಅದನ್ನೇ ಕುಮಾರಣ್ಣ ಹೇಳಿದ್ದಾರೆ. ಇದನ್ನು ಜೀರ್ಣಿಸಿಕೊಳ್ಳದ ಕಾಂಗ್ರೆಸ್‌ನ ಕಾನೂನು ತಜ್ಞರು ಹಾಗೂ ಮುಖ್ಯಮಂತ್ರಿಯೇ ಎಡಿಜಿಪಿ ಹೆಸರಲ್ಲಿ ಕುಮಾರಣ್ಣನ ವಿರುದ್ಧ ಪತ್ರ ಬರೆದು ಆತನ ಸಹಿ ಹಾಕಿಸಿದ್ದಾರೆ.

ಇದು ಎಡಿಜಿಪಿ ಹುದ್ದೆಗೆ ಗೌರವ ತರುವ ನಡೆಯಲ್ಲ ಎಂದು ನಿಖಿಲ್ ಕುಮಾರಸ್ವಾಮಿ ಅಸಮಾಧಾನ ವ್ಯಕ್ತಪಡಿಸಿದರು.

ಚುನಾವಣೆ ಸಂದರ್ಭದಲ್ಲಿ ಕೂಪನ್, ಕುಕ್ಕರ್, ಸೀರೆ ಹಂಚಿ ಮುಗ್ಧ ಮತದಾರರನ್ನು ದಾರಿ ತಪ್ಪಿಸುವ ಕಾಂಗ್ರೆಸ್‌ಗೆ ಕಳೆದ ಲೋಕಸಭಾ ಚುನಾವಣೆಯಲ್ಲಿ ಜನ ತಕ್ಕ ಉತ್ತರ ಕೊಟ್ಟಿದ್ದಾರೆ. ಇನ್ಮುಂದೆ ಅವರ ಆಟ ನಡೆಯಲ್ಲ. ನಮ್ಮ ಕಾರ್ಯಕರ್ತರು ಯಾವುದೇ ಭಯಪಡಬೇಕಿಲ್ಲ. ಅವರೊಂದಿಗೆ ನಾವಿದ್ದೇವೆ -ನಿಖಿಲ್ ಕುಮಾರಸ್ವಾಮಿ



**ಕನಕಪುರದಲ್ಲಿ ಟಾರ್ಗೆಟ್ ರಾಜಕಾರಣ ನಡೆಯುತ್ತಿದೆ**

# ತಾಲ್ಲೂಕು ಮಟ್ಟದ ಒಕ್ಕೂಟ ಪದಾಧಿಕಾರಿಗಳ ಸಮಾವೇಶ

• **ಉದಯವಾಹಿನಿ,ಬಂಗಾರಪೇಟೆ**

ಲಕ್ಷಾಂತರ ಜನರ ಸ್ವಾವಲಂಬಿ ಬದುಕಿಗೆ ದಾರಿ ದೀಪವಾಗಿ ಶ್ರೀ ಧರ್ಮಸ್ಥಳ ಗ್ರಾಮೀಣ ಅಭಿವೃದ್ಧಿ ಸಹಕಾರಿ ಸಂಘ ಕಾರ್ಯ ನಿರ್ವಹಿಸುತ್ತಿರು ವುದು ಶ್ಲಾಘನೀಯ ಎಂದು ಪೊಲೀಸ್ ಇನ್ಸ್ ಪೆಕ್ಟರ್ ನಂಜಪ್ಪ ಅಭಿಪ್ರಾಯಪಟ್ಟರು.

ಪಟ್ಟಣದ ವಿಬಿಆರ್, ಕಲ್ಯಾಣ ಮಂಟಪದಲ್ಲಿ ಶ್ರೀ ಕ್ಷೇತ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸೇವಾ ಟ್ರಸ್ಟ್ ವತಿಯಿಂದ ಅಯೋಜಿಸಲಾಗಿದ್ದ ತಾಲ್ಲೂಕು ಮಟ್ಟದ ಒಕ್ಕೂಟ ಪದಧಾಕಾರಿಗಳ ಸಮಾವೇಶ ಕಾರ್ಯಕ್ರಮನ್ನು ಉಧ್ಘಾಟಿಸಿ ಮಾತನಾಡಿದ ಅವರು, ಗ್ರಾಮಾಭ್ಯುದಯ, ಆರ್ಥಿಕ ಸಬಲತೆ, ಕೃಷಿ, ಸಾಮಾಜಿಕ ಕ್ಷೇತ್ರ, ಜನರ ಜೀವನಮಟ್ಟ ಸುಧಾರಣೆ ಸೇರಿದಂತೆ ಹಲವು ಸಮಾಜಮುಖೀ ಚಿಂತನೆಗಳೊಂದಿಗೆ ಕಾರ್ಯ ನಿರ್ವಹಿಸುತ್ತಿರುವ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಘವು ಗಾಂದೀಜಿಯವರ ಗ್ರಾಮ ರಾಜ್ಯದ ಪರಿಕಲ್ಪನ್ನು ಸಾಕಾರಗೊಳ್ಳುತ್ತಾ ಯಶಸ್ಸಿನ ಹಾದಿಯಲ್ಲಿ ಸಾಗುತ್ತಿದೆ ಎಂದರು.


ಉದಯವಾಹಿನಿ ಚಿತ್ರ

**ಮಾನವ ಸಂಪನ್ಮೂಲ ಬಳಕೆ**

ತಾಲ್ಲೂಕಿನ ಯೋಜನಾಧಿಕಾರಿ ಶ್ರೀ ಚೇತನ್ ಕುಮಾರ್ ಮಾತನಾಡಿ ಹತ್ತು ವರ್ಷದ ತಾಲ್ಲೂಕಿನ ಪ್ರಗತಿಯ ಅಂಕಿ ಅಂಶಗಳನ್ನು ಪ್ರಸ್ತುತ ಪಡಿಸುತ್ತಾ,ನಮ್ಮ ಸಂಸ್ಥೆಯು ಪ್ರಸಕ್ತ ಸಾಲಿನಲ್ಲಿ 2ಕೋಟಿ 36 ಲಕ್ಷ ಲಾಭಾಂಶ ಗಳಿಸುವುದರೊಂದಿಗೆ ಸುದೀರ್ಘವಾಗಿ ಕೃಷಿ ಮೇಳ ,ತರಬೇತಿ, ಮಾನವ ಸಂಪನ್ಮೂಲ ಬಳಕೆ, ದುರ್ಬಲ ವರ್ಗದ ಮಹಿಳೆಯರ ಸಬಲೀಕರಣ ಮತ್ತು ಆರ್ಥಿಕ ಸ್ವಾವಲಬನೆಗಾಗಿ ಸಂಘಟನೆಗೆ ಪ್ರೇರಣೆ ನೀಡಲಾಗಿದ್ದು, ಅನೇಕ ದೇವಾಲಯಗಳ ಜೀರ್ಣೋದ್ಧಾರ ಕಾರ್ಯ ಮಾಡಲಾಗಿದೆ ಎಂದರು.

ಈ ಸಂದರ್ಭದಲ್ಲಿ ಕೋಲಾರ ಜಿಲ್ಲಾ ನಿರ್ದೇಶಕರಾದ ಪದ್ಮಯ್ಯ ಸಿಎಚ್ , ಹಾಗೂ ಬಿ ಎಂ ರೆಡ್ಡಿ ,ವಿಎಸ್ ಚಂದ್ರಶೇಖರ್, ರಾಜ್ಯಾ ಶಾಖ ಪ್ರಬಂಧಕ ಶೇಖರ್ ,ಜನಾರ್ಧನ್, ಮಹದೇವಸ್ವಾಮಿ ಇತರರು ಉಪಸ್ಥಿತರಿದ್ದರು.

### ನೊಂದವರ ಪಾಲಿಗೆ ಕಲ್ಪವೃಕ್ಷ

ಜಿಲ್ಲಾ ಜನಜಾಗೃತಿ ವೇದಿಕೆಯ ಸದಸ್ಯರಾದ ಶ್ರೀ ವಿ ಎಸ್ ಚಂದ್ರಶೇಖರ್ ಮಾತನಾಡಿ ಇಂದು ಈಶ್ವರ ಪಾರ್ವತಿ ರೂಪದಲ್ಲಿ ಪೂಜ್ಯರು ಅಮ್ಮನವರು ನಮ್ಮನ್ನು ಪೊರೆಯುತ್ತಿದ್ದಾರೆ... ಗ್ರಾಮಾಭಿವೃದ್ಧಿ ಯೋಜನೆಯೂ ಸಾಧಿಸಿದ ಪ್ರಗತಿಯ ಅಂಕಿ ಅಂಶಗಳನ್ನು ಗಮನಿಸಿದಾಗ ನಾವುಗಳು ನಮ್ಮ ಸ್ವಂತ ಊರುಗಳಲ್ಲಿ ಅಲ್ಪ ಸ್ವಲ್ಪ ಸೇವೆಗಳನ್ನು ಮಾಡಲು ಕಷ್ಟಪಡುವ ಸಂದರ್ಭಗಳಲ್ಲಿ ಈ ಸಂಸ್ಥೆಯು ಯೋಜನೆಗಳನ್ನು ಜನರ ಮನೆಬಾಗಿಲಿಗೆ ತಲುಪಿಸಿ ನೊಂದ ಜೀವಿಗಳ ಪಾಲಿಗೆ ಕಲ್ಪವೃಕ್ಷದಂತೆ ಆಸರೆಯಾಗಿದೆ ಎಂದರು.

ಅಂತರಾಳದಿಂದ..
EDITORIAL

# ಮತ್ತೆ ಸದ್ದು ಮಾಡುತ್ತಿರುವ ಚುನಾವಣಾ ಬಾಂಡ್

ಬಿಜೆಪಿಯ ಸತತ ಪ್ರಯತ್ನದ ಫಲವಾಗಿ ಚುನಾವಣಾ ಬಾಂಡ್ ಹಗರಣಕ್ಕೆ ಸಂಬಂಧಿಸಿ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಸೇರಿದಂತೆ ರಾಜ್ಯದ ಹಲವು ಮುಖಂಡರ ವಿರುದ್ಧ ಎಫ್‌ಐಆರ್ ದಾಖಲಾಗಿದೆ ಮೇಲ್ನೋಟಕ್ಕೆ ಇದು ಸರಕಾರೇತರ ಸಂಸ್ಥೆಯ ಕಾರ್ಯಕರ್ತರ ಹೋರಾಟದ ಫಲವಾಗಿದ್ದರೂ, ನ್ಯಾಯಾಲಯ ಎಫ್‌ಐಆರ್ ದಾಖಲಿಸಲು ಇದೀಗ ತುರ್ತಾಗಿ ಅನುಮತಿ ನೀಡುವುದರ ಹಿಂದೆ ಕರ್ನಾಟಕದಲ್ಲಿ ಇತ್ತೀಚೆಗೆ ನಡೆಯುತ್ತಿರುವ ರಾಜಕೀಯ ಬೆಳವಣಿಗೆಗಳೂ ಪರೋಕ್ಷ ಕಾರಣ ಎನ್ನುವುದರಲ್ಲಿ ಎರಡು ಮಾತಿಲ್ಲ, ಚುನಾವಣಾ ಬಾಂಡ್ ಅಸಾಂವಿಧಾನಿಕ ಎಂದು ಸುಪ್ರೀಂಕೋರ್ಟ್ ಲೋಕಸಭಾ ಚುನಾವಣೆಗೆ ಮುನ್ನವೇ ಘೋಷಿಸಿದ್ದು ಇದನ್ನು ಈಗಾಗಲೇ ರದ್ದುಗೊಳಿಸಿದೆ. ಚುನಾವಣಾ ಬಾಂಡ್ ಸಂಬಂಧಿಸಿ ಸುಪ್ರೀಂಕೋರ್ಟ್ ತೀರ್ಪು ಕೇಂದ್ರ ಸರಕಾರಕ್ಕೆ ಬಹುದೊಡ್ಡ ಹಿನ್ನಡೆಯಾಗಿತ್ತುಚುನಾವಣಾ ಬಾಂಡ್ ಮೂಲಕ ಕೇಂದ್ರ ಸರಕಾರ ಹಲವು ಬೃಹತ್ ಕಂಪೆನಿಗಳನ್ನು ತನ್ನ ಪಕ್ಷಕ್ಕೆ ಹಣ ಹೂಡಿಕೆ ಮಾಡುವಂತೆ ಒತ್ತಾಯಿಸಿದೆ ಎನ್ನುವ ವ್ಯಾಪಕ ಆರೋಪ ಕೇಳಿ ಬಂದಿತ್ತು. ಅಷ್ಟೇ ಅಲ್ಲ ಐಟಿ, ಈಡಿ ದಾಳಿಗೊಳಗಾಗಿರುವ ಹಲವು ಸಂಸ್ಥೆಗಳು ಬಳಿಕ ಕೋಟ್ಯಂತರ ರೂ. ಬೆಲೆಯ ಬಿಜೆಪಿಯ ಚುನಾವಣಾ ಬಾಂಡ್‌ನ್ನು ಖರೀದಿ ಮಾಡಿರುವುದನ್ನು ಮಾಧ್ಯಮಗಳು ಬಹಿರಂಗ ಪಡಿಸಿದ್ದವು. ಇತರ ಪಕ್ಷಗಳ ಚುನಾವಣಾ ಬಾಂಡ್ ನ್ನು ಖರೀದಿಸಿದ ಕಂಪನಿಗಳ ವಿರುದ್ಧ ತನಿಖಾ ಸಂಸ್ಥೆಗಳನ್ನು ದುರುಪಯೋಗ ಪಡಿಸಿಕೊಂಡ ಆರೋಪವೂ ಕೇಂದ್ರ ಸರಕಾರದ ಮೇಲಿದ್ದವು. ಚುನಾವಣಾ ಬಾಂಡ್ ಖರೀದಿಸಿದ ಕಂಪೆನಿಗಳಿಗೆ ಹಲವು ಮಹತ್ವದ ಯೋಜನೆಗಳ ಗುತ್ತಿಗೆಗಳನ್ನು ಕೊಟ್ಟಿರುವುದು ಕೂಡ ಅನುಮಾನಗಳಿಗೆ ಕಾರಣವಾಗಿದ್ದವು. ಇವೆಲ್ಲದರ ಬೆನ್ನಿಗೆ, ಸುಪ್ರೀಂಕೋರ್ಟ್ ಚುನಾವಣಾ ಬಾಂಡ್ ನ್ನು ರದ್ದುಗೊಳಿಸಿತು. ವಿರೋಧ ಪಕ್ಷಗಳು ಚುನಾವಣೆಯ ಸಂದರ್ಭದಲ್ಲಿ ಇದನ್ನು ಬಳಸಿಕೊಂಡವಾದರೂ, ಚುನಾವಣಾ ಫಲಿತಾಂಶದ ಬಳಿಕ ಬಹುತೇಕ ಮರೆತು ಬಿಟ್ಟಿದ್ದವು. ಚುನಾವಣಾ ಬಾಂಡ್ ಗೆ ಸಂಬಂಧಿಸಿ ಸುಮಾರ್ 15 ದೂರುಗಳನ್ನು ಅದು ಸಲ್ಲಿಸಿತ್ತಾದರೂ, ಕಳ ಹಂತದ ಪೊಲೀಸ್ ಅಧಿಕಾರಿಗಳು ಈ ದೂರನ್ನು ದಾಖಲಿಸಲು ಹಿಂದೇಟು ಹಾಕಿದರು. ಈ ಹಿನ್ನೆಲೆಯಲ್ಲಿ ಎಫ್‌ಐಆರ್ ದಾಖಲಿಸಲು ಅನಿವಾರ್ಯವಾಗಿ ಸಂಸ್ಥೆ ನ್ಯಾಯಾಲಯದ ಮೆಟ್ಟಿಲೇರಿತು. ರಾಜ್ಯದ ಕಾಂಗ್ರೆಸ್ ನಾಯಕರಿಗೆ ಈ ಎಫ್‌ಐಆರ್ ಬಗ್ಗೆ ವಿಶೇಷ ಆಸಕ್ತಿಯೇನೂ ಇದ್ದಿರಲಿಲ್ಲ. ಬಹುಶ: ಬಿಜೆಪಿಯು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮುಡಾ ಹಗರಣವನ್ನು ಮುಂದಿಟ್ಟುಕೊಂಡು ರಾಜ್ಯಮಟ್ಟದಲ್ಲಿಗದ್ದಲಗಳನ್ನು ಸೃಷ್ಟಿಸದೇ ಇದ್ದಿದ್ದರೆ, ವಿತ್ತ ಸಚಿವ ಮತ್ತು ಬಿಜೆಪಿಯ ರಾಜ್ಯ ನಾಯಕರ ವಿರುದ್ಧ ದಾಖಲಾಗಿರುವ ಎಫ್ ಐಆರ್ ಬಗ್ಗೆ ಕಾಂಗ್ರೆಸ್ ಇಷ್ಟೊಂದು ಆಸಕ್ತಿಯಿಂದ ಪತ್ರಿಕಾಗೋಷ್ಠಿಯನ್ನು ಮಾಡುತ್ತಲೂ ಇರಲಿಲ್ಲ. ರಾಜ್ಯದಲ್ಲಿ ಸರಕಾರ ರಚನೆಯಾದ ಆರಂಭದಲ್ಲಿ 'ಬಿಜೆಪಿ ನಾಯಕರ ವಿರುದ್ಧದ ಎಲ್ಲಾ ಪ್ರಕರಣಗಳನ್ನು ವಿಚಾರಣೆಗೊಳಪಡಿಸುತ್ತೇವೆ ಎಂದು ಅಬ್ಬರಿಸಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಬಳಿಕ ತಣ್ಣಗಾಗಿದ್ದರು. ವಿಪರ್ಯಾಸವೆಂದರೆ, ಉಡುಪಿಯಲ್ಲಿ ಪರಶು ರಾಮನ ನಕಲಿ ಪ್ರತಿಮೆಗೆ ಸಂಬಂಧಿಸಿ ಬಿಜೆಪಿಯ ಕಾರ್ಯಕರ್ತರೇ ಬೀದಿಯಲ್ಲಿ ನಿಂತು ಬಿಜೆಪಿ ಮುಖಂಡ ಸುನೀಲ್ ಕುಮಾರ್ ವಿರುದ್ಧ ಆಕ್ರೋಶ ವ್ಯಕ್ತಪಡಿಸುತ್ತಿದ್ದರೂ, ಈ ಬಗ್ಗೆ ತನಿಖೆಗೆ ಸರಕಾರ ಆಸಕ್ತಿ ವಹಿಸಲಿಲ್ಲ. ಆದರೆ, ಯಾವಾಗ ಬಿಜೆಪಿ ನಾಯಕರು ಕಾಂಗ್ರೆಸ್ ಸರಕಾರದ ಸಣ್ಣ ಪುಟ್ಟ ಹಗರಣಗಳನ್ನೂ ಬಿಡದೆ ಜನರ ಮುಂದಿಟ್ಟು ಬೀದಿ ರಂಪ ಮಾಡತೊಡಗಿದರೋ, ಆಗ ರಾಜ್ಯ ಸರಕಾರಕ್ಕೆ ಬಿಜೆಪಿ ನಾಯಕರ ಹಿಂದಿನ ಹಗರಣಗಳು ನೆನಪಾದವು. ಸರಕಾರ ರಚನೆಯಾದ ಒಂದು ವರ್ಷದ ಬಳಿಕ ಏಕಾಏಕಿ ಬೆಂಗಳೂರಿನಲ್ಲಿ ನಕಲಿ ಪರಶುರಾಮ ಪ್ರತಿಮೆಯ ವಿರುದ್ಧ ಪ್ರತಿಭಟನೆ ನಡೆದು, ಅಧಿಕಾರಿಗಳ ಮೇಲೆ ಕ್ರಮ ತೆಗೆದುಕೊಂಡಿತು. ಸರಕಾರದ ಹಗರಣದ ವಿರುದ್ಧ ಪ್ರತಿಭಟನೆ ಮಾಡಿದರೆ ಬಿಜೆಪಿಯ ಹಳೆಯ ಪ್ರಕರಣಗಳನ್ನು ಕೆದಕಬೇಕಾಗುತ್ತದೆ' ಎಂದು ಕಾಂಗ್ರೆಸ್ ಮುಖಂಡರು ಪದೇ ಪದೇ ಎಚ್ಚರಿಸಿದ ಬಳಿಕವೂ ಬಿಜೆಪಿ ಸುಮ್ಮನಿರದೇ ಇದ್ದಾಗ ಬಿಜೆಪಿಯ ಹಗರಣಗಳ ಧೂಳು ಕೊಡವುದು ಸಿದ್ದರಾಮಯ್ಯ ನೇತೃತ್ವದ ಸರಕಾರಕ್ಕೆ ಅನಿವಾರ್ಯವಾಯಿತು. ಬಹುಶಃ ಮುಡಾ ಹಗರಣವನ್ನು ಮುಂದಿಟ್ಟುಕೊಂಡು ಮುಖ್ಯಮಂತ್ರಿಯ ರಾಜೀನಾಮೆಗೆ ಬಿಜೆಪಿ ಒತ್ತಾಯಿಸದೇ ಇರುತ್ತಿದ್ದರೆ, ಚುನಾವಣಾ ಬಾಂಡ್ ಹಗರಣಕ್ಕೆ ಸಂಬಂಧಿಸಿ ಕೇಂದ್ರ ಸಚಿವೆಯ ವಿರುದ್ಧ ಎಫ್‌ಐಆರ್ ದಾಖಲಿಸಲು ಇಷ್ಟು ಸುಲಭದಲ್ಲಿ ಅನುಮತಿ ಸಿಗುತ್ತಿರಲಿಲ್ಲ. ಈ ಕಾರಣಕ್ಕಾಗಿಯಾದರೂ ನಾವು ರಾಜ್ಯ ಬಿಜೆಪಿ ನಾಯಕರನ್ನು ಅಭಿನಂದಿಸಬೇಕು. ಮುಡಾ ಹಗರಣಕ್ಕೆ ಸಂಬಂಧಿಸಿ ಮುಖ್ಯಮಂತ್ರಿಯ ವಿಚಾರಣೆಗೆ ರಾಜ್ಯಪಾಲರು ಮಾತ್ರವಲ್ಲ ನಮ್ಮ ನ್ಯಾಯಾಲಯವೂ ಅತ್ಯಾಸಕ್ತಿಯನ್ನು ವಹಿಸಿತು. ಆ ಅಸಕ್ತಿ ಹಿಂದಿನ ಬಿಜೆಪಿ ಸರಕಾರದ ಭ್ರಷ್ಟಾಚಾರದ ವಿರುದ್ಧವೂ ಇದ್ದಿದ್ದರೆ, ಹಲವು ಬಿಜೆಪಿ ನಾಯಕರ ಮೇಲೆ ಎಫ್ ಐಆರ್‌ಗಳು ದಾಖಲಾಗುತ್ತಿದ್ದವು. ಬಿಜೆಪಿಯ ಭ್ರಷ್ಟಾಚಾರವನ್ನು ಕಾಂಗ್ರೆಸ್ ಪಕ್ಷ ಕಳೆದ ವಿಧಾನಸಭಾ ಚುನಾವಣೆಯಲ್ಲಿ ಬಳಸಿಕೊಂಡಿತಾದರೂ, ಬಿಜೆಪಿಯ ನಾಯಕರ ಮೇಲೆ ಎಫ್‌ಐಆರ್ ದಾಖಲಿಸಿ ಅದನ್ನು ವೈಯಕ್ತಿಕವಾಗಿಸುವುದು ಅವರಿಗೆ ಬೇಡವಾಗಿತ್ತು ಆದರೆ ಇಂದು ಬಿಜೆಪಿಯು ಇಡೀ ಕಾಂಗ್ರೆಸ್ ಸರಕಾರವನ್ನು ಗುರಿ ಮಾಡದೇ ಸಿದ್ದರಾಮಯ್ಯ ಅವರನ್ನೇ ಗುರಿಯಾಗಿಸಿ ಪ್ರತಿಭಟನೆಯನ್ನು ನಡೆಸುತ್ತಿದೆ. ಹಾಗೆಂದು ಮುಡಾ ಹಗರಣದಲ್ಲಿ ಸಿದ್ದರಾಮಯ್ಯ ಅವರಿಗೆ ಹೊಣೆಗಾರಿಕೆಯೇ ಇಲ್ಲ ಎನ್ನುವಂತಿಲ್ಲ. ಈ ಹಿಂದಿನ ಬಿಜೆಪಿ ಸರಕಾರದ ಭ್ರಷ್ಟಾಚಾರಕ್ಕೆ ಹೋಲಿಸಿದರೆ, ಮುಡಾ ಹಗರಣವನ್ನು ಮುಂದಿಟ್ಟುಕೊಂಡು ಸಿದ್ದರಾಮಯ್ಯ ಅವರಿಂದ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆಯನ್ನು ಪಡೆಯುವುದು ನ್ಯಾಯವಲ್ಲ ಎನ್ನುವುದು ಒಂದು ತರ್ಕವಾಗಿದೆ.

**ಚುನಾವಣಾ ಬಾಂಡ್ ಅಕ್ರಮಗಳಿಗೆ ಸಂಬಂಧಿಸಿ ಕೇಂದ್ರ ಸರಕಾರದ ವಿರುದ್ಧ ಗಂಭೀರ ಅಂದೋಲನವೊಂದನ್ನು ಹುಟ್ಟು ಹಾಕಲು ವಿರೋಧ ಪಕ್ಷಗಳು ಸಂಪೂರ್ಣ ವಿಫಲವಾದವು. ಇಂತಹ ಸಂದರ್ಭದಲ್ಲಿ ಕರ್ನಾಟಕದಲ್ಲಿ ಚುನಾವಣಾ ಬಾಂಡ್ ಸಂಬಂಧಿಸಿದಂತೆ ರಾಜಕೀಯೇತರ ಸಂಸ್ಥೆಯೊಂದು ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ವಿರುದ್ಧ ಎಫ್‌ಐಆರ್ ದಾಖಲಿಸುವಲ್ಲಿ ಯಶಸ್ವಿಯಾಗಿದೆ. ಆದರೆ ಈ ಸರಕಾರೇತರ ಸಂಸ್ಥೆ ಕಳೆದ ಮಾರ್ಚ್‌ನಿಂದಲೇ ಎಫ್‌ಐಆರ್ ದಾಖಲಿಸುವ ಪ್ರಯತ್ನವನ್ನು ನಡೆಸಿತ್ತು.**



# ರಾಮಾಯಣ

**ಋಷ್ಯ ಶೃಂಗ ಮುನಿಯು ಅಂಗದೇಶಕ್ಕೆ ಬಂದದ್ದು**

• ಹಿಂದಿನ ಸಂಚಿಕೆಯಿಂದ **7ನೆಯ ಅಧ್ಯಾಯ**

ಆ ವಾಕ್ಯವನ್ನು ಕೇಳಿ ದಶರಥನು ತನ್ನ ಪ್ರಧಾನಿಗಳನ್ನು ಕರೆದು ಯಜ್ಞಕ್ಕೆ ಬೇಕಾದ ಸಮಸ್ತ ವಸ್ತುಗಳನ್ನೂ ತರಿಸಿರಿ ಬಲವಂತರಾದ ಗುರಿಕಾರರನ್ನೂ ಉಪಾಧ್ಯಾಯರನ್ನೂ ಕೂಡಿ ಕುದುರೆಯನ್ನು ಬಿಡಿಸಿರಿ. ಸರಯೂನದಿಯ ಬಡಗಣತೀರದಲ್ಲಿ ಯಾಗಮಂಟಪವನ್ನು ಕಟ್ಟಿಸಿರಿ. ಯಜ್ಞಕ್ಕೆ ವಿಘ್ನಗಳು ತಟ್ಟದಂತೆ ವಿಧ್ಯುಕ್ತವಾಗಿ ಶಾಂತಿಯನ್ನು ಮಾಡಿಸಿರಿ. ವಿಘ್ನವಿಲ್ಲದೆ ಯಾಗವು ನಡೆದರೆ ಅರಸುಗಳಿಗೆ ಶ್ರೇಯಸ್ಸಾಗುವುದು. ಯಾಗಕ್ಕೆ ವಿಘ್ನವಾದರೆ ಕರ್ತೃವಿಗೆ ಅಶ್ರೇಯಸ್ಸಾಗುವದು. ವಿದ್ವಾಂಸರಾದ ಬ್ರಹ್ಮರಾಕ್ಷಸರು ಯಾಗಾದಿ ಸತ್ಯರ್ಮಗಳಿಗೆ ಊಣಯೆವನ್ನೇ ಬಯಸುತ್ತಿರುವರು ಯಜ್ಞಕ್ಕೆ ಊಣಯವು ಬಾರದಿರಲು ಹೇಗೆ ನಡೆಯಬೇಕೋ ಹಾಗೆ ನಡೆಯಿಸಿರಿ'' ಎಂದು ಕಟ್ಟುಮಾಡಿದನು. ಮಂತ್ರಿಗಳು ಹಾಗೆಯೇ ಸನ್ನಾಹವನ್ನು ಮಾಡುತ್ತಿರಲು ಆ ಋಷಿಗಳು ತಮ್ಮ ತಮ್ಮ ಆಶ್ರಮಗಳಿಗೆ ಹೋದರು. ಆ ಬಳಿಕ ಮಹಾಪರಾಕ್ರಮಿಯಾದ ದಶರಥಮಹಾರಾಜನು ಮಂತ್ರಿಗಳನ್ನೂ ಬ್ರಾಹ್ಮಣರನ್ನೂ ಕಳುಹಿಸಿ ಉತ್ತಮವಾದ ರಥವನ್ನೇರಿಕೊಂಡು ತನ್ನ ಅರಮನೆಗೆ ಬಂದು ತನ್ನ ಸ್ತ್ರೀಯರೊಡನೆ ಆ ವೃತ್ತಾಂತವನ್ನು ಹೇಳುತ್ತಿದ್ದನು.

## ದಶರಥನು ಯಾಗ ದೀಕ್ಷೆಯನ್ನು ಹೊಂದಿದ್ದು

ಅನಂತರ ವಸಂತಋತುವು ಬಂದು ಸಂವತ್ಸರವು ಪೂರ್ತಿಯಾಗಲು ಸಂತಾನಾರ್ಥವಾಗಿ ಯಾಗವನ್ನು ಮಾಡಲಿಚ್ಛಿಸಿ ಅತಿಪರಾಕ್ರಮಿಯಾದ ದಶರಥಮಹಾರಾಯನು ವಸಿಷ್ಠಮುನೀಶ್ವರನಿಗೆ ಅಭಿವಂದಿಸಿ ಪೂಜೆಯನ್ನು ಮಾಡಿ ಆತನ ಚಿತ್ರವನ್ನು ಪ್ರಸನ್ನವಾಗಿ ಮಾಡಬೇಕೆಂದು ಅತಿವಿನಯದಿಂದ ಸತ್ಕರಿಸಿ ವಸಿಷ್ಠಮುನೀಶ್ವರರೆ, ನಾನು ಮಾಡುವ ಯಾಗವು ಸಾಂಗವಾಗಿ ಪೂರ್ತಿಯಾಗುವಂತೆ ನೀವು ಯತ್ನ ಮಾಡಬೇಕು, ಯಜ್ಞ ಭಾರವನ್ನು ವಹಿಸಿ ಈ ಯಾಗವು ಸಾಂಗವಾಗಿ ನಡೆಯುವ ಹಾಗೆ ಕೃಪೆಮಾಡಬೇಕು ಎಂದು ಬಿನ್ನವಿಸಿದನು.ವಸಿಷ್ಠಮುನೀಶ್ವರನು ಹಾಗೆಯೇ ಆಗಲಿ! ನೀನು ತೊಡಗಿದ ಕಾರವೇ ನನ್ನ ಕಾರವು ಎಂದು ನುಡಿದು ಯಜ್ಞಕರ್ಮದಲ್ಲಿ ನಿಪುಣರಾದ ಬ್ರಾಹ್ಮಣರನ್ನೂ ಧರ್ಮಿಷ್ಟರಾದ ಹಿರಿಯರನ್ನೂ ಕರೆಯಿಸಿದನು. ಊಳಿಗದವರನ್ನು ಕಳುಹಿಸಿ ಶಿಲ್ಪಿ ಕಮ್ಮಾರ ಕಾಮಾಟದವರನ್ನೂ ಚಿತ್ರಕಾರರನ್ನೂ ನಟನರ್ತಕರನ್ನೂ ನಿಪುಣರಾದ ಪುರುಷರನ್ನೂ ವಿದ್ವಾಂಸರನ್ನೂ ಯಜ್ಞ ಕರ್ಮಪರೀಕ್ಷೆಯನ್ನು ಬಲ್ಲಂಥವರನ್ನೂ ಇಟ್ಟಿಗೆಗಾರರನ್ನೂ ಕರೆಯಿಸಿದನು ಚಯನಾದಿಗಳಿಗೆ ಇಟ್ಟಿಗೆಗಳನ್ನು ಬಹಳವಾಗಿ ತರಹೇಳಿದನು ಯಜ್ಞಕ್ಕೆ ಬಂದ ಬ್ರಾಹ್ಮಣರಿಗಾಗಿ ಮನೆಗಳನ್ನೂ ಕಟ್ಟಹೇಳಿ ಉತ್ತಮವಾದ ಭಕ್ಷ್ಯಗಳನ್ನೂ ರಸಾಯನಾದಿ ವಾನದ್ರವ್ಯಗಳನ್ನೂ ಸಿದ್ಧಪಡಿಸುವಂತೆ ಹೇಳಿದನು.

ಮುಂದುವರಿಯುವುದು...



# ಸಮಾಜ ಸುಧಾರಕರಲ್ಲಿ ಒಬ್ಬರಾದ ಡಾ: ಅನಿಬೆಸೆಂಟ್ ರವರ 177ನೇ ವರ್ಷದ ಜನ್ಮದಿನಾಚರಣೆ



ಕಲಾ ಸಾಹಿತ್ಯ
ಕೃಷ್ಣಪ್ಪ
ಲೇಖಕರು
ಪ್ರಗತಿ ಪರ ಚಿಂತಕ
ಹಾಗೂ
ವಿಮರ್ಶಕರು

• **ಉದಯವಾಹಿನಿ, ವಿಶೇಷ**

ಡಾ|| ಅನಿಬೆಸೆಂಟ್ ರವರು 1847 ಅಕ್ಟೋಬರ್ 01ರಂದು ಲಂಡನ್ ನಲ್ಲಿ ಜನಿಸಿದರು. ತಂದೆ ವಿಲಿಯಂವುಡ್ ಅವರು ಕ್ರೈಸ್ತ ಪಾದ್ರಿ ಆಗಿದ್ದರು. ಮಗಳಾದ ಅನಿಬೆಸೆಂಟ್ ರವರು ವಿವಾಹವಾದರೂ ಸಹ ಕೆಲವೇ ವರ್ಷಗಳಲ್ಲಿ ವಿವಾಹ ವಿಚ್ಛೇದನದಲ್ಲಿ ಅಂತ್ಯಗೊಂಡಿತು. ಡಾ: ಅನಿಬೆಸೆಂಟ್ ರವರು ಭಾರತಕ್ಕೆ ಬರುವುದಕ್ಕೆ ಮೊದಲು ಇಂಗ್ಲೆಂಡ್ ನಲ್ಲಿ ಸಮಾಜ ಸುಧಾರಕರೆಂದು,ಉತ್ತಮ ವಾಗ್ಮಿಯೆಂದು,ಲೇಖಕಿ ಎಂದು ಪ್ರಸಿದ್ಧರಾಗಿದ್ದರು.

ಅನಿಬೆಸೆಂಟ್ 1893 ರಲ್ಲಿ ಭಾರತಕ್ಕೆ ಬಂದರು. ಅವರು 1895 ರಿಂದ 1907 ರವರೆಗೆ ಕಾಶಿಯಲ್ಲಿ ವಾಸವಾಗಿದ್ದರು. ಅಲ್ಲಿ ಅವರು ಕೇಂದ್ರೀಯ ಹಿಂದೂ ಶಾಲೆಯನ್ನು ಸ್ಥಾಪಿಸಿದರು. ಮುಂದೆ ಪಂಡಿತ ಮದನ ಮೋಹನ ಮಾಳವೀಯರ ಪ್ರಯತ್ನದ ಫಲವಾಗಿ ವಿಖ್ಯಾತಿ ಕಾಶಿ ಹಿಂದೂ ವಿಶ್ವವಿದ್ಯಾನಿಲಯವಾಗಿ ರೂಪಗೊಂಡಿತು.

ಅನಿಬೆಸೆಂಟ್ ರವರು ಥಿಯಾಸಫಿಕಲ್ ಸೋಸೈಟಿಯ ಚಟುವಟಿಕೆಗಳನ್ನು ವಿಸ್ತಾರಗೊಳಿಸಿದರು. ಹಿಂದೂ ಧರ್ಮ,ಸಂಸ್ಕೃತಿ ಪರಂಪರೆಗಳ ಬಗ್ಗೆ ಭಾರತೀಯರಲ್ಲಿ ಆದರ ಅಭಿಮಾನಗಳು ಮೂಡುವಂತೆ ಮಾಡಿ ಅವುಗಳ ಪುನರುಜ್ಜೀವನಕ್ಕಾಗಿ ನಿರಂತರವಾಗಿ ಶ್ರಮಿಸಿದರು.

ಈ ಉದ್ದೇಶ ಸಾಧನೆಗೆ ಅನಿಬೆಸೆಂಟ್ ಅನೇಕ ವಿದ್ಯಾ ಶಾಲೆಗಳನ್ನು, ಯುವಜನರ ಸಂಘಗಳನ್ನು ಸ್ಥಾಪಿಸಿದರು. ಕಾಶಿಯಲ್ಲಿ ಹಿಂದೂ ಕಾಲೇಜು, ಶಾಲೆ, ಹೆಣ್ಣು ಮಕ್ಕಳ ಶಾಲೆ, ಮದನಪಲ್ಲಿಯಲ್ಲಿ ಕಾಲೇಜು ಇವರ ಸಾಧನೆಯ ಫಲಗಳಾಗಿವೆ. ಅನಿಬೆಸೆಂಟ್ ಅವರು ಭಾರತದಲ್ಲಿನ ದೀನದಲಿತರ ಸಾಮಾಜಿಕ, ಆರ್ಥಿಕ ಏಳಿಗೆಗಾಗಿ ಹತ್ತಾರು ವಿಧಾಯಕ ಕಾರ್ಯಕ್ರಮಗಳನ್ನು ರೂಪಿಸಿ ಆ ನಿಟ್ಟಿನಲ್ಲಿ ಶ್ರಮಿಸಿದರು. ಅವರು ಭಾರತದಲ್ಲಿ ಬ್ರಿಟಿಷ್ ಚಕ್ರಾಧಿಪತ್ಯದ ಆಡಳಿತವನ್ನು ಹೃದಯಾಂತರಾಳದಿಂದ ಪ್ರಬಲವಾಗಿ ವಿರೋಧಿಸಿ ಭಾರತದ ಸ್ವಾತಂತ್ರ್ಯಕ್ಕಾಗಿ ಹೋರಾಟ ನಡೆಸಿದರು. ಸ್ವಾತಂತ್ರ್ಯ ಹೋರಾಟಕ್ಕೆ ಸಂಪೂರ್ಣ ಬೆಂಬಲ ಸೂಚಿಸಿದಕ್ಕೆ ಸೆರೆಮನೆ ಸೇರಬೇಕಾಯಿತು.

ದೇಶದುದ್ದಗಲಕ್ಕೂ ಸಂಚರಿಸಿ ತಮ್ಮ ಉಜ್ವಲ ಭಾಷಣಗಳಿಂದ ಜನರಲ್ಲಿ ದೇಶ ಭಕ್ತಿ ಹುಟ್ಟಿಸಿ ಸ್ವಾತಂತ್ರ್ಯ ಸಮರದಲ್ಲಿ ಭಾಗವಹಿಸುವಂತೆ ಸ್ಫೂರ್ತಿ ನೀಡಿದರು. ಅವರು ಭಾರತೀಯರನ್ನು ಸಂಘಟಿಸುವಲ್ಲಿ ಯಶಸ್ವಿಯಾದರು. ಬಾಲಗಂಗಾಧರ ತಿಲಕ್ ಹಾಗೂ ಮಹಾತ್ಮ ಗಾಂಧೀಜಿರವರ ಸಂಪೂರ್ಣ ಸಹಕಾರ ದೊರೆಯಿತು. 1917ರಲ್ಲಿ ನಡೆದ ಕಾಂಗ್ರೆಸ್ ಅಧಿವೇಶನಕ್ಕೆ ಅನಿಬೆಸೆಂಟ್ ಅಧ್ಯಕ್ಷರಾಗಿ ಆಯ್ಕೆಯಾದರು. ಅನಿಬೆಸೆಂಟ್ ನಿರ್ಭೀತಿಯಿಂದ ತಮ್ಮ ಜೀವನ ಪರ್ಯಂತ ಭಾರತಕ್ಕೆ ಸೇವೆ ಸಲ್ಲಿಸಿದರು.

**ಕಾಂಗ್ರೆಸ್ ಅಧಿವೇಶನಕ್ಕೆ ಅನಿಬೆಸೆಂಟ್ ಅಧ್ಯಕ್ಷರಾಗಿ ಆಯ್ಕೆ**

ಭಾರತದಲ್ಲಿ ಪರಸ್ಪರ ಸಹೋದರತ್ವ ಭಾವನೆ ಬೆಳೆಸಿಕೊಳ್ಳುವುದು ಅಂದಿನ ಪರಿಸ್ಥಿತಿಯಲ್ಲಿ ಅತ್ಯಂತ ಅಗತ್ಯವೆಂದು ಜನತೆಗೆ ಮನವರಿಕೆ ಮಾಡಿದರು.

ಭಾರತೀಯರಲ್ಲಿ ಪರಸ್ಪರ ಸ್ನೇಹ ಸಹೋದರ ಭಾವ, ಸಹಕಾರ ಸಂಘಟನೆಗಳು ಉಂಟಾದರೆ ಸ್ವಾತಂತ್ರ್ಯವನ್ನು ನಿರೀಕ್ಷಿತ ವೇಳೆಗೂ ಮುಂಚಿತವಾಗಿ ಪಡೆಯಬಹುದು ಎಂಬುದು ಅವರ ಸ್ಪಷ್ಟ ಅಭಿಪ್ರಾಯವಾಗಿತ್ತು.

ರಾಷ್ಟ್ರ ವಿರೋಧಿ ನಿಲುವುಗಳನ್ನು ನಿರ್ದಾಕ್ಷಿಣ್ಯವಾಗಿ ಖಂಡಿಸಿದರು. ಅನಿಬೆಸೆಂಟ್ ಉತ್ತಮ ಲೇಖಕಿಯೂ ಆಗಿದ್ದು, ಹಲವಾರು ಕೃತಿಗಳನ್ನು ರಚಿಸಿದ್ದಾರೆ.ಅವರ ಅದಮ್ಯ ಉತ್ಸಾಹ ಹಾಗೂ ಅವರ ಭಾರತದ ಮೇಲಿನ ಅಗಾಧ ಪ್ರೀತಿ ಸದಾ ಸ್ಮರಣೀಯ. ಅನಿಬೆಸೆಂಟ್ ರವರು ಲಂಡನ್‌ನಲ್ಲಿ ಜನಿಸಿ ಭಾರತ ದೇಶದ ಅಭಿಮಾನದಿಂದ ಈ ದೇಶದಲ್ಲಿ ನೆಲೆಯೂರಿ ಬ್ರಿಟಿಷರ ವಿರುದ್ಧ ಧ್ವನಿಯೆತ್ತಿದ ವೀರ ಮಹಿಳೆ. ಗಾಂಧೀಜಿರವರು ಅನಿಬೆಸೆಂಟ್ ಅವರ ಬಗ್ಗೆ ಹೇಳಿರುವ ಮಾತೇನೆಂದರೆ,ಭಾರತ ಇರುವರೆಗೂ ಅವರು ಸಲ್ಲಿಸಿದ ಮಹತ್ತರ ಸೇವೆಯ ನೆನಪು ಉಳಿಯುತ್ತದೆ. ಹಾಗೂ ಭಾರತೀಯರೆಲ್ಲರಿಗೂ ಸ್ಫೂರ್ತಿದಾಯಕರಾಗಿದ್ದರು.

ಭಾರತವನ್ನು ತಮ್ಮ ನಾಡಾಗಿ ಸ್ವೀಕರಿಸಿ ತಮ್ಮದೆಲ್ಲವನ್ನೂ ಅದಕ್ಕೆ ಅರ್ಪಿಸಿದ ಅವರು ಭಾರತಕ್ಕೆ ಪ್ರಿಯರಾಗಿದ್ದಾರೆ.

ಅವರು ಭಾರತದಲ್ಲಿ ಜನಿಸಲಿಲ್ಲ, ಆದರೆ ಭಾರತವನ್ನು ತಮ್ಮ ನಾಡಾಗಿ ಸ್ವೀಕರಿಸಿದರು. ಅನಿಬೆಸೆಂಟ್ ರವರು 1933 ಸೆಪ್ಟೆಂಬರ್ 23 ರಂದು ಮದ್ರಾಸಿನ ಸಮೀಪದಲ್ಲಿರುವ ಅಡ್ಯಾರ್‌ನಲ್ಲಿ ತಮ್ಮ 86 ನೇ ವಯಸ್ಸಿನಲ್ಲಿ ನಿಧನರಾದರು. ಅವರ 177 ನೇ ವರ್ಷದ ಜನ್ಮದಿನಾಚರಣೆಯ ದಿನ ವಾದ ಇಂದು ಅವರನ್ನು ಸ್ಮರಿಸಿ ,ನೆನೆಯುತ್ತಾ ಅವರ ಆತ್ಮಕ್ಕೆ ಶಾಂತಿ ಮತ್ತು ಸದ್ಗತಿ ದೊರಕಲೆಂದು ಭಾರತೀಯರಾದ ನಾವೆಲ್ಲರೂ ಆ ಭಗವಂತನಲ್ಲಿ ಪ್ರಾರ್ಥಿಸೋಣ.

**ಭಾರತಕ್ಕೆ ಸ್ವಾತಂತ್ರ್ಯ ಅತ್ಯಗತ್ಯವೆಂದು ತಿಳಿದು ರಾಜಕೀಯ ಕ್ಷೇತ್ರವನ್ನು ಪ್ರವೇಶಿಸಿದರು. 1916 ರಲ್ಲಿ ಅನಿಬೆಸೆಂಟ್ ರವರು "ಹೋಂ ರೂಲ್ ಲೀಗ್" ಸ್ಥಾಪಿಸಿದರು. ಅವರು "ದಿ ಕಾಮನ್ ವೆಲ್ತ್" ಎಂಬ ವಾರಪತ್ರಿಕೆ ಮತ್ತು "ನ್ಯೂ ಇಂಡಿಯಾ" ಎಂಬ ದಿನ ಪತ್ರಿಕೆಯನ್ನು ಪ್ರಾರಂಭಿಸಿ ಭಾರತಕ್ಕೆ ಸ್ವಾತಂತ್ರ್ಯದ ಅವಶ್ಯಕತೆ ಇದೆಯೆಂದು ಬ್ರಿಟಿಷ್ ಸರ್ಕಾರಕ್ಕೆ ತಿಳಿಸಿದರು.**

# ಅಕ್ಷಯ ಪಾತ್ರ ಫೌಂಡೇಶನ್ ಅಡುಗೆ ಮನೆ ಉದ್ಘಾಟನೆ

• **ಉದಯವಾಹಿನಿ, ಬೆಂಗಳೂರು**

ಯಲಹಂಕ, ಜಕ್ಕೂರು, ಹೆಬ್ಬಾಳ ಮತ್ತು ಸುತ್ತಮುತ್ತಲಿನ ಪ್ರದೇಶಗಳ 200ಕ್ಕೂ ಹೆಚ್ಚು ಸರ್ಕಾರಿ ಮತ್ತು ಸರ್ಕಾರಿ ಅನುದಾನಿತ ಶಾಲೆಯ 35,000ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಪೌಷ್ಟಿಕ ಮಧ್ಯಾಹ್ನದ ಬಿಸಿಯೂಟ ಒದಗಿಸುವ ಉದ್ದೇಶದಿಂದ ಚಿಕ್ಕಜಾಲದಲ್ಲಿ ಅಕ್ಷಯ ಪಾತ್ರ ಫೌಂಡೇಶನ್ (ಟಿಎಪಿಎಫ್) ಹೊಸ ಅತ್ಯಾಧುನಿಕ ಅಡುಗೆ ಮನೆಯನ್ನು ಉದ್ಘಾಟಿಸಿದೆ. ಥಕ್ಕರ್ ಫ್ಯಾಮಿಲಿ ಫೌಂಡೇಷನ್ ಸಹಯೋಗದಲ್ಲಿ ನಿರ್ಮಾಣ ವಾಗಿರುವ ಈ ಅಡುಗೆ ಮನೆ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿದ್ದ ಇನ್ಫೋಸಿಸ್ ಲಿಮಿಟೆಡ್‌ನ ಸಂಸ್ಥಾಪಕರಾದ ಶ್ರೀ ಎನ್‌ಆರ್ ನಾರಾಯಣ ಮೂರ್ತಿ ಅವರು, ಸರ್ಕಾರಿ ಶಾಲೆ ಮತ್ತು ಅನುದಾನಿತ ಶಾಲೆಗಳ ವಿದ್ಯಾರ್ಥಿ ಗಳ ಪೌಷ್ಟಿಕ ಆಹಾರವನ್ನು ಒದಗಿಸುವ ಅಕ್ಷಯ ಪಾತ್ರದ ಮಹತ್ತರ ಕಾರ್ಯ ಶ್ಲಾಘನೀಯ. ಎಲ್ಲರೂ ಒಟ್ಟಾಗಿ ಸೇರಿದರೆ ಬದುಕನ್ನು ಬದಲಿಸಬಹುದು ಮತ್ತು ಎಲ್ಲರಿಗೂ ಉಜ್ವಲ ಭವಿಷ್ಯ ಒದಗಿಸಬಹುದು. ಈ ಅಡುಗೆ ಮನೆ ಸ್ಥಾಪನೆಗೆ ಸಹಯೋಗ ಒದಗಿಸಿದ ಥಕ್ಕರ್ ಕುಟುಂಬಕ್ಕೆ ಮತ್ತು ಊಟ ಒದಗಿಸುವ ಯೋಜನೆಯ ಶೇ.55-56ರಷ್ಟು ಊಟದ ಖರ್ಚು ಭರಿಸುತ್ತಿರುವ ಕರ್ನಾ ಟಕ ಸರ್ಕಾರಕ್ಕೆ ಅಭಿನಂದನೆ ಸಲ್ಲಿಸುತ್ತೇನೆ ಎಂದರು. ಬೆಂಗಳೂರಿನ ಚಿಕ್ಕಜಾಲದಲ್ಲಿ ಆರಂಭಗೊಂಡಿರುವ ಅಡುಗೆ ಮನೆಯು ದೇಶದಲ್ಲಿರುವ ಅಕ್ಷಯ ಪಾತ್ರದ 75ನೇ ಕೇಂದ್ರೀಕೃತ ಅಡುಗೆ ಮನೆ ಆಗಿದೆ. ಬೆಂಗಳೂರಿನಲ್ಲಿನ 5ನೇ ಅಡುಗೆ ಮನೆ ಆಗಿದೆ.





ಕಾರ್ಯಕ್ರಮದಲ್ಲಿ ದಾನಿಗಳಾದ ಥಕ್ಕರ್ ಫ್ಯಾಮಿಲಿ ಫೌಂಡೇಶನ್ ನ ಚೇರ್ಮನ್ ಶ್ರೀ ಜನಾರ್ದನ್ ಠಕ್ಕರ್, ವೈಸ್ ಚೇರ್ಮನ್ ಲಿಂಡಾ ಥಕ್ಕರ್, ರಿಲಯನ್ಸ್ ಲಿಮಿಟೆಡ್ ನ ಸಿಐಓ ಶ್ರೀ ಜ್ಯೋತಿಂದ್ರ ಥಕ್ಕರ್, ಅಕ್ಷಯ ಪಾತ್ರ ಫೌಂಡೇಶನ್ ನ ಸಹ-ಸಂಸ್ಥಾಪಕ ಮತ್ತು ಉಪಾಧ್ಯಕ್ಷರಾದ ಶ್ರೀ ಚಂಚಲಪತಿ ದಾಸ ಮತ್ತು ಸಿಇಓ ಶ್ರೀ ಶ್ರೀಧರ್ ವೆಂಕಟ್ ಉಪಸ್ಥಿತರಿದ್ದರು.

ಉದಯವಾಹಿನಿ ಚಿತ್ರ

**ನಾರಾಯಣ ಮೂರ್ತಿಯವರು ಮತ್ತು ಜನಾರ್ಧನ ಥಕ್ಕರ್ ಅವರು ಸಮಾಜಕ್ಕೆ ಕೊಡುಗೆ ನೀಡಲು ಮುಂದಾಗಿರುವುದು ಮೆಚ್ಚುಗೆ ಸಲ್ಲಿಸಲೇಬೇಕಾದ ವಿಚಾರವಾಗಿದೆ. ಮತ್ತಷ್ಟು ಶ್ರೀಮಂತ ವರ್ಗದ ಮಂದಿ ಸಮಾಜಕ್ಕೆ ಸೇವೆ ಸಲ್ಲಿಸಲು ಮುಂದಾಗಲು ಅವರು ಸ್ಫೂರ್ತಿ ನೀಡಿದ್ದಾರೆ ಎಂದು ಹೇಳಿದರು.**

**ಕಂದಾಯ ಸಚಿವರಾದ ಶ್ರೀ ಕೃಷ್ಣ ಬೈರೇಗೌಡರು**

**ನಮ್ಮ ರಾಜ್ಯದ ಮಕ್ಕಳಿಗೆ ಊಟ ಒದಗಿಸುವ ಅವಕಾಶ ಒದಗಿಸಿದ್ದಕ್ಕೆ ಕರ್ನಾಟಕ ಸರ್ಕಾರಕ್ಕೆ ಧನ್ಯವಾದ. ನಾವು ಪ್ರಸ್ತುತ ಕರ್ನಾಟಕದಲ್ಲಿ ಬೆಂಗಳೂರು, ಹುಬ್ಬಳ್ಳಿ, ಬಳ್ಳಾರಿ, ಮಂಗಳೂರು ಮತ್ತು ಮೈಸೂರುಗಳಲ್ಲಿರುವ ಒಂಭತ್ತು ಕೇಂದ್ರೀಕೃತ ಅಡುಗೆಮನೆಗಳ ಮೂಲಕ ಆಹಾರವನ್ನು ಒದಗಿಸುತ್ತಿದ್ದೇವೆ ಎಂದು ಹೇಳಿದರು.**

**ಅಕ್ಷಯ ಪಾತ್ರ ಫೌಂಡೇಶನ್‌ನ ಸಂಸ್ಥಾಪಕ- ಅಧ್ಯಕ್ಷರಾದ ಶ್ರೀ ಮಧು ಪಂಡಿತ್ ದಾಸ**

### 19ನೇ ಧ್ವನಿ - ಬಿಕೆಎಫ್ ಪಂಡಿತ್ ಮಲ್ಲಿಕಾರ್ಜುನ್ ಮನ್ಸೂರ್
# ಹಿಂದೂಸ್ತಾನಿ ಸಂಗೀತೋತ್ಸವ

• **ಉದಯವಾಹಿನಿ, ಬೆಂಗಳೂರು**

ಬೆಂಗಳೂರು ಕಿಡ್ನಿ ಫೌಂಡೇಶನ್ ಬಿಕೆಎಫ್ ಸೆಪ್ಟೆಂಬರ್ 28 -29ರಂದು ಬೆಂಗಳೂರಿನ ಕೆ ಆರ್ ರಸ್ತೆಯ ಗಾಯನ ಸಮಾಜದಲ್ಲಿ 19ನೇ ಧ್ವನಿ-ಪಂಡಿತ್ ಮಲ್ಲಿಕಾರ್ಜುನ್ ಮನ್ಸೂರ್ ಹಿಂದೂಸ್ತಾನಿ ಸಂಗೀತೋತ್ಸವ ಕಾರ್ಯಕ್ರಮವನ್ನು ಆಯೋಜಿಸಿತ್ತು.

ಇದೇ ಸಂದರ್ಭದಲ್ಲಿ ಹಿಂದೂಸ್ತಾನಿ ಗಾಯಕ ಪಂಡಿತ್ ವೆಂಕಟೇಶ್ ಕುಮಾರ್ ಅವರಿಗೆ ಮಲ್ಲಿಕಾರ್ಜುನ್ ಮನ್ಸೂರ್ ಪ್ರಶಸ್ತಿ ಪ್ರದಾನ ಮಾಡಲಾಯಿತು. ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದ ಕ್ರಿಯೇಟಿವ್ ಟೀಚಿಂಗ್ ಆಕಾಡೆಮಿ ಅಧ್ಯಕ್ಷ ಡಾ.ಗುರುರಾಜ್ ಕರ್ಜಗಿ,ಬಿಕೆಎಫ್ ಸಂಸ್ಥೆ ಕಿಡ್ನಿ ವೈಫಲ್ಯರಿಗೆ ಇಂತಹ ಕಾರ್ಯಕಮದಿಂದ ಬರುವ ಹಣದಿಂದ ಗ್ರಾಮೀಣ ಭಾಗದ ಡಯಾಲಿಸಿಸ್ ರೋಗಿಗಳ ಚಿಕಿತ್ಸೆಗೆ ಬಳಸುವುದು ದೊಡ್ಡ ಮಹತ್ವದ ದಾನದ ಕಾರ್ಯಕ್ರಮವಾಗಿದೆ, ದಾನದ ಮುಂದೆ ಯಾವುದೇ ಕಾರ್ಯವೂ ಇಲ್ಲ ಇನ್ನೊಬ್ಬರಿಗೆ ಕಿಡ್ನಿ ದಾನದ ಕಾರ್ಯವನ್ನು ಬಿಕೆಎಫ್ ಮಾಡಿದೆ. ಮೂತ್ರ ಪಿಂಡದ ಕಾಯಿಲೆಗಳ ಚಿಕಿತ್ಸೆಯಲ್ಲಿ ಮುಂಚೂಣಿಯಲ್ಲಿರುವುದು ಶ್ಲಾಘನೀಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಖ್ಯಾತ ವೈದ್ಯ ವಿವೇಕ್ ಜವಳಿ, ಬಿಕೆಎಫ್ ಅಧ್ಯಕ್ಷ ಡಾ. ಶ್ರೀರಾಮ್, ಟ್ರಸ್ಟಿ ಡಾ. ಶ್ರೀನಿವಾಸ್ ಮತ್ತಿತರರು ಭಾಗವಹಿಸಿದ್ದರು.

ಈ ಕಾರ್ಯಕ್ರಮದಿಂದ ಬರುವ ಆದಾಯವನ್ನು ಬಿಕೆಎಫ್‌ನ ಗ್ರಾಮೀಣ ಡಯಾಲಿಸಿಸ್ ರೋಗಿಗಳ ಚಿಕಿತ್ಸೆಗೆ ಬಳಸಲಾಗುತ್ತದೆ ಎಂದು ಪ್ರಕಟಿಸಿದರು.


ಉದಯವಾಹಿನಿ ಚಿತ್ರ

**ಮೂತ್ರ ಪಿಂಡದ ಕಾಯಿಲೆಗಳ ಚಿಕಿತ್ಸೆಯಲ್ಲಿ ಮುಂಚೂಣಿ**

**ಹಿಂದೂಸ್ತಾನಿ ಗಾಯಕ ವೆಂಕಟೇಶ್ ಕುಮಾರ್, ಗುರುರಾಜ್ ಕರ್ಜಗಿ, ಖ್ಯಾತ ವೈದ್ಯ ವಿವೇಕ್ ಜವಳಿ ಅವರನ್ನು ಇಂತಹ ಕಾರ್ಯಕ್ರಮದಲ್ಲಿ ನೋಡುತ್ತಿರುವುದು ಹಿಮಾಲಯ ಪರ್ವತ ನೋಡಿದಂತೆ,ಬಿಕೆಎಫ್ ಸಂಸ್ಥೆ ಮೂತ್ರ ಪಿಂಡ ಕಾಯಿಲೆಯಿಂದ ಬಳಲುತ್ತಿರುವವರಿಗೆ ಒಂದು ಅರ್ಥಪೂರ್ಣ ಕಾರ್ಯಕ್ರಮದ ಮೂಲಕ ನೆರವಾಗುತ್ತಿರುವುದು ಪ್ರಶಂಸನೀಯ ಎಂದರು.**

**ಲೋಕಾಯುಕ್ತ ಎಸ್. ಪಿ. ಶ್ರೀನಾಥ್**

# ಕನ್ನಡ ನಾಡು, ಭಾಷೆ, ಜನ ಚಂದ: ಮಾತೃಶ್ರೀ ಚೂಡಾರತ್ನಮ್ಮ

• **ಉದಯವಾಹಿನಿ, ಮೈಸೂರು**

ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಮೈಸೂರು ತಾಲ್ಲೂಕು ಘಟಕದವತಿಯಿಂದ ಏರ್ಪಡಿಸಲಾಗಿದ್ದ ಎಸ್ ಎಸ್ ಎಲ್ ಸಿ, ಪಿಯುಸಿಯಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, ಅಧಿಕಾರಿಗಳಿಗೆ ಸ್ವಾಗತ, ಬೀಳ್ಕೊಡುಗೆ ಕಾರ್ಯಕ್ರಮದಲ್ಲಿ ದಕ್ಷಿಣಾಮೂರ್ತಿ ಕೃಷ್ಣಕುಮಾರ್ ನವರು ತಮ್ಮ ಮಾತೃಶ್ರೀಯವರೊಂದಿಗೆ ವಿಶೇಷ ಅತಿಥಿಗಳಾಗಿ ಆಗಮಿಸಿ ವಿದ್ಯಾರ್ಥಿಗಳಿಗೆ ಪಾಲಕರ ಗುರುಗಳ ಸೇವೆಯ ಬಗ್ಗೆ ಹಾಗೂ ಪಾಲಕರಿಗೆ ತಮ್ಮಗಳ ಕರ್ತವ್ಯದ ಬಗ್ಗೆ ಮಾತನಾಡಿದರು. ಮಕ್ಕಳ ಭವಿಷ್ಯ ಪಾಲಕರು ಹಾಗೂ ಶಿಕ್ಷಕರ ಕೈಯಲ್ಲಿದೆ ,ಉತ್ತಮ ಸಮಾಜ ನಿರ್ಮಾಣ ಮಾಡುವಲ್ಲಿ ಇವರೀರ್ವರ ಪಾತ್ರ ಬಹಳ ಮಹತ್ವದ್ದು ,ಬದುಕಿನ ಮೊದಲ ಪಾಠಶಾಲೆ ಮನೆ ಅದರ ಗುರು ತಾಯಿ ನಂತರ ಶಾಲಾ-ಕಾಲೇಜು ಹಾಗೂ ಶಿಕ್ಷಕರು ಎಂದರು. ಇದೇ ಸಂದರ್ಭದಲ್ಲಿ ಮಾತೃಶ್ರೀ ಚೂಡಾರತ್ನಮ್ಮ ನವರು ಕನ್ನಡ ನಾಡು ಚಂದ, ಕನ್ನಡ ಭಾಷೆ ಚಂದ, ಕನ್ನಡ ಜನ ಚೆಂದ ಎಂದು ಹಾಡಿ ನೆರೆದಿದ್ದವರ ಮನಸ್ಸಿಗೆ ಮುದ ನೀಡಿದರು. ತಾಯಿ ಮಗ ಇಬ್ಬರಿಗೂ ಇದೇ ಸಂದರ್ಭದಲ್ಲಿ ಶಾಲುಹೊದಿಸಿ ಸ್ಮರಣಫಲಕಗಳನ್ನು ನೀಡಿ ಗೌರವಿಸಲಾಯಿತು.


ಉದಯವಾಹಿನಿ ಚಿತ್ರ

# ಬಾಲ ಬಾಪು ಉಪವಾಸದ ಬಾಲಪಾಠ



ವಿಶ್ವಾಸ್.ಡಿ.ಗೌಡ
• **ಉದಯವಾಹಿನಿ, ವಿಶೇಷ**


ರಾತ್ರಿಯಿಡೀ ಮಳೆ ಮಳೆ ಸುರಿದಿತ್ತು. ಮಳೆನೀರಿನಲ್ಲಿ ಆಟವಾಡುವುದೆಂದರೆ ಮೋನು ಪಾಪುವಿಗೆ ಬಹಳ ಇಷ್ಟ. ಆದರೆ, ಅವನು ನೀರಿನಲ್ಲಿ ಆಟವಾಡುತ್ತಿರುವುದು ರಂಭತೆಯ ಕಣ್ಣಿಗೇನಾದರೂ ಬಿತ್ತು ಅಂದರೆ ಮುಗಿಯಿತು.

ರಟ್ಟೆ ಹಿಡಿದು ದರದರನೆ ಎಳೆದು ಕೊಂಡು ಹೋಗಿ, ಒದ್ದೆಯಾಗಿದ್ದ ಕೈಕಾಲುಗಳನ್ನು ಒರಸಿ ಮಂಚದ ಮೇಲೆ ಮಲಗಿಸಿ ಬಾಗಿಲು ಮುಚ್ಚಿ, ಹೊರಗಿನಿಂದ ಚಿಲಕ ಹಾಕಿಬಿಡುತ್ತಿದ್ದಳು. ಇವತ್ತೂ ಹಾಗೇ ಆಯಿತು. ಆದರೆ, ಮೋನು ಪಾಪು ಅಳಲಿಲ್ಲ; ಚೀರಾಡಲಿಲ್ಲ. ಆದರೆ, ಸಂಜೆಯ ಹೊತ್ತು ರಂಭತ್ತೆ ಲೋಟದಲ್ಲಿ ಹಾಲು ತುಂಬಿಸಿಕೊಂಡು ಕುಡಿಯೋ ಕಂದಾ, ಎನ್ನುತ್ತಾ ಹತ್ತಿರ ಬಂದಾಗ ಮಾತ್ರ ಅವರ ಕೈಗೆ ಸಿಗದೆ ತಪ್ಪಿಸಿಕೊಂಡು ಓಡಿ ತನ್ನ ಕೋಪವನ್ನು ತೋರಿಸಿಬಿಟ್ಟಿದ್ದ. ಮೋನು ಪಾಪು ಯಾವಾಗಲೂ ಹಾಗೆಯೇ. ತನ್ನ ಇಷ್ಟದಂತೆ ನಡೆಯದಾಗ ಅವನು ಎಂದೂ ಅಳುತ್ತಿರಲಿಲ್ಲ. ಗಲಾಟೆ ಮಾಡುತ್ತಿರಲಿಲ್ಲ. ಆ ದಿನವಿಡೀ ಉಪವಾಸ ಇದ್ದು ತನ್ನ ಪ್ರತಿಭಟನೆಯನ್ನು ತೋರಿಸುತ್ತಿದ್ದ. ಎಷ್ಟೇ ಕಷ್ಟ ಬಂದರೂ ಸುಳ್ಳು ಹೇಳಲಾರೆ :ಮೋನುವಿನ ತಾಯಿ ಪುತಲೀಬಾಯಿಯವರು ಪ್ರತಿ ಮಳೆಗಾಲದ ಚಾತುರ್ಮಾಸ'ದಲ್ಲಿ ಉಪವಾಸ ವ್ರತವನ್ನು ನಿಷ್ಠೆಯಿಂದ ಆಚರಿಸುತ್ತಿದ್ದರು. ಜ್ವರ ಬಂದ ದಿನಗಳಲ್ಲೂ ಸೂರ್ಯೋದಯವನ್ನು ಕಾಣದೆ ಆಹಾರ ಮುಟ್ಟುತ್ತಿರಲಿಲ್ಲ. ಒಂದು ದಿನ ಆಕಾಶದಲ್ಲಿ ದಟ್ಟ ಮೋಡಗಳು ತೇಲುತ್ತಿದ್ದವು.

ಸೂರ್ಯೋದಯದ ಸಮಯವಾಗಿದ್ದರೂ ಸೂರ್ಯ ಕಾಣಿಸುತ್ತಿರಲಿಲ್ಲ. ತಾಯಿಯನ್ನು ಬೇಗ ಊಟ ಮಾಡಿಸುವ ಒಂದೇ ಆಸೆಯಿಂದ ಮೋನು ಪಾಪು ಉಪಾಯ ಮಾಡಿದ. ತಾಯಿಗೆ ಕೇಳಿಸುವಂತೆ ಗಟ್ಟಿಯಾಗಿ,ಓ ಸೂರ್ಯ ಕಾಣಿಸಿದ ಸೂರ್ಯ ಉದಯಿಸಿದ ' ಎಂದು ಸುಳ್ಳೇ ಸುಳ್ಳು ಕಿರುಚುತ್ತಾ ಒಳಕೋಣೆಗೆ ಧಾವಿಸಿ ಬಂದ, ಆದರೆ ಮಗ ಸುಳ್ಳು ಹೇಳುತ್ತಿದಾನೆಂಬುದು ತಾಯಿ ತಿಳಿದುಬಿಟ್ಟಿತ್ತು,ಮಳೆಗಾಲದ ದಿನಗಳಲ್ಲಿ, ಕಪ್ಪು ಮೋಡಗಳು ಕವಿದಿರುವಾಗ ಸೂರ್ಯ ಕಾಣಲು ಸಾಧ್ಯವಿಲ್ಲ ಎಂಬುದು ಅವರಿಗೆ ಗೊತ್ತಿತ್ತು.

ಮಗನಿಗೆ ಬುದ್ಧಿ ಕಲಿಸಲು ಅವರೂ ಒಂದು ಉಪಾಯ ಮಾಡಿದರು. ತಮ್ಮ ಬಲಗೈಯನ್ನು ಮುಂದಕ್ಕೆ ಚಾಚಿ ಹೇಳಿದರು,

ಮೋನು, ನನ್ನ ಬಲಗೈಯನ್ನು ಚಾಚಿಕೊಂಡು ಕಣ್ಣು ನಾನು ಮುಚ್ಚಿಕೊಳ್ಳುವೆ. ಸೂರ್ಯ ಉದಯಿಸಿದ್ದನ್ನು ನೀನು ನೋಡಿದ್ದು ನಿಜವಾಗಿದ್ದರೆ ನನ್ನ ಕೈಯ್ಯನ್ನು ನಿನ್ನ ಬಲಗೈಯಲ್ಲಿ ಮುಟ್ಟಬೇಕು. ಸುಳ್ಳು ಹೇಳಿದ್ದರೆ ಎಡಗೈಯ್ಯಲ್ಲಿ ಮುಟ್ಟಬೇಕು. ನೀನು ಹೇಳಿದ್ದು ನಿಜವೋ ಸುಳ್ಳೋ ಎಂಬುದು ಕಣ್ಣು ಮುಚ್ಚಿಕೊಂಡಿರುವ ನನಗೆ ಕಾಣಿಸುವುದಿಲ್ಲ' ಎಂದು ಹೇಳಿ ಕಣ್ಣು ಮುಚ್ಚಿಕೊಂಡರು. ಮೋನು ಪಾಪುವಿಗೆ ತನ್ನ ತಪ್ಪಿನ ಅರಿವಾಗಿತ್ತು. ತಾಯಿಯ ಕೈ ಮುಟ್ಟಲು ಭಯವಾಯಿತು. ಬಹಳ ಹೊತ್ತಾದರೂ ಮೋನು ಪಾಪು ತಮ್ಮ ಕೈಯ್ಯನ್ನು ಮುಟ್ಟದಿದ್ದಾಗ ತಾಯಿಗೆ ಸಂತೋಷವಾಯಿತು. ತಪ್ಪನ್ನು ಒಪ್ಪಿಕೊಂಡ ಮಗನ ಬಗ್ಗೆ ಹೆಮ್ಮೆ ಅನ್ನಿಸಿತು. ಮುಚ್ಚಿದ್ದ ತಮ್ಮ ಕಣ್ಣುಗಳನ್ನು ತೆರೆದು, ಯಾವುದೇ ಕಾರಣಕ್ಕೂ ಸುಳ್ಳು ಹೇಳಬಾರದು ಮಗು' ಎಂದು ಹೇಳಿ ಪಾಪುವನ್ನು ಎದೆಗೆ ಅಪ್ಪಿಕೊಂಡರು. ಮೋನುಪಾಪ ಅಂದೆ ಶಪಥ ಮಾಡಿಬಿಟ್ಟಿದ್ದನು. 'ಎಷ್ಟೇ ಕಷ್ಟ ಎದುರಾದರೂ ಇನ್ನು ಮುಂದೆ ಸುಳ್ಳು ಹೇಳುವುದಿಲ್ಲ.'ಪರೀಕ್ಷೆಯಲ್ಲಿ ನಕಲು ಮಾಡಲಾರೆ ಮೋಹನನು ರಾಜಕೋಟೆಯಲ್ಲಿ ಪ್ರೌಢಶಾಲೆಯಲ್ಲಿ ಓದುತ್ತಿದ್ದ ದಿನಗಳಲ್ಲೊಮ್ಮೆ ಗೈಲ್ಸ್ ಶಿಕ್ಷಣಾಧಿಕಾರಿಯು ಶಾಲೆಯ ತಪಾಸಣೆಗೆಂದು ಬಂದಿದ್ದರು. ಎಂಬ ಬ್ರಿಟಿಷ್ ವಿದ್ಯಾರ್ಥಿಗಳ ಅಕ್ಷರ ಜ್ಞಾನವನ್ನು ಪರಿಶೀಲಿಸುವ ಸಲುವಾಗಿ ಐದು ಇಂಗ್ಲಿಷ್ ಪದಗಳನ್ನು ಹೇಳಿ, ತಪ್ಪಿಲ್ಲದೆ ಬರೆಯುವಂತೆ ಸೂಚಿಸಿದ್ದರು.



ಮೋಹನನಿಗೆ ಕೆಟಲ್ ಎಂಬ ಇಂಗ್ಲಿಷ್ ಪದವನ್ನು ಸರಿಯಾಗಿ ಬರೆಯಲು ಬರುತ್ತಿದ್ದರೂ, ಬರೆಯುವಾಗ ಒಂದು ಅಕ್ಷರವನ್ನು ತಪ್ಪಾಗಿ ಬರೆದುಬಿಟ್ಟಿದ್ದನು. ಅವನು ತಪ್ಪಾಗಿ ಬರೆದಿರುವುದು ತರಗತಿಯ ಶಿಕ್ಷಕರ ಕಣ್ಣಿಗೆ ಬಿದ್ದಿತ್ತು. ತನ್ನ ತರಗತಿಯ ಎಲ್ಲಾ ವಿದ್ಯಾರ್ಥಿಗಳಿಗೂ ಇಂಗ್ಲಿಷ್ ಭಾಷೆಯನ್ನು ಚೆನ್ನಾಗಿ ಕಲಿಸಿರುವೆ ಎಂಬುದಾಗಿ ಆ ಬ್ರಿಟಿಷ್ ಶಿಕ್ಷಣಾಧಿಕಾರಿಯವರಿಗೆ ಗೊತ್ತು ಮಾಡಿ ಮೆಚ್ಚುಗೆ ಗಳಿಸಬಯಸಿದ್ದರು ಆ ಶಿಕ್ಷಕರು, ಅವರು ಮೋಹನನ ಬಳಿಗೆ ಬಂದು ನಿಂತರು. ತಮ್ಮ ಕಾಲಿನ ಬೆರಳುಗಳ ತುದಿಯಿಂದ ಮೋಹನನ ಕಾಲನ್ನು ತಡವಿ, ಪಕ್ಕದ ಹುಡುಗನ ಬರಹವನ್ನು ನೋಡಿ ತಪ್ಪಾಗಿ ಬರೆದ ಪದವನ್ನು ತಿದ್ದಿಕೊಳ್ಳುವಂತೆ ಕಣ್ಣುಗಳಲ್ಲಿ- ಸೂಚಿಸಿದ್ದರು.

ಆದರೆ, ಬೇರೆಯವರ ಉತ್ತರಪತ್ರಿಕೆಯಿಂದ ನಕಲು ಮಾಡಲು ಮೋಹನನು ಒಪ್ಪಲಿಲ್ಲ. ತಮ್ಮ ಸಲಹೆಯನ್ನು ತಿರಸ್ಕರಿಸಿದ ಮೋಹನನ ಬಗ್ಗೆ ಶಿಕ್ಷಕರಿಗೆ ಬಹಳ ಸಿಟ್ಟು ಬಂದಿತ್ತು.ಪರೀಕ್ಷೆ ಮುಗಿದ ಬಳಿಕ ಮೋಹನನನ್ನು ಕರೆಸಿಕೊಂಡು ಗದರಿಸಿದ್ದರು. ಆದರೆ, ಮೋಹನನಿಗೆ ಮಾತ್ರ ಶಿಕ್ಷಕರ ಮೇಲಿನ ಗೌರವ ಕಡಮೆಯಾಗಲಿಲ್ಲ, ಯಾಕೆಂದರೆ, 'ಹಿರಿಯರ ಒಳ್ಳೆಯತನವನ್ನು ಮಾತ್ರ ಕಲಿಯಬೇಕೇ ಹೊರತು, ಅವರ ಗುಣಾವಗುಣಗಳನ್ನು ಅಲ್ಲ' ಎಂದು ತಾಯಿ ಹೇಳುತ್ತಿದ್ದ ಮಾತನ್ನು ಮೋಹನನು ಚಾಚು ತಪ್ಪದೆ ಪಾಲಿಸುತ್ತಿದ್ದನು.

# ದೂರದರ್ಶನ ಚಂದನದಲ್ಲಿ ನಾಟಕಗಳ ಪ್ರದರ್ಶನಕ್ಕೆ ವ್ಯವಸ್ಥೆ - ಸತೀಶ್, ಕೆ



ಉದಯವಾಹಿನಿ ಚಿತ್ರ

• **ಉದಯವಾಹಿನಿ, ಬೆಂಗಳೂರು**

ಮುಂಬರುವ ದಿನಗಳಲ್ಲಿ ದೂರದರ್ಶನ ಚಂದನದಲ್ಲಿ ನಾಟಕಗಳ ಪ್ರದರ್ಶನಕ್ಕೆ ವ್ಯವಸ್ಥೆಯನ್ನು ಮಾಡಲು ಪ್ರಯತ್ನಿಸುವೆ ಎಂದು ದೂರದರ್ಶನ ಚಂದನ ವಾಹಿನಿಯ ಉಪ ನಿರ್ದೇಶಕರಾದ ಸತೀಶ್, ಕೆ ಹೇಳಿದರು,

ಅವರು ರಂಗಪರಂಪರೆ ಟ್ರಸ್ಟ್ ಶ್ರೀ ಅಭಯಹಸ್ತ ಬಲಮುರಿ ಗಣಪತಿ ದೇವಸ್ಥಾನ ಸೇವಾ ಟ್ರಸ್ಟ್ ಸಹಯೋಗದೊಂದಿಗೆ ಆಯೋಜಿಸಿದ್ದ ಮೂರು ದಿನಗಳ ರಂಗಪರಂಪರೋತ್ಸವದ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿ ನಮ್ಮ ಸಂಸ್ಕೃತಿ ಕಲೆ ಯನ್ನು ಪ್ರೋತ್ಸಾಹಿಸುವ ಕಾರ್ಯವನ್ನು ದೂರದರ್ಶನ ಆರಂಭದಿಂದಲೂ ಮಾಡಿಕೊಂಡು ಬಂದಿದ್ದು ಅದು ಮುಂದೆಯೂ ಮುಂದುವರಿಯಲಿದೆ ಎಂದರು.

ಕ್ಯಾತ ರಂಗಭೂಮಿ ಹಾಗು ಚಿತ್ರನಟ ರಮೇಶ್ ಪಂಡಿತ್ ಮಾತನಾಡಿ ಪ್ರತಿಯೊಂದು ಬಡಾವಣೆಯಲ್ಲೂ ಈ ರೀತಿಯ ಸಾಂಸ್ಕೃತಿಕ ಭವನಗಳು ಆಗಬೇಕು ಆಗ ಸ್ಥಳೀಯ ಪ್ರತಿಭೆಗಳು ಬೆಳಕಿಗೆ ಬರಲು ಸಹಕಾರಿಯಾಗುತ್ತೆ ಎಂದರು. ಸಮಾರಂಭದಲ್ಲಿ ಕಾಮಿಡಿ ಕಿಲಾಡಿಯ ದಾನಪ್ಪ, ಹಿರಿಯ ಪತ್ರಕರ್ತ ಎನ್.ಎಸ್.ಸುಧೀಂದ್ರ ರಾವ್ ಮಾತನಾಡಿದರು,ಸಮಾರಂಭದ ಅಧ್ಯಕ್ಷತೆ ಯನ್ನು ಕೆಂಗೇರಿ ಪುರಸಭೆ ಮಾಜಿ ಉಪಾಧ್ಯಕ್ಷ ಜಿ ಮುನಿರಾಜು ವಹಿಸಿ ಮಾತನಾಡಿದರು. ನಾಟಕೋತ್ಸವದಲ್ಲಿ ಕುವೆಂಪು ವಿರಚಿತ ಜನಪದ ನಾಟಕ ಶ್ರೀಮನ್ ಮುಖವಾಗಿತ್ತು, ಸಾಲದ ಮಗು ಮತ್ತು ಪೌರಾಣಿಕ ನಾಟಕ ಚಂದ್ರಹಾಸ ಹಾಗು ಎನ್ ಎಸ್ ರಾವ್ ವಿರಚಿತ 36ಅಲ್ಲ63 ನಾಟಕ ಪ್ರದರ್ಶನ ಯಶಸ್ವಿಯಾಗಿ ನಡೆಯಿತು. ರಂಗಪರಂಪರೋತ್ಸವದಲ್ಲಿ ರಾಮಪ್ಪ, ಸಂಜೀವರೆಡ್ಡಿ, ಕುಮಾರ್, ರವಿ ವಿ, ಆರ್ ವ್ಯವಸ್ಥಾಪಕ ಟ್ರಸ್ಟಿ ಧನವಂತ್ರಿ, ಕಾರ್ಯದರ್ಶಿ ಆಂಜನೇಯ, ಗಣಪತಿ ಗೌಡ, ಮೂಗು ಸುರೇಶ ಸೇರಿದಂತೆ ಹೆಚ್ಚಿನ ಸಂಖ್ಯೆಯಲ್ಲಿ ಕಲಾ ಪೋಷಕರು ಉಪಸ್ಥಿತರಿದ್ದರು.

# ನಾಲ್ಕನೇ ದಿನಕ್ಕೆ ಕಾಲಿಟ್ಟ ಗ್ರಾಮ ಆಡಳಿತ ಅಧಿಕಾರಿಗಳ ಮುಷ್ಕರ

## ಇಲಾಖೆಗಳ ಕಾರ್ಯಗಳನ್ನು ನಿರ್ವಹಿಸುವಂತೆ ಸಹ ನಮ್ಮ ಮೇಲೆ ಒತ್ತಡ ಇರುವುದರಿಂದ ನಮ್ಮ ಮಾತ್ರ ಇಲಾಖೆಯ ಕೆಲಸಕ್ಕೆ ಅಡಚಣೆ

• **ಉದಯವಾಹಿನಿ, ಬಳ್ಳಾರಿ**

ತಮ್ಮ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ನಡೆಸುತ್ತಿರುವ ಗ್ರಾಮ ಆಡಳಿತ ಅಧಿಕಾರಿಗಳ ಅನಿರ್ದಿಷ್ಟ ಅವಧಿ ಮುಷ್ಕರವು ಸೋಮವಾರ ನಾಲ್ಕನೇ ದಿನಕ್ಕೆ ಕಾಲಿಟ್ಟಿದೆ. ರಾಜ್ಯ ಸರ್ಕಾರವು ಕಂದಾಯ ಇಲಾಖೆಯ ನೌಕರರಾದ ಗ್ರಾಮ ಆಡಳಿತ ಅಧಿಕಾರಿಗಳನ್ನು ಬೆಳೆ ಸಮೀಕ್ಷೆ ಮಾಡಲು, ಬೆಳೆ ಹಾನಿ ಪರಿಹಾರ ನೀಡುವುದು, ಮಳೆ ಹನಿ ಪ್ರಕೃತಿ ವಿಕೋಪ, ಮಳೆಯಿಂದಾಗಿ ಮನೆಗಳ ಹಾನಿ, ಕಂದಾಯ ಜಮೀನಿಗೆ ಆಧಾರ್ ಜೋಡಿಸುವುದು ಸೇರಿದಂತೆ ಹಲವಾರು ರೀತಿಯಲ್ಲಿ ಗ್ರಾಮ ಆಡಳಿತ ಅಧಿಕಾರಿಗಳಿಗೆ ಜವಾಬ್ದಾರಿಯನ್ನು ನೀಡಿ ನಿಗದಿತ ಸಮಯದಲ್ಲಿ ಈ ಕಾರ್ಯಗಳನ್ನು ಮುಗಿಸಬೇಕೆಂದು ಗಡುವು ನೀಡಿ ಕೆಲಸದಲ್ಲಿ ಒತ್ತಡ ಹೇರಲಾಗುತ್ತಿದೆ.

ಇದರಿಂದ ಗ್ರಾಮ ಲೆಕ್ಕಾಧಿಕಾರಿಗಳಲ್ಲಿ ಮಾತ್ರ ಇಲಾಖೆಯ ಕೆಲಸ ಮಾಡಲು ತೊಂದರೆಯಾಗುತ್ತಿದೆ ಕಾರಣ ಮಾತ್ರ ಇಲಾಖೆಯ ಕೆಲಸ ಹೊರತುಪಡಿಸಿ ಯಾವುದೇ ಇತರೆ ಇಲಾಖೆಯ ಕೆಲಸದ ಉಸ್ತುವಾರಿಯನ್ನು ನೀಡಬೇಡಿ ಎನ್ನುವುದರ ಜೊತೆಗೆ ತಮ್ಮ


ಉದಯವಾಹಿನಿ ಚಿತ್ರ

ಇತರೆ ಹಲವಾರು ಬೇಡಿಕೆಗಳನ್ನು ಈಡೇರಿಸುವಂತೆ ನಡೆಸುತ್ತಿದ್ದ ಮುಷ್ಕರ ಸೋಮವಾರ ನಾಲ್ಕನೇ ದಿನಕ್ಕೆ ಕಾಲಿಟ್ಟಿದೆ.

**ಆಹಾರ ಇಲಾಖೆ ಕೆಲಸವನ್ನು ಸಹ ನಾವು ನಿರ್ವಹಿಸುತ್ತೇವೆ**

ಈ ಸಂದರ್ಭದಲ್ಲಿ ಮಾಧ್ಯಮದ ಜೊತೆ ತಮ್ಮ ಅನಿಸಿಕೆಯನ್ನು ಹಂಚಿಕೊಂಡ ನಗರ ಕಂದಾಯ ಪರಿವೀಕ್ಷಕರಾದ ವೀರೇಶ್ ಮಾತನಾಡಿ, ಸರ್ಕಾರವು ನೀಡುತ್ತಿರುವ ಹಲವಾರು ಕೆಲಸಗಳ ಒತ್ತಡದಲ್ಲಿ ಗ್ರಾಮ ಆಡಳಿತ ಅಧಿಕಾರಿಗಳು ಮಾನಸಿಕವಾಗಿ ಒತ್ತಡಕ್ಕೆ ಒಳಗಾಗುತ್ತಿದ್ದಾರೆ. ಮತ್ತು ಹಲವು ಇಲಾಖೆಗಳ ವಿವಿಧ ಕಾರ್ಯಗಳನ್ನು ನಿರ್ವಹಿಸುವಂತೆ ಸಹ ನಮ್ಮ ಮೇಲೆ ಒತ್ತಡ ಇರುವುದರಿಂದ ನಮ್ಮ ಮಾತ್ರ ಇಲಾಖೆಯ ಕೆಲಸಕ್ಕೆ ಅಡಚಣೆಯಾಗುತ್ತಿದೆ. ಇದರಿಂದ ನಮಗೆ ನಮ್ಮ ಮೂಲ ಇಲಾಖೆಯ ಕೆಲಸವನ್ನು ಸರಾಗವಾಗಿ ನಿರ್ವಹಿಸಲು ಸಾಧ್ಯವಾಗುತ್ತಿಲ್ಲ. ಕಾರಣ ನಮ್ಮನ್ನು ವಿವಿಧ ರೀತಿಯ ಕೆಲಸಗಳಿಗೆ ನಿಯೋಜಿಸದೆ ಕಂದಾಯ ಇಲಾಖೆಯ ಕೆಲಸಕ್ಕೆ ಮಾತ್ರ ನಿಯೋಜಿಸಬೇಕು ಮತ್ತು ಯಾವುದೇ ಗುರಿ ಮತ್ತು ಗಡುವನ್ನು ನೀಡಬಾರದು ಎಂದು ಕರ್ನಾಟಕ ರಾಜ್ಯ ಗ್ರಾಮ ಅಧಿಕಾರಿಗಳ ಸಂಘ ಬಳ್ಳಾರಿ ತಾಲ್ಲೂಕ ಘಟಕದಿಂದ ಕಳೆದ ನಾಲ್ಕು ದಿನಗಳಿಂದ ಅನಿರ್ದಿಷ್ಟ ಅವಧಿ ಮುಷ್ಕರವನ್ನು ನಡೆಸುತ್ತಿದ್ದಾರೆ.

ಅಲ್ಲದೆ ಕಳೆದ ಎರಡು ಮೂರು ದಶಕಗಳಿಂದ ಇದೇ ಇಲಾಖೆಯಲ್ಲಿ ಆಡಳಿತ ಅಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿರುವವರಿಗೆ ಪದೋನ್ನತಿ ನೀಡಿ ಗ್ರೇಡ್ ಒನ್ ಗ್ರಾಮ ಆಡಳಿತ ಅಧಿಕಾರಿ ಹುದ್ದೆಗೆ ಮೇಲ್ದರ್ಜೆಗೆ ಏರಿಸಬೇಕು, ಮೂರು ವರ್ಷಗಳ

**ರಾಜ್ಯ ಸರ್ಕಾರಕ್ಕೆ ಮನವಿ**

**ಗ್ರಾಮ ಆಡಳಿತ ಅಧಿಕಾರಿಗಳ ಹುದ್ದೆಯನ್ನು ತಾಂತ್ರಿಕ ಹುದ್ದೆಗಳಿಗೆ ನೀಡುವ ವೇತನ ಶ್ರೇಣಿ ನಿಗದಿಪಡಿಸಬೇಕು, ಗ್ರಾಮಾಡಳಿತ ಅಧಿಕಾರಿಗಳಿಗೆ ಸುಸಜ್ಜಿತವಾದ ಕಛೇರಿ ಸೌಕರ್ಯ, ಟೇಬಲ್, ಕುರ್ಚಿಗಳು, ಅಲ್ಮೆರಾ, ಒಳ್ಳೆಯ ಗುಣಮಟ್ಟದ ಮೊಬೈಲ್ ಫೋನ್, ಗೂಗಲ್ ಕ್ರೋಮ್ ಬುಕ್ ಲ್ಯಾಪ್‌ಟಾಪ್, ಪ್ರಿಂಟರ್-ಸ್ಕ್ಯಾನರ್ ಒದಗಿಸಬೇಕು ಎಂದು ರಾಜ್ಯ ಸರ್ಕಾರಕ್ಕೆ ಮನವಿ ಮಾಡಿದ್ದಾರೆ**

ಸೇವಾ ಅವಧಿಯನ್ನು ಪರಿಗಣಿಸಿ ಅಂತ ರ್ಜಿಲ್ಲವರ್ಗಾವಣೆಗೆ ಮಾರ್ಗ ಸೂಚಿಯನ್ನು ರಚಿಸಬೇಕು, ಆಹಾರ ಇಲಾಖೆ ಕೆಲಸವನ್ನು ಸಹ ನಾವು ನಿರ್ವಹಿಸುತ್ತೇವೆ ನಮ್ಮ ಸೇವಾ ಹಿರಿತನವನ್ನು ಪರಿಗಣಿಸಿ ಆಹಾರ ಇಲಾಖೆಯ ನಿರೀಕ್ಷಕ ಹುದ್ದೆಗೆ ಪದ ಉನ್ನತಿ ನೀಡಬೇಕು ಮತ್ತು ಪೊಲೀಸ್ ಇಲಾಖೆಯಲ್ಲಿರುವಂತೆ 3000 ಆಪತ್ತಿನ ಬಟ್ಟೆ ನೀಡಬೇಕು, ನಮ್ಮ ಸೇವಾ ಜೇಷ್ಠತೆಯನ್ನು ಪರಿಗಣಿಸಿ ಅದನ್ನು ರಾಜ್ಯ ಜೇಷ್ಠತೆಯನ್ನಾಗಿ ಪರಿಗಣಿಸಬೇಕು ಪ್ರಯಾಣ ಭತ್ತೆ 500 ರೂಪಾಯಿಗಳಿಂದ 3000 ಗೆ ಹೆಚ್ಚಿಸಬೇಕು.


ನಾಲ್ಕನೇ ದಿನದ ಈ ಮುಷ್ಕರದಲ್ಲಿ, ವಿಲೇಜ್ ಅಕೌಂಟೆಂಟ್ ಅಸೋಸಿಯೇಷನ್ ಅಧ್ಯಕ್ಷರು ರಾಮಪ್ಪ, ತಾಲ್ಲೂಕ ಅಧ್ಯಕ್ಷ ಸುರೇಶ್, ರೆವಿನ್ಯೂ ಅಸೋಸಿಯೇಷನ್ ಪದಾಧಿಕಾರಿ ವೀರೇಶ್, ಈಶ್ವರಪ್ಪ, ಡೆಪ್ಯೂಟಿ ತಹಶೀಲ್ದಾರ್ ಮಲ್ಲಿಕಾರ್ಜುನ್, ಸಿರುಗುಪ್ಪ ವಿಎ ಮಂಜುನಾಥ್, ತಾಲ್ಲೂಕ ಖಜಾಂಚಿಯಾದ ಬಿ ಸರಸ್ವತಿ, ಸಿದ್ದಮ್ಮ, ವಸುಂದರ ಆಶಾ, ಜ್ಯೋತಿ, ಶಿವಗಂಗಮ್ಮ, ವೀಣಾ ಸೇರಿದಂತೆ ಹಲವಾರು ಗ್ರಾಮ ಆಡಳಿತ ಅಧಿಕಾರಿಗಳು ಪಾಲ್ಗೊಂಡಿದ್ದರು.

# ವಿದ್ಯಾರ್ಥಿಗಳ ಸಾಧನೆ ಶಿಕ್ಷಕರಿಗೆ ಗೌರವ

• **ಉದಯವಾಹಿನಿ, ಮುದ್ದೇಬಿಹಾಳ**

25 ವರ್ಷಗಳ ನಂತರ ತಮಗೆ ಅಕ್ಷರ ಕಲಿಸಿದ ಜೀವನ ಮೌಲ್ಯ ಕಲಿಸಿಕೊಟ್ಟ ಗುರುಗಳನ್ನು ಸ್ಮರಿಸಿ ಗುರುವಂದನೆ ಹಾಗೂ ಬಾಲ್ಯ ಸ್ನೇಹಿತರ ಸಮ್ಮಿಲನದಲ್ಲಿ ಗೆಳಯರು ತಮ್ಮ ಸವಿ ಸವಿ ನೆನಪುಗಳನ್ನು ಮೆಲುಕು ಹಾಕಿದರು. ಹೀಗೊಂದು ಹೃದಯ ಸ್ಪರ್ಶಿ ಕಾರ್ಯಕ್ರಮ ಪಟ್ಟಣದ ಬೆಂಗಳೂರು ಬೇಕರಿ ಪಂಗ್ಯನ್ ಹಾಲ್ ನಲ್ಲಿ ಸ್ನೇಹಲೋಕದಲ್ಲಿ ಬಾಲ್ಯ ಸ್ನೇಹಿತರ ಸಮ್ಮಿಲನ ಗುರುವಂದನ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಸಾಧಕರ ಸಮಾರಂಭ ಜರುಗಿತು.

ಗುರುವಂದನೆಗೆ ಆಗಮಿಸಿದ ಹಿರಿಯ ಶಿಕ್ಷಕರ ಮೇಲೆ ಪುಷ್ಪವೃಷ್ಟಿ ಮಾಡುವ ಮೂಲಕ ವೇದಿಕೆಗೆ ಕರೆತಂದು ಶಿಕ್ಷಕರಿಂದ ಕಾರ್ಯಕ್ರಮ ಉದ್ಘಾಟಿಸಿದರು ಹಿರಿಯ ಶಿಕ್ಷಕರಾದ ಕೆ ಪಿ ಹಿರೇಮಠ, ಎಸ್ ಎಲ್ ಗುರವ, ಎಂ ಬಿ ಹುಗ್ಗಿ,ಎಚ್.ಆರ್. ಬಾಗವಾನ, ಎಸ್ ಎಸ್ ಹಿರೇಮಠ, ಎಸ್.ಆರ್. ನಾಯಕ ಅವರಿಗೆ ಎಲ್ಲಾ ಹಿರಿಯ ವಿದ್ಯಾರ್ಥಿಗಳು ಸನ್ಮಾನಿಸುವ ಮೂಲಕ ಅಕ್ಷರ ಕಲಿಸಿದ ಗುರುಗಳಿಗೆ ಗುರುವಂದನೆ ಸಲ್ಲಿಸಿದರು. ವಿದ್ಯಾರ್ಥಿಗಳಿಂದ ಗುರುವಂದನೆ ಸ್ವೀಕರಿಸಿ ಮಾತನಾಡಿದ ಎಸ್ ಎಸ್ ಹಿರೇಮಠ, ಎಚ್ ಆರ್ ಬಾಗವಾನ ಹಳೆಯ ವಿದ್ಯಾರ್ಥಿಗಳಿಗೆ ಸಂಸ್ಕೃತಿ, ಸಂಸ್ಕಾರ,


ಉದಯವಾಹಿನಿ ಚಿತ್ರ

ಆಚಾರ, ವಿಚಾರ, ಸಾಮಾಜಿಕ ನೈತಿಕತೆ ಬಗ್ಗೆ ಹೆಚ್ಚು ಕಾಳಜಿ ಇತ್ತು. ಬದಲಾದ ಕಾಲಘಟ್ಟದಲ್ಲಿ ಇವು ಮಾಯವಾಗುತ್ತಿವೆ. ಹಳೆಯ ಬೇರು ಹೊಸಚಿಗುರು ಒಂದಾಗಿ ಮತ್ತೆ ಮೌಲ್ಯಗಳನ್ನು ಎತ್ತಿಹಿಡಿಬೇಕು. ನಮ್ಮಿಂದ ಶಿಕ್ಷಣ ಪಡೆದವರು ಇಂದು ಸಮಾಜದ ದೊಡ್ಡದೊಡ್ಡ ಹುದ್ದೆಗಳಲ್ಲಿ ಇದ್ದಾರೆ ಎನ್ನುವುದು ಗುರುವಿಗೆ ಸಿಗುವ ದೊಡ್ಡ ಗೌರವ' ಎಂದರು.

ಈ ವೇಳೆ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಸಾಧಕರಾದ ವಿಜಯ ಚನ್ನದಾಸರ, ಅನಿಲ್ ಚೌಡಿಕೇರ, ಸಂತೋಷ ಬಡಿಗೇರ, ಬಿ ಎನ್ ಪಾಟೀಲ್ ಅವರಿಗೆ ಬಾಲ್ಯ ಸ್ನೇಹಿತರ ಬಳಗದಿಂದ ಸನ್ಮಾನಿಸಲಾಯಿತು.

ಪ್ರಾಸ್ತಾವಿಕವಾಗಿ ಮಾತನಾಡಿದ ಅನಿಲ್ ತೇಲಂಗಿ ಸ್ನೇಹ ಸಮ್ಮಿಲನ ಕೇವಲ ಸನ್ಮಾನಕ್ಕೆ ಸೀಮಿತವಾಗದೆ ಗೆಳಯರ ನೋವು ನಲುವಿಲ್ಲೂ ಭಾಗಿಯಾಗಬೇಕು ಎಂದರು. ಈ ವೇಳೆ ಸ್ನೇಹಲೋಕದ

**ಎಂ ಬಿ ಹುಗ್ಗಿ, ಎಸ್ ಎಲ್ ಗುರವ, ಕೆ. ಪಿ. ಹಿರೇಮಠ, ಎಸ್ ಆರ್ ನಾಯಕ ಶಿಕ್ಷಕರು ಹಳೆಯ ವಿದ್ಯಾರ್ಥಿಗಳು ಇಂದು ಗುರುವಂದನಾ ಕಾರ್ಯಕ್ರಮ ನಡೆಸುತ್ತಿರುವುದು ತುಂಬಾ ಸಂತೋಷದ ವಿಷಯ. ಗುರುಗಳಿಂದ ಶಿಕ್ಷಣ ಪಡೆದ ವಿದ್ಯಾರ್ಥಿಗಳು ಉನ್ನತ ಸ್ಥಾನಕ್ಕೆ ಹೋದಾಗ ಗುರುಗಳ ಬೋಧನೆ ಪರಿಶ್ರಮಕ್ಕೆ ಪ್ರತಿಫಲ ಸಿಕ್ಕಿದಂತೆ ಆಗುತ್ತದೆ, ವಿದ್ಯಾರ್ಥಿಗಳ ಪ್ರಗತಿಯನ್ನು ಕಂಡು ತಂದೆಯಷ್ಟೆ ಗುರುಗಳು ಹೆಮ್ಮೆ ಪಡುತ್ತಾರೆ ಎಂದರು.**

ಬಾಲ್ಯ ಸ್ನೇಹಿತರ ಬಳಗದ ನೀಲಕಂಠ ಜಾಧವ, ಬಿ ಎಂ ಸಾಗರ, ಶಬ್ಬಿರ ಬಾಗಲಕೋಟೆ, ಅಲ್ಲಾಭಕ್ಷ ದೇಸಾಯಿ, ಹಣಮಂತ ಕನ್ನೂರ, ಮಂಜುನಾಥ ಗೌಡರ ಅನಿಸಿಕೆ ಅಭಿಪ್ರಾಯ ಹಂಚಿಕೊಂಡು ತಮ್ಮ ಸವಿನೆನಪುಗಳನ್ನು ಮೆಲಕು ಹಾಕಿದರು. ಬಿ ಎಂ ಸಾಗರ ಸ್ವಾಗತಿಸಿದರು, ಗಾಯಕಿ ದೀಪರತ್ನಶ್ರೀ ಅವರು ಪ್ರಾರ್ಥಿಸಿದರು ಅನಿಲ್ ತೇಲಂಗಿ ನಿರೂಪಿಸಿ ವಂದಿಸಿದರು ಕಾರ್ಯಕ್ರಮದಲ್ಲಿ ಅಗಲಿದ ಶಿಕ್ಷಕರ ಹಾಗೂ ಸ್ನೇಹಿತರ ಸ್ಮರಿಸಿ ಮೌನಾಚರಣೆ ಸಲ್ಲಿಸಿದರು

# ನಿರುಪಯುಕ್ತ ಶುದ್ಧ ಕುಡಿಯುವ ನೀರಿನ ಘಟಕ

**ಉದಯವಾಹಿನಿ, ಹಟ್ಟಿ ಚಿನ್ನದಗಣಿ**


ಉದಯವಾಹಿನಿ ಚಿತ್ರ

ಹಟ್ಟಿ ಪಟ್ಟಣದ ಕ್ಯಾಂಪ್ ಪ್ರದೇಶದಲ್ಲಿ ಅಧಿಸೂಚಿತ ಪ್ರದೇಶ ಸಮಿತಿ ವತಿಯಿಂದ ನಿರ್ಮಿಸಿದ ಕುಡಿಯುವ ನೀರು ಶುದ್ಧೀಕರಣ ಘಟಕಗಳು ನಿರುಪಯುಕ್ತವಾಗಿವೆ ಎಂದು ಮಾನವ ಬಂದುತ್ವ ವೇದಿಕೆ ಪದಾಧಿಕಾರಿ ಲಾಲು ಬಂಡಾರಿ ಆರೋಪ ಮಾಡಿದ್ದಾರೆ.2022-23ನೇ ಸಾಲೀನ 15ನೇ ಹಣಕಾಸು ಯೋಜನೆ ಅಡಿಯಲ್ಲಿ 70 ಲಕ್ಷ ವೆಚ್ಚದಲ್ಲಿ 5 ಶುದ್ಧ ಕುಡಿಯುವ ನೀರಿನ ಘಟಕ ನಿರ್ಮಿಸಲಾಗಿತ್ತು. ಆದರೆ, 4 ಮಾತ್ರ ನಿರ್ಮಿಸಲಾಗಿದೆ.

ಎರಡು ವರ್ಷ ಕಳೆದರೂ ಕಾರ್ಮಿಕರಿಗೆ ಉಪಯೋಗವಾಗಬೇಕಿದ್ದ ಘಟಕ ನೀರುಪಯುಕ್ತವಾಗಿ ಬಿದ್ದಿವೆ ಎನ್ನುತ್ತಾರೆ ಕಾರ್ಮಿಕರು.

ನದಿ ನೀರನ್ನೆ ಶುದ್ಧೀಕರಿಸಿ ಸರಬರಾಜು ಮಾಡಬೇಕು ಎಂಬ ನಿಯಮ ಇದೆ. ಆದರೆ, ಗುತ್ತಿಗೆ ಪಡೆದ ಗುತ್ತಿಗೆದಾರ, ನಿಯಮಗಳನ್ನು ಗಾಳಿಗೆ ತೂರಿದ್ದಾರೆ. ಸರ್ಕಾರದ ಹಣವನ್ನು ಲೂಟಿ ಮಾಡಿದ ಗುತ್ತಿಗೆದಾರನನ್ನು ಕಪ್ಪು ಪಟ್ಟಿಗೆ ಸೇರಿಸಿ, ಸರ್ಕಾರದ ಹಣವನ್ನು ಮರಳಿ ಪಡೆಯಬೇಕು ಎನ್ನುತ್ತಾರೆ ಇಲ್ಲಿನ ಜನರು. ಈಗಾಗಲೇ ನಾಲ್ಕು ಘಟಕಗಳನ್ನು ನಿರ್ಮಾಣ ಮಾಡಲಾಗಿದೆ ಇನ್ನುಳಿದ ಒಂದು ಘಟಕದ ಅನುದಾನ ಖರ್ಚು ಮಾಡದೇ ಹಾಗೆಯೇ ಉಳಿದ್ದಿದ್ದು, ಇದು ಯಾರ ಪಾಲಾಗಿದೆ ಎಂಬುವುದು ಇಂದಿಗೂ ತಿಳಿಯದಾಗಿದೆ. ಅಧಿಕಾರಿಗಳನ್ನು ವಿಚಾರಿಸಿದರೆ ಹಾರಿಕೆ ಉತ್ತರ ನೀಡುತ್ತಾರೆ. ಇಂತಹ ಅಧಿಕಾರಿ ಗಳಿಂದ ಅಭಿವೃದ್ಧಿ ಅಸಾಧ್ಯ ಎನ್ನುತ್ತಾರೆ ಕಾಲೋನಿ ನಿವಾಸಿಗಳು. ಹಟ್ಟಿ ಚಿನ್ನದಗಣಿ ಕಂಪನಿಯು ಯಾವುದೇ ಯೋಜನೆ ಇಲ್ಲದೆ ಶುದ್ಧ ಕುಡಿಯುವ ನೀರಿನ ಘಟಕ ನಿರ್ಮಾಣಕ್ಕೆ ಅನುಮತಿ ನೀಡಿದ್ದು ಜನರಲ್ಲಿ ಅನುಮಾನ ಮೂಡಿದೆ.

**ಈ ಕೂಡಲೇ ಸಂಬಂಧಪಟ್ಟ ಅಧಿಕಾರಿಗಳು ತನಿಖೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳಬೇಕು. ಕಾರ್ಮಿಕರಿಗೆ ಉಪಯೋಗವಾಗಬೇಕಿದ್ದ ಶುದ್ಧ ಕುಡಿಯುವ ನೀರಿನ ಘಟಕ ಜನರಿಗೆ ಉಪಯೋಗಕ್ಕೆ ಬರುವಂತೆ ಮಾಡಿಕೊಡಬೇಕು ಎನ್ನುತ್ತಾರೆ ಕಾರ್ಮಿಕ ಮುಖಂಡರು ಒತ್ತಾಯಿಸಿದ್ದಾರೆ.**


ನೀರೇ ಇಲ್ಲದ ಸ್ಥಳದಲ್ಲಿ ಘಟಕಗಳನ್ನು ನಿರ್ಮಾಣ ಮಾಡಲಾಗಿದೆ. ನೀರು ಪೂರೈಕೆ ಮಾಡಲು ಯಾವ ಕ್ರಮ ಕೈಗೊಳ್ಳಬೇಕು ಎಂಬುವುದನ್ನು ಅರಿಯದ ಅಧಿಕಾರಿಗಳು ಕೆಲಸವನ್ನು ಅರ್ಧಕ್ಕೆ ನಿಲ್ಲಿಸಿದ್ದಾರೆ. ಸರ್ಕಾರದ ಹಣವನ್ನು ಗುತ್ತಿಗೆದಾರ ಲೂಟಿ ಮಾಡುತ್ತಿದ್ದಾರೆ. ಇಂತವರನ್ನು ಕಪ್ಪು ಪಟ್ಟಿಗೆ ಸೇರಿಸಬೇಕು ಎನ್ನುತ್ತಾರೆ ಕಾರ್ಮಿಕರು.

# ಜಾನಕಿ ಕಾರ್ಪ್ ಇಂಡಸ್ಟ್ರೀಸ್‌ನಿಂದ ಸುತ್ತಮುತ್ತಲ ಹಳ್ಳಿಗಳು ಅಭಿವೃದ್ಧಿ

• **ಉದಯವಾಹಿನಿ, ಬಳ್ಳಾರಿ**

ತಾಲ್ಲೂಕಿನ ಸಿಡಿಗಿನಮಳ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಸ್ಥಾಪಿಸಲ್ಪಟ್ಟಿರುವ ಜಾನಕಿ ಕಾರ್ಪ್ ಕಾರ್ಖಾನೆಯಿಂದ ಆ ಪ್ರದೇಶದ ಸುತ್ತಮುತ್ತಲ ಹಳ್ಳಿಗಳಿಗೆ ಕೆಲವು ಮೂಲಭೂತ ಸೌಕರ್ಯಗಳನ್ನು ಪಡೆದುಕೊಂಡು ಅಭಿವೃದ್ಧಿ ಹೊಂದಿವೆ, ಯಾರು ಇಬ್ಬರು ಮೂವರು ಕಿಡಿಗೇಡಿಗಳು ಸೇರಿಕೊಂಡು ಕಾರ್ಖಾನೆಯ ಅಧಿಕಾರಿಗಳಿಂದ ಹಣಕ್ಕೆ ಬೇಡಿಕೆ ಇಟ್ಟು ಅವರಿಂದ ಹಣ ಸಿಗದಿದ್ದಾಗ ಸುಖಾ ಸುಮ್ಮನೆ ಕಾರ್ಖಾನೆ ವಿರುದ್ಧ ಸುಳ್ಳು ಸುದ್ದಿಗಳನ್ನು ಹಬ್ಬಿಸುತ್ತ ಸಾರ್ವಜನಿಕರಲ್ಲಿ ಗೊಂದಲವನ್ನು ಸೃಷ್ಟಿಸಿ ಕಾರ್ಖಾನೆಯ ವಿರುದ್ಧ ಜಿಲ್ಲಾಧಿಕಾರಿಗಳಿಗೆ ಸುಳ್ಳು ದೂರ ನೀಡಿರುತ್ತಾರೆ, ಅವರ ದೂರಿನಲ್ಲಿ ಯಾವುದೇ ನಂಬತಕ್ಕಂತ ವಿಷಯ ಇರುವುದಿಲ್ಲ. ಕಾರಣ ಅವರ ದೂರಿಗೆ ಮಾನ್ಯತೆ ನೀಡಬಾರದು ಎಂದು ಹಗರಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷರಾದ ಅಂಬರೀಶ್, ಹಾಲಿ ಅಧ್ಯಕ್ಷರು ಮತ್ತು ಸಿಡಿಗಿನ ಮೊಳ ಗ್ರಾಮ ಪಂಚಾಯತಿ ಸದಸ್ಯರುಗಳು ಹಾಗೂ ಮೀನಳ್ಳಿಯ ಹಲವಾರು ಗ್ರಾಮಸ್ಥರು ಸೋಮವಾರ ಅಪರ ಜಿಲ್ಲಾಧಿಕಾರಿ ಮಹಮ್ಮದ್ ಜುಬೇರ್ ಅವರಿಗೆ ಮನವಿ ಪತ್ರ ನೀಡಿ ವಿನಂತಿಸಿದರು.

ಜಾನಕಿ ಕಾರ್ಖಾನೆ ತನ್ನ ಸುತ್ತಮುತ್ತಲ ಹಳ್ಳಿಗಳಾದ ಮೀನಹಳ್ಳಿ, ಸಿಡಿಗಿನ ಮೊಳ, ಪಿಡಿಹಳ್ಳಿ, ಕೆ ವೀರಾಪುರ ಸೇರಿದಂತೆ ಹಲವು ಗ್ರಾಮಗಳಿಗೆ ಶುದ್ಧ ಕುಡಿಯುವ ನೀರು ಘಟಕ, ವೈಯಕ್ತಿಕ ಶೌಚಾಲಯ, ಶಾಲಾ ಕಟ್ಟಡ, ವಿದ್ಯಾರ್ಥಿಗಳಿಗೆ ಪುಸ್ತಕ ಮತ್ತು ಲೇಖನ ಸಾಮಗ್ರಿಗಳು ನೀಡುವುದು, ಹಬ್ಬ ಹರಿ ದಿನಗಳಿಗೆ ಗ್ರಾಮದಲ್ಲಿ ಇರುವ ದೇವಸ್ಥಾನಗಳ ಅಭಿವೃದ್ಧಿ ಸೇರಿದಂತೆ ಗ್ರಾ


ಉದಯವಾಹಿನಿ ಚಿತ್ರ

ಮಕ್ಕೆ ಆ ಕಾರ್ಖಾನೆಯಿಂದ ಸಹಾಯವಾಗುತ್ತದೆ ಹೊರತು ಯಾವುದೇ ತೊಂದರೆ ಆಗಿರುವುದಿಲ್ಲ. ಕಾರಣ ಕೆಲವು ಕಿಡಿಗೇಡಿಗಳು ನೀಡಿರುವ ದೂರನ್ನು ಯಾವುದೇ ಕಾರಣಕ್ಕೂ ಪರಿಗಣಿಸಿ ಕಾರ್ಖಾನೆಯ ವಿರುದ್ಧ ಯಾವುದೇ ಕ್ರಮವನ್ನು ಕೈಗೊಳ್ಳಬಾರದು ಎಂದು ಜಿಲ್ಲಾಡಳಿತವನ್ನು ಮನವಿ ಮಾಡಿದ್ದಾರೆ.

ಪಿ.ಡಿ. ಹಳ್ಳಿ ಮಾಜಿ ಗ್ರಾಮ ಪಂಚಾಯತಿ ಅಧ್ಯಕ್ಷ ಅಂಬರೀಷ್ ಮಾತನಾಡಿ, ಕಾರ್ಖಾನೆಯೂ ತನ್ನ

**ಇಂತಹ ಕಾರ್ಖಾನೆಯ ವಿರುದ್ಧ ತಮ್ಮ ವಯಕ್ತಿಕ ದ್ವೇಷವನ್ನು ಇಟ್ಟುಕೊಂಡು ಪೂರ್ವಗ್ರಹ ಪೀಡಿತರಾಗಿ ಸುಳ್ಳು ದೂರ ನೀಡಿ ಕಾರ್ಖಾನೆಯ ಅಧಿಕಾರಿಗಳಿಗೆ ಕಿರಿಕಿರಿ ಉಂಟು ಮಾಡುತ್ತಿದ್ದಾರೆ. ಇವರು ತಮ್ಮ ಸ್ವಜನ ಪಕ್ಷಪಾತ ಇಟ್ಟುಕೊಂಡು ಹೀಗೆ ದೂರಗಳನ್ನು ಸಲ್ಲಿಸುತ್ತಾರೆ, ಇವರಿಗೆ ಗ್ರಾಮ ಅಭಿವೃದ್ಧಿಗಿಂತ ತಮ್ಮ ಹಿತಾಸಕ್ತಿ ಮುಖ್ಯವಾಗಿರುತ್ತದೆ.**

ವ್ಯಾಪ್ತಿಯಲ್ಲಿನ ಗ್ರಾಮಗಳಲ್ಲಿ ಯಾರಾದರೂ ನಿಧನ ಹೊಂದಿದ್ದರೆ ತಕ್ಷಣಕ್ಕೆ ಅವರ ಮನೆಗೆ ಐದು ಸಾವಿರ ರೂಪಾಯಿಗಳ ಸಹಾಯಧನ ಮತ್ತು ಶವ ಸಂಸ್ಕಾರಕ್ಕೆ ಆಂಬುಲೆನ್ಸ್ ಸಹ ಒದಗಿಸುತ್ತಾರೆ, ವಿಕಲಚೇತನರಿಗೆ ಬೇಕಾಗುವ ಪರಿಕರಗಳನ್ನು ನೀಡುವುದು, ಬಡ ಜನರಿಗೆ ಆರೋಗ್ಯ ತಪಾಸಣಾ ಶಿಬಿರಗಳನ್ನು ನಡೆಸುವುದು ಆಹಾರದ ಕಿಟ್ ನೀಡುವುದು ಸೇರಿದಂತೆ ಹಲವಾರು ಇತಿಹಾಸ ಪುರುಷ, ಧಾರ್ಮಿಕರು ಮತ್ತು ಹೋರಾಟಗಾರರ ಜಯಂತಿಗಳನ್ನು ಆಚರಿಸಲು ಧನಸಹಾಯ ನೀಡಿ ಪ್ರೋತ್ಸಹಿಸುತ್ತಾರೆ.

ಆದಕಾರಣ ಇವರ ದೂರಿಗೆ ಯಾವುದೇ ಮಾನ್ಯತೆ ನೀಡದೆ ಕಾರ್ಖಾನೆ ಇನ್ನಷ್ಟು ವಿಸ್ತರಣೆಗೆ ಮತ್ತು ಇತರೆ ಕೈಗಾರಿಕೆ ಸ್ಥಾಪನೆಗೆ ಜಿಲ್ಲಾ ಆಡಳಿತದಿಂದ ಅನುಮತಿ ನೀಡಿ ಸಹಕರಿಸಬೇಕೆಂದು ನಾಗರಾಜ, ಸುಂಕಪ್ಪ ಕೆ ರಾಮಪ್ಪ ಶಾಶವಲಿ ಮಹಾನಂದಿ ಬಿ ಚನ್ನಬಸವನಗೌಡ ಶಿವರಾಜ ಕೆ ಎಸ್ ಸ್ವಾಮಿ ಸೇರಿದಂತೆ ಸುಮಾರು 71 ಜನರು ಸಹಿ ಮಾಡಿರುವ ಮನವಿ ಪತ್ರವನ್ನು ಸೋಮವಾರ ಜಿಲ್ಲಾಡಳಿತಕ್ಕೆ ನೀಡಿ ಮನವಿ ಮಾಡಿದರು.

# ಕೃಷಿ ಮಾರುಕಟ್ಟೆ ಅಭಿವೃದ್ಧಿಗೆ 10 ಕೋಟಿ: ಸಚಿವ

• **ಉದಯವಾಹಿನಿ, ಸಂತೇಮರಹಳ್ಳಿ**

ಇಲ್ಲಿನ ಕೃಷಿ ಉತ್ಪನ್ನ ಉಪ ಮಾರುಕಟ್ಟೆ ಅಭಿವೃದ್ಧಿಗೆ 10 ಕೋಟಿ ಬಿಡುಗಡೆಗೊಳಿಸುವುದಾಗಿ ಕೃಷಿ ಮಾರುಕಟ್ಟೆ ಹಾಗೂ ಸಕ್ಕರೆ ಖಾತೆ ಸಚಿವ ಶಿವಾನಂದ ಪಾಟೀಲ ಭರವಸೆ ನೀಡಿದರು. ಇಲ್ಲಿನ ಕೃಷಿ ಉತ್ಪನ್ನ ಉಪ ಮಾರುಕಟ್ಟೆಗೆ ಭಾನುವಾರ ಭೇಟಿ ನೀಡಿ ಅವರು ಮಾತನಾಡಿದರು.

ರೈತರ ಕೃಷಿ ಉತ್ಪನ್ನಗಳನ್ನು ದಾಸ್ತಾನು ಇರಿಸಲು ಇಲ್ಲಿ ತೊಂದರೆಯಾಗಿದೆ. ಮೂಲ ಸೌಕರ್ಯ ಸಮಸ್ಯೆ ಇದೆ ಎಂದು ಸ್ಥಳೀಯ ಶಾಸಕ ಎ.ಆರ್. ಕೃಷ್ಣಮೂರ್ತಿ ಸದನದಲ್ಲಿ ಗಮನಕ್ಕೆ ತಂದಿದ್ದರಿಂದ ಪರಿಶೀಲನೆ ನಡೆಸಲಾಗಿದೆ. ರಸ್ತೆ ಅಭಿವೃದ್ಧಿ, ಕುಡಿಯುವ ನೀರು, ಅಂಗಡಿ ಮಳಿಗೆಗಳು, ವಿದ್ಯುತ್ ಹಾಗೂ ಗೋದಾಮುಗಳ ಅಭಿವೃದ್ಧಿಗೆ ಕ್ರಮ ಕೈ


ಉದಯವಾಹಿನಿ ಚಿತ್ರ

ಗೊಳ್ಳಲಾಗುವುದು. ಮಾರುಕಟ್ಟೆ ಪ್ರಾಂಗಣದ ಅಭಿವೃದ್ಧಿಗಾಗಿ 10 ಕೋಟಿ ಬಿಡುಗಡೆಗೊಳಿಸಲು ಕ್ರಮ ಕೈಗೊಳ್ಳಲಾಗುವುದು. ಎಂಜಿನಿಯರ್‌ಗಳು ಕ್ರಿಯಾ ಯೋಜನೆ ರೂಪಿಸಬೇಕು ಎಂದು ತಿಳಿಸಿದರು.

ಶಾಸಕ ಎ.ಆರ್.ಕೃಷ್ಣಮೂರ್ತಿ ಮಾತನಾಡಿ, ಈ ಭಾಗದಲ್ಲಿ ಎಳನೀರು ಮಾರುಕಟ್ಟೆ ಇಲ್ಲದೆ ಜಿಲ್ಲೆಯ ರೈತರು ಬೇರೆ ಜಿಲ್ಲೆಗೆ ಹೋಗಿ ಎಳನೀರು ಮಾರಾಟ ಮಾಡಬೇಕಾಗಿದೆ. ಎಳನೀರು ಮಾರುಕಟ್ಟೆ ಆರಂಭಿಸಬೇಕು ಎಂದು ಸಚಿವರನ್ನು ಒತ್ತಾಯಿಸಿದರು.

# ಭಜನಾ ಸಂಸ್ಕೃತಿಯಿಂದ ಧರ್ಮ, ಸಂಸ್ಕೃತಿಯ ರಕ್ಷಣೆ: ಬಸವಣ್ಣಜ್ಜ

• **ಉದಯವಾಹಿನಿ, ಉಜಿರೆ**

ಭಜನಾ ಸಂಸ್ಕೃತಿಯಿಂದ ನಮ್ಮ ಸನಾತನ ಧರ್ಮ ಮತ್ತು ಸಂಸ್ಕೃತಿಯ ರಕ್ಷಣೆ ಸಾಧ್ಯವಾಗುತ್ತದೆ ಎಂದು ಕುಂದಗೋಳ ಕಲ್ಯಾಣಪುರ ಮಠದ ಬಸವಣ್ಣಜ್ಜ ಹೇಳಿದರು.ಧರ್ಮಸ್ಥಳದಲ್ಲಿ ನಡೆದ 26ನೇ ವರ್ಷದ ಭಜನಾ ತರಬೇತಿ ಸಮಾರೋಪದಲ್ಲಿ ಅವರು ಆಶೀರ್ವಚನ ನೀಡಿದರು. ಭಜನಾ ತರಬೇತಿ ಪಡೆದವರು ಧರ್ಮ ಮತ್ತು ಸಂಸ್ಕೃತಿಯ ಸಂರಕ್ಷಣೆಯ ರೂವಾರಿಗಳಾಗಿ ಆರೋಗ್ಯಪೂರ್ಣ ಸಮಾಜ ರೂಪಿಸಬೇಕೆಂದು ಸ್ವಾಮೀಜಿ ಸಲಹೆ ನೀಡಿದರು.

ಸಂಸದ ಬ್ರಿಜೇಶ್ ಚೌಟ ಮಾತನಾಡಿ, ಭಜನೆಯಿಂದ ನಮ್ಮ ಪರಂಪರೆ ಮತ್ತು ಸಂಸ್ಕೃತಿಯನ್ನು ರಕ್ಷಿಸಬಹುದು ಎಂದರು.ವಿಧಾನಪರಿಷತ್ ಸದಸ್ಯ ಕೆ.ಪ್ರತಾಪಸಿಂಹ ನಾಯಕ್ ಭಜನೆ ಹಾಡಿದರು.


ಉದಯವಾಹಿನಿ ಚಿತ್ರ

ಅಧ್ಯಕ್ಷತೆ ವಹಿಸಿದ್ದ ಧರ್ಮಾಧಿಕಾರಿ ಡಿ.ವೀರೇಂದ್ರ ಹೆಗ್ಗಡೆ ಮಾತನಾಡಿ, ಎಲ್ಲರೂ ಅಂತರಂಗ ಮತ್ತು ಬಹಿರಂಗ ಶುದ್ಧಿಯೊಂದಿಗೆ ಭಜನೆ ಮಾಡಿದಾಗ ಆತ್ಮಶುದ್ಧಿಯಾಗುತ್ತದೆ. ಮಾನಸಿಕ ಸುಖ-ಶಾಂತಿ, ನೆಮ್ಮದಿ ಸಿಗುತ್ತದೆ ಎಂದು ಹೇಳಿದರು.

ಭಜನೆ ಮಾಡುವವರು ಎಂದೂ ದುಶ್ಚಟಗಳಿಗೆ ಬಲಿಯಾಗದೆ ಆದರ್ಶ ಹಾಗೂ ಸಾರ್ಥಕ ಜೀವನ ನಡೆಸಬೇಕೆಂದು ಹೇಳಿದರು. ಶಿಬಿರಾರ್ಥಿಗಳ ಪರವಾಗಿ ಉಮೇಶ್ ಶೆಟ್ಟಿ ಅನಿಸಿಕೆ ವ್ಯಕ್ತಪಡಿಸಿದರು.

ಭಜನಾ ಕಮ್ಮಟದ ಕಾರ್ಯದರ್ಶಿ ಎ.ವಿ.ಶೆಟ್ಟಿ ವರದಿ ಸಾದರಪಡಿಸಿದರು. ಮಾಣಿಲದ ಮೋಹನದಾಸ ಸ್ವಾಮೀಜಿ, ಹೇಮಾವತಿ ವೀ. ಹೆಗ್ಗಡೆ, ಡಿ. ಸುರೇಂದ್ರ ಕುಮಾರ್, ಡಿ.ಹರ್ಷೇಂದ್ರ ಕುಮಾರ್ ಭಾಗವಹಿಸಿದ್ದರು.

**ಮಕ್ಕಳಲ್ಲಿ ಮತ್ತು ಯುವಕರಲ್ಲಿ ಭಜನಾ ಸಂಸ್ಕೃತಿ ಬೆಳೆಸಬೇಕು ಎಂದು ಸಲಹೆ ನೀಡಿದರು.ರಾಸಾಯನಿಕಗಳನ್ನು ಬಳಸಿ ಬೆಳೆಸಿದ ವಿಷಪೂರಿತ ಆಹಾರಗಳ ಸೇವನೆಯಿಂದ ನಮ್ಮ ಆರೋಗ್ಯಕ್ಕೆ ಹಾನಿಯಾಗುತ್ತಿದೆ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅತಿ ಹೆಚ್ಚು ಕ್ಯಾನ್ಸರ್ ರೋಗಿಗಳು ಇದ್ದು, ನಾವು ಹೊಲ, ತೋಟಗಳಲ್ಲಿ ಭತ್ತ, ತರಕಾರಿ ಬೆಳೆಸಿ ಬಳಸಬೇಕು**

**- ಹರೀಶ್ ಪೂಂಜ, ಶಾಸಕ**

# ನಿರಂತರ ಅಧ್ಯಯನದಿಂದ ಸಾಹಿತ್ಯವನ್ನು ಜೀವಂತ ಇರಿಸಲು ಸಾಧ್ಯ

## ಮಕ್ಕಳ ಸಾಹಿತ್ಯದ ಮಜಲುಗಳು ಕಾರ್ಯಕ್ರಮ: ಚಿತ್ರದುರ್ಗ ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ತಿನಿಂದ ಆಯೋಜನೆ

• **ಉದಯವಾಹಿನಿ, ಚಿತ್ರದುರ್ಗ**

ಪುಸ್ತಕಗಳು ಮನುಷ್ಯನ ಅತ್ಯಂತ ವಿಶಿಷ್ಟವಾದ ಅನ್ವೇಷಣೆಗಳಲ್ಲೊಂದು. ನಿರಂತರ ಅಧ್ಯಯನದಿಂದ ಯಾವುದೇ ಸಾಹಿತ್ಯವನ್ನು ಜೀವಂತ ಇರಿಸಲು ಸಾಧ್ಯ. ಮಕ್ಕಳ ಸಾಹಿತ್ಯ ರಚನೆಗೆ ಮಗುವಿನ ಮನಸ್ಸನ್ನು ತಲುಪುವ, ಸ್ಪಂದಿಸುವ ಗುಣ ಬೇಕಾಗುತ್ತದೆ ಎಂದು ಲೇಖಕ, ಚಿತ್ರದುರ್ಗ ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ ಅಧ್ಯಕ್ಷ ಯೋಗೀಶ್ ಸಹ್ಯಾದ್ರಿ ಅಭಿಪ್ರಾಯಪಟ್ಟರು.

ಚಿತ್ರದುರ್ಗ ಜಿಲ್ಲೆಯ ಭರಮಸಾಗರದಲ್ಲಿ ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ತು ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ರಾಷ್ಟ್ರೀಯ ಸೇವಾ ಯೋಜನಾ ಘಟಕ ಮತ್ತು ಕನ್ನಡ ವಿಭಾಗ ಇವರ ಸಹಯೋಗದಲ್ಲಿ ಸೋಮವಾರದಂದು ಆಯೋಜಿಸಲಾಗಿದ್ದ ಮಕ್ಕಳ ಸಾಹಿತ್ಯದ ಮಜಲುಗಳು (ವಿದ್ಯಾರ್ಥಿಗಳಿಂದ ಸ್ವರಚಿತ ಕವನ ವಾಚನ) ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಯೋಗೀಶ್ ಸಹ್ಯಾದ್ರಿ ಅವರು, ಕಲೆ ಮತ್ತು ಸಾಹಿತ್ಯ ಮನುಷ್ಯನ ಬದುಕಿನೊಂದಿಗೆ ಬೆರೆತು ಹೋಗಿರುವ ಕಾರಣದಿಂದಾಗಿ ವ್ಯಕ್ತಿಯ ಉಸಿರಿರುವವರೆಗೂ ಜೀವಂತವಾಗಿರುತ್ತವೆ.

ಮಕ್ಕಳ ಸಾಹಿತ್ಯ, ಸಾಹಿತಿಗಳ ಕುಶಲತೆಗೆ ಹಿಡಿದ ಕೈಗನ್ನಡಿ. ಸಾಹಿತ್ಯಕ್ಕೆ ಸಾವಿಲ್ಲ ಮತ್ತು ಅದ್ಭುತವಾದ ಸಾಹಿತ್ಯ ರಚಿಸಿರುವ ಸಾಹಿತಿಗಳಿಗೂ ಸಾವಿಲ್ಲ ಎಂಬ


ಉದಯವಾಹಿನಿ ಚಿತ್ರ

**ಜನನಿ ಮೊದಲ ಗುರು**

ಮಾತು ಸಾರ್ವಕಾಲಿಕ ಸತ್ಯವಾಗಿದೆ ಎಂದು ತಿಳಿಸಿದ ಯೋಗೀಶ್ ಸಹ್ಯಾದ್ರಿ, ಅವರುತಂತ್ರ ಜ್ಞಾನದಲ್ಲಿ ಮನುಷ್ಯ ಎಷ್ಟೇ ಮುಂದುವರೆದರೂ ಪುಸ್ತಕಗಳು ನಮ್ಮಿಂದ ಕೊನೆಯಾಗಲು ಸಾಧ್ಯವಿಲ್ಲ ಎಂದು ಹಲವು ಉದಾಹರಣೆಗಳ ಮೂಲಕ ವಿದ್ಯಾರ್ಥಿಗಳಿಗೆ ಅರ್ಥೈಸಿದರು. ವಿಶೇಷ ಉಪನ್ಯಾಸ ನೀಡಿ ಮಾತನಾಡಿದ ಚಿತ್ರದುರ್ಗ ಸರ್ಕಾರಿ ಕಲಾ ಕಾಲೇಜಿನ ಕನ್ನಡ ಪ್ರಾಧ್ಯಾಪಕ ಡಾ. ಯಶೋಧರ್ ಜಿ ಎನ್, ಮಕ್ಕಳ ಸಂಸ್ಕಾರವನ್ನು ಶ್ರೇಷ್ಠವಾಗಿಸುವಲ್ಲಿ ಸಾಹಿತ್ಯ ಪ್ರಮುಖ ಪಾತ್ರ ವಹಿಸುತ್ತದೆ. ಮನೆಯೆ ಮೊದಲ ಪಾಠಶಾಲೆ ಜನನಿ ತಾನೆ ಮೊದಲ ಗುರುವು... ಹೀಗೆ ಪ್ರಾರಂಭವಾಗುವ ನಮ್ಮ ಸಂಸ್ಕೃತಿಯನ್ನು ಒಳಗೊಂಡ ಸಾಹಿತ್ಯ ಹಿರಿಯರನ್ನ ಗೌರವಿಸುವ ಮತ್ತು ಪರಿಸರವನ್ನು ಪ್ರೀತಿಸುವ ಮಹತ್ವದ ಸ್ಥಾನವನ್ನು ಪಡೆದುಕೊಂಡಿದೆ. ಅದರಲ್ಲೂ ಮಕ್ಕಳ ಸಾಹಿತ್ಯ, ಸಾಹಿತ್ಯದ ಮೂಲ ಎಂದರೂ ತಪ್ಪಾಗಲಾರದು ಜನಪದ ಸಾಹಿತ್ಯದಿಂದ ಪ್ರಾರಂಭವಾಗಿ ಪಂಚತಂತ್ರ, ಕಥೆಗಳು, ಈಸೋಪನ ಕಥೆಗಳು ಅಜ್ಜಿ ಹೇಳುವ ಕಥೆಗಳು ಸಾಹಸ ಕಥೆಗಳು, ಝೆನ್ ಕಥೆಗಳು ಹೀಗೆ ಪ್ರಾರಂಭವಾಗುವ ಮಕ್ಕಳ ಸಾಹಿತ್ಯದ ಕಥಾಲೋಕ ಕುತೂಹಲವನ್ನು ಪ್ರಧಾನ ವಸ್ತುವಾಗಿ ಉಳ್ಳದ್ದಾಗಿದೆ. ಅಲ್ಲಿ ಯಾವುದೇ ವಿಮರ್ಶೆಗೆ, ತರ್ಕಕ್ಕೆ ಅವಕಾಶವಿಲ್ಲ ಅತಿಮಾನುಷ ಕಥೆಗಳನ್ನು ಜನಪದೀಯವಾಗಿ ನಿರೂಪಿಸುವಾಗ ಅತಿ ಸೂಕ್ಷ್ಮ ಒಳನೋಟಗಳಿಗಿಂತ ಕೌತುಕ/ಕುತೂಹಲಕ್ಕೆ ಹೆಚ್ಚು ಒತ್ತು ನೀಡಬೇಕಾಗುತ್ತದೆ. ಇದರ ಜೊತೆ ಜೊತೆಗೆ ಶಿಶು ಗೀತೆಗಳು ಮಕ್ಕಳನ್ನು ಹೆಚ್ಚು ಆಕರ್ಷಿತರನ್ನಾಗಿ ಮಾಡುವುದರ ಜೊತೆಗೆ ನೆನಪಿನಲ್ಲಿ ಇಟ್ಟುಕೊಳ್ಳಲು ಅನುಕೂಲವಾಗುವ ಹಾಗೆ ಕನ್ನಡದ ಅನೇಕ ಕವಿಗಳು ಮಕ್ಕಳ ಪದ್ಯಗಳನ್ನು ರಚಿಸಿದ್ದಾರೆ.

ಅವರಲ್ಲಿ ಪಂಜೆ ಮಂಗೇಶರಾಯರು, ರಾಷ್ಟ್ರಕವಿ ಗೋವಿಂದ ಪೈ, ಕುವೆಂಪುರವರು, ಶಿವರಾಮ ಕಾರಂತರು, ಜಿ ಪಿ ರಾಜರತ್ನಂ, ನಾ ಡಿಸೋಜಾ, ನಾ ಕಸ್ತೂರಿ ಇತರರು ಪ್ರಮುಖರಾಗುತ್ತಾರೆ. ಇತ್ತೀಚಿನ ದಿನಗಳಲ್ಲಿ ಮಕ್ಕಳ ಸಾಹಿತ್ಯದ ಅನೇಕ ಕಥನಗಳು ಕಾರ್ಟೂನ್ ಪ್ರಪಂಚದಲ್ಲಿ ಮೊಬೈಲ್, ಕಂಪ್ಯೂಟರ್, ಟಿ ವಿ ಮಾಧ್ಯಮಗಳ ಮೂಲಕ ಮಕ್ಕಳ ಮನಸ್ಸನ್ನು ರಂಜಿಸುವುದರ ಜೊತೆಗೆ ಅನೇಕ ಆಸಕ್ತಿದಾಯಕ ವಿಷಯಗಳನ್ನು ಬಿತ್ತರಪಡಿಸುತ್ತಿವೆ ಆದರೆ ಮಕ್ಕಳ ಮುಗ್ಧ ಪ್ರಪಂಚವನ್ನು ಮತ್ತಷ್ಟು ವಿಶಾಲವಾಗಿಸುವಲ್ಲಿ ಅವು ಎಡವುತ್ತಿವೆ ಎಂದು ತಿಳಿಸಿದರು.

ಮ.ಸಾ.ಪ ಉಪಾಧ್ಯಕ್ಷ ಬಿ ವಿಜಯಕುಮಾರ್, ಸಂಘಟಕಿ ನಿರ್ಮಲ ಮಂಜುನಾಥ್ ಮಾತನಾಡಿದರು. ಎನ್.ಎಸ್.ಎಸ್ ಕಾರ್ಯಕ್ರಮಾಧಿಕಾರಿ ಪ್ರೊ.ಲೋಕೇಶ ನಾಯ್ಕ ಪ್ರಾಸ್ತಾವಿಕವಾಗಿ ಮಾತನಾಡಿದರು, ವಿದ್ಯಾರ್ಥಿಗಳಾದ ನರೇಶ್ ಪ್ರಾರ್ಥಿಸಿದರು. ಕವನ, ಲಕ್ಷ್ಮೀ ಕಾರ್ಯಕ್ರಮ ನಿರೂಪಿಸಿದರು.

ಕನ್ನಡ ವಿಭಾಗ ಸಹಾಯಕ ಪ್ರಾಧ್ಯಾಪಕ ಪ್ರೊ. ಮಸೂದ್ ಅಹಮದ್, ಅಧ್ಯಾಪಕರಾದ ಸಂಗಮೇಶ್ವರ, ಸತ್ಯ ನಾರಾಯಣ, ಮಮತಾ, ಜಿಲ್ಲಾ, ಮಸಾಪ ಪದಾಧಿಕಾರಿಗಳು ಹಾಗೂ ಅಧ್ಯಾಪಕರು, ಸಿಬ್ಬಂದಿ, ವಿದ್ಯಾರ್ಥಿಗಳು, ಮಸಾಪ ಪದಾಧಿಕಾರಿಗಳು ಉಪಸ್ಥಿತರಿದ್ದರು.

**ಮಕ್ಕಳ ಸಾಹಿತ್ಯದ ಮೇಲೆ ಬೆಳಕು ಚೆಲ್ಲುವ ಅವಶ್ಯಕತೆಯಿದೆ. ಈ ನಿಟ್ಟಿನಲ್ಲಿ ಪರಿಷತ್ತು ಚಿತ್ರದುರ್ಗ ಜಿಲ್ಲೆಯಲ್ಲಿ ಸಕ್ರಿಯವಾಗಿದೆ. ಹಲವಾರು ಶಾಲಾ ಕಾಲೇಜುಗಳಲ್ಲಿ ಮಕ್ಕಳ ಸಾಹಿತ್ಯದ ಕುರಿತು ಕಾರ್ಯಕ್ರಮಗಳನ್ನು ಆಯೋಜಿಸುವುದರ ಜೊತೆಗೆ ವಿದ್ಯಾರ್ಥಿಗಳಲ್ಲಿ ಸಾಹಿತ್ಯದ ಕಂಪನ್ನು ಹರಡುತ್ತಿರುವ ಅಧ್ಯಕ್ಷ ಯೋಗೀಶ್ ಸಹ್ಯಾದ್ರಿ ಮತ್ತು ತಂಡಕ್ಕೆ ಶುಭಾಶಯಗಳನ್ನು ತಿಳಿಸಿದರು. ವಿದ್ಯಾರ್ಥಿಗಳು ಇಚ್ಛೆ ಪಟ್ಟರೆ ನಮ್ಮ ಕಾಲೇಜಿನಲ್ಲಿಯೂ ಮಸಾಪ ಘಟಕವನ್ನು ಸ್ಥಾಪಿಸಲಾಗು ವುದು**

**- ಡಾ. ಶಶಿಕಲಾ, ಪ್ರಾಂಶುಪಾಲ**

## ಮಿನಿ ನ್ಯೂಸ್

### ಪಾಲಿಕೆ ಆವರಣದಲ್ಲಿ ವಡ್ಡರ ಯಲ್ಲಣ್ಣ ಪ್ರತಿಮೆ ಸ್ಥಾಪಿಸಲು ಆಗ್ರಹ

• **ಉದಯವಾಹಿನಿ, ಹುಬ್ಬಳ್ಳಿ**

ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಆವರಣದಲ್ಲಿ ಸ್ವಾತಂತ್ರ್ಯ ಹೋರಾಟಗಾರ ವೀರ ವಡ್ಡರ ಯಲ್ಲಣ್ಣ ಅವರ ಪ್ರತಿಮೆ ಸ್ಥಾಪಿಸಬೇಕು ಎಂದು ಆಗ್ರಹಿಸಿ ರಾಜ್ಯ ಭೋವಿ(ವಡ್ಡರ) ಮಹಾಸಭಾ ಸಂಘಟನೆ ಸದಸ್ಯರು ಸೋಮವಾರ ಪಾಲಿಕೆ ಆವರಣದಲ್ಲಿ ಪ್ರತಿಭಟನೆ ನಡೆಸಿದರು.

ಮಹಾಸಭಾ ಧಾರವಾಡ ಜಿಲ್ಲಾ ಘಟಕದ ಅಧ್ಯಕ್ಷ ಬಾಬು ಭೋಜಗಾರ, ರಾಜ್ಯ ಮಹಿಳಾ ಘಟಕದ ಉಪಾಧ್ಯಕ್ಷೆ ಲಲಿತಾ ಭೋಜಗಾರ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿ ಮೇಯರ್ ರಾಮಪ್ಪ ಬಡಿಗೇರ ಮತ್ತು ಆಯುಕ್ತ ಈಶ್ವರ ಉಳ್ಳಾಗಡ್ಡಿ ಅವರಿಗೆ ಮನವಿ ಪತ್ರ ಸಲ್ಲಿಸಿದರು. ಈ ಹಿಂದೆಯೂ ಮನವಿ ಪತ್ರ ಸಲ್ಲಿಸಿ ವಿನಂತಿಸಲಾಗಿತ್ತು. ಪಾಲಿಕೆ ಸದಸ್ಯರ ಗಮನಕ್ಕೆ ತಂದು, ಅಧಿಕಾರಿಗಳ ಜೊತೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳುವುದಾಗಿ ತಿಳಿಸಿದ್ದೀರಿ. ಆದರೆ, ಈವರೆಗೂ ಆ ಕುರಿತು ಯಾವುದೇ ಪ್ರಕ್ರಿಯೆ ನಡೆದಿಲ್ಲ. ವಡ್ಡರ ಯಲ್ಲಣ್ಣ ಅವರ ಪ್ರತಿಮೆ ಸ್ಥಾಪಿಸುವ ಕುರಿತು ಸಾಮಾನ್ಯ ಸಭೆಯಲ್ಲಿ ಚರ್ಚಿಸಿ ನಿರ್ಣಯ ಕೈಗೊಂಡು, ಅವರಿಗೆ ಗೌರವ ಸಲ್ಲಿಸಬೇಕು' ಎಂದು ಒತ್ತಾಯಿಸಿದರು.

### ಪ್ರಗತಿಯತ್ತ ಕರೆದೊಯ್ಯುವ ಪಂಚ ಗ್ಯಾರಂಟಿ: ಸಚಿವ ಎಚ್.ಕೆ. ಪಾಟೀಲ

• **ಉದಯವಾಹಿನಿ, ಶಿರಹಟ್ಟಿ**

ರೈತರು, ಮಹಿಳೆಯರು, ವಿದ್ಯಾರ್ಥಿಗಳು ಸೇರದಂತೆ ಬಡವರ ಬದುಕಿಗೆ ಭದ್ರ ಅಡಿಪಾಯ ಹಾಕಿ ಅವರ ಆರ್ಥಿಕ ಅಭಿವೃದ್ಧಿಗೆ ಮುನ್ನುಡಿ ಬರೆದ ಪಂಚ ಗ್ಯಾರಂಟಿಗಳು, ರಾಜ್ಯದ ಜನರನ್ನು ನೆಮ್ಮದಿಯಿಂದ ಪ್ರಗತಿಯತ್ತ ಕೊಂಡ್ಯೊಯುತ್ತಿವೆ' ಎಂದು ಸಚಿವ ಎಚ್.ಕೆ. ಪಾಟೀಲ ಹೇಳಿದರು. ಸ್ಥಳೀಯ 16ನೇ ವಾರ್ಡ್, ಮಾಗಡಿ ಗ್ರಾಮದಲ್ಲಿ 3 ಕೋಟಿ ವೆಚ್ಚದಲ್ಲಿ ಸಿಸಿ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಿ ಅವರು ಮಾತನಾಡಿದರು. ಕಾಂಗ್ರೆಸ್ ಪಕ್ಷ ಸದಾ ಬಡವರ ಪರ ಚಿಂತನೆ ಮಾಡುತ್ತಿದ್ದು, ಜನರು ನೆಮ್ಮದಿ, ಪ್ರೀತಿ, ವಾತ್ಸಲ್ಯ, ಶಾಂತಿಯಿಂದ ಸಹಬಾಳ್ವೆಯಿಂದ ಇರುವ ವಾತಾವರಣ ಕಲ್ಪಿಸುತ್ತದೆ. ಗ್ಯಾರಂಟಿ ಯೋಜನೆಗಳಿಂದ ರಾಜ್ಯದಲ್ಲಿ ಒಂದು ಕೋಟಿಗೂ ಅಧಿಕ ಕುಟುಂಬಗಳನ್ನು ಬಡತನ ರೇಖೆಯಿಂದ ಮೇಲಕ್ಕೆತ್ತುವ ಕ್ರಾಂತಿಕಾರಿ ಕಾರ್ಯವನ್ನು ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಮಾಡಿದೆ' ಎಂದರು.

### ಆಧ್ಯಾತ್ಮ ವಿದ್ಯೆಯನ್ನೂ ಕಲಿಯಿರಿ ಸುಗುಣೇಂದ್ರತೀರ್ಥ ಸ್ವಾಮೀಜಿ

• **ಉದಯವಾಹಿನಿ, ಉಡುಪಿ**

ವಿದ್ಯಾರ್ಥಿಗಳು ಲೌಕಿಕ ಶಿಕ್ಷಣದ ಜೊತೆಗೆ ಆಧ್ಯಾತ್ಮ ವಿದ್ಯೆಯನ್ನೂ ಕಲಿತು ಜೀವನದಲ್ಲಿ ಯಶಸ್ಸು ಗಳಿಸಬೇಕು ಎಂದು ಪರ್ಯಾಯ ಪುತ್ತಿಗೆ ಮಠದ ಸುಗುಣೇಂದ್ರತೀರ್ಥ ಸ್ವಾಮೀಜಿ ಹೇಳಿದರು.

ಶ್ರೀಕೃಷ್ಣ ಮಠದ ರಾಜಾಂಗಣದಲ್ಲಿ ಹಮ್ಮಿಕೊಂಡಿದ್ದ ಯಕ್ಷಗಾನ ಕಲಾರಂಗದ ವಿದ್ಯಾಪೋಷಕ್ ಸಹಾಯಧನ ವಿತರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿ, ಪಡೆದ ಸಹಾಯವನ್ನು ದಾನದ ರೂಪದಲ್ಲಿ ಮುಂದಿನ ಪೀಳಿಗೆಗೆ ತಲುಪಿಸಿದರೆ ಜೀವನ ಸಾರ್ಥಕವಾಗುತ್ತದೆ ಎಂದರು. ಪುತ್ತಿಗೆ ಕಿರಿಯ ಯತಿ ಸುಶ್ರೀಂದ್ರತೀರ್ಥ ಶ್ರೀಪಾದ ಆಶೀರ್ವಚನ ನೀಡಿದರು. ಧಾರವಾಡದ ವಿದ್ಯಾಪೋಷಕ್ ಸ್ಥಾಪಕ ವಿಶ್ವಸ್ಥ ಪ್ರಮೋದ್ ಕುಲಕರ್ಣಿ, ಕೋಟದ ಗೀತಾನಂದ ಫೌಂಡೇಷನ್ ಪ್ರವರ್ತಕ ಆನಂದ ಸಿ. ಕುಂದರ್, ಮುಂಬೈ ಒಎನ್ ಜಿಸಿ ನಿವೃತ್ತ ಸಿಜಿಎಂ ಬನ್ನಾಡಿ ನಾರಾಯಣ ಆಚಾರ್, ಉದ್ಯಮಿ ಹರೀಶ್ ರಾಯಸ್, ಬೀಜಾಡಿ ನಾಗರಾಜ ರಾವ್, ಸಾಯಿರಾಧ ಸಮೂಹ ಸಂಸ್ಥೆಗಳ ಮನೋಹರ ಎಸ್.ಶೆಟ್ಟಿ ಇದ್ದರು. ಅಧ್ಯಕ್ಷ ಎಂ.ಗಂಗಾಧರ ರಾವ್ ಸ್ವಾಗತಿಸಿದರು. ಕಾರ್ಯದರ್ಶಿ ಮುರಲಿ ಕಡೆಕಾರ್ ನಿರೂಪಿಸಿದರು.

### ಭಗತ್‌ಸಿಂಗ್‌ರ ದೇಶಪ್ರೇಮ ಯುವಕರಿಗೆ ಪ್ರೇರಣೆ: ನ್ಯಾಯವಾದಿ

• **ಉದಯವಾಹಿನಿ, ವಿಜಯಪುರ**

ರಕ್ತದ ಕಣಕಣಗಳಲ್ಲಿಯೂ ರಾಷ್ಟ್ರಪ್ರೇಮವನ್ನು ತುಂಬಿಕೊಂಡು ದೇಶದ ಸ್ವಾತಂತ್ರ್ಯಕ್ಕಾಗಿ ತನ್ನ ಪ್ರಾಣವನ್ನೇ ಮುಡುಪಾಗಿಟ್ಟ ಅಪ್ರತಿಮ ಹೋರಾಟಗಾರ, ಕ್ರಾಂತಿಯ ಕಿಡಿ ಭಗತ್‌ಸಿಂಗ್‌ರ ದೇಶ ಪ್ರೇಮ ಯುವಕರಿಗೆ ಪ್ರೇರಣೆ ಎಂದು ನ್ಯಾಯವಾದಿ ಸಾಹಿತಿ ಮಲ್ಲಿಕಾರ್ಜುನ ಭೃಂಗಿಮಠ ಹೇಳಿದರು. ನಗರದ ಸಿದ್ದೇಶ್ವರ ದೇವಾಲಯದ ಆವರಣದಲ್ಲಿ ಭಾನುವಾರ ಸ್ವಾಮಿ ವಿವೇಕಾನಂದ ಯುವ ಬ್ರಿಗೇಡ್ ಮತ್ತು ಭಾರತ ವೇದಿಕೆ ಚಾರಿಟೇಬಲ್ ಫೌಂಡೇಶನ್ ಸಹಯೋಗದಲ್ಲಿ ಹಮ್ಮಿಕೊಂಡ ದೇಶಪ್ರೇಮಿ ಭಗತ್‌ಸಿಂಗರ ಜಯಂತ್ಯುತ್ಸವದ ಕಾರ್ಯಕ್ರಮದಲ್ಲಿ ಭಗತ್ ಸಿಂಗ್‌ರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದರು

ಮುಖ್ಯ ಅತಿಥಿ ಸಾಹಿತಿ ಪ್ರೊ, ಎ.ಎಚ್. ಕೊಳಮಲಿ ಸ್ವಾತಂತ್ರ್ಯ ಹೋರಾಟಗಾರ ಭಗತ್ ಸಿಂಗನ ಕುರಿತು ವಿಶೇಷ ಉಪನ್ಯಾಸವನ್ನು ನೀಡಿ, ದೇಶಕ್ಕೆ ಸ್ವಾತಂತ್ರ್ಯವನ್ನು ತಂದು ಕೊಡುವುದೇ ಭಗತ್‌ಸಿಂಗರ ಗುರಿ ಮತ್ತು ಛಲವಾಗಿತ್ತು. ಬಾಲ್ಯದಿಂದಲೂ ದೇಶಪ್ರೇಮವನ್ನು ಒಳಗೊಂಡಿದ್ದನು. ದುಷ್ಟ ಬ್ರಿಟಿಷರನ್ನು ಹೊಡೆದು ಓಡಿಸುವುದೇ ನನ್ನ ಬಲವಾದ ಛಲ ಎಂದು ಹೋರಾಡಿ ಕೇವಲ 24 ವರ್ಷದಲ್ಲಿ ದೇಶಕ್ಕಾಗಿ ಪ್ರಾಣವನ್ನು ತ್ಯಾಗ ಮಾಡಿದ ಅಪ್ಪಟ ದೇಶಪ್ರೇಮಿ ಭಗತ್‌ಸಿಂಗರ ದೇಶ ಅಭಿಮಾನ ಮೆಚ್ಚುವಂತದ್ದು. ಇಂದಿನ ಯುವಕರು ದೇಶಕ್ಕಾಗಿ ದುಡಿಯಬೇಕು. ದೇಶಕ್ಕಾಗಿ ಮಡಿಯಬೇಕು. ತಾಯಿ, ತಾಯಿ ನಾಡಿಗಾಗಿ ಹೋರಾಡುವ ಯುವ ಪಡೆಯ ಅವಶ್ಯಕತೆ ಇದೆ ಎಂದರು.

### ಮಿತಿಗಿಂತ ಹೆಚ್ಚು ಮಕ್ಕಳನ್ನು ಕರೆತರುವ ಆಟೊ, ಓಮ್ನಿ

• **ಉದಯವಾಹಿನಿ, ಯಾದಗಿರಿ**

ಓಮಿನಿ ವಾಹನಗಳ ಟಾಪ್ ಮೇಲೆ ಗುಡ್ಡೆಗಟ್ಟಲೇ ಬ್ಯಾಗುಗಳು, ಒಬ್ಬರ ಮೇಲೆ ಒಬ್ಬರು ಕುಳಿತುಕೊಳ್ಳುವ ಮಕ್ಕಳು, ಆಟೊದಲ್ಲಿ ಮಿತಿಗಿಂತ ಹೆಚ್ಚು ವಿದ್ಯಾರ್ಥಿಗಳ ಸಂಚಾರ, ಮಿನಿಬಸ್‌ಗಳ ತುಂಬೆಲ್ಲ ನಿಂತು ಮಕ್ಕಳು ಶಾಲೆ ಹಾಗೂ ಮರಳಿ ಮನೆಗೆ ಬರಬೇಕಾದ ಸ್ಥಿತಿ...

ನಗರವೂ ಸೇರಿದಂತೆ ತಾಲ್ಲೂಕು ವ್ಯಾಪ್ತಿಯಲ್ಲಿ ಖಾಸಗಿ ಶಾಲೆಗಳ ವಾಹನಗಳು ಮಕ್ಕಳನ್ನು ಕರೆತರುವ ದೃಶ್ಯಗಳಿಗೆ ಪಾಲಕರು ಆತಂಕ ವ್ಯಕ್ತಪಡಿಸುತ್ತಿದ್ದಾರೆ. ಗ್ರಾಮೀಣ ಪ್ರದೇಶದ ಮಕ್ಕಳನ್ನು ಖಾಸಗಿ ಶಾಲೆಗಳಿಗೆ ಕರೆ ತರುವ ವಾಹನಗಳಿಗೆ ಸರಿಯಾದ ದಾಖಲೆಗಳು ಇರುವುದಿಲ್ಲ. ಆಟೊದಲ್ಲಿ 10ಕ್ಕೂ ಹೆಚ್ಚು ಮಕ್ಕಳು, ಓಮ್ನಿಗಳಲ್ಲಿ 15ಕ್ಕೂ ಹೆಚ್ಚು ಮಕ್ಕಳು ಇರುತ್ತಾರೆ. ಮಕ್ಕಳು ಒಳಗಡೆ ಇದ್ದರೆ, ಅವರ ಬ್ಯಾಗ್‌ಗಳು ಹೊರಗಡೆ ನೇತು ಹಾಕಲಾಗುತ್ತದೆ. ಆಟೊಗಳಂತೂ ಒಂದು ಕಡೆಗೆ ವಾಲುತ್ತಿರುತ್ತವೆ. ಯಾವಾಗ ಏನಾಗಬಹುದು ಎಂಬ ಕಾಳಜಿ ಇಲ್ಲದೆ ಚಾಲಕರು ವಾಹನ ಚಲಾಯಿಸುತ್ತಾರೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 03:00 ರಿಂದ 04:30 |
| ಗುಳಿಕ ಕಾಲ | ಮಧ್ಯಾಹ್ನ | 12:00 ರಿಂದ 01:30 |
| ಯಮಗಂಡ ಕಾಲ | ಬೆಳಿಗ್ಗೆ | 09:00 ರಿಂದ 10:30 |

**ಮೇಷ** ಖಂಡಿತವಾಗಿಯೂ ಆರೋಗ್ಯದ ಆರೈಕೆಯ ಅಗತ್ಯವಿದೆ. ಬಹಳ ಪ್ರಯೋಜನಕಾರಿ ದಿನವಲ್ಲ– ಆದ್ದರಿಂದ ನಿಮ್ಮ ಹಣದ ಪರಿಸ್ಥಿತಿಯನ್ನು ಪರಿಶೀಲಿಸಿ ಮತ್ತು ನಿಮ್ಮ ವೆಚ್ಚಗಳ ಮೇಲೆ ಮಿತಿ ಹೇರಿ.

**ವೃಷಭ** ಈ ರಾಶಿಚಕ್ರಕ್ಕೆ ಸಂಬಂಧಿಸಿದ ಕೆಲವರು ಇಂದು ಭೂಮಿಗೆ ಸಂಬಂಧಿಸಿದ ವಿಷಯದ ಬಗ್ಗೆ ಹಣವನ್ನು ಖರ್ಚುಮಾಡಬಹುದು ಧಾರ್ಮಿಕ ಸ್ಥಳಕ್ಕೆ ಅಥವಾ ಸಂಬಂಧಿಗಳ ಭೇಟಿ ಸಾಧ್ಯವಿದೆ.

**ಮಿಥುನ** ನೀವು ನಿಮ್ಮ ಶತ್ರುವೆಂದು ಪರಿಗಣಿಸುವವರು ವಾಸ್ತವವಾಗಿ ನಿಮ್ಮ ಹಿತೈಶಿಗಳೆಂದು ನಿಮಗೆ ಅರಿವಾಗಬಹುದು. ಸಂಜೆಯ ವೇಳೆಯಲ್ಲಿ ನಿಮ್ಮ ಆಪ್ತರೊಬ್ಬರ ಮನೆಯಲ್ಲಿ ಸಮಯವನ್ನು ಕಳೆಯಲು ಹೋಗಬಹುದು.

**ಕರ್ಕಾಟಕ** ನೀವು ಇಂದು ಮಾಡುವ ಕೆಲವು ದೈಹಿಕ ಬದಲಾವಣೆಗಳು ಖಂಡಿತವಾಗಿಯೂ ನಿಮ್ಮ ನೋಟವನ್ನು ವರ್ಧಿಸುತ್ತವೆ. ಇಂದು ವ್ಯಾಪಾರದಲ್ಲಿ ಉತ್ತಮ ಲಾಭವನ್ನು ಗಳಿಸುವ ಸಾಧ್ಯತೆ ಇದೆ.

**ಸಿಂಹ** ಹೊರಾಂಗಣ ಚಟುವಟಿಕೆಗಳು ಇಂದು ದಣಿವು ಮತ್ತು ಒತ್ತಡ ತರುತ್ತವೆ. ದಿನದಲ್ಲಿ ನಂತರ ಹಣಕಾಸು ಪರಿಸ್ಥಿತಿಗಳು ಸುಧಾರಿಸುತ್ತವೆ. ಅಗತ್ಯವಿದ್ದರೆ ಸ್ನೇಹಿತರು ನಿಮ್ಮ ನೆರವಿಗೆ ಬರುತ್ತಾರೆ.

**ಕನ್ಯಾ** ನಿಮ್ಮನ್ನು ಫಿಟ್ ಆಗಿ ಮತ್ತು ಚೆನ್ನಾಗಿರಿಸಿಕೊಳ್ಳಲು ಹೆಚ್ಚಿನ ಕ್ಯಾಲೊರಿಯ ಆಹಾರವನ್ನು ತಪ್ಪಿಸಿ ಇಂದು ಷೇರು ಮಾರುಕಟ್ಟೆಯಲ್ಲಿ ಹಣವನ್ನು ಹೂಡಿಕೆ ಮಾಡುವವರು ತಮ್ಮ ಹಣವನ್ನು ಕಳೆದುಕೊಳ್ಳಬಹುದು.

**ತುಲಾ** ಇಂದು ನೀವು ಆರಾಮವಾಗಿರುವ ಭಾವನೆ ಹೊಂದಿರುತ್ತೀರಿ ಮತ್ತು ಆನಂದಿಸಲು ಸೂಕ್ತ ಮನೋಭಾವದಲ್ಲಿರುತ್ತೀರಿ. ಹಣಕಾಸು ಲಾಭಗಳು ವಿವಿಧ ಮೂಲಗಳಿಂದ ಬರುತ್ತದೆ.

**ವೃಶ್ಚಿಕ** ಕುಟುಂಬದ ಸದಸ್ಯರು ನಿಮ್ಮ ಅಭಿಪ್ರಾಯಗಳನ್ನು ಬೆಂಬಲಿಸುತ್ತಾರೆ. ನಿಮ್ಮ ಮಾತುಗಳನ್ನು ಸರಿಯಾಗಿ ಸಾಬೀತುಪಡಿಸಲು ಇಂದು ನೀವು ನಿಮ್ಮ ಸಂಗಾತಿಯೊಂದಿಗೆ ಜಗಳವಾಡಬಹುದು.

**ಧನಸ್ಸು** ಅನಾವಶ್ಯಕ ಉದ್ವೇಗ ಮತ್ತು ಚಿಂತೆ ನಿಮ್ಮ ಜೀವನದ ರಸ ಹೀರಬಹುದು ಮತ್ತು ನಿಮ್ಮನ್ನು ಖಾಲಿಯಾಗಿಸಬಹುದು. ಇವುಗಳನ್ನು ತೊಡೆದು ಹಾಕದಿದ್ದಲ್ಲಿ ಅವು ಕೇವಲ ನಿಮ್ಮ ಸಮಸ್ಯೆಯನ್ನು ಉಲ್ಬಣಗೊಳಿಸುತ್ತವೆ.

**ಮಕರ** ಮಾನಸಿಕ ಒತ್ತಡ ತರುವ ಸುಪ್ತ ಸಮಸ್ಯೆಗಳು ಕಾಣಿಸಿಕೊಳ್ಳುತ್ತವೆ. ನಿಮ್ಮ ಅವಾಸ್ತವಿಕ ಯೋಜನೆ ಹಣದ ಕೊರತೆಗೆ ಕಾರಣವಾಗುತ್ತದೆ. ನಿಮಗೆ ಕೆಟ್ಟ ಹವ್ಯಾಸಗಳ ಪ್ರಭಾವ ಬೀರಬಹುದಾದ ಕೆಟ್ಟ ಜನರಿಂದ ದೂರವಿರಿ.

**ಕುಂಭ** ನಿಮ್ಮ ದಿನವನ್ನು ಎಚ್ಚರಿಕೆಯಿಂದ ಆಯೋಜಿಸಿ. ನೀವು ನಂಬಿಕೆಯಿಡಬಹುದಾದ ಜನರ ಸಹಾಯ ಪಡೆಯಲು ಅವರ ಜೊತೆ ಚರ್ಚಿಸಿ. ನೀವು ಇಂದು ಪ್ರೀತಿಯ ಸಮೃದ್ಧ ಚಾಕೊಲೇಟ್‌ನ ರುಚಿ ಸವಿಯುತ್ತೀರಿ.

**ಮೀನ** ನೀವು ಯಾವಾಗಲೂ ಪರಸ್ಪರರ ಪ್ರೀತಿಯಲ್ಲಿದ್ದೀರೆಂದು ಅನಿಸುವುದರಿಂದ ಭೌತಿಕ ಅಸ್ತಿತ್ವಕ್ಕೆ ಯಾವುದೇ ಮಹತ್ವವಿರುವುದಿಲ್ಲ. ನಿಮ್ಮ ಸಿಹಿಯಾದ ಪ್ರೀತಿಯ ಜೀವನದಲ್ಲಿನ ಉತ್ಕಟತೆಯನ್ನು ಆನಂದಿಸುತ್ತೀರಿ.

# ಭೂ ಅಕ್ರಮ: ಎಕರೆಗೆ 1 ಲಕ್ಷದಿಂದ 3 ಲಕ್ಷದ ತನಕ ಲಂಚ, ತಪ್ಪಿತಸ್ಥರ ವಿರುದ್ಧ ಕ್ರಮ

## • ಕಡೂರು ಮತ್ತು ಮೂಡಿಗೆರೆ ತಾಲ್ಲೂಕಿನಲ್ಲಿ 10 ಸಾವಿರ ಎಕರೆಗೂ ಹೆಚ್ಚು ಭೂಮಿ ಅಕ್ರಮವಾಗಿ ಮಂಜೂರು


• **ಉದಯವಾಹಿನಿ ಚಿಕ್ಕಮಗಳೂರು**

ಕಡೂರು ಮತ್ತು ಮೂಡಿಗೆರೆ ತಾಲ್ಲೂಕಿನಲ್ಲಿ 10 ಸಾವಿರ ಎಕರೆಗೂ ಹೆಚ್ಚು ಭೂಮಿ ಅಕ್ರಮವಾಗಿ ಮಂಜೂರಾಗಿರುವುದು ಜಿಲ್ಲೆಯ ಜನರಲ್ಲಿ ಸಂಚಲನ ಮೂಡಿಸಿದೆ. ಇಷ್ಟು ಪ್ರಮಾಣದ ಅಕ್ರಮ ನಡೆಸಿರುವ ಅಧಿಕಾರಿಗಳ ವಿರುದ್ಧ ಕ್ರಮ ಏಕಿಲ್ಲ, ಎಫ್‌ಐಆರ್ ದಾಖಲಿಸಿ ಕ್ರಮ ಕೈಗೊಳ್ಳಲು ಸರ್ಕಾರ ಹಿಂದೇಟು ಹಾಕುತ್ತಿರುವುದೇಕೆ ಎಂಬ ಪ್ರಶ್ನೆ ಜನರಲ್ಲಿ ಉದ್ಭವವಾಗಿದೆ.

ಕಡೂರು ಮತ್ತು ಮೂಡಿಗೆರೆಯಲ್ಲಿ ನಡೆದಿದ್ದ ಅಕ್ರಮ ಭೂಮಂಜೂರಾತಿ ಬಗ್ಗೆ ತನಿಖೆ ನಡೆಸಲು ಸರ್ಕಾರ 13 ತಹಶೀಲ್ದಾರ್‌ಗಳ ತಂಡ ರಚಿಸಿತ್ತು. ಈ ತಂಡ ಅಕ್ರಮದ ಇಂಚಿಂಚು ಮಾಹಿತಿಯನ್ನೂ ಕಲೆಹಾಕಿ ವರದಿ ಸಿದ್ಧಪಡಿಸಿದೆ. ಅಧಿಕಾರಿಗಳು, ನೌಕರರು ಸೇರಿ 326 ಸಿಬ್ಬಂದಿಯನ್ನು ತಪ್ಪಿತಸ್ಥರು ಎಂದು ತನಿಖಾ ತಂಡ ಪಟ್ಟಿ ಮಾಡಿದೆ. ಇದರೊಂದಿಗೆ ಭೂಸಕ್ರಮೀಕರಣ ಸಮಿತಿ ಅಧ್ಯಕ್ಷರು ಮತ್ತು ಸದಸ್ಯರನ್ನೂ ತನಿಖಾ ತಂಡ ಹೊಣೆ ಮಾಡಿದೆ. ಅನರ್ಹರಿಗೆ ಭೂಮಿ ಹಂಚಿಕೆಯಲ್ಲಿ ಹಣದ ವ್ಯವಹಾರ ಸಾಕಷ್ಟು ನಡೆದಿದ್ದು, ಎಕರೆಗೆ 1 ಲಕ್ಷದಿಂದ 3 ಲಕ್ಷದ ತನಕ ಲಂಚವನ್ನು ಅಧಿಕಾರಿಗಳು ಪಡೆದಿದ್ದಾರೆ.

> ವಜಾ ಆಗಿರುವ ಕಡತಗಳನ್ನೇ ಮರುಪರಿಶೀಲನೆಗೆ ಮಂಡಿಸುತ್ತಿದ್ದಾರೆ. ಭೂಸಕ್ರಮೀಕರಣ ಸಮಿತಿಯ ಅಧ್ಯಕ್ಷರು ಸದಸ್ಯರು ಅಧಿಕಾರಿಗಳ ವಿರುದ್ಧ ಕ್ರಮವಾಗಬೇಕು. ಅವರ ಬ್ಯಾಂಕ್ ಖಾತೆ ಬೇನಾಮಿ ಆಸ್ತಿ ಬಗ್ಗೆಯೂ ತನಿಖೆ ನಡೆಯಬೇಕು. ಈಗಾಗಲೇ ಲೋಕಾಯುಕ್ತಕ್ಕೆ ದೂರು ಸಲ್ಲಿಸಿದ್ದು ಬೇನಾಮಿ ಆಸ್ತಿ ಬಗ್ಗೆಯೂ ವರದಿ ಸಲ್ಲಿಸಿದ್ದೇವೆ. ಅದನ್ನು ಸರ್ಕಾರ ಮತ್ತು ಲೋಕಾಯುಕ್ತ ಸಂಸ್ಥೆ ಗಂಭೀರವಾಗಿ ಪರಿಗಣಿಸಬೇಕು.
> –ರಮೇಶ್ ಕೆಳಗೂರು, ಮಾಹಿತಿ ಹಕ್ಕು ಹೋರಾಟಗಾರ

ಅನರ್ಹ ಪ್ರಕರಣಗಳಲ್ಲಿ ತನಿಖಾ ವರದಿ ಆಧರಿಸಿ ಸರ್ಕಾರಿ ಜಾಗ ಎಂದು ಉಪವಿಭಾಗಾಧಿಕಾರಿಗಳು ಆದೇಶ ಹೊರಡಿಸುತ್ತಿದ್ದಾರೆ. ಈಗ ಲಂಚ ಕೊಟ್ಟು ಭೂಮಿ ಮಂಜೂರು ಮಾಡಿಸಿಕೊಂಡವರಿಗೆ ಹಣವೂ ಇಲ್ಲ, ಭೂಮಿಯೂ ಇಲ್ಲ ಎಂಬಂತಾಗಿದೆ'



ಉದಯವಾಹಿನಿ ಚಿತ್ರ

**ಅಧಿಕಾರಿಗಳ ವಿರುದ್ಧ ಕ್ರಮ ಏಕಿಲ್ಲ?**

ಎಂದು ರೈತ ಮುಖಂಡರು ಹೇಳುತ್ತಾರೆ. ಅಕ್ರಮಕ್ಕೆ ಪ್ರಮುಖ ಕಾರಣಕರ್ತರು ಕಂದಾಯ ಇಲಾಖೆ ಅಧಿಕಾರಿ ಮತ್ತು ಸಿಬ್ಬಂದಿ. ಅವರ ವಿರುದ್ಧ ಯಾವುದೇ ಕ್ರಮಗಳು ಆಗುತ್ತಿಲ್ಲ. ತನಿಖಾ ತಂಡ ತಪ್ಪಿತಸ್ಥ ಪಟ್ಟಿ ನೀಡಿದ್ದರೂ ಒಬ್ಬರ ವಿರುದ್ಧವೂ ಎಫ್‌ಐಆರ್ ದಾಖಲಾಗಿಲ್ಲ. ಎಲ್ಲರೂ ಅದೇ ಜಾಗದಲ್ಲಿ ಕೆಲಸ ಮಾಡುತ್ತಿದ್ದಾರೆ. ಇದು ಯಾವ ನ್ಯಾಯ' ಎಂಬುದು ಅವರ ಪ್ರಶ್ನೆ.

'ಅಷ್ಟೂ ಭೂಮಿ ವಾಪಸ್ ಪಡೆಯಬೇಕು, ಅಷ್ಟೂ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಕೆಲಸದಿಂದ ವಜಾ ಮಾಡಬೇಕು. ಲಂಚ ಪಡೆದಿರುವ ಬಗ್ಗೆ ಸಿಬ್ಬಂದಿಯ ವಿರುದ್ಧ ಪ್ರತ್ಯೇಕವಾಗಿ ಲೋಕಾಯುಕ್ತ ತನಿಖೆಯಾಗಬೇಕು. ಸಮಿತಿ ಅಧ್ಯಕ್ಷರು ಮತ್ತು ಸದಸ್ಯರ ವಿರುದ್ಧವೂ ಕ್ರಮ ಆಗಬೇಕು ಎಂಬುದು ಹೋರಾಟಗಾರರ ಅಭಿಪ್ರಾಯ. ಅಕ್ರಮದ ಕುರಿತು ತನಿಖಾ ತಂಡ ಸರ್ಕಾರಕ್ಕೆ ನೀಡಿರುವ ವರದಿಯಲ್ಲಿರುವ ಅಂಶಗಳು ಕುರಿತು ಸರಣಿ ವರದಿ ಪ್ರಕಟಿಸಿದ್ದು, ಇದಕ್ಕೆ ಜನರಿಂದ ಪ್ರತಿಕ್ರಿಯೆ ವ್ಯಕ್ತವಾಗಿದೆ.

### ಎಲ್ಲರ ವಿರುದ್ಧ ಕ್ರಮ ಆಗಬೇಕು

ತಹಶೀಲ್ದಾರ್ ಶಿರಸ್ತೇದಾರರು ಕಂದಾಯ ಅಧಿಕಾರಿಗಳು ಗ್ರಾಮ ಆಡಳಿತಾಧಿಕಾರಿ ಭೂಮಾಪಕರು ವಿಷಯ ನಿರ್ವಾಹಕರು(ಕೇಸ್ ವರ್ಕರ್) ಭೂಮಿ ಆಪರೇಟರ್‌ಗಳು ಸಮಿತಿ ಅಧ್ಯಕ್ಷರು ಮತ್ತು ಸದಸ್ಯರು ಈ ಅಕ್ರಮದಲ್ಲಿ ನೇರ ಭಾಗಿದಾರರು. ಆದ್ದರಿಂದ ಎಲ್ಲರ ವಿರುದ್ಧವೂ ಕಠಿಣ ಕ್ರಮ ಆಗಬೇಕು. ಅಕ್ರಮವಾಗಿ ಅನರ್ಹರಿಗೆ ಮಂಜೂರು ಮಾಡಿರುವ ಅಷ್ಟೂ ಜಾಗವನ್ನು ವಾಪಸ್ ಪಡೆಯಬೇಕು. ಮುಂದೆ ಈ ರೀತಿ ಅಕ್ರಮ ಆಗದಂತೆ ತಡೆಯಬೇಕು.

### ಭೂರಹಿತರಿಗೆ ಜಮೀನು ಹಂಚಿಕೆ

ಅಕ್ರಮ ಭೂಮಂಜೂರಾತಿ ಹಗರಣದಲ್ಲಿ ಬಗ್ಗೆ ನಿಸ್ಪಕ್ಷಪಾತ ತನಿಖೆ ನಡೆಸಿ ಎಲ್ಲಾ ಭೂಗಳ್ಳರನ್ನು ಮಟ್ಟ ಹಾಕಬೇಕು. ಭಾಗಿಯಾದ ಕಂದಾಯ ಇಲಾಖೆಯ ತಪ್ಪಿತಸ್ಥ ಭ್ರಷ್ಟ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಕೂಡಲೇ ಅಮಾನತ್ತು ಮಾಡಬೇಕು. ಅಕ್ರಮ ಭೂಮಂಜೂರಾತಿಯ ಎಲ್ಲಾ ಪಹಣಿಗಳನ್ನು ವಜಾ ಮಾಡಬೇಕು. ನಿಜವಾದ ಬಡವರು ಮತ್ತು ಭೂರಹಿತರಿಗೆ ಜಮೀನು ಹಂಚಿಕೆ ಮಾಡಬೇಕು. –ನಾಗರಾಜ್ ವಕೀಲರು

ಅಕ್ರಮ ಭೂಮಂಜೂರಾತಿಯಲ್ಲಿ ಭಾಗಿಯಾಗಿರುವ ಅಷ್ಟೂ ಅಧಿಕಾರಿ ಮತ್ತು ಸಿಬ್ಬಂದಿಯನ್ನು ಕರ್ತವ್ಯದಿಂದ ವಜಾ ಮಾಡಬೇಕು.


ಅಕ್ರಮದಲ್ಲಿ ಭಾಗಿಯಾಗಿರುವ ಸಿಬ್ಬಂದಿಯನ್ನು ಬೇರೆಡೆಗೆ ವರ್ಗಾವಣೆ ಮಾಡಲಾಗಿತ್ತು. ಆದರೆ ರಾಜಕೀಯ ಪ್ರಭಾವ ಬಳಸಿ ಅವರು ಮತ್ತೆ ಮೂಡಿಗೆರೆಗೆ ಬರುತ್ತಿದ್ದಾರೆ.

# ರೈತರ ಪಹಣಿ ಸಮಸ್ಯೆ ಸರಿಪಡಿಸದಿದ್ದರೆ ಉಗ್ರ ಹೋರಾಟದ ಎಚ್ಚರಿಕೆ: ರೈತ ಸಂಘ

• **ಉದಯವಾಹಿನಿ ಯಾದಗಿರಿ**

ರಾಜ್ಯ ಸರ್ಕಾರ ಹಾಗೂ ಜಿಲ್ಲಾಡಳಿತ ರೈತರ ಸಮಸ್ಯೆಗಳಿಗೆ ಸ್ಪಂದಿಸದೆ ರೈತರ ಜೊತೆ ಚೆಲ್ಲಾಟವಾಡುತ್ತಿವೆ ಎಂದು ರಾಜ್ಯ ರೈತ ಸಂಘ ಹಸಿರು ಸೇನೆ ಜಿಲ್ಲಾಧ್ಯಕ್ಷ ಮಲ್ಲನಗೌಡ ಹಗರಟಗಿ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಜಿಲ್ಲೆಯ ವಡಗೇರಾ ತಾಲ್ಲೂಕಿನ ಗೋನಾಲ ಶಿವಪುರ ಗ್ರಾಮದ ರೈತರ ಪಹಣಿಗಳ ನ್ಯೂನ್ಯತೆ ಸರಿಪಡಿಸುವಂತೆ ಒತ್ತಾಯಿಸಿ ರಾಜ್ಯ ರೈತ ಸಂಘದ ವತಿಯಿಂದ ಜಿಲ್ಲಾಡಳಿತ ಕಚೇರಿಯ ಮುಂದೆ ಹಮ್ಮಿಕೊಂಡಿದ್ದ ಧರಣಿ ಸಭೆಯ ನೇತೃತ್ವ ವಹಿಸಿ ಅವರು ಮಾತನಾಡಿದರು.

ನಮಗೆ ಸ್ವಾತಂತ್ರ್ಯ ದೊರಕಿ 75 ವರ್ಷಗಳು ಕಳೆದರೂ ಕೂಡ ಈ ಗ್ರಾಮಗಳ ರೈತರ ಪಹಣಿ ಪತ್ರ, ಆಕರ ಬಂದ ಟಿಪ್ಪಣಿಗಳು ಸಂಬಂಧವಿಲ್ಲದಂತಾಗಿದೆ ಇದನ್ನು ಸರಿಪಡಿಸುವಂತೆ ಈ ಭಾಗದ ರೈತರು ಹಲವು ಬಾರಿ ಮನವಿ ಸಲ್ಲಿಸಿದರೆ ಕೂಡ ಸರಿಪಡಿಸದೆ ಅಧಿಕಾರಿಗಳು ದಿವ್ಯ ನಿರ್ಲಕ್ಷ್ಯ ವಹಿಸಿದ್ದಾರೆ. ಈಗಲಾದರೂ ಜಿಲ್ಲಾ ಆಡಳಿತ ರೈತರ ಸಮಸ್ಯೆಗೆ ಸ್ಪಂದಿಸಿ ಪಹಣಿಯ ನ್ಯೂನತೆಯನ್ನು ಸರಿಪಡಿಸುವ ಕಾರ್ಯಕ್ಕೆ ಮುಂದಾಗಬೇಕು ಒಂದು ವೇಳೆ ವಿಳಂಬ ಮಾಡಿದ್ದಲ್ಲಿ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ಮಾಡುವುದಾಗಿ ಮಲ್ಲನಗೌಡ ಹಗರಟಗಿ ತಿಳಿಸಿದರು.



ಉದಯವಾಹಿನಿ ಚಿತ್ರ

ರೈತರ ಪಹಣಿ ಪತ್ರಗಳು ಸರಿಯಲ್ಲದ ಕಾರಣ ಸಾಲ ಸೌಲಭ್ಯ, ಬೆಳೆ ಪರಿಹಾರ ಹಾಗೂ ಇನ್ನಿತರ ಸರಕಾರಿ ಸೌಲಭ್ಯಗಳಿಂದ ರೈತರು ವಂಚಿತರಾಗುತ್ತಿದ್ದಾರೆ ಕೂಡಲೆ ಸರಕಾರ ಜಿಲ್ಲಾಧಿಕಾರಿಗಳು ರೈತರ ಸಮಸ್ಯೆ ಪರಿಹಾರ ಕ್ರಮ ಕೈಗೊಳ್ಳಬೇಕು ಇಲ್ಲವಾದಲ್ಲಿ ರೈತರೊಂದಿಗೆ ನಿರಂತರ ಉಪವಾಸ ಧರಣಿ ಕೂಡುವುದಾಗಿ ಹೇಳಿದರು.

ರೈತರ ಈ ಹೋರಾಟದಲ್ಲಿ ಬಸ್ಸುಗೌಡ ಬೀಳಾರ, ಹಾಗೂ ಕನ್ನಡ ಪರ ಸಂಘಟನೆಯ ಮುಖಂಡರಾದ ಭೀಮು ನಾಯಕ್, ವಿಶ್ವನಾಥ್ ನಾಯಕ್, ಅಶೋಕ್ ಐಕೂರ, ಮತ್ತು ಚಂದ್ರಶೇಖರಗೌಡ ಗೋನಾಲ್, ಬಸಯ್ಯಸ್ವಾಮಿ ಶಿವಪೂರ, ಬಸವರಾಜ ನೀಲಹಳ್ಳಿ, ಸಿದ್ದನಗೌಡ ಶಿವಪುರ, ಬಸವರಾಜ ಕಾಟರಪಲ್ಲಿ ಹಾಗೂ ಇನ್ನಿತರರು ಬೆಂಬಲ ವ್ಯಕ್ತಪಡಿಸಿ ರೈತರೊಂದಿಗೆ ಧರಣಿಯಲ್ಲಿ ಭಾಗವಹಿಸಿದ್ದರು.

> ರಾಜ್ಯ ಸರಕಾರ ರೈತ ವಿರೋಧಿ ಆಡಳಿತ ನಡೆಸುತ್ತಿದೆ ಪಹಣಿ ಪತ್ರಗಳು ಸರಿಪಡಿಸದಿದ್ದರೆ ತೆಲಂಗಾಣ ಸೇರುವ ಬಯಕೆ ವ್ಯಕ್ತಪಡಿಸಿದ್ದಾರೆ ಆದ್ದರಿಂದ ಇದನ್ನು ಸರಕಾರ ಗಂಭೀರವಾಗಿ ಪರಿಗಣಿಸಬೇಕು ಕಾಂಗ್ರೆಸ್ ಬಿಜೆಪಿ ಸರಕಾರ ನಾವು ರೈತರ ಪರವಾಗಿ ಇದ್ದೇವೆ ಎಂದು ಬರಿ ಬಾಯಿ ಮಾತಲ್ಲಿ ಹೇಳುತ್ತಿದ್ದಾರೆ
> –ಹಣಮೇಗೌಡ ಬಿರನಕಲ್, ರೈತ ಮುಖಂಡ

ತಡರಾತ್ರಿವರಿಗೂ ರೈತರು ಧರಣಿ ಕುಳಿತಿದ್ದ ಸ್ಥಳಕ್ಕೆ ಜಿಲ್ಲಾಧಿಕಾರಿಗಳು ಭೇಟಿ ನೀಡಿ ಮನವಿ ಸ್ವೀಕರಿಸಿ ಮಾತನಾಡಿದ ಅವರು ಆದಷ್ಟು ಬೇಗನೆ ಈ ಸಮಸ್ಯೆ ಬಗೆಹರಿಸುವುದಾಗಿ ರೈತರಿಗೆ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ರೈತ ಸಂಘಟನೆಯ ಮುಖಂಡರಾದ ನೂರ್ ಅಹಮದ್, ವೆಂಕುಬ ಕಟ್ಟಿಮನಿ, ಶಿವಶರಣಪ್ಪ ಸಾಹುಕಾರ, ವಿದ್ಯಾಧರ್ ಜಾಕ,ಶರಣು ಜಡಿ, ಮತ್ತು ಶಿವಪೂರ ಗೋನಾಲ ಗ್ರಾಮದ ಮುಖಂಡರು ರೈತರು ಉಪಸ್ಥಿತರಿದ್ದರು

# ಹಿರಿಯ ನಾಗರಿಕ ವೇದಿಕೆ ಪ್ರಾರಂಭ

• **ಉದಯವಾಹಿನಿ, ಅರಸೀಕೆರೆ**



ಉದಯವಾಹಿನಿ ಚಿತ್ರ

ತಾಲ್ಲೂಕಿನ ಬಾಣಾವರ ಗ್ರಾಮದಲ್ಲಿ ಗಾಂಧಿ ಜಯಂತಿಯಂದು ಬಾಣಾವರ ಸರ್ಕಾರಿ ಆಸ್ಪತ್ರೆ ಆವರಣದಲ್ಲಿ ಸಾಂಕೇತಿಕವಾಗಿ ಹಿರಿಯ ನಾಗರಿಕರ ವೇದಿಕೆ ಪ್ರಾರಂಭಿಸಲಾಗುವುದು ಎಂದು ವೇದಿಕೆ ಮುಖಂಡರಾದ ನಿವೃತ್ತ ಅಭಿವೃದ್ಧಿ ಅಧಿಕಾರಿ ಬಿ ಪರಮೇಶ್ವರ ಮತ್ತು ಮಾಜಿ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಬಿ ಎಂ ಜಯಣ್ಣ ತಿಳಿಸಿದರು

**ಉದಯವಾಹಿನಿ**ಯೊಂದಿಗೆ ಮಾತ ನಾಡಿದ ಇವರು ಬಾಣಾವರ ಪಟ್ಟಣದ ಅಭಿವೃದ್ಧಿ ಧ್ಯೆಯದೊಂದಿಗೆ ವೇದಿಕೆಯನ್ನು ಪ್ರಾರಂಭಿಸುತ್ತಿದ್ದು ಬಾಣಾವರ ಸರ್ಕಾರಿ ಆಸ್ಪತ್ರೆ ಆವರಣದಲ್ಲಿ ಈಗಾಗಲೇ ವೇದಿಕೆ ಸದಸ್ಯರುಗಳು ಸ್ವಚ್ಛತೆ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ಸುಮಾರು ವರ್ಷಗಳಿಂದಲೂ ಸರ್ಕಾರಿ ಆಸ್ಪತ್ರೆ ಆವರ ಣದಲ್ಲಿದ್ದ ಗಿಡಗಂಟೆಗಳನ್ನು ಕಡಿದು ಸಂಪೂರ್ಣ ಸ್ವಚ್ಛತೆ ಕೈಗೊಳ್ಳಲಾಗಿದೆ ಬಾಣಾವರ ಸರ್ಕಾರಿ ಆಸ್ಪತ್ರೆಯನ್ನು ಸಮುದಾಯದ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಲು ಅರಸೀಕೆರೆ ಕ್ಷೇತ್ರದ ಶಾಸಕರನ್ನು ಭೇಟಿ ಮಾಡಿ ಮನವಿ ಸಲ್ಲಿಸಲಾಗುವುದು ಬರುವ ದಿನಗಳಲ್ಲಿ ಬಾಣಾವರ ಗ್ರಾಮದಲ್ಲಿರುವ ಐತಿಹಾಸಿಕ ಕೋಟೆಯನ್ನು ಪ್ರವಾಸಿ ತಾಣವನ್ನಾಗಿಯೂ ಸಹ ಅಭಿವೃದ್ಧಿಪಡಿಸಲು ಸರ್ಕಾರವನ್ನು ಒತ್ತಾಯಪಡಿಸಲಾಗುವುದು ಎಂದರು .

ವೇದಿಕೆ ಮುಖ್ಯಸ್ಥರುಗಳಾದ ಕೇಂದ್ರ ಸರ್ಕಾರದ ತೆಂಗಿನರುವ ಅಭಿವೃದ್ಧಿ ನಿಗಮದ ಸದಸ್ಯರಾದ ಬಿಆರ್ ಜಯಣ್ಣ ಮಾಜಿ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಬಿ ಆರ್ ನಾಗೇಂದ್ರ ಇಲಿಯಾಸ್ ಅಹಮದ್ ನಂಜುಂಡಸ್ವಾಮಿ ಬಿ ಆರ್ ಲಕ್ಷ್ಮೀಶ್. ಸೇರಿ ದಂತೆ ಇನ್ನೂ ಹಲವಾರು ವೇದಿಕೆಯ ಮುಖ್ಯಸ್ಥರು ಉಪಸ್ಥಿತರಿದ್ದರು.

# ಅನಿರ್ದಿಷ್ಟಾವಧಿ ಪ್ರತಿಭಟನೆ

• **ಉದಯವಾಹಿನಿ ಧಾರವಾಡ**

ಗ್ರಾಮ ಆಡಳಿತಾಧಿಕಾರಿಗಳಿಗೆ ಮೂಲ ಸೌಲಭ್ಯಗಳನ್ನು ಒದಗಿಸಬೇಕು, ಮೊಬೈಲ್ ಆಯಪ್‌ಗಳಲ್ಲಿ ವಿವರ ಅಪ್ ಲೋಡ್ ಮಾಡುವಂತೆ ಒತ್ತಡ ಹೇರುವುದನ್ನು ನಿಲ್ಲಿಸಬೇಕು ಎಂದು ಗ್ರಾಮ ಆಡಳಿತಾಧಿಕಾರಿಗಳು ಅನಿರ್ದಿಷ್ಟಾವಧಿ ಪ್ರತಿಭಟನೆ ಆರಂಭಿಸಿದ್ದಾರೆ. ಜಿಲ್ಲಾಧಿಕಾರಿ ಕಚೇರಿ ಎದುರು ಧರಣಿ ಕುಳಿತಿದ್ದಾರೆ. ಗುಣಮಟ್ಟದ ಮೊಬೈಲ್ ಫೋನ್, ಸಿಯುಜಿ ಸಿಮ್, ಡೇಟಾ ನೀಡಬೇಕು. ಮೇಜು, ಕುರ್ಚಿ, ಅಲ್ಮೆರಾ, ಗೂಗಲ್ ಕ್ರೋಮ್ ಬುಕ್, ಲ್ಯಾಪ್ ಟಾಪ್, ಪ್ರಿಂಟರ್ ಮತ್ತು ಸ್ಕ್ಯಾನರ್ ಒದಗಿಸಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು. ಕಸಬಾ ಹೋಬಳಿ ವೃತ್ತಗಳನ್ನು ಗ್ರೇಡ್–1 ಗ್ರಾಮ ಆಡಳಿತಾಧಿಕಾರಿ' ಹುದ್ದೆಯಾಗಿ ಮೇಲ್ದರ್ಜೆಗೇರಿಸಬೇಕು.

ಪ್ರಯಾಣ ಭತ್ಯೆಯನ್ನು 500 ರಿಂದ 3000ಕ್ಕೆ ಏರಿಸಬೇಕು. ಅಂತರ ಜಿಲ್ಲಾ ವರ್ಗಾವಣೆ ಗಾಗಿ ಕಂದಾಯ ಇಲಾಖೆಯಲ್ಲಿ ಹೊಸ ಮಾರ್ಗಸೂಚಿ ರಚಿಸಬೇಕು ಎಂದು ಮನವಿ ಮಾಡಿದರು. ಕರ್ನಾಟಕ ರಾಜ್ಯ ಗ್ರಾಮ ಆಡಳಿತಾಧಿಕಾರಿಗಳ ಸಂಘದ ಜಿಲ್ಲಾ ಘಟಕದ ಖಜಾಂಚಿ ಮಂಜುನಾಥ ಬಾಗೋಡಿ, ಸುವರ್ಣಾ, ಮಹಾಂತೇಶ, ವೆಂಕಟೇಶ, ಜಕ್ಕನಗೌಡ ಪಾಟೀಲ ಪಾಲ್ಗೊಂಡಿದ್ದರು.

# ಮರಾಠಿ ನೆಲದಲ್ಲಿ ಕನ್ನಡ ಡಿಂಡಿಮ

• **ಉದಯವಾಹಿನಿ ವಿಜಯಪುರ**

ಜಗ್ಗಲಿಗೆ ಮೇಳದ ಘರ್ಜನೆ, ಚಿಕ್ಕ ಹಲಗೆ ಮೇಳದ ಸಂಚಲನ, ದೊಡ್ಡಾಟ ಕಲಾ ಪ್ರಕಾರದ ಅದ್ದೂರಿ ಪ್ರದರ್ಶನ, ಡೊಳ್ಳಿನ ನಿನಾದ, ವೀರಗಾಸೆ, ಗೊಂಬೆ ಕುಣಿತದ ಸಡಗರ ಹಾಗೂ ಸಂಭ್ರಮದೊಂದಿಗೆ ಮರಾಠಿ ನೆಲದಲ್ಲಿ ಗಡಿನಾಡ ಕನ್ನಡಿಗರ ಸಮಾವೇಶ ಅದ್ದೂರಿಯಾಗಿ ನಡೆಯಿತು. ನೆರೆಯ ಮಹಾರಾಷ್ಟ್ರದ ಸಾಂಗಲಿ ಜಿಲ್ಲೆಯ ಜತ್ತ ತಾಲ್ಲೂಕಿನ ಗುಡ್ಡಾಪುರದಲ್ಲಿ ಕರ್ನಾಟಕ ಸಂಭ್ರಮ 50ರ ನಿಮಿತ್ತ, ಗಡಿ ಅಭಿವೃದ್ಧಿ ಪ್ರಾಧಿಕಾರ ಹಾಗೂ ವಿವಿಧ ಇಲಾಖೆ ಮತ್ತು ಸಂಘ ಸಂಸ್ಥೆಗಳ ಸಹಯೋಗದಲ್ಲಿ ಸೋಮವಾರ ನಡೆಸ ಗಡಿನಾಡು ಕನ್ನಡಿಗರ ಸಮಾವೇಶಕ್ಕೆ ಅದ್ದೂರಿಯಾಗಿ ಚಾಲನೆ ದೊರಕಿತು.

# ಮಹಿಳೆಯರು ಆತ್ಮ ರಕ್ಷಣೆಗಾಗಿ ಕರಾಟೆ ಕಲಿಯುವುದು ಅವಶ್ಯಕ

• **ಉದಯವಾಹಿನಿ ವಡಗೇರಾ**

ಇಂದಿನ ಯುಗದಲ್ಲಿ ಮಹಿಳೆಯರ ಆತ್ಮ ರಕ್ಷಣೆಗೆ ಕರಾಟೆ ಕಲಿಯುವುದು ಅವಶ್ಯಕವಾಗಿದೆ ಎಂದು ತಾಲ್ಲೂಕಿನ ಕೃಷ್ಣವೇಣಿ ಭೀಮಾ ಸಂಗಮದ ಪರಮಪೂಜ್ಯ ಶ್ರೀ ಕರುಣೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.

ಗ್ಲೋಬಲ್ ಷೂಟಕಾನ ಕರಾಟೆ– ಡು ಇಂಡಿಯಾ ತರಬೇತಿ ಕೇಂದ್ರದಿಂದ ಪಟ್ಟಣದ ಕಸ್ತೂರಿ ಬಾ ಗಾಂಧಿ ಬಾಲಕಿಯರಿಗೆ ಕರಾಟೆ ಪರೀಕ್ಷೆ ಹಾಗೂ ಪ್ರಮಾಣ ಪತ್ರ ಬೆಲ್ಟ್‌ಗಳ ವಿತರಣಾ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ವಹಿಸಿ ಅವರು ಮಾತನಾಡಿದರು.

ದೇಶದಲ್ಲಿ ಇತ್ತೀಚಿನ ದಿನಗಳಲ್ಲಿ ಮಹಿಳೆಯರ ಮೇಲೆ ಅತ್ಯಾಚಾರ ಹಲ್ಲೆಗಳು ಹೆಚ್ಚಾಗುತ್ತಿವೆ ಸರಿಯಾದ ಭದ್ರತೆ ಇಲ್ಲದ ಕಾರಣ ಮಹಿಳೆಯರು ಕಡ್ಡಾಯವಾಗಿ ಕರಾಟೆ ಕಲಿಯಬೇಕು ಎಂದರು ಈ ಶಾಲೆಯ ಬಾಲಕಿಯರು ಕೂಡ ಕರಾಟೆಯಲ್ಲಿ ಅಂತರಾಷ್ಟ್ರೀಯ ಮಟ್ಟದಲ್ಲಿ ಭಾಗವಹಿಸಿ ಕೀರ್ತಿ ತಂದು ಪುರುಷರಿಗಿಂತಲೂ ನಾವು ಕೂಡ ಯಾವುದರಲ್ಲೂ ಕಡಿಮೆ ಇಲ್ಲ ಎಂಬುದನ್ನು ತೋರಿಸಿಕೊಟ್ಟಿದ್ದಾರೆ ಮುಂದಿನ ದಿನಗಳಲ್ಲಿ ಇನ್ನಷ್ಟು ಹೆಚ್ಚಿನ ಸಾಧನೆ ಕೀರ್ತಿ ಮಾಡಲೆಂದು ವಿದ್ಯಾರ್ಥಿಗಳಿಗೆ ಶುಭ ಹಾರೈಸಿದರು.



ಉದಯವಾಹಿನಿ ಚಿತ್ರ

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರ ಹಾಗೂ ಬೆಲ್ಟ್‌ಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಅಶೋಕ್ ಸಾಹು ಕರಣಿಗಿ, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಮಲ್ಲಿಕಾರ್ಜುನ ಸಂಗ್ವಾರ, ರೈತ ಸಂಘದ ಜಿಲ್ಲಾಧ್ಯಕ್ಷ ಮಲ್ಲನಗೌಡ ಹಗರಟಗಿ, ಮತ್ತು ಮಲ್ಲಣ್ಣ ನೀಲಳ್ಳಿ, ಅಬ್ದುಲ್ ಚಿಗನೂರ, ಶಿವಶರಣಪ್ಪ ಸಾಹುಕಾರ, ರುದ್ರಾಂಬಿಕ ಪಾಟೀಲ್ ಚಟ್ನಳ್ಳಿ, ಮುಖ್ಯ ಶಿಕ್ಷಕಿ ಲಲಿತಾಬಾಯಿ ಎಚ್. ನಾಟೇಕಾರ, ವಿದ್ಯಾಧರ್ ಜಾಕ, ನಿಲಯ ಪಾಲಕಿ ಚಂದ್ರಕಲಾ ಆವಂಟಿ, ಕರಾಟೆ ಮಾಸ್ಟರ್ ಶ್ರೀಶಾಂತ್, ಅಂಬರೀಶ್, ಕಸ್ತೂರಿ ಬಾ ಗಾಂಧಿ ಬಾಲಕಿಯರ ಶಾಲೆಯ ಕರಾಟೆ ತರಬೇತಿದಾರ ಸುನಿಲ್ ವಿಶ್ವಕರ್ಮ, ವಿವಿಧ ಸಂಘಟನೆಯ ಮುಖಂಡರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಸಾಥಖೇಡ ಗ್ರಾಮ ಪಂಚಾಯಿತಿಗೆ ಗಾಂಧಿ ಗ್ರಾಮ ಪುರಸ್ಕಾರ

• **ಶರಣಪ್ಪ ಎನ್ ನೆರಡಗಿ**

• **ಉದಯವಾಹಿನಿ, ಯಡ್ರಾಮಿ**

ತಾಲ್ಲೂಕಿನ ಸಾಥಖೇಡ ಗ್ರಾಮ ಪಂಚಾಯಿತಿ ತನ್ನ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಿಗೆ ಒಳ್ಳೆ ಕಾರ್ಯಗಳು ಮಾಡಿ ಸರ್ಕಾರದ ಅಧಿಕಾರಿಗಳ ಗಮನ ಸೆಳೆದಂತ ಪಂಚಾಯಿತಿ ಆಗಿದೆ. ಅದಕ್ಕಾಗಿ ಗಾಂಧಿ ಗ್ರಾಮ ಪುರಸ್ಕಾರಕ್ಕೆ ಭಾಜನವಾಗಿದ್ದು ಅತ್ಯಂತ ಹೆಮ್ಮೆಯ ವಿಷಯ ಎಂದು ಪಂಚಾಯಿತಿ ಅಧ್ಯಕ್ಷ ಮಲ್ಲಣ್ಣ ಹೊಸಮನಿ ತಿಳಿಸಿದ್ದಾರೆ.

**ಅಭಿವೃದ್ಧಿಗೆ ಮತ್ತಷ್ಟು ಅನುಕೂಲ**

ಗಾಂಧಿ ಪುರಸ್ಕಾರದ ಜೊತೆ 5 ಲಕ್ಷ ಬಹುಮಾನ ಪಡೆದಿರುವುದು ನಮ್ಮ ಗ್ರಾಮ ಪಂಚಾಯತಿಯ ಅಭಿವೃದ್ಧಿಗೆ ಮತ್ತಷ್ಟು ಅನುಕೂಲವಾಗಲಿದೆ ಎಂದು ಹೇಳಿದರು.

ಯಡ್ರಾಮಿ ತಾಲ್ಲೂಕಿನಲ್ಲಿ ಅತ್ಯಂತ ಉತ್ತಮ ಮಟ್ಟದ ಕಾಮಗಾರಿಗಳು ಮಾಡಿ ಜನರ ಸಮಸ್ಯೆಯನ್ನು ಬಗೆಹರಿಸಿದ್ದಕ್ಕಾಗಿ ಸರ್ಕಾರ ನಮ್ಮ ಕಾರ್ಯಗಳಿಗೆ ಮೆಚ್ಚಿ ಗಾಂಧಿ ಪುರಸ್ಕಾರ ನೀಡಿರುವುದು ನಮಗೆ ಸಂತಸ ತಂದಿದೆ ಎಂದು ಆನಂದ ಕುಮಾರ್ ಎಸ್ ದೊಡ್ಡಮನಿ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ತಿಳಿಸಿದ್ದಾರೆ.



ಉದಯವಾಹಿನಿ ಚಿತ್ರ

ಗ್ರಾಮಗಳಿಗೆ ರಸ್ತೆ ನಿರ್ಮಾಣ ಆಗಲಿ ಕಾಲುವೆಗಳು ಊಳೆತ್ತುವುದಾಗಲಿ ಸಾರ್ವಜನಿಕರಿಗೆ ಮಹಾತ್ಮ ಗಾಂಧೀಜಿ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಎಲ್ಲಾ ಗ್ರಾಮಗಳಲ್ಲಿ ಉದ್ಯೋಗ ನೀಡಿರುವುದರಿಂದ ಹಾಗೂ ಸಾರ್ವಜನಿಕರ ಸಮಸ್ಯೆಗಳು ಕೂಡಲೇ ಸ್ಪಂದಿಸಿ ಪರಿಹಾರ ನೀಡಿದ್ದಕ್ಕಾಗಿ ಈ ಪುರಸ್ಕಾರ ದೊರೆತಿದೆ ಎಂದು ಸಾರ್ವಜನಿಕರು ಮಾತನಾಡಿಕೊಳ್ಳುತ್ತಿದ್ದಾರೆ.

> ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಗ್ರಾಮಗಳಲ್ಲಿ ಕುಡಿಯುವ ನೀರು ಹಾಗೂ ರಸ್ತೆ ಸೌಲಭ್ಯ ಹಾಗೂ ಇನ್ನಿತರ ಸಾರ್ವಜನಿಕ ಸೇವೆಗಳನ್ನು ಅಚ್ಚುಕಟ್ಟಾಗಿ ಒದಗಿಸಿದ್ದೇವೆ. ಈ ಪುರಸ್ಕಾರಕ್ಕೆ ಕಾರಣಕರ್ತರಾದ ಗ್ರಾಮ ಪಂಚಾಯಿತಿಯ ಎಲ್ಲಾ ಅಭಿನಂದನೆಗಳು ಸಲ್ಲಿಸುತ್ತೇನೆ
> –ಆನಂದ ಕುಮಾರ್ ಎಸ್ ದೊಡ್ಮನಿ ಪಂ.ಅಭಿವೃದ್ಧಿ ಅಧಿಕಾರಿ

ಒಟ್ಟಿನಲ್ಲಿ ಯಡ್ರಮಿ ತಾಲ್ಲೂಕಿನಲ್ಲಿ ನಮ್ಮ ಪಂಚಾಯಿತಿ ಒಂದೇ ಗಾಂಧಿ ಗ್ರಾಮ ಪುರಸ್ಕಾರಕ್ಕೆ ಆಯ್ಕೆಯಾದದ್ದು ಸಂತಸ ತಂದಿದೆ ಎಂದು ಹೇಳುತ್ತಾರೆ.

# ಒಳಮೀಸಲಾತಿ ಜಾರಿಗಾಗಿ ಅ.03ರಂದು ಬಂದ್

• **ಉದಯವಾಹಿನಿ, ಸಿಂಧನೂರು**

ಒಳಮೀಸಲಾತಿ ನೀತಿ. ಸಂವಿಧಾನದ ಸ್ಪೂರ್ತಿ ಸುಪ್ರೀಂ ಕೋರ್ಟ್ ತೀರ್ಪಿನಂತೆ ಸುಗ್ರೀವಾಜ್ಞೆ ಮೂಲಕ ಯಾವುದೇ ಕಾರಣಕ್ಕೂ ಅಲ್ಲಗಳೆಯುವಂತಿಲ್ಲ ಎಂದು ಅ 03 ರಂದು ಸಿಂಧನೂರು ಬಂದ್ ಮಾಡಲಾಗುತ್ತದೆ. ಎಂದು ಹಿರಿಯ ಹೋರಾಟಗಾರ ಭೋವ್ವ ಚಾರ್ಯ ಹೇಳಿದರು.

ನಗರದ ಸುದ್ದಿ ಗೋಷ್ಠಿಯಲ್ಲಿ ಮಾತನಾಡಿದ ಅವರು ಸ್ವಾತಂತ್ರ್ಯದ ನಂತರದ ಏಳೂವರೆ ದಶಕಗಳ ಮೀಸಲಾತಿ ಅನುಷ್ಠಾನ ಹಿಂದುಳಿದ ಸಮುದಾಯಗಳಿಗೆ ಎಷ್ಟರ ಮಟ್ಟಿಗೆ ಸಿಕ್ಕಿದೆ ಎಂಬುದು ಅರಿತುಕೊಳ್ಳಲು ಮತ್ತೊಂದು ಆಯೋಗದ ಅವಶ್ಯಕತೆಯಿಲ್ಲ ಎಂದು ಆಗ್ರಹಿಸಿದರು. ಕೆನೆಪದರ್ ಸಲಹೆ ಮತರೂ– ನಿಖರ ದತ್ತಾಂಶ ಅತೀ ಅಗತ್ಯ ಜಾರಿಗೆ ಬೇಕಿರುವುದು ನಿಮ್ಮ ಸಮಯ ಚಿತ್ತ ಸರ್ವೋಚ್ಚ ನ್ಯಾಯಾಲಯವು ಸಾಮಾಜಿಕ ನ್ಯಾಯಕ್ಕೆ ಇರಬೇಕಾದ ಎಲ್ಲಾ ಮಿಥ್ಯಗಳನ್ನು ದೊರೀಕರಿಸಿದೆ. ಸಂಸತ್ತಿಗಿರವ ಸಂವಿಧಾನದ ಪರಿಚ್ಛೇದ 341(3)ರೈ ಅನಿವಾರ್ಯತೆಯ ಬಗ್ಗೆ ಅತ್ಯಂತ ಖಚಿತವಾದ ಸ್ಪಷ್ಟತೆಯನ್ನು ಘೋಷಿಸಿದೆ ಎಂದು ಹೇಳಿದರು. ನ್ಯಾಯ ಮೂರ್ತಿ ಎಂ.ಜೆ. ಸದಾಶಿವ ಆಯೋಗದ ರಚನೆಗಾಗಿ ಹತ್ತು ವರ್ಷ ರಚನೆಯಾದ ಆಯೋಗದ ಅನುದಾನಕ್ಕಾಗಿ



ಉದಯವಾಹಿನಿ ಚಿತ್ರ

ಹತ್ತು ವರ್ಷ ಸಿದ್ದಪಡಿಸಿದ ವರದಿಯ ಸಲ್ಲಿಕೆಯಾಗಿ ಹಲವು ಸುತ್ತಿನ ಅವಿಶ್ರಾಂತ ಹೋರಾಟ ನಡಿಸಿದ ಸಮುದಾಯಗಳು ಘನ ಸರ್ವೋಚ್ಚ ನ್ಯಾಯಾಲಯದ ಸ್ಪಷ್ಟ ತೀರ್ಪಿನ ನಂತರವೂ ಅನುಷ್ಠಾನಕ್ಕಾಗಿ ಮತ್ತೊಂದು ಸುತ್ತಿನ ಹೋರಾಟವನ್ನು ಕೈ ಗೊಳ್ಳುವ ಅನಿವಾರ್ಯತೆಗೆ ಅವಕಾಶ ಕಲ್ಪಿಸುವುದು. ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ರವರು ಬಯಸಿದ ಸಾಮಾಜಿಕ ನ್ಯಾಯಕ್ಕೆ ಅಗೌರವ ತೋರಿಸಿದಂತೆ ಆಗುತ್ತದೆ ಆದ್ದರಿಂದ ಒಳ ಮೀಸಲಾತಿ ನೀತಿ ಜಾರಿಗೊಳಿಸಬೇಕು ಎಂದು ಅ .03ರಂದು ಸಿಂಧನೂರು ಬಂದ್ ಕರೆ ನೀಡಲಾಗಿದೆ ಮಾದಿಗ ಸಮುದಾಯದ ಮುಖಂಡರ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು. ಮಾದಿಗ ಸಮುದಾಯದ ಹಿರಿಯ ಮುಖಂಡರು ಯಮನಪ್ಪ ಬಿಎಸ್‌ಎನ್‌ಎಲ್ ಆರ್ ಆಬ್ರೋಶ. ಅಲಂಪ್ರಭು ಪೂಜಾರಿ. ನಾಗರಾಜ್ ಪೂಜಾರಿ. ಮರಿಯಪ್ಪ. ಜಾಲಿಹಾಳ. ರಾಮಣ್ಣ ಸಾಸಲಮರಿ. ಅಮರೇಶ ಗಿರಜಾಲಿ ಇದ್ದರು.

# ದಲಿತ ದೌರ್ಜನ್ಯ ಪ್ರಕರಣದಲ್ಲಿ ಸಂತ್ರಸ್ತರಿಗೆ ನ್ಯಾಯ ದೊರಕಬೇಕು


## • ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಸಮುದಾಯದ ಜನರ ಕುಂದು ಕೊರತೆ ಸಭೆ

• **ಉದಯವಾಹಿನಿ, ಇಂಡಿ**

ತಾಲ್ಲೂಕಿನ ಪ್ರತಿಯೊಂದು ಗ್ರಾಮಗಳಲ್ಲಿ ಕಾನೂನು ಅರಿವು ಮೂಡಿಸಲು ಕಾರ್ಯಕ್ರಮ, ಸೂಚನಾ ನಾಮಫಲಕ ಅಳವಡಿಸಬೇಕು, ಇಂಡಿ ಪಟ್ಟಣದಲ್ಲಿ ನಡೆದ ತಾಲ್ಲೂಕ ಪೊಲೀಸ್ ಉಪ ವಿಭಾಗಮಟ್ಟದ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಸಮುದಾಯದ ಜನರ ಕುಂದು ಕೊರತೆ ಸಭೆಯಲ್ಲಿ ಮಾತನಾಡಿದ ದಲಿತ ಮುಖಂಡರು ದೌರ್ಜನ್ಯ ಸಮಿತಿ ಸದಸ್ಯರು ಶೀವು ಮೂರಮಾನ ಅ ವರು ಸಾರ್ವಜನಿಕರಿಂದ ಕೇಸ್‌ಗಳನ್ನು ದಾಖಲಿಸಿಕೊಂಡು ಸೂಕ್ತ ತನಿಖೆಯಾಗಿ ಆರೋಪಿಗಳಿಗೆ ಬಂಧಿಸುವಂತ ಕೆಲಸಗಳು ಆಗಬೇಕು.ಹೀಗಾದರೆ ಆರೋಪಿಗಳಿಗೆ ಬಂಧಿಸುತ್ತಾರೆನ್ನುವ ಅರಿವಾಗುತ್ತೆ ಎಂದರು.

ಪ್ರತಿ ಪೊಲೀಸ್ ಠಾಣೆಯಲ್ಲಿ ವರ್ಷಕ್ಕೆ ಮೂರು ಬಾರಿ ಯಾದರೂ ದಲಿತರ ಕುಂದುಕೊರತೆ ಸಭೆ ಕರೆಯಬೇಕು. ಇದರಿಂದ ದಲಿತರ ಸಮಸ್ಯೆಗಳನ್ನು ತಮ್ಮ ಬಳಿ ಮುಕ್ತವಾಗಿ ಹೇಳಿಕೊಳ್ಳಲು ಅನುಕೂಲವಾಗುತ್ತದೆ ಎಂದು ಹೇಳಿದರು.

ದಲಿತರ ಕುಂದುಕೊರತೆಯಲ್ಲಿ ಚರ್ಚಿಸಿದ ವಿಷಯಗಳು ಪರಿಶೀಲಿಸಿ ಸಮಸ್ಯೆ ಪರಿಹರಿಸಬೇಕು. ಪ್ರತಿ ಸಭೆಯಲ್ಲಿ ಇವೆ



ಉದಯವಾಹಿನಿ ಚಿತ್ರ

**ವಿವಿಧ ಇಲಾಖೆ ಸ್ಪಂದಿಸಬೇಕು**

ವಿಷಯಗಳು ಚರ್ಚೆಯಾಗದೇ,ಬರುವ ಸಭೆಯಲ್ಲಿ ಹಿಂದಿನ ಸಭೆಯಲ್ಲಿ ಚರ್ಚಿಸಿದ ವಿಷಯಗಳು ಪರಿಹಾರ ಆಗಬೇಕು ಎಂದು ಮನವಿ ಮಾಡಿದರು.

ಡಿಎಸ್‌ಎಸ್ ಜಿಲ್ಲಾ ಸಂಚಾಲಕ ವಿನಾಯಕ ಗುಣಸಾಗರ, ತಾಲ್ಲೂಕು ಅಧ್ಯಕ್ಷ ಶಿವಾನಂದ ಮೂರಮನ, ಸಿಂದಗಿ ತಾಲ್ಲೂಕ ದಲಿತ ಮುಖಂಡ ಚಂದ್ರಕಾಂತ ಸಿಂಗೆ ಮಾತನಾಡಿದರು. ಎಸ್ಪಿ ರಿಷಿಕೇಶ ಸೊನಾವನೆ ದಲಿತ ಮುಖಂಡರ ಸಮಸ್ಯೆಗಳನ್ನು ಆಲಿಸಿ,ತಮ್ಮ ಬೇಡಿಕೆಗಳನ್ನು ಈಡೇರಿಸುವುದಾಗಿ ತಿಳಿಸಿದರು.

ಡಿ ವೈಎಸ್‌ಪಿ ಜಗದೀಶ, ಸಿ ಪಿ ಐ ಎಮ್ ಎಮ್.ಡಪ್ಪಿನ ಸೇರಿದಂತೆ ಉಪ ವಿಭಾಗಮಟ್ಟದ ಪಿ ಎಸ್ ಐ ಸಭೆಯಲ್ಲಿ ಇದ್ದರು. ಧರೆಪ್ಪ ಮಂದೋಲಿ, ಪೀರಪ್ಪ ಕಟ್ಟಿಮನಿ,ಉತ್ತಮ ಕಟ್ಟಿಮನಿ, ಬಾಬುರಾವ ಗುಡಮಿ ಸೇರಿದಂತೆ ಇಂಡಿ,ಸಿಂದಗಿ, ದೇವರ ಹಿಪ್ಪರಗಿ,ಕಲಕೇರಿ, ಚಡಚಣ ಭಾಗದ ದಲಿತ ಮುಖಂಡರು ಸಭೆಯಲ್ಲಿ ಇದ್ದರು.

> ದಲಿತ ದೌರ್ಜನ್ಯ ಪ್ರಕರಣದಲ್ಲಿ ಸಂತ್ರಸ್ತರಿಗೆ ನ್ಯಾಯೋಚಿತವಾಗಿ ಪರಿಹಾರ ಸಿಗಬೇಕು,ದಲಿತ ದೌರ್ಜನ್ಯ ಪ್ರಕರಣಗಳಲ್ಲಿ ಪೊಲೀಸರಿಂದ ದಲಿತರಿಗೆ ನ್ಯಾಯ ದೊರಕುವ ಕೆಲಸವಾಗಬೇಕು . ಇಂತಹ ಘಟನೆಗಳಿಂದಾಗಿ ನಿಜವಾಗಿ ದೌರ್ಜನ್ಯ, ಅನ್ಯಾಯಕ್ಕೊಳಗಾದ ದಲಿತರಿಗೆ ಸಮಸ್ಯೆಯಾಗಬಾರದು
> –ಶಿವು ಮೂರಮಾನ, ದೌರ್ಜನ್ಯ ಸಮಿತಿ ಸದಸ್ಯ

> ಪರಿಶಿಷ್ಟ ಜಾತಿ ಹಾಗೂ ಸಮುದಾಯದವರ ಮೇಲಿನ ದೌರ್ಜನ್ಯ ಪ್ರಕರಣಗಳ ಬಗ್ಗೆ ಕ್ರಮ ಕೈಗೊಳ್ಳಬೇಕು. ಇತರೆ ಸಮಸ್ಯೆಗಳ ಬಗ್ಗೆಯೂ ಗಮನಹರಿಸಬೇಕು ಎಂದರು, ಪರಿಶಿಷ್ಟ ಸಮುದಾಯದವರ ಪ್ರಕರಣದ ಬಗ್ಗೆ ವಿವಿಧ ಇಲಾಖೆ ಸ್ಪಂದಿಸಬೇಕು –ವಿನಾಯಕ ಗುಣಸಾಗರ
> ಡಿಎಸ್‌ಎಸ್ ಜಿಲ್ಲಾ ಸಂಚಾಲಕ

# ಭೂ ರಹಿತ ಯೋಜನೆ ದಲ್ಲಾಳಿಗಳ ಪಾಲು

• **ಉದಯವಾಹಿನಿ, ಶಹಾಪುರ**

ತಾಲ್ಲೂಕಿನ ಅಣಬಿ ಗ್ರಾಮದ ಭೂರಹಿತ ಯೋಜನೆ ಅಡಿಯಲ್ಲಿ ಕೃಷಿ ಜಮೀನು ಪಡೆದ ರೈತರಿಗೆ ಕೃಷಿಗೆ ಯೋಗ್ಯವಲ್ಲದ ಜಮೀನು ಹಂಚಿಕೆ ಮಾಡಿರುವ ಅಂಶವು ಈಚೆಗೆ ಜಿಲ್ಲಾಧಿಕಾರಿ ಅವರು ಲೋಕಾಯುಕ್ತರಿಗೆ ಬರೆದ ಪತ್ರದಿಂದ ಬಹಿರಂಗವಾಗಿದೆ.

ತಾಲ್ಲೂಕಿನ ಅಣಬಿ ಗ್ರಾಮದ ಸರ್ವೇ ನಂಬರ್ 244/2ರಲ್ಲಿ 18.33 ಗುಂಟೆ ಜಮೀನು 19 ಫಲಾನುಭವಿಗಳಿಗೆ ಡಾ.ಅಂಬೇಡ್ಕರ್ ಅಭಿವೃದ್ಧಿ ನಿಗಮವು ಭೂರಹಿತ ಯೋಜನೆ ಅಡಿಯಲ್ಲಿ ಜಮೀನು ಮಂಜೂರಾತಿಯಾಗಿತ್ತು.

ಅದರಂತೆ ಫಲಾನುಭವಿಗಳು ತಮಗೆ ನೀಡಿದ ಜಮೀನು ಸಾಗುವಳಿ ಮಾಡಲು ತೆರಳಿದರೆ ಆಘಾತ ಕಾದಿತ್ತು. ಕೃಷಿಗೆ ಯೋಗ್ಯವಲ್ಲದ ಜಮೀನನ್ನು ದಲ್ಲಾಳಿಗಳು ಹಾಗೂ ಡಾ.ಅಂಬೇಡ್ಕರ್ ಅಭಿವೃದ್ಧಿ ನಿಗಮದ ಅಧಿಕಾರಿಗಳು ಶಾಮೀಲಾಗಿ ಅಕ್ರಮ ಎಸಗಿದ್ದಾರೆ. ತನಿಖೆ ನಡೆಸುವಂತೆ ಎ.ನಾರಾಯಣಸ್ವಾಮಿ ಯುವ ಸೇನೆರಾಜ್ಯ ಘಟಕದ ಅಧ್ಯಕ್ಷ ಶಿವಕುಮಾರ ದೊಡ್ಮನಿ ಲೋಕಾಯುಕ್ತರಿಗೆ 2023 ಫೆಬ್ರವರಿ 21ರಂದು ದೂರು ನೀಡಿದ್ದರು. ಅದರಂತೆ ಲೋಕಾಯುಯಕ್ತರು ಜಿಲ್ಲಾಧಿಕಾರಿಗೆ ಪತ್ರ ಬರೆದು ಸಮಗ್ರವಾದ ವರದಿ ಸಲ್ಲಿಸುವಂತೆ ಸೂಚಿಸಿದ್ದರು.



ಉದಯವಾಹಿನಿ ಚಿತ್ರ

ಕಳೆದ ಜು.31ರಂದು ಕಂದಾಯ ಹಾಗೂ ತಾಲ್ಲೂಕು ಭೂಮಾಪಕರು ಸ್ಥಾನಿಕ ಸ್ಥಳ ತನಿಖೆ ಕೈಗೊಂಡಿದ್ದು ಇರುತ್ತದೆ. ಅದರಲ್ಲಿ ಅಣಬಿ ಗ್ರಾಮದ ಸರ್ವೇ ನಂಬರ್ 244/2ರಲ್ಲಿ ಒಟ್ಟು 18.33 ಜಮೀನು ಇದ್ದು ಅದರಲ್ಲಿ 19 ಹಿಸ್ಸಾಗಳು ಇವೆ. ಅದರಲ್ಲಿ 8 ಎಕರೆ ಜಮೀನು ಸಾಗುವಳಿಗೆ ಯೋಗ್ಯವಿದೆ.

ಇನ್ನುಳಿದ 9.33 ಗುಂಟೆ ಜಮೀನು ಕೃಷಿಗೆ ಯೋಗ್ಯವಾಗಿರುವುದಿಲ್ಲ. ಹಳ್ಳ ನೀರು ಹರಿಯುತ್ತದೆ. ಜಮೀನು ಕಲ್ಲು ಬಂಡೆಗಳಿಂದ ಕೂಡಿರುತ್ತದೆ. ಇನ್ನುಳಿದ 1 ಎಕರೆ ಜಮೀನು ಪ್ರದೇಶ ರಾಷ್ಟ್ರೀಯ ಹೆದ್ದಾರಿ ಕಾಮಗಾರಿ ನಡೆದಿರುತ್ತದೆ ಎಂದು ತಿಳಿದು ಬಂದಿದೆ ಎಂದು ಜಿಲ್ಲಾಧಿಕಾರಿ ಅವರು ಲೋಕಾಯುಕ್ತರಿಗೆ ನೀಡಿದ ವರದಿಯಲ್ಲಿ ಸ್ಪಷ್ಟಪಡಿಸಿದ್ದಾರೆ.

> ರೈತರಿಗೆ ವಂಚನೆ ಮಾಡಿದ ದಲ್ಲಾಳಿಗಳು ಹಾಗೂ ಡಾ.ಅಂಬೇಡ್ಕರ್ ಅಭಿವೃದ್ಧಿ ನಿಗಮದ ಅಧಿಕಾರಿಗಳ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಲು. ವಂಚನೆಗೆ ಒಳಗಾದ ರೈತರಿಗೆ ಪರಿಹಾರ ನೀಡಬೇಕು –ಎ.ನಾರಾಯಣಸ್ವಾಮಿ
> ಯುವ ಸೇನೆರಾಜ್ಯ ಘಟಕದ ಅಧ್ಯಕ್ಷ

ಶಿವಕುಮಾರ ದೊಡ್ಮನಿ ರಾಜ್ಯ ಘಟಕದ ಅಧ್ಯಕ್ಷ ಎ.ನಾರಾಯಣಸ್ವಾಮಿ ಯುವ ಸೇನೆಭೂ ರಹಿತ ಯೋಜನೆ ಅಡಿಯಲ್ಲಿ ದಲ್ಲಾಳಿ ಹಾಗೂ ಡಾ.ಅಂಬೇಡ್ಕರ್ ನಿಗಮದ ಅಧಿಕಾರಿ ಶಾಮೀಲಾಗಿ ಕೃಷಿಗೆ ಯೋಗ್ಯವಲ್ಲದ ಜಮೀನು ನೀಡಿರುವುದು ಜಿಲ್ಲಾಧಿಕಾರಿ ಲೋಕಾಯುಕ್ತರಿಗೆ ಬರೆದ ಪತ್ರದಿಂದ ಬಹಿರಂಗವಾಗಿದೆ.

# 15 ಸಾವಿರ ಸರ್ಕಾರಿ ನೌಕರರು ಮನೆಗೆ, 6 ಸಚಿವರಿಗೂ ಗೇಟ್‌ಪಾಸ್

## ಐಎಂಎಫ್ ಷರತ್ತು ಪೂರೈಸಿ ಅನುದಾನ ಪಡೆದ ಪಾಕ್, ಆರ್ಥಿಕ ನೆರವಿನ ಪ್ಯಾಕೇಜ್ ನೀಡುವ ವೇಳೆ ಅಂತಾರಾಷ್ಟ್ರೀಯ ಹಣಕಾಸು ನಿಧಿಯಿಂದ ಷರತ್ತು

**ಇಸ್ಲಾಮಾಬಾದ್:** ತೀವ್ರ ಆರ್ಥಿಕ ಮುಗ್ಗಟ್ಟಿನಲ್ಲಿ ಸಿಲುಕಿರುವ ಪಾಕಿಸ್ತಾನ, 15 ಸಾವಿರ ಸರ್ಕಾರಿ ನೌಕರರನ್ನು ಕೆಲಸದಿಂದ ಕಿತ್ತು ಹಾಕಲು ತೀರ್ಮಾನಿಸಿದೆ. ಅಷ್ಟೇ ಅಲ್ಲ, ಪಾಕಿಸ್ತಾನ ಸರ್ಕಾರದ 6 ಸಚಿವರಿಗೂ ಗೇಟ್ ಪಾಸ್ ನೀಡಲಾಗಿದೆ. ಅಂತಾರಾಷ್ಟ್ರೀಯ ಹಣಕಾಸು ನಿಧಿ (ಐಎಂಎಫ್) ಪಾಕಿಸ್ತಾನಕ್ಕೆ ಆರ್ಥಿಕ ನೆರವು ನೀಡುವ ಜೊತೆಯಲ್ಲೇ ಸಾಕಷ್ಟು ಷರತ್ತುಗಳನ್ನು ವಿಧಿಸಿರುವ ಹಿನ್ನೆಲೆಯಲ್ಲಿ ಪಾಕಿಸ್ತಾನ ಸರ್ಕಾರ ಅನಿವಾರ್ಯವಾಗಿ ಈ ಕ್ರಮ ಕೈಗೊಂಡಿದೆ.

ಅಂತಾರಾಷ್ಟ್ರೀಯ ಹಣಕಾಸು ನಿಧಿ (ಐಎಂಎಫ್) ಪಾಕಿಸ್ತಾನಕ್ಕೆ 24ನೇ ಬಾರಿ ತುರ್ತು ಆರ್ಥಿಕ ನೆರವು ನೀಡಿದೆ. ಇಷ್ಟೊಂದು ಬಾರಿ ವಿಶ್ವದಲ್ಲೇ ಯಾವುದೇ ದೇಶವೂ ಆರ್ಥಿಕ ನೆರವು ಪಡೆದಿಲ್ಲ. ಒಟ್ಟು 7 ಬಿಲಿಯನ್ ಅಮೆರಿಕ ಡಾಲರ್ ಬೇಲ್ ಔಟ್ ಪ್ಯಾಕೇಜ್ ಅನ್ನು ಅಂತಾರಾಷ್ಟ್ರೀಯ ಹಣಕಾಸು ನಿಧಿ ಪಾಕಿಸ್ತಾನಕ್ಕೆ ಕಳೆದ ವಾರ ಘೋಷಣೆ ಮಾಡಿತ್ತು. ಪಾಕಿಸ್ತಾನ ಸರ್ಕಾರ ಅಂತಾರಾಷ್ಟ್ರೀಯ ಹಣಕಾಸು ನಿಧಿ ಜೊತೆ ಒಪ್ಪಂದಕ್ಕೆ ಸಹಿ ಹಾಕಿದ ಕೂಡಲೇ ಈ ಕುರಿತಾಗಿ ಮಾಹಿತಿ ನೀಡಿದ್ದ ಪಾಕಿಸ್ತಾನ ಪ್ರಧಾನ ಮಂತ್ರಿ ಶೆಹಬಾಜ್ ಷರೀಫ್, ಪಾಕಿಸ್ತಾನ ಸರ್ಕಾರವು ಅಂತಾರಾಷ್ಟ್ರೀಯ ಹಣಕಾಸು ನಿಧಿಯಿಂದ ಪಡೆಯ ಲಿರುವ ಕೊನೆಯ ಆರ್ಥಿಕ ನೆರವು ಇದಾಗಲಿದೆ ಎಂದು ಘೋಷಿಸಿದರು. ಪಾಕಿಸ್ತಾನ ಇತಿಹಾಸದಲ್ಲೇ ಇದು ಕೊನೆಯ ಆರ್ಥಿಕ ನೆರವು ಎಂದ ಶೆಹಬಾಜ್ ಷರೀಫ್, ಪಾಕಿಸ್ತಾನ ದೇಶ ಆರ್ಥಿಕ ಪ್ರಗತಿಯ ಹಾದಿ ಹಿಡಿಯಲು ಈ ಹಣಕಾಸು ನೆರವು ಸಹಾಯಕ ಆಗಲಿದೆ ಎಂದು ಹೇಳಿದರು.



**ಸಾಲದ ಮೇಲಿನ ಬಡ್ಡಿ ದರ ಹೆಚ್ಚಳ**

**ಅಂತಾರಾಷ್ಟ್ರೀಯ ಹಣಕಾಸು ನಿಧಿ (ಐಎಂಎಫ್) ಪಾಕಿಸ್ತಾನಕ್ಕೆ ಆರ್ಥಿಕ ನೆರವು ನೀಡುವ ವೇಳೆ ವಿಪರೀತ ಷರತ್ತುಗಳನ್ನು ವಿಧಿಸಿತ್ತು. ಆಡಳಿತ ಯಂತ್ರದ ಭಾರ ಕಡಿಮೆ ಮಾಡಿಕೊಳ್ಳುವಂತೆ ತಾಕೀತು ಮಾಡಿತ್ತು. ಹೆಚ್ಚಿನ ತೆರಿಗೆ ವಿಧಿಸಲು ಸೂಚಿಸಿತ್ತು. ಜೊತೆಯಲ್ಲೇ ಸಾಲದ ಮೇಲಿನ ಬಡ್ಡಿ ದರ ಹೆಚ್ಚಳಕ್ಕೂ ಕಟ್ಟಾಜ್ಞೆ ಹೊರಡಿಸಿತ್ತು. ಹೀಗಾಗಿ, ಪಾಕಿಸ್ತಾನದಲ್ಲಿ 15 ಸಾವಿರ ಸರ್ಕಾರಿ ನೌಕರರು ಕೆಲಸ ಕಳೆದುಕೊಂಡಿದ್ದಾರೆ. 6 ಸಚಿವರೂ ಕೂಡಾ ಪಟ್ಟ ಕಳೆದುಕೊಂಡು ಮನೆಗೆ ಹೋಗುವಂತಾಗಿದೆ.**

**ಈ ಕುರಿತು ಮಾಹಿತಿ ನೀಡಿರುವ ಪಾಕಿಸ್ತಾನದ ಹಣಕಾಸು ಸಚಿವ ಮುಹಮ್ಮದ್ ಔರಂಗಜೇಬ್, ಪಾಕಿಸ್ತಾನ ದೇಶವು ಜಿ - 20 ದೇಶಗಳ ಸಾಲಿಗೆ ಸೇರಬೇಕೆಂಬ ಬಯಕೆ ಇದೆ. ವಿಶ್ವದಲ್ಲೇ ಅತ್ಯಂತ ಹೆಚ್ಚು ಆರ್ಥಿಕತೆ ಹೊಂದಿರುವ 20 ದೇಶಗಳ ಪಟ್ಟಿಯಲ್ಲಿ ಪಾಕಿಸ್ತಾನ ಸೇರುವಂತಾಗಲು ಶ್ರಮ ಪಡಬೇಕಿದೆ ಎಂದು ಹೇಳಿದರು.**


ಹಾಗೆ ನೋಡಿದರೆ 2023ರಲ್ಲಿ ಪಾಕಿಸ್ತಾನ ಸರ್ಕಾರ ಅಂತಾರಾಷ್ಟ್ರೀಯ ಹಣಕಾಸು ನಿಧಿಯಿಂದ ಆರ್ಥಿಕ ನೆರವು ಪಡೆದ ಸಂದರ್ಭದಲ್ಲೂ ಶೆಹಬಾಜ್ ಷರೀಫ್ ಇದೇ ಮಾತನ್ನು ಹೇಳಿದ್ದರು. ಇನ್ನೆಂದೂ ಅಂತಾರಾಷ್ಟ್ರೀಯ ಹಣಕಾಸು ನಿಧಿಯಿಂದ ಸಾಲ ಪಡೆಯೋದಿಲ್ಲ ಎಂದಿದ್ದರು. ಆದರೆ, ಕೆಲವೇ ತಿಂಗಳಲ್ಲಿ ಮತ್ತೆ ಭಿಕ್ಷಾ ಪಾತ್ರೆ ಹಿಡಿದು ಐಎಂಎಫ್ ಮುಂದೆ ನಿಲ್ಲಬೇಕಾಯಿತು. ಇದೀಗ ಐಎಂಎಫ್ ವಿಧಿಸಿರುವ ಷರತ್ತಿನ ಅನ್ವಯ 15 ಸಾವಿರ ಸರ್ಕಾರಿ ನೌಕರರನ್ನು ಮನೆಗೆ ಕಳುಹಿಸಿರುವ ಪಾಕಿಸ್ತಾನ ಸರ್ಕಾರ, ತನ್ನ ಸಚಿವಾಲಯದ 6 ಸಚಿವರಿಗೂ ಗೇಟ್ ಪಾಸ್ ಕೊಟ್ಟಿದೆ. ಅಷ್ಟೇ ಅಲ್ಲ, ಇನ್ನೆರಡು ಸಚಿವ ಖಾತೆಗಳನ್ನು ವಿಲೀನ ಮಾಡಿದೆ.

ಆದರೆ ಪಾಕಿಸ್ತಾನ ಸರ್ಕಾರಕ್ಕೆ ಆರ್ಥಿಕಾಭಿವೃದ್ಧಿಯ ಹಾದಿ ತುಂಬಾನೇ ಕಠಿಣವಾಗಿದೆ. ಏಕೆಂದರೆ ಆರ್ಥಿಕ ನೆರವಿನ ಪ್ಯಾಕೇಜ್ ನೀಡುವ ವೇಳೆ ಅಂತಾರಾಷ್ಟ್ರೀಯ ಹಣಕಾಸು ನಿಧಿ (ಐಎಂಎಫ್) ಹಲವು ಷರತ್ತುಗಳನ್ನು ವಿಧಿಸಿದೆ. ಸಬ್ಸಿಡಿ ರದ್ದತಿ, ತೆರಿಗೆ ಏರಿಕೆ, ಸಾಲದ ಮೇಲಿನ ಬಡ್ಡಿ ದರ ಹೆಚ್ಚಳ, ಸಾಲ ನೀಡಿಕೆಗೆ ಹಲವು ಷರತ್ತು.. ಹೀಗೆ ಲೆಕ್ಕವಿಲ್ಲದಷ್ಟು ಷರತ್ತುಗಳು ಅಂತಾರಾಷ್ಟ್ರೀಯ ಹಣಕಾಸು ನಿಧಿ (ಐಎಂಎಫ್) ಪಟ್ಟಿಯಲ್ಲಿ ಇದೆ.

## ಲೆಬನಾನ್‌ನಲ್ಲಿ ಶಿಯಾ-ಸುನ್ನಿ ಸಂಘರ್ಷ, ರಕ್ತಪಾತ

**ಲೆಬನಾನ್:** ಬೈರುತ್‌ನಲ್ಲಿ ಹಿಜ್ಬುಲ್ ನಾಯಕ ಹಸನ್ ಹತ್ಯೆ ನಂತರ ದೇಶದಲ್ಲಿ ಜನಾಂಗೀಯ ಹಿಂಸಾಚಾರ ನಡೆದಿದ್ದು, ಕಂಡಕಂಡಲ್ಲಿ ಜನರನ್ನು ಕೊಲ್ಲಲಾಗುತ್ತಿದೆ. ಸುನಿ ಮುಸ್ಲಿಂ ಸಮುದಾಯ ಈಗ ಹಿಜ್ಬುಲ್ ಬೆಂಬಲಿಗರನ್ನು ನಡುರಸ್ತೆಯಲ್ಲೇ ಗುಂಡು ಹಾರಿಸಿ ಮಾರಕಾಸ್ತ್ರಗಳಿಂದ ಕೊಚ್ಚಿ ಕೊಲೆ ಮಾಡುತ್ತಿದ್ದಾರೆ. ದೇಶದಲ್ಲಿ ಹರಾಜುಕತೆ ಸೃಷ್ಟಿಯಾಗಿದ್ದು, ಹಲವಾರು ಮನೆಗಳಿಗೆ ಬೆಂಕಿ ಹಚ್ಚಲಾಗಿದೆ. ಶಸ್ತ್ರಾಸ್ತ್ರಗಳನ್ನು ಹಿಡಿದು ರಸ್ತೆಯಲ್ಲಿ ಹಿಜ್ಬುಲ್ ಬೆಂಬಲಿಗರನ್ನು ಕಂಡಕಂಡಲ್ಲಿ ಹೊಡೆದು ಹಾಕಿ ರಕ್ತದ ಹೊಳೆ ಹರಿಸಿದ್ದಾರೆ. ಈಗಾಗಲೇ ಹಿಜ್ಬುಲ್‌ನ ಉಗ್ರರನ್ನು ಸದೆಬಡೆಯದೆ ವಿರಮಿಸುವುದಿಲ್ಲ ಎಂದು ಶಪತಮಾಡುವ ನಡುವೆಯೇ ದೇಶದಲ್ಲಿ ಹಿಂಸಾಚಾರ ಉಲ್ಬಣಗೊಂಡಿದ್ದು, ನೂರಾರು ಮಂದಿ ಬಲಿಯಾಗಿದ್ದಾರೆ.

ಹಲವರು ಹಿಜ್ಬುಲ್ ಸಮುದಾಯದವರು ಜೀವ ಭಯದಲ್ಲಿ ದೇಶವನ್ನು ತೊರೆದು ನೆರೆಯ ರಾಷ್ಟ್ರಗಳಿಗೆ ಫಲಾಯನ ಮಾಡುತ್ತಿದ್ದಾರೆ. ಲೆಬ್ನಾನ್‌ನ ಹಲವು ನಗರಗಳು ಈಗ ಹಿಂಸಾಚಾರ ನಡೆಯುತ್ತಿದ್ದು, ಇದನ್ನು ತಡೆಯಲು ಸಾಧ್ಯವಾಗದಂತ ಪರಿಸ್ಥಿತಿ ನಿರ್ಮಾಣವಾಗುತ್ತಿದೆ. ಹಲವರು ಬೃಹತ್ ಕಟ್ಟಡಗಳನ್ನು ಕ್ಷಿಪಣಿ ಮೂಲಕ ಇಸ್ರೇಲ್ ವಾಯುಪಡೆ ಹೊಡೆದುರುಳಿಸಲಾಗುತ್ತಿದ್ದು, ಒಟ್ಟಾರೆ ಲೆಬ್ನಾನ್ ಯುದ್ಧ ಪೀಡಿತ ರಾಷ್ಟ್ರವಾಗಿ ಮಾರ್ಪಟ್ಟಿದೆ.



ಮಹಿಳೆ ಮಕ್ಕಳನ್ನು ನೋಡದೆ ಹಿಜ್ಬುಲ್ ಸಮುದಾಯದ ಮಾರಣ ಹೋಮವೇ ನಡೆಯುತ್ತಿದೆ. ಮಧ್ಯ ಪ್ರಾಚ್ಚದಲ್ಲಿ ಈಗ ಸುನಿ, ಶಿಯ ನಡುವೆ ಏರ್ಪಟ್ಟಿರುವ ಈ ಸಂಘರ್ಷ ಪಕ್ಕ ದ ರಾಷ್ಟ್ರಗಳಿಗೂ ಹಬ್ಬುವ ಸಾಧ್ಯತೆ ಇದೆ. ಪಾಕಿಸ್ತಾನ್, ಆಫ್ಘಾನಿಸ್ತಾನ್ ಗಡಿಗಳಲ್ಲೂ ಕೂಡ ಹಲವು ದಿನಗಳಿಂದ ಸಂಘರ್ಷ ನಡೆಯುತ್ತಿದ್ದು, ಅಲ್ಲೂ ಕೂಡ ಹಲವರು ಬಲಿಯಾಗಿದ್ದಾರೆ.

## ನೇಪಾಳ ಪ್ರವಾಹಕ್ಕೆ 200ಕ್ಕೂ ಹೆಚ್ಚು ಮಂದಿ ಬಲಿ

**ಕಠ್ಮಂಡು:** ನೇಪಾಳದಾದ್ಯಂತ ಸುರಿಯುತ್ತಿರುವ ಭಾರಿ ಮಳೆಯಿಂದ ಉಂಟಾಗಿರುವ ಪ್ರವಾಹ ಮತ್ತು ಭೂಕುಸಿತದಿಂದ ಸಾವನ್ನಪ್ಪಿದವರ ಸಂಖ್ಯೆ 200 ಕ್ಕೆ ತಲುಪಿದೆ, ಕನಿಷ್ಠ 30 ಜನರು ಇನ್ನೂ ನಾಪತ್ತೆಯಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಕಳೆದ ಶುಕ್ರವಾರದಿಂದ ನಿರಂತರ ಮಳೆಯು ಪ್ರವಾಹ ಮತ್ತು ಭೂಕುಸಿತಗಳನ್ನು ಉಂಟುಮಾಡಿತು, ಹಿಮಾಲಯ ರಾಷ್ಟ್ರದಲ್ಲಿ ವಿನಾಶವನ್ನು ಉಂಟುಮಾಡಿದೆ.

ಸತತ ಮಳೆ, ಪ್ರವಾಹ, ಭೂಕುಸಿತ ಮತ್ತು ಪ್ರವಾಹ ದಲ್ಲಿ ಕನಿಷ್ಠ 192 ಜನರು ಸಾವನ್ನಪ್ಪಿದ್ದಾರೆ ಎಂದು ನೇಪಾಳ ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ. ದುರಂತದಲ್ಲಿ ದೇಶಾದ್ಯಂತ 94 ಮಂದಿ ಗಾಯಗೊಂಡಿದ್ದಾರೆ ಮತ್ತು 30 ಮಂದಿ ನಾಪತ್ತೆಯಾಗಿದ್ದಾರೆ ಎಂದು ಅವರು ಹೇಳಿದರು.

ಹುಡುಕಾಟ, ರಕ್ಷಣೆ, ಪರಿಹಾರ ಕಾರ್ಯಾಚರಣೆಗಳಿಗೆ ಸರ್ಕಾರ ಹೆಚ್ಚಿನ ಆದ್ಯತೆ ನೀಡಿದೆ ಎಂದು ಗಹ ಸಚಿವಾಲಯದ ವಕ್ತಾರ ರಿಷಿರಾಮ್ ತಿವಾರಿ ಉಲ್ಲೇಖಿಸಿ ಮೈ ರಿಪಬ್ಲಿಕಾ ನ್ಯೂ ಸ್ ಪೋರ್ಟಲ್ ವರದಿ ಮಾಡಿದೆ. ದೇಶಾದ್ಯಂತ ಭದ್ರತಾ ಏಜೆನ್ಸಿಗಳನ್ನು ಹುಡುಕಾಟ, ರಕ್ಷಣೆ ಮತ್ತು ಪರಿಹಾರ ಕಾರ್ಯಗಳಿಗಾಗಿ ನಿಯೋಜಿಸಲಾಗಿದೆ, ಇದುವರೆಗೆ 4,500 ಕ್ಕೂ ಹೆಚ್ಚು ವಿಪತ್ತು ಪೀಡಿತ ವ್ಯಕ್ತಿಗಳನ್ನು ರಕ್ಷಿಸಲಾಗಿದೆ ಎಂದು ವರದಿ ತಿಳಿಸಿದೆ.



ಸಂಚಾರವನ್ನು ಪುನರಾರಂಭಿಸಲು ಅಡಚಣೆಯಾಗಿರುವ ಹೆದ್ದಾರಿಗಳನ್ನು ತೆರವುಗೊಳಿಸಲು ಪ್ರಯತ್ನಗಳು ನಡೆಯುತ್ತಿವೆ ಎಂದು ತಿವಾರಿ ಹೇಳಿದರು. ಶುಕ್ರವಾರ ಮತ್ತು ಶನಿವಾರದಂದು ಪೂರ್ವ ಮತ್ತು ಮಧ್ಯ ನೇಪಾಳದ ದೊಡ್ಡ ಪ್ರದೇಶಗಳಲ್ಲಿ ನಿರಂತರ ಮಳೆ ಸುರಿದ ನಂತರ ಕಠಂಡುವಿನ ಮುಖ್ಯ ನದಿ ಬಾಗತಿ ಅಪಾಯದ ಮಟ್ಟಕ್ಕಿಂತ ಹೆಚ್ಚು ಹರಿಯುತ್ತಿದೆ ಎಂದು ಇಂಟರ್ನ್ಯಾಷನಲ್ ಸೆಂಟರ್ ಫಾರ್ ಇಂಟಿಗ್ರೇಟೆಡ್ ಮೌಂಟೇನ್ ಡೆವಲಪ್‌ಮೆಂಟ್ ಪ್ರಕಟಿಸಿದೆ.

**ಗಾಯಗೊಂಡವರು ಉಚಿತ ಚಿಕಿತ್ಸೆ ಪಡೆಯುತ್ತಿ ದ್ದರೆ, ಪ್ರವಾಹದಿಂದ ಸಂತ್ರಸ್ತರಾದ ಇತರರಿಗೆ ಆಹಾರ ಮತ್ತು ಇತರ ತುರ್ತು ಪರಿಹಾರ ಸಾಮಗ್ರಿಗಳನ್ನು ಒದ ಗಿಸಲಾಗಿದೆ. ರಾಷ್ಟ್ರದಾದ್ಯಂತ ಹಲವಾರು ರಸ್ತೆಗಳು ತೀವ್ರವಾಗಿ ಹಾನಿಗೊಳಗಾಗಿವೆ ಮತ್ತು ರಾಜಧಾನಿ ಕಠ್ಮಂಡುವಿಗೆ ಹೋಗುವ ಎಲ್ಲಾ ಮಾರ್ಗಗಳನ್ನು ಇನ್ನೂ ನಿರ್ಬಂಧಿಸಲಾಗಿದೆ, ಇದರಿಂದಾಗಿ ಸಾವಿರಾರು ಪ್ರಯಾಣಿಕರು ಸಿಲುಕಿಕೊಂಡಿದ್ದಾರೆ ಎಂದು ದಿ ಕಠಂಡು ಪೋಸ್ಟ್ ಪತ್ರಿಕೆ ವರದಿ ಮಾಡಿದೆ.**

## 7 ಹಿಜ್ಬುಲ್ಲಾ 'ಉಗ್ರ'ನಾಯಕರನ್ನು ಹೊಡೆದುರುಳಿಸಿದ ಇಸ್ರೇಲ್

**ಬೈರುತ್:** ಕೇವಲ ಒಂದು ವಾರದಲ್ಲೇ ಇಸ್ರೇಲಿ ಪಡೆಗಳು ಹಿಜ್ಬುಲ್ಲಾ ಉಗ್ರಗಾಮಿ ಸಂಘಟನೆಯ ಪ್ರಮುಖ ನಾಯಕ ಹಸನ್ ನಸ್ರುಲ್ಲಾ ಸೇರಿದಂತೆ ಏಳು ನಾಯಕರನ್ನು ಹತ್ಯೆ ಮಾಡುವಲ್ಲಿ ಯಶಸ್ವಿಯಾಗಿವೆ. ಇಸ್ರೇಲಿ ಅಧಿಕಾರಿಗಳು ಪ್ರಮುಖ ಮಿಲಿಟರಿ ಮತ್ತು ಗುಪ್ತಚರ ಪ್ರಗತಿಯನ್ನು ಆಚರಿಸಿದ್ದರಿಂದ ಈ ಕ್ರಮವು ಲೆಬನಾನ್ ಮತ್ತು ಮಧ್ಯಪ್ರಾಚ್ಯದ ಹೆಚ್ಚಿನ ಭಾಗವನ್ನು ಆಘಾತಕ್ಕೆ ಒಳಪಡಿಸಿದೆ. ಲೆಬನಾನ್‌ನಲ್ಲಿನ ಇತ್ತೀಚಿನ ಸ್ಟ್ರೈಕ್‌ಗಳು ಮತ್ತು ನಸ್ರಲ್ಲಾ ಹತ್ಯೆಯು ಮಧ್ಯಪ್ರಾಚ್ಯದಲ್ಲಿ ಈ ಬಾರಿ ಇಸ್ರೇಲ್ ಮತ್ತು ಹೆಜ್ಬೊಲ್ಲಾ ನಡುವಿನ ಯುದ್ಧದಲ್ಲಿ ಗಮನಾರ್ಹ ಉಲ್ಬಣವಾಗಿದೆ.

ಲೆಬನಾನ್‌ನ ಅತ್ಯಂತ ಶಕ್ತಿಶಾಲಿ ಮಿಲಿಟರಿ ಮತ್ತು ರಾಜಕೀಯ ಶಕ್ತಿಯು ಈಗ ತೀವ್ರ ಹೊಡೆತಗಳಿಂದ ಚೇತರಿಸಿಕೊಳ್ಳಲು ಪ್ರಯತ್ನಿಸುತ್ತಿದೆ, 1980 ರ ದಶಕದ ಆರಂಭದಲ್ಲಿ ಹೆಜ್ಬೊಲ್ಲಾಹ್ ಸ್ಥಾಪನೆಯಾದಾಗಿನಿಂದ ಅದರ ಭಾಗವಾಗಿರುವ ಪ್ರಮುಖ ಸದಸ್ಯರನ್ನು ಕಳೆದುಕೊಂಡಿದೆ. ದಕ್ಷಿಣ ಬೈರುತ್‌ನಲ್ಲಿ ಹಲವಾರು ಕಟ್ಟಡಗಳನ್ನು ನೆಲಸಮಗೊಳಿಸಿದ ವೈಮಾನಿಕ ದಾಳಿಯ ಸರಣಿಯಲ್ಲಿ ಕೊಲ್ಲಲ್ಪಟ್ಟ ನಸ್ರಲ್ಲಾ ಅವರಲ್ಲಿ ಪ್ರಮುಖರು.



ಇತರರು ಹೊರಗಿನ ಪ್ರಪಂಚದಲ್ಲಿ ಕಡಿಮೆ -ಪ್ರಸಿದ್ಧರಾಗಿದ್ದರು, ಆದರೆ ಹೆಜ್ಬೊಲ್ಲಾದ ಕಾರ್ಯಾಚರಣೆಗಳಿಗೆ ಇನ್ನೂ ಪ್ರಮುಖರಾಗಿದ್ದರು.

2011ರಲ್ಲಿ ಸಿರಿಯಾದ ದಂಗೆಯು ಅಂತರ್ಯುದ್ಧಕ್ಕೆ ತಿರುಗಿದ ನಂತರ, ಸಿರಿಯಾದ ಅಧ್ಯಕ್ಷ ಬಶರ್ ಅಸ್ಸಾದ್ ಅನ್ನು ಅಧಿಕಾರದಲ್ಲಿ ಇರಿಸುವಲ್ಲಿ ಹಿಜ್ಬುಲ್ಲಾ ಪ್ರಮುಖ ಪಾತ್ರ ವಹಿಸಿದರು.

### ಹಸನ್ ನಸ್ರಲ್ಲಾ

**1992 ರಿಂದ, ನಸ್ರುಲ್ಲಾ ಇಸ್ರೇಲ್‌ನೊಂದಿಗೆ ಹಲವಾರು ಯುದ್ಧಗಳ ಮೂಲಕ ಗುಂಪನ್ನು ಮುನ್ನಡೆಸಿದರು, ಲೆಬನಾನ್‌ನಲ್ಲಿ ಪಕ್ಷದ ಪ್ರಬಲ ಆಟಗಾರನಾಗಿ ರೂಪಾಂತರಗೊಳ್ಳುವುದನ್ನು ಮೇಲ್ವಿಚಾರಣೆ ಮಾಡಿದರು. ಹಿಜ್ಬುಲ್ಲಾ ಲೆಬನಾನ್‌ನ ರಾಜಕೀಯ ಕ್ಷೇತ್ರ ವನ್ನು ಪ್ರವೇಶಿಸಿದರು, ಪ್ರಾದೇಶಿಕ ಘರ್ಷಣೆ ಗಳಲ್ಲಿ ಭಾಗವಹಿಸಿದರು, ಅದು ಅದನ್ನು ಅತ್ಯಂತ ಶಕ್ತಿಶಾಲಿ ಅರೆಸೈನಿಕ ಪಡೆಯಾಯಿತು.**

ನಸ್ರಲ್ಲಾಹ್ ಅಡಿಯಲ್ಲಿ, ಇರಾಕ್ ಮತ್ತು ಯೆಮೆನ್‌ನಲ್ಲಿ ಸಹ ಇರಾನ್ ಬೆಂಬಲಿತ ಸಶಸ್ತ್ರ ಗುಂಪುಗಳ ಸಾಮರ್ಥ್ಯಗಳನ್ನು ಅಭಿವದ್ಧಿಪಡಿಸಲು ಸಹಾಯ ಮಾಡುತ್ತಿದೆ.

## ರೈಲು ಹಳಿ ತಪ್ಪಿಸುವ ಮತ್ತೊಂದು ಯತ್ನ ವಿಫಲ

**ಲಕ್ನೋ:** ರೈಲು ಹಳಿ ತಪ್ಪಿಸುವ ಮತ್ತೊಂದು ಯತ್ನ ವಿಫಲವಾಗಿದೆ. ಉತ್ತರ ಪ್ರದೇಶದ ಕಾನ್ಪುರದ ರೈಲ್ವೆ ಹಳಿಯಲ್ಲಿ ಅನುಮಾನಾಸ್ಪದ ವಸ್ತು ಕಂಡುಬಂದಾಗ ಲೋಕೊ ಪೈಲಟ್ ಬ್ರೇಕ್ ಹಾಕಿದ್ದರಿಂದ ಆಗಬಹುದಾದ ಭಾರಿ ಅನಾಹುತ ತಪ್ಪಿದೆ.ಹಳಿಯಲ್ಲಿ ಸಿಲಿಂಡರ್ ಪತ್ತೆಯಾಗಿದೆ, ದೇಶದ ಹಲವು ಕಡೆಗಳಲ್ಲಿ ರೈಲು ಹಳಿ ತಪ್ಪಿಸುವ ಸಾಕಷ್ಟು ಯತ್ನಗಳು ನಡೆದಿದೆ. ಪುಷ್ಪಕ್ ಎಕ್ಸ್‌ಪ್ರೆಸ್‌ನ ಲೊಕೊ ಪೈಲಟ್ ಟ್ರ್ಯಾಕ್ ಮೇಲೆ ಕೆಂಪು ಸಿಲಿಂಡರ್ ಬಿದ್ದಿರುವುದನ್ನು ಗಮನಿಸಿ ಸಮಯಕ್ಕೆ ಸರಿಯಾಗಿ ಬ್ರೇಕ್ ಹಾಕಿದರು. ಸಿಲಿಂಡರ್‌ನಿಂದ ಸ್ವಲ್ಪ ದೂರದಲ್ಲಿ ರೈಲು ನಿಂ ತಿತು ಎಂದು ಪೊಲೀಸರು ತಿಳಿಸಿದ್ದಾರೆ.

ರೈಲು ಹಳಿಗಳ ಮೇಲೆ ಅಪಾಯಕಾರಿ ವಸ್ತುಗಳನ್ನು ಇಡುವುದರಿಂದ ರೈಲು ಸಂಚಾರಕ್ಕೆ ಆಗಾಗ ಅಡ್ಡಿಯುಂಟಾಗುತ್ತಿದೆ, ರೈಲು ಹಳಿತಪ್ಪುವ ಅಥವಾ ಪ್ರಾಣಾಪಾಯವಾಗು ಸಾಧ್ಯತೆ ಹೆಚ್ಚಿದೆ. ಇನ್ನೂ ಕುತೂಹಲಕಾರಿ ಸಂಗತಿಯೆಂದರೆ, ಈ ವಸ್ತುಗಳಲ್ಲಿ ಹೆಚ್ಚಿನವು, ಮುಖ್ಯವಾಗಿ ಗ್ಯಾಸ್ ಸಿಲಿಂಡರ್‌ಗಳು ಮತ್ತು ಕಾಂಕ್ರೀಟ್ ಕಂಬಗಳನ್ನು ಹಾಕುತ್ತಿರುವುದು ವಿಶೇಷವಾಗಿದೆ. ಭಾನುವಾರ ರಾತ್ರಿ 8.25 ರ ಸುಮಾರಿಗೆ ಈ ಘಟನೆ ನಡೆ ದಿದ್ದು, ಕಾಳಿಂದಿ ಎಕ್ಸ್‌ಪ್ರೆಸ್ ಬರಜ್‌ಪುರ ನಿಲ್ದಾಣದಿಂದ ಹೊರಟು 2.3 ಕಿಲೋಮೀಟರ್ ದೂರದಲ್ಲಿದ್ದಾಗ ಹಳಿ ಗಳ ಮೇಲೆ ಇರಿಸಲಾಗಿದ್ದ ಗ್ಯಾಸ್ ಸಿಲಿಂಡರ್‌ಗೆ ಡಿಕ್ಕಿ ಹೊ ಡೆದು ಸ್ಫೋಟ ಸಂಭವಿಸಿದೆ. ದೊಡ್ಡ ಶಬ್ದವನ್ನು ಕೇಳಿದ ಲೊಕೊ ಪೈಲಟ್ ತಕ್ಷಣ ತುರ್ತು ಬ್ರೇಕ್ ಹಾಕಿದ್ದಾರೆ. ಬಳಿಕ ಇಳಿದು ನೋಡಿದಾಗ ಅಪಾಯಕಾರಿ ವಸ್ತುಗಳು ಹಳಿಯಲ್ಲಿರುವುದು ಕಂಡುಬಂದಿತ್ತು.



ತಕ್ಷಣ ರೈಲ್ವೆ ಪ್ರೊಟೆಕ್ಷನ್ ಫೋರ್ಸ್‌ಗೆ ಮಾಹಿತಿ ನೀಡಲಾಗಿತ್ತು. ಪ್ರದೇಶದ ಸಂಪೂರ್ಣ ಶೋಧ ನಡೆಸಲಾಯಿತು. ರೈಲಿಗೆ ಡಿಕ್ಕಿಯಾದ ಕಾರಣ ಸಿಲಿಂಡರ್ ಹಳಿಯಿಂದ ತುಂಬಾ ದೂರ ಹೋಗಿ ಬಿದ್ದಿದೆ.

## ವಂಶಪಾರಂಪರ್ಯ ರಾಜಕಾರಣದಿಂದ ಡಿಎಂಕೆಯಲ್ಲಿ ಭುಗಿಲೆದ್ದ ಅಸಮಾಧಾನ

**ಚೆನ್ನೈ:** ತಮಿಳುನಾಡಿನಲ್ಲಿ ವಂಶ ಪಾರಂಪರ್ಯ ರಾಜಕಾರಣ ಮತ್ತೆ ಮುಂದುವರೆದಿದೆ. ಮಾಜಿ ಮುಖ್ಯಮಂತ್ರಿ ಕರುಣಾ ನಿಧಿ ಅವರ ಪುತ್ರ ಸ್ಟಾಲಿನ್ ಸದ್ಯ ಮುಖ್ಯಮಂತ್ರಿಯಾಗಿದ್ದು, ಇದೀಗ ಅವರ ಪುತ್ರ ಉದಯನಿಧಿ ಅವರಿಗೆ ಡಿಸಿಎಂ ಪಟ್ಟ ಕಟ್ಟುವ ಮೂಲಕ ತಮ್ಮ ಉತ್ತರಾಧಿಕಾರಿಯನ್ನು ನೇಮಕ ಮಾಡಲಾಗಿದೆ. 2021 ರಲ್ಲಿ ಸುರಕ್ಷಿತ ಚೆಪಾಕ್ ಸ್ಥಾನವನ್ನು ಗೆದ್ದ ಕೆಲವೇ ತಿಂಗಳುಗಳ ನಂತರ ಮೊದಲ ಬಾರಿಗೆ ಶಾಸಕ ಮತ್ತು ಮುಖ್ಯಮಂತ್ರಿ ಎಂಕೆ ಸ್ಟಾಲಿನ್ ಅವರ ಮಗ ಉದಯನಿಧಿ ಸ್ಟಾಲಿನ್ ಅವರಿಗೆ ಸಚಿವ ಸ್ಥಾನ ನೀಡಲಾಗಿದೆ ಎಂದು ಡಿಎಂಕೆ (ದ್ರಾವಿಡ ಮುನ್ನೇತ್ರ ಕಳಗಂ) ಹಿರಿಯರು ಆರಂಭದಲ್ಲಿ ಬೇಸರಗೊಂಡಿದ್ದರು.

ಹಿರಿಯರ ಈ ಅಸಮಾಧಾನವನ್ನು ಶಮನಗೊಳಿಸುವಲ್ಲಿ ಯಶಸ್ವಿಯಾಗಿರುವ ಸ್ಟಾಲಿನ್ ಅವರು ಇದೀಗ ಉದಯನಿಧಿ ಅವರಿಗೆ ಉಪ ಮುಖ್ಯ ಮಂತ್ರಿ ಸ್ಥಾನ ಕಲ್ಪಿಸಿದ್ದಾರೆ. ನಾನು ಸಚಿವನಾಗ್ದೆ?, ಡಿಸಿಎಂ ಪಟ್ಟ ವನ್ನು ಹೆಚ್ಚುವರಿ ಜವಾಬ್ದಾರಿಯಾಗಿ ನೋಡುತ್ತೇನೆ. ಎಲ್ಲಾ ಟೀಕೆಗಳನ್ನು ನಾನು ಸ್ವಾಗತಿಸುತ್ತೇನೆ ಎಂದು ಉದಯನಿಧಿ ಸ್ಟಾಲಿನ್ ಡಿಎಂಕೆ ಪಕ್ಷದ ಪ್ರಧಾನ ಕಚೇರಿಯ ಹೊ ರಗೆ ಹೇಳಿದರು. ಸಮಯ ಬಂದಾಗ ಯುವ ನಾಯಕನನ್ನು ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಳ್ಳಲು ಈ ಔನ್ನತ್ಯವನ್ನು ನೀಡುವುದಾಗಿದೆ. ಎಂ.ಕೆ.ಸ್ಟಾಲಿನ್ ಆರೋಗ್ಯ ಸರಿ ಇಲ್ಲ ಎಂಬುದು ಎಲ್ಲರಿಗೂ ತಿಳಿದೇ ಇದೆ. ಆದ್ದರಿಂದ ಒಂದು ಸ್ಪಷ್ಟವಾದ ಉತ್ತರಾಧಿಕಾರವನ್ನು ಮುಂಚಿತವಾಗಿಯೇ ಸೃಷ್ಟಿಸಲಾಗಿದೆ.



ಆದರೆ ಡಿಎಂಕೆಯಲ್ಲಿ ಎಲ್ಲವೂ ಸರಿಯಾಗಿಲ್ಲ. ಕೆಲವರು ರಾಜವಂಶದ ನಾಯಕತ್ವಕ್ಕೆ ರಾಜೀನಾಮೆ ನೀಡಿದರೆ, ಇತರರು ಕೋಪಗೊಂಡಿದ್ದಾರೆ. ಆಡಳಿತಾರೂಢ ಡಿಎಂಕೆ ಪಕ್ಷದೊಳಗಿನ ಹಿರಿಯ ನಾಯಕ ದುರೈಮುರುಗನ್ ಅವರು ವೆಲ್ಲೂರಿನಲ್ಲಿ ನಡೆದ ಪತ್ರಿಕಾಗೋಷ್ಠಿಯಿಂದ ಕೇವಲ ಒಂದು ವಾರದ ಹಿಂದೆ ಪಕ್ಷ ತೊರೆದಿದ್ದಾರೆ.

## ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅತಿದೊಡ್ಡ ಉಗ್ರ

**ಹೊಸ ದಿಲ್ಲಿ:** ಗಾಜಾ ಪಟ್ಟಿಯಲ್ಲಿ ಹಮಾಸ್ ಉಗ್ರ ಸಂಘಟನೆ, ಲೆಬನಾನ್‌ನಲ್ಲಿ ಹೆಜ್ಬೊಲ್ಲಾ ಉಗ್ರರು ಹಾಗೂ ಇದೀಗ ಯಮನ್ ದೇಶದಲ್ಲಿ ಹೌತಿ ಉಗ್ರ ನೆಲೆಗಳ ಮೇಲೆ ದಾಳಿ ನಡೆಸಿರುವ ಇಸ್ರೇಲ್ ದೇಶದ ವಿರುದ್ಧ ಜಮ್ಮು ಮತ್ತು ಕಾಶ್ಮೀರದ ಪಿಡಿಪಿ ಪಕ್ಷದ ಅಧ್ಯಕ್ಷೆ ಮೆಹಬೂಬಾ ಮುಫ್ತಿ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಇಸ್ರೇಲ್ ಪ್ರಧಾನ ಮಂತ್ರಿ ಬೆಂಜಮಿನ್ ನೆತನ್ಯಾಹು ವಿಶ್ವದಲ್ಲೇ ಅತಿ ದೊಡ್ಡ ಉಗ್ರಗಾಮಿ ಎಂದು ಅವರು ಕಿಡಿ ಕಾರಿದ್ದಾರೆ.

ಪಿಟಿಐ ಸುದ್ದಿ ಸಂಸ್ಥೆ ಜೊತೆ ಮಾತನಾಡಿದ ಪಿಡಿಪಿ ಅಧ್ಯಕ್ಷೆ ಮೆಹಬೂಬಾ ಮುಫ್ತಿ, ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರನ್ನು ಜರ್ಮನಿಯ ಸರ್ವಾಧಿಕಾರಿಯಾಗಿದ್ದ ಅಡಾಲ್ಫ್ ಹಿಟ್ಲರ್‌ಗೆ ಹೋಲಿಕೆ ಮಾಡಿದ್ದಾರೆ. ಯಹೂದಿಗಳನ್ನು ಕೊಲ್ಲಲು ಹಿಟ್ಲರ್ ಗ್ಯಾಸ್ ಚೇಂಬರ್‌ಗಳನ್ನು ನಿರ್ಮಾಣ ಮಾಡಿದ್ದ. ಆದರೆ, ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು, ಪ್ಯಾಲಸ್ತೀನ್ ಹಾಗೂ ಲೆಬನಾನ್ ದೇಶಗಳನ್ನೇ ಗ್ಯಾಸ್ ಚೇಂಬರ್ ರೀತಿ ಪರಿವರ್ತಿಸಿ ಸಾವಿರಾರು ಜನರ ಹತ್ಯೆ ಮಾಡಿಸಿದ್ದಾನೆ ಎಂದು ಪಿಡಿಪಿ ಪಕ್ಷದ ಅಧ್ಯಕ್ಷೆ ಮೆಹಬೂಬಾ ಮುಫ್ತಿ ಆಕ್ರೋಶ ಹೊರ ಹಾಕಿದ್ದಾರೆ.

ಇದೇ ವೇಳೆ ಇಸ್ರೇಲ್ ಜೊತೆಗಿನ ಭಾರತ ದೇಶದ ದ್ವಿಪಕ್ಷೀಯ ಬಾಂಧವ್ಯಕ್ಕೆ ವಿರೋಧ ವ್ಯಕ್ತಪಡಿಸಿದ ಮೆಹಬೂಬಾ ಮುಫ್ತಿ, ಮಹಾತ್ಮ ಗಾಂಧೀಜಿ ಅವರು ಪ್ಯಾಲಸ್ತೀನ್ ಜೊತೆ ನಿಂತಿದ್ದರು. ಭಾರತ ಕೂಡಾ ಪ್ಯಾಲಸ್ತೀನ್ ಪರವಾಗಿಯೇ ನಿಲ್ಲಬೇಕು ಎಂದು ಆಗ್ರಹಿಸಿದರು.



ಇದೇ ವೇಳೆ ಬಿಜೆಪಿ ನಾಯಕರ ವಿರುದ್ಧವೂ ಹರಿಹಾಯ್ದ ಮೆಹಬೂಬಾ ಮುಫ್ತಿ, ಕತುವಾದಲ್ಲಿ 8 ವರ್ಷದ ಬಾಲಕಿ ಮೇಲೆ ಅತ್ಯಾಚಾರ ಎಸಗಿದವರ ಪರ ಬಿಜೆಪಿ ನಿಂತಿದೆ. ಆದರೆ ನಾನು ಪ್ಯಾಲಸ್ತೀನ್ ಪರ ನಿಂತಿದ್ದೇನೆ ಎಂದು ಹೇಳಿದರು. ಪ್ಯಾಲಸ್ತೀನ್ ಸ್ವಾತಂತ್ರ್ಯಕ್ಕಾಗಿ ಲೆಬನಾನ್‌ನ ಹೆಜ್ಬೊಲ್ಲಾ ಸಂಘಟನೆಯ ಮುಖ್ಯಸ್ಥರಾಗಿದ್ದ ನಸ್ರಲ್ಲಾ ಅವರು ಸುದೀರ್ಘ ಹೋರಾಟ ನಡೆಸಿದ್ದರು. ಈ ಹೋರಾಟಗಳ ಬಗ್ಗೆ ಬಿಜೆಪಿಗೆ ಏನು ಗೊತ್ತಿದೆ ಎಂದು ಪ್ರಶ್ನಿಸಿದರು.

ಹೆಜ್ಬೊಲ್ಲಾ ಮುಖ್ಯಸ್ಥ ನಸ್ರಲ್ಲಾ ಹತ್ಯೆಯ ಸುದ್ದಿ ಕೇಳಿದ್ದೇ ತಡ, ಭಾನುವಾರ ತಮ್ಮ ಚುನಾವಣಾ ಪ್ರಚಾರ ಕಾರ್ಯಕ್ರಮವನ್ನೇ ಮೆಹಬೂಬಾ ಮುಫ್ತಿ ರದ್ದು ಮಾಡಿದ್ದರು. ನಾನು ಪ್ಯಾಲಸ್ತೀನ್ ಹಾಗೂ ಲೆಬನಾನ್ ಜನರ ಪರ ನಿಲ್ಲುವೆ ಎಂದು ಹೇಳಿದ್ದ ಮೆಹಬೂಬಾ ಮುಫ್ತಿ, ನಸ್ರಲ್ಲಾ ಸಾವಿಗೆ ಸಂತಾಪ ಸೂಚಿಸಿದ್ದರು.

ಕಳೆದ ಶನಿವಾರ ರಾತ್ರಿ ಇಸ್ರೇಲ್ ಸೇನೆ ಲೆಬನಾನ್ ದೇಶದಲ್ಲಿ ಕಾರ್ಯಾಚರಣೆ ನಡೆಸಿ ಹೆಜ್ಬೊಲ್ಲಾ ಮುಖ್ಯಸ್ಥ ಹಸನ್ ನಸ್ರಲ್ಲಾನನ್ನು ಹತ್ಯೆ ಮಾಡಿತ್ತು.

**ಮಹಾತ್ಮ ಗಾಂಧೀಜಿ ಅವರ ಕಾಲದಿಂದಲೂ ನಾವು ಪ್ಯಾಲಸ್ತೀನ್ ಪರ ನಿಂತಿದ್ದೆವು. ಆದರೆ ನಾವು ಈಗ ಬೆಂಜಮಿನ್ ನೆತನ್ಯಾಹು ಪರ ನಿಂತಿದ್ದೇವೆ. ಅವರಿಗೆ ನಾವು ಶಸ್ತ್ರಾಸ್ತ್ರಗಳನ್ನು ಕೊಡುತ್ತಿದ್ದೇವೆ. ನಾವು ಅವರಿಂದಲೂ ಪಡೆಯುತ್ತಿದ್ದೇವೆ. ಅವರಿಗೆ ನಾವು ಡ್ರೋನ್‌ಗಳನ್ನು ನೀಡುತ್ತಿದ್ದೇವೆ. ಈ ಡ್ರೋನ್‌ಗಳ ಪ್ಯಾಲಸ್ತೀನ್‌ನಲ್ಲಿ ಅಮಾಯಕರ ಸಾವಿಗೆ ಕಾರಣವಾಗುತ್ತಿದೆ. ಇದು ತಪ್ಪು**

**-ಮೆಹಬೂಬಾ ಮುಫ್ತಿ, ಅಧ್ಯಕ್ಷೆ**

# ಹೌತಿ ಉಗ್ರ ನೆಲೆಗಳ ಮೇಲೆ ಇಸ್ರೇಲ್ ಏರ್‌ಸ್ಟ್ರೈಕ್

## ಗಾಜಾ, ಲೆಬನಾನ್ ಆಯ್ತು.. ಈಗ ಯಮನ್ ಸರದಿ, ಹೌತಿ ಉಗ್ರರ ನೆಲೆಗಳ ಮೇಲೆ ಇಸ್ರೇಲ್ ವಾಯುಪಡೆ ದಾಳಿ

**ಇಸ್ರೇಲ್:** ಗಾಜಾ ಪಟ್ಟಿ ಹಾಗೂ ವೆಸ್ಟ್ ಬ್ಯಾಂಕ್‌ನಲ್ಲಿ ಹಮಾಸ್ ಉಗ್ರರ ವಿರುದ್ಧ ಕಾರ್ಯಾಚರಣೆ ನಡೆಸುತ್ತಿರುವ ಇಸ್ರೇಲ್ ಸೇನೆ, ಲೆಬನಾನ್‌ನಲ್ಲೂ ಹೆಜ್ಬೊಲ್ಲಾ ಉಗ್ರ ಸಂಘಟನೆಗೆ ಆಘಾತ ಕೊಟ್ಟಿದೆ. ಈ ನಡುವಲ್ಲೇ ಇದೀಗ ದೂರದ ಯಮನ್ ದೇಶದಲ್ಲಿ ಹೌತಿ ಉಗ್ರರ ವಿರುದ್ಧ ದಾಳಿ ಆರಂಭಿಸಿದೆ.

ಯಮನ್ ದೇಶದ ಸಾಗರ ತೀರದ ಉದ್ದಕ್ಕೂ ಇರುವ ಹಲವು ಬಂದರು ಗಳಲ್ಲಿ ಹೌತಿ ಉಗ್ರರ ನೆಲೆಗಳಿವೆ. ಈ ನೆಲೆಗಳ ಮೇಲೆ ಇಸ್ರೇಲ್ ವಾಯು ಪಡೆ ಯ ಹತ್ತಾರು ಯುದ್ಧ ವಿಮಾನಗಳು ಭಾನುವಾರ ಬೆಳಗ್ಗೆ ಏಕಾಏಕಿ ದಾಳಿ ನಡೆಸಿದವು. ಈ ದಾಳಿಗಳಲ್ಲಿ ಕನಿಷ್ಟ ನಾಲ್ವರು ಮೃತಪಟ್ಟಿರುವ ಶಂಕೆ ಇದೆ. ಈ ಬಂ ದರುಗಳು ಹೌತಿ ಉಗ್ರರ ನೆಲೆಗಳಾಗಿದ್ದವು ಎಂದು ಇಸ್ರೇಲ್ ತಿಳಿಸಿದೆ. ಇಸ್ರೇಲ್ ಏರ್ ಸ್ಟ್ರೈಕ್‌ನಲ್ಲಿ ಓರ್ವ ಬಂದರು ಕಾರ್ಮಿಕ ಹಾಗೂ ಮೂವರು ಎಲೆಕ್ಟ್ರಿಕ್ ಎಂಜಿನಿಯರ್‌ಗಳು ಸಾವನ್ನಪ್ಪಿದ್ದಾರೆ ಎಂದು ತಿಳಿದು ಬಂದಿದೆ.



**ನಾಲ್ವರು ಮೃತಪಟ್ಟಿರುವ ಶಂಕೆ**

ಕಳೆದ ಜುಲೈನಲ್ಲಿ ಯಮನ್‌ನ ಹೌತಿ ಉಗ್ರರ ಮೇಲೆ ದಾಳಿ ನಡೆಸಿದ್ದ ಇಸ್ರೇಲ್, ಇದೀಗ ಎರಡನೇ ಬಾರಿ ದಾಳಿ ನಡೆಸಿದೆ. ಜುಲೈನಲ್ಲಿ ಇಸ್ರೇಲ್ ಮೇಲೆ ಮೊದಲಿಗೆ ಹೌತಿ ಉಗ್ರರೇ ಡ್ರೋನ್ ದಾಳಿ ನಡೆಸಿದ್ದರು. ಈ ಸಂದರ್ಭದಲ್ಲಿ ಓರ್ವ ವ್ಯಕ್ತಿ ಸಾವನ್ನಪ್ಪಿದ್ದ. ಈ ಹಿನ್ನೆಲೆಯಲ್ಲಿ ಪ್ರತೀಕಾರದ ದಾಳಿ ನಡೆಸಿದ್ದ ಇಸ್ರೇಲ್, ಬಂದರುಗಳ ಮೇಲೆ ಬಾಂಬ್‌ಗಳ ಮಳೆಗರೆದಿತ್ತು. ಇದೀಗ ಮತ್ತೊಮ್ಮೆ ಬಂದರುಗಳನ್ನೇ ಗುರಿಯಾಗಿಸಿ ಇಸ್ರೇಲ್ ಯುದ್ಧ ವಿಮಾನಗಳು ದಾಳಿ ನಡೆಸಿವೆ. ಈ ದಾಳಿ ಕುರಿತಾಗಿ ಮಾಹಿತಿ ನೀಡಿರುವ ಹೌತಿ ಉಗ್ರ ಸಂಘಟನೆ ನಾಲ್ವರು ಸಾವಪ್ಪಿರುವ ಮಾಹಿತಿ ಬಹಿರಂಗ ಮಾಡಿದೆ. ಅಷ್ಟೇ ಅಲ್ಲ, 33 ಮಂದಿಗೆ ಗಾಯಗಳಾಗಿವೆ ಎಂದೂ ಹೇಳಿವೆ. ಈ ದಾಳಿಗಳಿಂದಾಗಿ ಯಮನ್ ದೇಶದ ವಿದ್ಯುತ್ ಉತ್ಪಾದನಾ ಘಟಕಗಳು ಹಾನಿಗೊಂಡಿವೆ. ಜೊತೆಯಲ್ಲೇ ಯಮನ್ ದೇಶಕ್ಕೆ ಮಾನವೀಯ ನೆರವು ರವಾನೆಯಾಗುವ ಬಂದರುಗಳನ್ನೇ ಇಸ್ರೇಲ್ ಧ್ವಂಸಗೊಳಿಇದೆ. ಹೀಗಾಗಿ, ಯಮನ್ ದೇಶಕ್ಕೆ ಭಾರೀ ಸಂಕಷ್ಟ ಎದುರಾಗಲಿದೆ.

ಆದರೆ ಇಸ್ರೇಲ್ ದಾಳಿಗೆ ಹೌತಿ ಉಗ್ರ ಸಂಘಟನೆ ಮತ್ತಷ್ಟು ಪ್ರತೀಕಾರದ ದಾಳಿಗಳನ್ನು ನಡೆಸೋದಾ ಗಿ ಹೇಳಿದೆ. ನಮ್ಮನ್ನು ತಡೆಯಲು ಸಾಧ್ಯವೇ ಇಲ್ಲ ಎಂದು ಹೌತಿ ಉಗ್ರ ಸಂಘಟನೆ ವಕ್ತಾರರು ತಿರುಗೇಟು ನೀಡಿದ್ದಾರೆ. ಹೌತಿ ಉಗ್ರರಿಗೆ ಬೆಂಬಲವಾಗಿ ನಿಂತಿರುವ ಇರಾನ್ ಕೂಡಾ ಇಸ್ರೇಲ್ ವಿರುದ್ಧ ಕೆಂಡ ಕಾರಿದೆ. ಮಾನವೀಯ ನೆರವು ರವಾನೆಯಾಗುವ ಬಂದರು ಹಾಗೂ ವಿದ್ಯುತ್ ಸ್ಥಾವರಗಳನ್ನೇ ಧ್ವಂಸ ಮಾಡುವ ಮೂಲಕ ಇಸ್ರೇಲ್ ವಿಕೃತಿ ಮೆರೆದಿದೆ ಎಂದು ಇರಾನ್ ಆಕ್ರೋಶ ವ್ಯಕ್ತಪಡಿಸಿದೆ.

### ಬಂದರು, ವಿದ್ಯುತ್ ಉತ್ಪಾದನಾ ಸ್ಥಾವರಗಳೇ ಟಾರ್ಗೆಟ್

**ಇಸ್ರೇಲ್ ವಾಯು ಪಡೆಯ ಯುದ್ಧ ವಿಮಾನಗಳು ಹೌತಿ ಉಗ್ರರ ನೆಲೆ ಇರುವ ಯಮನ್ ದೇಶದ ಹಲವು ಬಂದರುಗಳನ್ನು ಧ್ವಂಸಗೊಳಿಸಿವೆ. ಅಷ್ಟೇ ಅಲ್ಲ, ವಿದ್ಯುತ್ ಉತ್ಪಾದನಾ ಘಟಕಗಳನ್ನೇ ಗುರಿಯಾಗಿಸಿ ದಾಳಿ ನಡೆಸಿವೆ. ಈ ಮೂಲಕ ಹೌತಿ ಉಗ್ರರ ಬಲ ಕುಗ್ಗಿಸುವಲ್ಲಿ ಇಸ್ರೇಲ್ ಶಕ್ತವಾಗಿದೆ. ಕಳೆದ ವಾರ ಇಸ್ರೇಲ್ ಕೇಂದ್ರ ಭಾಗಕ್ಕೇ ಹೌತಿ ಉಗ್ರರು ಖಂಡಾಂತರ ಕ್ಷಿಪಣಿಗಳನ್ನು ಉಡಾಯಿಸಿದ್ದರು. ಈ ಕ್ಷಿಪಣಿಗಳನ್ನು ಇಸ್ರೇಲ್ ಸೇನೆಯ ವಾಯು ರಕ್ಷಣಾ ವ್ಯವಸ್ಥೆ ಆಗಸದಲ್ಲೇ ನಿಷ್ಕ್ರಿಯಗೊಳಿಸಿದ್ದವು. ಇದೀಗ ಇಸ್ರೇಲ್ ಹೌತಿ ಉಗ್ರರ ಮೇಲೆ ಪ್ರತೀಕಾರದ ದಾಳಿಗಳನ್ನು ನಡೆಸಿದೆ.**

**ತನ್ನ ಯಾವೊಬ್ಬ ಶತ್ರುವನ್ನೂ ಸುಮ್ಮನೆ ಬಿಡೋದಿಲ್ಲ ಎಂದು ಶಪಥ ಮಾಡಿರುವ ಇಸ್ರೇಲ್, ಹಮಾಸ್, ಹೆಜ್ಬೊಲ್ಲಾ ಹಾಗೂ ಹೌತಿ ಉಗ್ರರ ವಿರುದ್ಧ ಏಕಕಾಲಕ್ಕೆ ಪ್ರತೀಕಾರದ ದಾಳಿಗಳನ್ನು ನಡೆಸುತ್ತಿದೆ. ಇಸ್ರೇಲ್‌ನ ಪಶ್ಚಿಮ ಭಾಗದಲ್ಲಿ ಹಮಾಸ್, ಉತ್ತರದಲ್ಲಿ ಹೆಜ್ಬೊಲ್ಲಾ ವಿರುದ್ಧ ಏರ್ ಸ್ಟ್ರೈಕ್ ನಡೆಸಿರುವ ಇಸ್ರೇಲ್, ಇದೀಗ ಪೂರ್ವ ಭಾಗದಲ್ಲಿ ಯಮನ್ ದೇಶದಲ್ಲಿ ಹೌತಿ ಉಗ್ರರ ವಿರುದ್ಧ ವಾಯು ದಾಳಿ ನಡೆಸಿ ಹೌತಿ ಉಗ್ರರ ಪ್ರಮುಖ ನೆಲೆಗಳನ್ನೇ ಧ್ವಂಸ ಮಾಡುವಲ್ಲಿ ಯಶಸ್ವಿಯಾಗಿದೆ.**



## ಮಿನಿ ನ್ಯೂಸ್

### ಮೂರು ವರ್ಷದ ಮಗುವನ್ನು ಹೊತ್ತೊಯ್ದ ನರಭಕ್ಷಕ ಚಿರತೆ

**ನ್ಯೂ ತೆಹ್ರಿ:** ಮೂರು ವರ್ಷದ ಮಗುವನ್ನು ನರಭಕ್ಷಕ ಚಿರತೆಯೊಂದು ಹೊತ್ತೊಯ್ದಿರುವ ಘಟನೆ ಉತ್ತರಾಖಂಡದಲ್ಲಿ ನಡೆದಿದೆ. ನರಭಕ್ಷಕ ಚಿರತೆಯೊಂದು ತನ್ನ ಸೋದರಸಂಬಂಧಿಗಳೊಂದಿಗೆ ಆಟವಾಡುತ್ತಿದ್ದ ಮೂರು ವರ್ಷದ ಮಗುವನ್ನು ತನ್ನ ಮನೆಯ ಹೊರಗಿನಿಂದ ಎತ್ತಿಕೊಂಡು ಬಂದು ಕೊಂದು ಹಾಕಿದ್ದು, ಸಮೀಪದ ಪೊದೆಗಳಲ್ಲಿ ಆತನ ಮತದೇಹ ಪತ್ತೆಯಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಪುರ್ವಾಲ್ ಗ್ರಾಮದಲ್ಲಿ ಅಂಕಿತ್ ಕುಮಾರ್ ಅವರ ಮಗ ರಾಜ್ ಕುಮಾರ್ ತನ್ನ ತಾಯಿಯ ಚಿಕ್ಕಪ್ಪನ ಮಕ್ಕಳೊಂದಿಗೆ ಮನೆಯ ಅಂಗಳದಲ್ಲಿ ಆಟವಾಡುತ್ತಿದ್ದಾಗ ಸಂಜೆ 5 ಗಂಟೆ ಸುಮಾರಿಗೆ ಈ ಘಟ ನೆ ಸಂಭವಿಸಿದೆ. ತೆಹ್ರಿ ಅರಣ್ಯ ವಿಭಾಗದ ಭಿಲಾಂಗನಾ ರೇಂಜ್ ಆ ಫೀಸರ್ ಆಶಿಶ್ ನೌಟಿಯಾಲ್ ಮತ್ತು ಪುರ್ವಾಲ್ ಗ್ರಾಮದ ಮು ಖ್ಯಸ್ಥ ಸಂಜಯ್ ತಿವಾರಿ ಮಾತನಾಡಿ, ಮಗು ಆಟವಾಡುತ್ತಿದ್ದಾಗ ಹೊರಬಂದು ಮನೆಯ ಹಿಂದೆ ಚಿರತೆ ಹೊಂಚುಹಾಕಿ ಕುಳಿತಿತ್ತು ಪ್ರಾಣಿಯು ಮಗುವನ್ನು ಎತ್ತಿಕೊಂಡು ಎಳೆದೊಯ್ದಿತು. ಮನೆಯಲ್ಲಿ ಮಗನನ್ನು ಕಾಣದ ಮಂಜು ದೇವಿ ಹುಡುಕಾಟ ಆರಂಭಿಸಿದಳು. ಬಳಿಕ ಆಕೆಯ ನೆರೆಹೊರೆಯವರು ಕೂಡ ಅಲ್ಲಿ ಜಮಾಯಿಸಿದರೂ ಮಗು ಪತ್ತೆಯಾಗಿರಲಿಲ್ಲ. ಅಷ್ಟರಲ್ಲಿ ಯಾರೋ ಮನೆಯ ಹಿಂದಿನ ರಸ್ತೆಯಲ್ಲಿ ರಕ್ತದ ಕಲೆಗಳನ್ನು ಗಮನಿಸಿ ಮಾಹಿತಿ ನೀಡಿದಾಗ ಪ್ರಕರಣ ಬೆಳಕಿಗೆ ಬಂದಿದೆ.

### ಹೆತ್ತ ತಾಯಿಯನ್ನೇ ಮರಕ್ಕೆ ಕಟ್ಟಿ ಜೀವಂತ ದಹಿಸಿದ ಪಾಪಿ ಮಕ್ಕಳು

**ಅಗರ್ತಲಾ:** ಹೆತ್ತ ಮಕ್ಕಳೆ ತಮ್ಮ ತಾಯಿಯನ್ನು ಮರಕ್ಕೆ ಕಟ್ಟಿ ಹಾಕಿ ಜೀವಂತವಾಗಿ ಸುಟ್ಟಿ ಹಾಕಿರುವ ಹೃದಯ ಹಿಂಡುವ ಘಟನೆ ತ್ರಿಪುರದಲ್ಲಿ ನಡೆದಿದೆ. ಪಶ್ಚಿಮ ತ್ರಿಪುರದಲ್ಲಿ 62 ವರ್ಷದ ಮಹಿಳೆಯನ್ನು ಮರಕ್ಕೆ ಕಟ್ಟಿಹಾಕಿ ಆಕೆಯ ಇಬ್ಬರು ಪುತ್ರರು ಜೀವಂತವಾಗಿ ಸುಟ್ಟು ಹಾಕಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಪುತ್ರರನ್ನು ಬಂಧಿಸಿರುವುದಾಗಿ ಪೊ ಲೀಸರು ತಿಳಿಸಿದ್ದು, ಕೌಟುಂಬಿಕ ಕಲಹವೇ ಭೀಕರ ಕೊಲೆಗೆ ಕಾರಣ ವಾಗಿರಬಹುದು ಎಂದು ಶಂಕಿಸಲಾಗಿದೆ.

ಚಂಪಕನಗರ ಪೊಲೀಸ್ ಠಾಣೆ ವ್ಯಾಪ್ತಿಯ ಖಮರ್ಬರಿಯಲ್ಲಿ ಈ ಘಟನೆ ನಡೆದಿದೆ ಎಂದು ಅವರು ತಿಳಿಸಿದ್ದಾರೆ. 62 ವರ್ಷದ ಮಹಿಳೆ ಸುಮಾರು ಒಂದೂವರೆ ವರ್ಷದ ಹಿಂದೆ ಪತಿಯನ್ನು ಕಳೆದುಕೊಂಡ ನಂತರ ತನ್ನ ಇಬ್ಬರು ಗಂಡು ಮಕ್ಕಳೊಂದಿಗೆ ವಾಸಿಸುತ್ತಿದ್ದರು.

ಆಕೆಯ ಇನ್ನೊಬ್ಬ ಮಗ ಅಗರ್ತಲಾದಲ್ಲಿ ವಾಸಿಸುತ್ತಿದ್ದ. ಮಹಿಳೆಗೆ ಬೆಂಕಿ ಹಚ್ಚಲಾಗಿದೆ ಎಂಬ ಮಾಹಿತಿ ಪಡೆದ ನಂತರ, ಪೊಲೀಸ್ ತಂಡವು ಅಲ್ಲಿಗೆ ಧಾವಿಸಿತು ಮತ್ತು ಮರಕ್ಕೆ ಕಟ್ಟಿದ ಸುಟ್ಟ ದೇಹವನ್ನು ಕಂಡು ನಾವು ಶವವನ್ನು ಮರಣೋತ್ತರ ಪರೀಕ್ಷೆಗಾಗಿ ಆಸ್ಪತ್ರೆಗೆ ಕೊಂಡೊಯ್ದಿದ್ದೇವೆ ಎಂದು ಜಿರಾನಿಯಾದ ಉಪವಿಭಾಗದ ಪೊಲೀಸ್ ಅಧಿಕಾರಿ ಕಮಲ್ ಕಷ್ಣ ಕೊಲೊಯ್ ಪಿಟಿಐಗೆ ತಿಳಿಸಿದರು.

ಪ್ರಕರಣದಲ್ಲಿ ಭಾಗಿಯಾಗಿರುವ ಆರೋಪದ ಮೇಲೆ ನಾವು ಆಕೆಯ ಇಬ್ಬರು ಪುತ್ರರನ್ನು ಬಂಧಿಸಿದ್ದೇವೆ. ಅವರನ್ನು ನ್ಯಾಯಾಲಯಕ್ಕೆ ಹಾ ಜರುಪಡಿಸಲಾಗುವುದು, ವಿಚಾರಣೆಗಾಗಿ ಪೊಲೀಸ್ ಕಸ್ಟಡಿಗೆ ಕೋರಲಾಗಿದೆ. ಕೌಟುಂಬಿಕ ಕಲಹ ಘಟನೆಗೆ ಕಾರಣವಾಗಿರಬಹುದು ಎಂದು ಶಂಕಿಸಿರುವ ಅವರು ತನಿಖೆ ನಡೆಯುತ್ತಿದೆ ಎಂದು ತಿಳಿಸಿದ್ದಾರೆ.

### ಯುಕೆಜಿ ವಿದ್ಯಾರ್ಥಿನಿ ಮೇಲೆ ಬಾಲಕನಿಂದ ಲೈಂಗಿಕ ದೌರ್ಜನ್ಯ

**ರತ್ಲಾಮ್:** ಮಧ್ಯಪ್ರದೇಶದ ರತ್ಲಾಮ್ ನಗರದ ಶಾಲೆಯೊಂದರ ಆವರಣದಲ್ಲಿ ಐದು ವರ್ಷದ ಬಾಲಕಿಯ ಮೇಲೆ ಲೈಂಗಿಕ ದೌರ್ಜನ್ಯ ನಡೆಸಿದ ಆರೋಪದ ಮೇಲೆ ಹದಿಹರೆಯದ ಹುಡುಗನನ್ನು ಪೊಲೀಸರು ಬಂಧಿಸಿದ್ದಾರೆ. ಬಾಲಕಿ ತನ್ನ ತಾಯಿಗೆ ಹುಡುಗನಿಂದ ಕೆಟ್ಟ ಸ್ಪರ್ಶದ ಬಗ್ಗೆ ಹೇಳಿದ ನಂತರ ಘಟನೆ ಬೆಳಕಿಗೆ ಬಂದಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಆರೋಪಿಯು ಖಾಸಗಿ ಶಾಲೆಯ ಕಾವಲುಗಾರನ ಮಗನಾಗಿದ್ದು, ಸಂತ್ರಸ್ತೆ ಯುಕೆಜಿ (ಮೇಲಿನ ಶಿಶುವಿಹಾರ) ವಿದ್ಯಾರ್ಥಿಯಾಗಿದ್ದಾಳೆ. ಶಾಲಾ ಕಟ್ಟಡದ ಮೂರನೇ ಮಹಡಿಯಲ್ಲಿರುವ ಕಾವಲುಗಾರನ ಕೊಠಡಿಯಲ್ಲಿ ಈ ಘಟನೆ ನಡೆದಿದೆ ಎನ್ನಲಾಗಿದ್ದು, ಸೆಪ್ಟೆಂಬರ್ 27ರ ರಾತ್ರಿ ಬಾಲಕಿ ತನ್ನ ತಾಯಿಗೆ ತಿಳಿಸಿದ್ದಾಳೆ ಎಂದು ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ರಾಕೇಶ್ ಖಾಖಾ ತಿಳಿಸಿದ್ದಾರೆ.

ಶಾಲೆಯಲ್ಲಿ ಸಿಸಿಟಿವಿ ಕ್ಯಾಮೆರಾಗಳು ನೆಲಮಹಡಿಯನ್ನು ಮಾತ್ರ ಒಳಗೊಂಡಿದ್ದು, ಮೇಲಿನ ಮಹಡಿಯಲ್ಲಿಲ್ಲ ಎಂದು ಅಧಿಕಾರಿ ಹೇಳಿ ದರು. ಆರೋಪಿ ಅದೇ ಶಾಲೆಯ ಇನ್ನೊಂದು ಶಾಖೆಯಲ್ಲಿ 10 ನೇ ತರಗತಿಯ ವಿದ್ಯಾರ್ಥಿಯಾಗಿದ್ದು, ತನ್ನ ಮಗಳು ಯುಕೆಜಿ ವಿದ್ಯಾರ್ಥಿನಿಯಾಗಿರುವ ಶಾಲೆಯಲ್ಲಿ ಲೈಂಗಿಕ ದೌರ್ಜನ್ಯ ಎಸಗಿದ್ದಾನೆ ಎಂದು ಬಾಲಕಿಯ ತಾಯಿ ದೂರು ನೀಡಿದ ನಂತರ ತನಿಖೆ ನಡೆಸಲಾಯಿತು. ಆರೋಪಿ ಹುಡುಗನನ್ನು ಬಂಧಿಸಲಾಗಿದೆ.

ಬಾಲಕನ ವಿರುದ್ಧ ಭಾರತೀಯ ನ್ಯಾಯ ಸಂಹಿತಾ ಮತ್ತು ರಕ್ಷಣೆಯ ನಿಬಂಧನೆಗಳ ಸೆಕ್ಷನ್ 65-ಜಿಜಿ (ಹನ್ನೆರಡು ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಹಿಳೆಯ ಮೇಲೆ ಅತ್ಯಾಚಾರ ಎಸಗುವವರು) ಮತ್ತು 75 (ದೈಹಿಕ ಸಂಪರ್ಕ ಮತ್ತು ಇಷ್ಟವಿಲ್ಲದ ಮತ್ತು ಸ್ಪಷ್ಟವಾದ ಲೈಂಗಿಕ ಪ್ರಲೋಭನೆಗಳನ್ನು ಒಳಗೊಂಡ ಬೆಳವಣಿಗೆಗಳು) ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ.

### ಚಂದ್ರನಿಗೂ ತಟ್ಟಿದ ಕೋವಿಡ್ ಲಾಕ್‌ಡೌನ್ ಎಫೆಕ್ಟ್

**ನವದೆಹಲಿ:** ಲಾಕ್‌ಡೌನ್ ಸಂದರ್ಭದಲ್ಲಿ ಚಂದ್ರನ ಮೇಲ್ಮೈ ತಾಪಮಾನ ಗಮನಾರ್ಹವಾಗಿ ಕುಸಿತಗೊಂಡಿದೆ ಎನ್ನುವುದು ಭಾರತೀಯ ಸಂಶೋಧಕರ ಅಧ್ಯಯನ ಬಹಿರಂಗಗೊಳಿಸಿದೆ. 2020 ರ ಜಾಗತಿಕ ಲಾಕ್‌ಡೌನ್ ಸಮಯದಲ್ಲಿ, ಚಂದ್ರನ ರಾತ್ರಿಯ ತಾಪ ಮಾನವು 8-10 ಕೆಲ್ವಿನ್‌ನಿಂದ ಕುಸಿಯಿತು, ಇದು ಭೂಮಿಯ ವಾ ತಾವರಣದ ಬದಲಾವಣೆಗಳು, ನಮ ಆಕಾಶ ನೆರೆಹೊರೆಯವರ ನಡುವಿನ ಆಶ್ಚರ್ಯಕರ ಸಂಪರ್ಕವನ್ನು ಸೂಚಿಸುತ್ತದೆ ಎಂದು ತಜ್ಞರು ಅಭಿ ಪ್ರಾಯ ಪಟ್ಟಿದ್ದಾರೆ. ನಾಸಾದ ಚಂದ್ರನ ವಿಚಕ್ಷಣ ಆರ್ಬಿಟರ್‌ನಿಂದ ದತ್ತಾಂಶವನ್ನು ವಿಶ್ಲೇಷಿಸಿದ ಸಂಶೋಧಕರು ತಾಪಮಾನ ಇಳಿಕೆಯು ಭೂಮಿಯ ಮೇಲಿನ ಮಾನವ ಚಟುವಟಿಕೆಗಳಲ್ಲಿ ತೀವ್ರ ಕಡಿತದೊಂದಿಗೆ ಹೊಂದಿಕೆಯಾಗುತ್ತದೆ ಎಂದು ಕಂಡುಹಿಡಿದಿದ್ದಾರೆ.

ಲಾಕ್‌ಡೌನ್ ಸಮಯದಲ್ಲಿ ಹಸಿರುಮನೆ ಅನಿಲ ಹೊರಸೂಸುವಿಕೆ ಮತ್ತು ಏರೋಸಾಲ್‌ಗಳ ಕುಸಿತವು ಭೂಮಿಯಿಂದ ಹೊರಸೂಸುವ ವಿಕಿರಣವನ್ನು ಬದಲಾಯಿಸಿದೆ ಎಂದು ತೋರುತ್ತದೆ, ಇದು ಚಂದ್ರನ ಮೇಲೆ ತಂಪಾಗಿಸುವ ಪರಿಣಾಮಕ್ಕೆ ಕಾರಣವಾಗುತ್ತದೆ ಎಂದು ಅಂದಾಜಿಸಲಾಗಿದೆ. ರಾಯಲ್ ಆಸ್ಟ್ರೋನಾಮಿಕಲ್ ಸೊಸೈಟಿಯ ಮಾಸಿಕ ಸೂಚನಾ ಪತ್ರಗಳಲ್ಲಿ ಪ್ರಕಟವಾದ ಈ ಅಧ್ಯಯನವು ಭೂಮಿ, ಚಂದ್ರನ ನಡುವಿನ ಸಂಪರ್ಕವನ್ನು ಒತ್ತಿಹೇಳುತ್ತದೆ.



# ಹಂಸ ದಮಯಂತಿಯಂತೆ ಪೋಸ್ ಕೊಟ್ಟ ಹರ್ಷಿಕಾ

**ರವಿವರ್ಮರ ಕುಂಚದಲ್ಲಿ ಅರಳಿದ ನಾರಿ**

ಇನ್ನು ಕೆಲವೇ ದಿನಗಳಲ್ಲಿ ಚೊಚ್ಚಲ ಮಗುವಿಗೆ ಜನ್ಮ ನೀಡಲು ತಯಾರಾಗಿರುವ ತುಂಬು ಗರ್ಭಿಣಿ ಹರ್ಷಿಕಾ ಪೂಣಚ್ಚ ಹೊಸದೊಂದು ಫೋಟೋಶೂಟ್‌ನಲ್ಲಿ ಮಿಂಚಿದ್ದಾರೆ. ಬೆಲೆಕಟ್ಟಲಾಗದ ಕುಂಚ ಮಾಂತ್ರಿಕ ರವಿಮರ್ಮರ ಪೇಂಟಿಂಗ್ ರೀತಿ ಪೋಸ್ ಕೊಟ್ಟಿದ್ದಾರೆ. ಗುಲಾಬಿ ಬಣ್ಣದ ಸೀರೆಯಲ್ಲಿ ಸರಳ ಹಾಗೂ ಸಾಂಪ್ರದಾಯಿಕ ನೋಟದಲ್ಲಿ ಕಂಗೊಳಿಸಿದ್ದಾರೆ. ಹಿಂದೆಯೂ ಹರ್ಷಿಕಾ ಪೂಣಚ್ಚ ರವಿವರ್ಮರ ಕುಂಚದಲ್ಲಿ ಅರಳಿದ ಸುಂದರ ನಾರಿಯ ಪೋಸ್‌ನ್ನೇ ಹೋಲುವಂತೆ ಫೋಟೋಶೂಟ್ ಮಾಡಿಸಿದ್ದರು. ಅದು ಬಹಳ ಮೆಚ್ಚುಗೆ ಬಂದ ಕಾರಣ ಇದೀಗ ರವಿವರ್ಮರ ಇನ್ನೊಂದು ಕಲಾಕೃತಿ ಹಂಸ ದಮಯಂತಿ ಚಿತ್ರದಂತೆ ಪೋಸ್ ಕೊಟ್ಟಿದ್ದಾರೆ ಕೊಡಗಿನ ಬೆಡಗಿ ಹರ್ಷಿಕಾ ಪೂಣಚ್ಚಾ. ಅಕ್ಟೋಬರ್ ತಿಂಗಳಲ್ಲಿ ಹರ್ಷಿಕಾ ಹಾಗೂ ಭುವನ್ ಪೊನ್ನಣ್ಣ ತಾರಾದಂಪತಿ ಮೊದಲ ಮಗುವಿನ ನಿರೀಕ್ಷೆಯಲ್ಲಿದ್ದಾರೆ. ಹೀಗಾಗಿ ಮಗುವಿನ ಆಗಮನದ ಖುಷಿಯನ್ನ ಇನ್ಸ್ಟಾದಲ್ಲಿ ಹಂಚಿಕೊಳ್ಳುತ್ತಿದ್ದಾರೆ. ಈಗ ಮತ್ತೊಂದು ವಿಭಿನ್ನ ಶೈಲಿಯಲ್ಲಿ ಫೋಟೂಶೂಟ್ ಮಾಡಿಸಿ ಗಮನ ಸೆಳೆದಿದ್ದಾರೆ ಗರ್ಭಿಣಿ ನಟಿ ಹರ್ಷಿಕಾ.


# ಅರ್ಜುನ್ ಜನ್ಯರ ಚೊಚ್ಚಲ ಸಿನಿಮಾ



**ಉಪೇಂದ್ರ ಜೊತೆ ನಟಿಸಲು ಸಿದ್ಧ**

ಕರುನಾಡ ಚಕ್ರವರ್ತಿ ಶಿವರಾಜಕುಮಾರ್, ರಿಯಲ್ ಸ್ಟಾರ್ ಉಪೇಂದ್ರ, ಹಾಗೂ ರಾಜ್ ಬಿ ಶೆಟ್ಟಿ ಅಭಿನಯದ, ಖ್ಯಾತ ಸಂಗೀತ ನಿರ್ದೇಶಕ ಅರ್ಜುನ್ ಜನ್ಯ ಚೊಚ್ಚಲ ನಿರ್ದೇಶನದ ಹಾಗೂ ಸೂರಜ್ ಪ್ರೊಡಕ್ಷನ್ಸ್ ಲಾಂಛನದಲ್ಲಿ ಶ್ರೀಮತಿ ಉಮಾ ರಮೇಶ್ ರೆಡ್ಡಿ ಅವರು ನಿರ್ಮಿಸುತ್ತಿರುವ ಬಹು ನಿರೀಕ್ಷಿತ ''45'' ಚಿತ್ರ ಆರಂಭದಿಂದಲೂ ಸಾಕಷ್ಟು ಕುತೂಹಲ ಮೂಡಿಸಿರುವ ಚಿತ್ರ. ಅಪಾರವೆಚ್ಚದಲ್ಲಿ ಅದ್ದೂರಿಯಾಗಿ ಮೂಡಿಬಂದಿರುವ ಈ ಪ್ಯಾನ್ ಇಂಡಿಯಾ ಚಿತ್ರದ ಚಿತ್ರೀಕರಣ ಮುಕ್ತಾಯವಾಗಿ, ಕುಂಬಳಕಾಯಿ ಒಡೆಯಲಾಗಿದೆ. ಈ ಕುರಿತು ಮಾಹಿತಿ ನೀಡಲು ಆಯೋಜಿಸಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಚಿತ್ರತಂಡದ ಸದಸ್ಯರು ಮಾತನಾಡಿದರು. ಪತ್ರಿಕಾಗೋಷ್ಠಿಗೂ ಮುನ್ನ ಶಿವರಾಜಕುಮಾರ್, ಉಪೇಂದ್ರ ಹಾಗೂ ರಾಜ್ ಬಿ ಶೆಟ್ಟಿ ಅವರನ್ನು ನಿರ್ಮಾಪಕ ರಮೇಶ್ ರೆಡ್ಡಿ ಅವರು ಸನ್ಮಾನಿಸಿದರು.

ಮೊದಲು ಮಾತನಾಡಿದ ಶಿವರಾಜಕುಮಾರ್ ಅವರು, ''45'' ಚಿತ್ರದ ಚಿತ್ರೀಕರಣದಲ್ಲಿ ಪಾಲ್ಗೊಂಡಿದ್ದು ಬಹಳ ಖುಷಿಯಾಗಿದೆ. ಈ ಚಿತ್ರದಲ್ಲಿ ನಾವು ಮೂವರು ನಟಿಸಿದ್ದೇವೆ. ಅವರು ಮುಂದು. ಇವರು ಮುಂದು ಅಂತ ಇಲ್ಲ. ಇಲ್ಲಿ ಎಲ್ಲಾರು ಒಂದೇ. ಉಪೇಂದ್ರ ಅವರ ಜೊತೆ ನಟಿಸಲು ನಾನು ಯಾವಾಗಲೂ ಸಿದ್ದ. ರಾಜ್ ಬಿ ಶೆಟ್ಟಿ ಅವರ ಜೊತೆಗೆ ನಟಿಸಿದ್ದು ಸಂತೋಷವಾಗಿದೆ. ಅರ್ಜುನ್ ಜನ್ಯ ಅವರ ಮೊದಲ ನಿರ್ದೇಶನದ ಚಿತ್ರ ಅಂತ ಹೇಳಲಿಕ್ಕೆ ಆಗಲ್ಲ. ಅಷ್ಟು ಅದ್ಭುತ ನಿರ್ದೇಶನ ಅವರದು. ಅಷ್ಟೇ ಅದ್ದೂರಿಯಾಗಿ ರಮೇಶ್ ರೆಡ್ಡಿ ನಿರ್ಮಾಣ ಮಾಡಿದ್ದಾರೆ. ರವಿವರ್ಮ ಅವರ ಸಾಹಸ ನಿರ್ದೇಶನದಲ್ಲಿ ಮೂಡಿಬಂದಿರುವ ಸಾಹಸ ಸನ್ನಿವೇಶಗಳು ಸೂಪರ್. ''45'' ಇಡೀ ಭಾರತೀಯರೆ ಮೆಚ್ಚುವಂತಹ ಆಕ್ಷನ್ ಚಿತ್ರವಾಗಲಿದೆ ಎಂದರು. ಕಥೆಯನ್ನು ಅನಿಮೇಷನ್ ಮೂಲಕ ಹೇಳಿದ್ದನ್ನು ನಾನು ಹಾಲಿವುಡ್ ನಲ್ಲಿ ಕೇಳಿದ್ದೆ. ಆದರೆ ಅರ್ಜುನ್ ಜನ್ಯ ಅವರು ಕನ್ನಡದಲ್ಲೇ ಅದನ್ನು ಮಾಡಿ ತೋರಿಸಿದ್ದಾರೆ. ಅಷ್ಟೇ ಅಲ್ಲದೇ ಅನಿಮೇಷನ್ ಮೂಲಕ ಕಥೆ ಹೇಳಿದ ರೀತಿಯಲ್ಲೇ ಚಿತ್ರವನ್ನೂ ಮಾಡಿದ್ದಾರೆ. ಅರ್ಜುನ್ ಜನ್ಯ ಅವರು ಅಂದುಕೊಂಡಂತೆ ಚಿತ್ರ ಮಾಡಲು ನಿರ್ಮಾಪಕ ರಮೇಶ್ ರೆಡ್ಡಿ ಸಾಥ್ ನೀಡಿದ್ದಾರೆ.




# ಮಿಥುನ್ ಚಕ್ರವರ್ತಿಗೆ ದಾದಾಸಾಹೇಬ್ ಫಾಲ್ಕೆ

## 70ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ ಸಮಾರಂಭದಲ್ಲಿ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗುವುದು

ಬಾಲಿವುಡ್ ಹಿರಿಯ ನಟ ಮಿಥುನ್ ಚಕ್ರವರ್ತಿ ಅವರಿಗೆ ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿಯನ್ನು ಘೋಷಣೆ ಮಾಡಿದ್ದು, ಅ.08 ರಂದು ನಡೆಯಲಿರುವ 70ನೇ ರಾಷ್ಟ್ರೀಯ ಚಲನಚಿತ್ರೋತ್ಸವದಲ್ಲಿ ಪ್ರಶಸ್ತಿಯನ್ನು ಸ್ವೀಕರಿಸಲಿದ್ದಾರೆ. ಈ ಕುರಿತು ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ತಮ್ಮ ಎಕ್ಸ್ ಖಾತೆಯಲ್ಲಿ ಮಾಹಿತಿಯನ್ನು ಹಂಚಿಕೊಂಡಿದ್ದಾರೆ. ಮಿಥುನ್ ಅವರ ಗಮನಾರ್ಹ ಸಿನಿಮೀಯ ಪ್ರಯಾಣವು ಪೀಳಿಗೆಗೆ ಸ್ಫೂರ್ತಿ ನೀಡುತ್ತದೆ. ಭಾರತೀಯ ಚಿತ್ರರಂಗಕ್ಕೆ ಅವರ ಅಪ್ರತಿಮ ಕೊಡುಗೆಗಾಗಿ ಪೌರಾಣಿಕ ನಟರಾದ ಶಾ.ಮಿಥುನ್ ಚಕ್ರವರ್ತಿಯವರನ್ನು ದಾದಾಸಾಹೇಬ್ ಫಾಲ್ಕೆ ತೀರ್ಪುಗಾರರ ಸಮಿತಿಯು ಆಯ್ಕೆ ಮಾಡಿದೆ. ಅ.8 ರಂದು 70ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ ಸಮಾರಂಭದಲ್ಲಿ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗುವುದು ಎಂದು ಬರೆದುಕೊಂಡಿದ್ದು, ಪೋಸ್ಟ್ ಹಂಚಿಕೊಂಡಿದ್ದಾರೆ. ದಾದಾಸಾಹೇಬ್ ಫಾಲ್ಕೆ ಆಯ್ಕೆ ಸಮಿತಿಯು ಭಾರತೀಯ ಚಿತ್ರರಂಗಕ್ಕೆ ಅಪ್ರತಿಮ ಕೊಡುಗೆಗಾಗಿ ಖ್ಯಾತ ನಟ, ಶಾ. ಮಿಥುನ್ ಚಕ್ರವರ್ತಿ ಅವರಿಗೆ ಪ್ರಶಸ್ತಿ ನೀಡಲು ನಿರ್ಧರಿಸಿದೆ ಎಂದು ಘೋಷಿಸಲು ಸಂತೋಷವಾಗುತ್ತದೆ ಎಂದಿದ್ದಾರೆ. ಜೊತೆಗೆ ಈ ವರ್ಷದ ಆರಂಭದಲ್ಲಿ ಮಿಥುನ್ ಚಕ್ರವರ್ತಿ ಅವರಿಗೆ ಭಾರತದ ಮೂರನೇ ಅತ್ಯುನ್ನತ ನಾಗರಿಕ ಪ್ರಶಸ್ತಿ ಪದ್ಮಭೂಷಣವನ್ನು ಘೋಷಿಸಲಾಗಿತ್ತು.

# ಬಿಗ್ ಬಾಸ್ ಸಮೀರ್ ಆಚಾರ್ಯ ದಾಂಪತ್ಯದಲ್ಲಿ ಕಲಹ



**ಮೊಬೈಲ್ ಒಡೆದು ಹಾಕಿ ಹಲ್ಲೆ**

ಒಂದು ಕಡೆ ಬಿಗ್ ಬಾಸ್ ಹನ್ನೊಂದರ ಸೀಸನ್‌ಗೆ ಅದ್ದೂರಿ ಚಾಲನೆ ಸಿಕ್ಕಿದ್ದರೆ, ಮತ್ತೊಂದು ಕಡೆ ಮಾಜಿ ಬಿಗ್ ಬಾಸ್ ದಾಂಪತ್ಯದಲ್ಲಿ ಕಲಹ ಉಂಟಾಗಿದೆ. ಈ ಜೋಡಿ ಹೊಡೆದಾಡಿಕೊಂಡು ಠಾಣೆ ಮೆಟ್ಟಿಲೇರಿದ ಪ್ರಸಂಗವೂ ನಡೆದಿದೆ. ಹೌದು. ಬಿಗ್‌ಬಾಸ್ ಮತ್ತು ಕನ್ನಡದ ಕೋಟ್ಯಾಧಿಪತಿ ಖ್ಯಾತಿಯ ಸಮೀರ್ ಆಚಾರ್ಯ ದಂಪತಿ ಬಾಳಲ್ಲಿ ಬಿರುಕು ಕಾಣಿಸಿಕೊಂಡಿದ್ದು, ಮಗುವಿಗೆ ಬೈದಿದ್ದಕ್ಕೆ ಗಂಡ, ಅತ್ತೆ, ಮಾವ ಸೇರಿ ಥಳಿಸಿದ್ದಾರೆ ಎಂದು ಸಮೀರ್ ಆಚಾರ್ಯ ಪತ್ನಿ ಹುಬ್ಬಳ್ಳಿ ಮಹಿಳಾ ಠಾಣೆ ಮೆಟ್ಟಿಲೇರಿದ್ದಾರೆ. ಹುಬ್ಬಳ್ಳಿ ವಿಶ್ವೇಶ್ವರ ನಗರದಲ್ಲಿ ಘಟನೆ ನಡೆದಿದೆ. ಮಗಳು ಅಳುತ್ತಿದ್ದ ಕಾರಣಕ್ಕೆ ಸಮೀರ್ ಪತ್ನಿ ಶ್ರಾವಣಿ ಗದಸಿದ್ದಾರೆ. ಅಷ್ಟಕ್ಕೇ ಸಮೀರ್ ತಂದೆ ಆಕೆಯನ್ನ ಬೈದಿದ್ದಾರೆ. ಇದೇ ವಿಷಯ ದೊಡ್ಡದಾಗಿ ಬೆಳೆದು, ಪತಿ ಸಮೀರ್ ತಮ್ಮ ತಂದೆ ತಾಯಿ ಜೊತೆ ಸೇರಿಕೊಂಡು ಮನಬಂದಂತೆ ಹಲ್ಲೆ ಮಾಡಿದ್ದಾರೆ ಎಂದು ಶ್ರಾವಣಿ ಆರೋಪಿಸಿದ್ದಾರೆ. ಅಲ್ಲದೇ ಘಟನೆ ವೇಳೆ ಇನ್ಸ್ಟಾಗ್ರಾಂನಲ್ಲಿ ಲೈವ್ ಹೋಗಿದ್ದಕ್ಕೆ ತನ್ನ ಮೊಬೈಲ್ ಒಡೆದು ಹಾಕಿ ಹಲ್ಲೆ ಮಾಡಿದ್ದಾರೆ ಎಂದು ದೂರಿದ್ದಾರೆ. ಇನ್ನೊಂದೆಡೆ ಸಮೀರ್ ಆಚಾರ್ಯ ತಂದೆಯ ತಲೆಗೂ ಗಾಯಗಳಾಗಿವೆ ಎಂದು ತಿಳಿದುಬಂದಿದೆ.



# ನಾನು ತಂದೆಯಾಗಿದ್ದೇನೆ ಪಬ್ಲಿಕ್‌ನಲ್ಲಿ ರಣವೀರ್ ಸಂಭ್ರಮ

ಬಾಲಿವುಡ್ ನಟ ರಣ್‌ವೀರ್ ಸಿಂಗ್ ಅವರು ತಂದೆಯಾದ ಖುಷಿಯಲ್ಲಿದ್ದಾರೆ. ಮುದ್ದು ಮಗಳ ಆಗಮನದ ನಂತರ ಇದೀಗ ಸಾರ್ವಜನಿಕವಾಗಿ ನಟ ಕಾಣಿಸಿಕೊಂಡಿದ್ದಾರೆ. ಸಮಾ ರಂಭವೊಂದರಲ್ಲಿ ನಾನು ತಂದೆಯಾಗಿದ್ದೇನೆ ಎಂದು ರಣ್ ವೀರ್ ಸಂಭ್ರಮಿಸಿದ್ದಾರೆ. ಮನೆಗೆ ಮುದ್ದು ಮಗಳ ಆಗಮನದ ಖುಷಿಯಲ್ಲಿದ್ದಾರೆ ರಣ್‌ವೀರ್ ಸಿಂಗ್ ದಂಪತಿ. ಮಗಳ ಆರೈಕೆಯಲ್ಲಿ ಬ್ಯುಸಿಯಾಗಿದ್ದ ರಣ್‌ವೀರ್ ಇದೀಗ ಅನಂತ್ ಅಂಬಾನಿ ಆಯೋಜಿಸಿದ ಕಾರ್ಯಕ್ರಮವೊಂದರಲ್ಲಿ ಭಾಗಿಯಾಗಿದ್ದು, ನಾನು ತಂದೆಯಾಗಿದ್ದೇನೆ ಎಂದು ಪಬ್ಲಿಕ್‌ನಲ್ಲಿ ಪಾಪರಾಜಿಗಳ ಮುಂದೆ ಸಂಭ್ರಮಿಸಿದ್ದಾರೆ. ಅವರು ಖುಷಿ ಹಂಚಿಕೊಂಡ ವಿಡಿಯೋವೊಂದು ಸೋಶಿಯಲ್ ಮೀಡಿಯಾದಲ್ಲಿ ಸದ್ದು ಮಾಡುತ್ತಿದೆ. ಇನ್ನೂ 2018ರಲ್ಲಿ ರಣ್ ವೀರ್ ಸಿಂಗ್ ಮತ್ತು ದೀಪಿಕಾ ಪಡುಕೋಣೆ ಮದುವೆಯಾದರು. ಹಲವು ವರ್ಷಗಳ ಪ್ರೀತಿಗೆ ಗುರುಹಿರಿಯರ ಸಮ್ಮತಿ ಪಡೆದು ಹೊಸ ಬಾಳಿಗೆ ಕಾಲಿಟ್ಟರು. ಸೆ.8ರಂದು ದೀಪಿಕಾ ಹೆಣ್ಣು ಮಗುವಿಗೆ ಜನ್ಮ ನೀಡಿದರು.


# ಶತಕ ಸಿಡಿಸಿ ದಾಖಲೆ ಬರೆದ ಹಕ್

ಭಾರತ ಮತ್ತು ಬಾಂಗ್ಲಾದೇಶ್ ನಡುವಣ 2ನೇ ಟೆಸ್ಟ್ ಪಂದ್ಯವು ಶುಕ್ರವಾರ ಶುರುವಾದರೆ, ಇನ್ನೂ ಸಹ ಮೊದಲ ಇನಿಂಗ್ಸ್ ಮುಗಿದಿಲ್ಲ. ಇದಕ್ಕೆ ಮುಖ್ಯ ಕಾರಣ 2ನೇ ಮತ್ತು 3ನೇ ದಿನದಾಟಗಳು ಸಂಪೂರ್ಣ ಮಳೆಗೆ ಅಹುತಿಯಾಗಿರುವುದು. ಇದೀಗ ನಾಲ್ಕನೇ ದಿನದಾಟದಲ್ಲಿ ಮೊಮಿನುಲ್ ಹಕ್ ಶತಕ ಪೂರೈಸಿದ್ದಾರೆ. ಕಾನ್ಪುರದ ಗ್ರೀನ್ ಪಾರ್ಕ್ ಮೈದಾನದಲ್ಲಿ ನಡೆಯುತ್ತಿರುವ ಭಾರತದ ವಿರುದ್ಧದ 2ನೇ ಟೆಸ್ಟ್ ಪಂದ್ಯದಲ್ಲಿ ಬಾಂಗ್ಲಾದೇಶ್ ಬ್ಯಾಟರ್ ಮೊಮಿನುಲ್ ಹಕ್ ಶತಕ ಸಿಡಿಸಿ ಮಿಂಚಿದ್ದಾರೆ. ಈ ಪಂದ್ಯದಲ್ಲಿ ಟಾಸ್ ಗೆದ್ದ ಟೀಮ್ ಇಂಡಿಯಾ ನಾಯಕ ರೋಹಿತ್ ಶರ್ಮಾ ಬಾಂಗ್ಲಾ ತಂಡವನ್ನು ಬ್ಯಾಟಿಂಗ್‌ಗೆ ಆಹ್ವಾನಿಸಿದ್ದರು.

ಅದರಂತೆ ಪ್ರಥಮ ಇನಿಂಗ್ಸ್ ಆಡುತ್ತಿರುವ ಬಾಂಗ್ಲಾದೇಶ್ ಪರ ಮೊಮಿನುಲ್ ಹಕ್ ಉತ್ತಮ ಬ್ಯಾಟಿಂಗ್ ಪ್ರದರ್ಶಿಸಿದ್ದಾರೆ. ಬಾಂಗ್ಲಾದೇಶ್ ತಂಡವು ಕೇವಲ 29 ರನ್‌ಗಳಿಗೆ 2 ವಿಕೆಟ್ ಕಳೆದುಕೊಂಡು ಸಂಕಷ್ಟಕ್ಕೆ ಸಿಲುಕಿದ್ದ ಸಂದರ್ಭ ಕ್ರೀಸ್‌ಗೆ ಆಗಮಿಸಿದ ಮೊಮಿನುಲ್ ಹಕ್ ಟೀಮ್ ಇಂಡಿಯಾ ಬೌಲರ್‌ಗಳನ್ನು ದಿಟ್ಟವಾಗಿಯೇ ಎದುರಿಸಿದರು. ಅದರಲ್ಲೂ ಆಫ್ ಸೈಡ್‌ನತ್ತ ಅತ್ಯುತ್ತಮ ಹೊಡೆತಗಳ ಮೂಲಕ ರನ್ ಕಲೆಹಾಕುತ್ತಾ ಸಾಗಿದರು. ಒಂದೆಡೆ ವಿಕೆಟ್ ಬೀಳುತ್ತಿದ್ದರೂ ಮತ್ತೊಂದೆಡೆ ಗಟ್ಟಿಯಾಗಿ ನೆಲೆಯೂರಿದ ಮೊಮಿನುಲ್ ಹಕ್ 172 ಎಸೆತಗಳಲ್ಲಿ ಶತಕ ಪೂರೈಸಿದರು. ಈ ಮೂಲಕ ಭಾರತದಲ್ಲಿ ಟೆಸ್ಟ್ ಶತಕ ಸಿಡಿಸಿದ ಬಾಂಗ್ಲಾದೇಶದ 2ನೇ ಬ್ಯಾಟರ್ ಎನಿಸಿಕೊಂಡರು. ಇದಕ್ಕೂ ಮುನ್ನ 2017 ರಲ್ಲಿ ಹೈದರಾಬಾದ್‌ನಲ್ಲಿ ನಡೆದ ಟೆಸ್ಟ್ ಪಂದ್ಯದಲ್ಲಿ ಮುಶ್ಫಿಕುರ್ ರಹೀಮ್ 127 ರನ್ ಬಾರಿಸಿದ್ದರು. ಇದೀಗ ಕಾನ್ಪುರದಲ್ಲಿ ಸೆಂಚುರಿ ಸಿಡಿಸುವ ಮೂಲಕ ಮೊಮಿನುಲ್ ಹಕ್ ಭಾರತದಲ್ಲಿ ಈ ಸಾಧನೆ ಮಾಡಿದ ಬಾಂಗ್ಲಾದೇಶ್ ತಂಡದ 2ನೇ ಬ್ಯಾಟ್ಸ್‌ಮನ್ ಎನಿಸಿಕೊಂಡಿದ್ದಾರೆ. ಇನ್ನು ಮೊಮಿನುಲ್ ಅವರ ಶತಕದ ನೆರವಿನಿಂದ ಬಾಂಗ್ಲಾದೇಶ್ ತಂಡವು ಭೋಜನಾ ವಿರಾಮದ ವೇಳೆಗೆ 6 ವಿಕೆಟ್ ಕಳೆದುಕೊಂಡು 205 ರನ್ ಕಲೆಹಾಕಿದೆ. ಸದ್ಯ ಕ್ರೀಸ್‌ನಲ್ಲಿ 176 ಎಸೆತಗಳಲ್ಲಿ 16 ಫೋರ್ ಹಾಗೂ 1 ಸಿಕ್ಸ್‌ನೊಂದಿಗೆ 102 ರನ್ ಬಾರಿಸಿರುವ ಮೊಮಿನುಲ್ ಹಕ್ ಹಾಗೂ ಮೆಹದಿ ಹಸನ್ ಮಿರಾಝ್ (6) ಬ್ಯಾಟಿಂಗ್ ಕಾಯ್ದುಕೊಂಡಿದ್ದಾರೆ. ಟೀಮ್ ಇಂಡಿಯಾ ಪರ ರವಿಚಂದ್ರನ್ ಅಶ್ವಿನ್ ಹಾಗೂ ಆಕಾಶ್ ದೀಪ್ ತಲಾ 2 ವಿಕೆಟ್ ಪಡೆದರೆ, ಮೊಹಮ್ಮದ್ ಸಿರಾಜ್ ಮತ್ತು ಜಸ್‌ಪ್ರೀತ್ ಬುಮ್ರಾ ಒಂದೊಂದು ವಿಕೆಟ್ ಕಬಳಿಸಿದ್ದಾರೆ.

**ಭಾರತ ಪ್ಲೇಯಿಂಗ್ 11:** ಯಶಸ್ವಿ ಜೈಸ್ವಾಲ್, ರೋಹಿತ್ ಶರ್ಮಾ (ನಾಯಕ), ಶುಭ್‌ಮನ್ ಗಿಲ್, ವಿರಾಟ್ ಕೊಹ್ಲಿ, ರಿಷಭ್ ಪಂತ್ (ವಿಕೆಟ್ ಕೀಪರ್), ಕೆಎಲ್ ರಾಹುಲ್, ರವೀಂದ್ರ ಜಡೇಜಾ, ರವಿಚಂದ್ರನ್ ಅಶ್ವಿನ್, ಆಕಾಶ್ ದೀಪ್, ಜಸ್‌ಪ್ರೀತ್ ಬುಮ್ರಾ, ಮೊಹಮ್ಮದ್ ಸಿರಾಜ್.

**ಬಾಂಗ್ಲಾದೇಶ್ ಪ್ಲೇಯಿಂಗ್ 11:** ಶಾದ್ಮಾನ್ ಇಸ್ಲಾಂ, ಜಾಕಿರ್ ಹಸನ್, ನಜ್ಮುಲ್ ಹೊಸೈನ್ ಶಾಂತೊ (ನಾಯಕ), ಮೊಮಿನುಲ್ ಹಕ್, ಮುಶ್ಫಿಕರ್ ರಹೀಮ್, ಶಕೀಬ್ ಅಲ್ ಹಸನ್, ಲಿಟನ್ ದಾಸ್ (ವಿಕೆಟ್ ಕೀಪರ್), ಮೆಹದಿ ಹಸನ್ ಮಿರಾಝ್, ತೈಜುಲ್ ಇಸ್ಲಾಂ, ಹಸನ್ ಮಹಮೂದ್, ಖಾಲಿದ್ ಅಹ್ಮದ್.



# ಟೆಸ್ಟ್ ಕ್ರಿಕೆಟ್ ಸ್ವರೂಪವನ್ನೇ ಬುಡಮೇಲು ಮಾಡಿದ ಟೀಮ್ ಇಂಡಿಯಾ

## ಈ ನೂರ ಮೂವತ್ತೆಂಟು ರನ್‌ಗಳಲ್ಲಿ 100 ರನ್ ಮೂಡಿ ಬಂದಿರುವುದು ಕೇವಲ 10.1 ಓವರ್‌ಗಳಲ್ಲಿ ಎಂಬುದು ವಿಶೇಷ




**ಹೊಸ ಇತಿಹಾಸ ನಿರ್ಮಿಸಿದ ಭಾರತ ತಂಡ**

ಬಾಂಗ್ಲಾದೇಶ್ ವಿರುದ್ಧದ 2ನೇ ಟೆಸ್ಟ್‌ನಲ್ಲಿ ಪ್ರಥಮ ಇನಿಂಗ್ಸ್ ಆಡುತ್ತಿರುವ ಟೀಮ್ ಇಂಡಿಯಾ ಚಹಾ ವಿರಾಮದ ವೇಳೆಗೆ 16 ಓವರ್‌ಗಳಲ್ಲಿ 2 ವಿಕೆಟ್ ಕಳೆದುಕೊಂಡು 138 ರನ್ ಕಲೆಹಾಕಿದೆ. ಈ ನೂರ ಮೂವತ್ತೆಂಟು ರನ್‌ಗಳಲ್ಲಿ 100 ರನ್ ಮೂಡಿ ಬಂದಿರುವುದು ಕೇವಲ 10.1 ಓವರ್‌ಗಳಲ್ಲಿ ಎಂಬುದು ವಿಶೇಷ. ಬಾಂಗ್ಲಾದೇಶ್ ವಿರುದ್ಧದ 2ನೇ ಟೆಸ್ಟ್ ಪಂದ್ಯದ ಮೂಲಕ ಟೀಮ್ ಇಂಡಿಯಾ ಹೊಸ ಇತಿಹಾಸ ನಿರ್ಮಿಸಿದೆ. ಅದು ಕೂಡ ಅತೀ ಕಡಿಮೆ ಓವರ್‌ಗಳಲ್ಲಿ ಅರ್ಧಶತಕ ಹಾಗೂ ಶತಕಗಳನ್ನು ಪೂರೈಸುವ ಮೂಲಕ ಎಂಬುದು ವಿಶೇಷ. ಅಂದರೆ 147 ವರ್ಷಗಳ ಟೆಸ್ಟ್ ಕ್ರಿಕೆಟ್‌ನಲ್ಲಿ ಅತೀ ವೇಗವಾಗಿ 100 ರನ್ ಕಲೆಹಾಕಿದ ವಿಶ್ವ ದಾಖಲೆ ಇದೀಗ ಟೀಮ್ ಇಂಡಿಯಾ ಪಾಲಾಗಿದೆ. ಕಾನ್ಪುರದ ಗ್ರೀನ್ ಪಾರ್ಕ್ ಮೈದಾನದಲ್ಲಿ ನಡೆಯುತ್ತಿರುವ ಈ ಪಂದ್ಯದ ಮೊದಲ ಇನಿಂಗ್ಸ್‌ನಲ್ಲಿ ಟೀಮ್ ಇಂಡಿಯಾ ಆರಂಭಿಕರಾದ ರೋಹಿತ್ ಶರ್ಮಾ ಹಾಗೂ ಯಶಸ್ವಿ ಜೈಸ್ವಾಲ್ ಕೇವಲ ಮೂರು ಓವರ್‌ಗಳಲ್ಲಿ 50 ರನ್ ಕಲೆಹಾಕಿದರು. ಈ ಮೂಲಕ ಟೆಸ್ಟ್ ಕ್ರಿಕೆಟ್‌ನಲ್ಲಿ ಅತೀ ವೇಗವಾಗಿ ಅರ್ಧಶತಕ ಬಾರಿಸಿದ್ದ ಇಂಗ್ಲೆಂಡ್ (4.2 ಓವರ್) ತಂಡದ ದಾಖಲೆಯನ್ನು ಮುರಿದರು. ಅರ್ಧಶತಕದ ಬೆನ್ನಲ್ಲೇ ಟೀಮ್ ಇಂಡಿಯಾ ನಾಯಕ ರೋಹಿತ್ ಶರ್ಮಾ (23) ವಿಕೆಟ್ ಒಪ್ಪಿಸಿದರು. ಈ ಹಂತದಲ್ಲಿ ಯಶಸ್ವಿ ಜೈಸ್ವಾಲ್ ಜೊತೆಗೂಡಿದ ಗಿಲ್ ಕೂಡ ಬಿರುಸಿನ ಬ್ಯಾಟಿಂಗ್ ಪ್ರದರ್ಶಿಸಿದರು. ಈ ಮೂಲಕ ಟೀಮ್ ಇಂಡಿಯಾ ಕೇವಲ 10.1 ಓವರ್‌ಗಳಲ್ಲಿ 100 ರನ್ ಕಲೆಹಾಕಿ, ಟೆಸ್ಟ್‌ನಲ್ಲಿ ಅತೀ ವೇಗವಾಗಿ ನೂರು ರನ್ ಪೂರೈಸಿದ ಹೊಸ ವಿಶ್ವ ದಾಖಲೆ ಬರೆಯಿತು. ಇದಕ್ಕೂ ಮುನ್ನ ಈ ವಿಶ್ವದಾಖಲೆ ಭಾರತ ತಂಡದ ಹೆಸರಿನಲ್ಲಿಯೇ ಇತ್ತು ಎಂಬುದು ವಿಶೇಷ.

2023 ರಲ್ಲಿ ವೆಸ್ಟ್ ಇಂಡೀಸ್ ವಿರುದ್ಧದ ಟೆಸ್ಟ್ ಪಂದ್ಯದಲ್ಲಿ ಟೀಮ್ ಇಂಡಿಯಾ 12.2 ಓವರ್‌ಗಳಲ್ಲಿ ಶತಕ ಪೂರೈಸಿದ್ದರು. ಇದೀಗ ತನ್ನದೇ ದಾಖಲೆಯನ್ನು ಮುರಿದು 10.1 ಓವರ್‌ಗಳಲ್ಲಿ ಭಾರತ ತಂಡವು ಹೊಸ ಇತಿಹಾಸ ನಿರ್ಮಿಸಿದೆ.

ಇನ್ನು ಈ ಪಂದ್ಯದಲ್ಲಿ ಟೀಮ್ ಇಂಡಿಯಾದ ಎಡಗೈ ದಾಂಡಿಗ ಯಶಸ್ವಿ ಜೈಸ್ವಾಲ್ (72) ಕೇವಲ 31 ಎಸೆತಗಳಲ್ಲಿ ಅರ್ಧಶತಕ ಪೂರೈಸಿದ್ದರು. ಈ ಅರ್ಧಶತಕದೊಂದಿಗೆ ಭಾರತದ ಪರ ಟೆಸ್ಟ್‌ನಲ್ಲಿ ಅತೀ ವೇಗವಾಗಿ ಹಾಫ್ ಸೆಂಚುರಿ ಸಿಡಿಸಿದ 4ನೇ ಬ್ಯಾಟರ್ ಎನಿಸಿಕೊಂಡರು. ಈ ಪಟ್ಟಿಯಲ್ಲಿ 28 ಎಸೆತಗಳಲ್ಲಿ ಅರ್ಧಶತಕ ಬಾರಿಸಿದ ರಿಷಭ್ ಪಂತ್ ಅಗ್ರಸ್ಥಾನದಲ್ಲಿದ್ದಾರೆ.

# ಪೂರನ್ ತೂಫಾನ್ ಸೆಂಚುರಿಗೆ ವಾರಿಯರ್ಸ್ ಪಡೆ ತತ್ತರ

ಕೆರಿಬಿಯನ್ ಪ್ರೀಮಿಯರ್ ಲೀಗ್‌ನಲ್ಲಿ ನಿಕೋಲಸ್ ಪೂರನ್ 3ನೇ ಶತಕ ಸಿಡಿಸಿದ್ದಾರೆ. ಈ ಶತಕದೊಂದಿಗೆ ಸಿಪಿಎಲ್ ಇತಿಹಾಸದಲ್ಲೇ ಅತ್ಯಧಿಕ ಸೆಂಚುರಿ ಬಾರಿಸಿದ ಬ್ಯಾಟರ್‌ಗಳ ಪಟ್ಟಿಯಲ್ಲಿ 2ನೇ ಸ್ಥಾನಕ್ಕೇರಿದ್ದಾರೆ. ಈ ದಾಖಲೆ ಪಟ್ಟಿಯಲ್ಲಿ ಡ್ವೇನ್ ಸ್ಮಿತ್ ಹಾಗೂ ಕ್ರಿಸ್ ಗೇಲ್ ಅಗ್ರಸ್ಥಾನದಲ್ಲಿದ್ದು, ಈ ಇಬ್ಬರು ಆಟಗಾರರು ತಲಾ 4 ಶತಕ ಸಿಡಿಸಿದ್ದಾರೆ. ಕೆರಿಬಿಯನ್ ಪ್ರೀಮಿಯರ್ ಲೀಗ್‌ನಲ್ಲಿ ನಿಕೋಲಸ್ ಪೂರನ್ ಸಿಡಿಲಬ್ಬರ ಮುಂದುವರೆದಿದೆ. ಸೇಂಟ್ ಕಿಟ್ಸ್ ಅಯಂಡ್ ನೆವಿಸ್ ಪೆಟ್ರಿಯಾಟ್ಸ್ ವಿರುದ್ಧ 43 ಎಸೆತಗಳಲ್ಲಿ 93 ಬಾರಿಸಿದ್ದ ಪೂರನ್ ಈ ಬಾರಿ ಭರ್ಜರಿ ಶತಕ ಸಿಡಿಸುವಲ್ಲಿ ಯಶಸ್ವಿಯಾಗಿದ್ದಾರೆ. ಗಯಾನಾದ ಪ್ರಾವಿಡೆನ್ಸ್ ಸ್ಟೇಡಿಯಂನಲ್ಲಿ ನಡೆದ ಗಯಾನಾ ಅಮೆಝೂನ್ ವಾರಿಯರ್ಸ್ ವಿರುದ್ಧದ ಈ ಪಂದ್ಯದಲ್ಲಿ ಟಾಸ್ ಗೆದ್ದ ಟ್ರಿನ್‌ಬಾಗೊ ನೈಟ್ ರೈಡರ್ಸ್ ತಂಡದ ನಾಯಕ ಕೀರನ್ ಪೊಲಾರ್ಡ್ ಬ್ಯಾಟಿಂಗ್ ಆಯ್ದುಕೊಂಡಿದ್ದರು. ಅದರಂತೆ ಇನಿಂಗ್ಸ್ ಆರಂಭಿಸಿದ ಟಿಕೆಆರ್ ನಿರೀಕ್ಷಿತ ಆರಂಭ ಪಡೆದಿರಲಿಲ್ಲ. ಆರಂಭಿಕ ಆಟಗಾರ ಶಕ್ಕೆರೆ ಪ್ಯಾರಿಸ್ (0) ಮೊದಲ ಓವರ್‌ನಲ್ಲೇ ಶೂನ್ಯಕ್ಕೆ ಔಟಾಗಿದ್ದರು. ಈ ವೇಳೆ ಕಣಕ್ಕಿಳಿದ ನಿಕೋಲಸ್ ಪೂರನ್ ಸಿಡಿಲಬ್ಬರದ ಬ್ಯಾಟಿಂಗ್ ಪ್ರದರ್ಶಿಸಿದರು. ಕ್ರೀಸ್‌ಗೆ ಆಗಮಿಸುತ್ತಿದ್ದಂತೆ ಬಿರುಸಿನ ಬ್ಯಾಟಿಂಗ್‌ಗೆ ಒತ್ತು ನೀಡಿದ ಪೂರನ್ ಮೈದಾನದ ಮೂಲೆ ಮೂಲೆಗೂ ಸಿಕ್ಸ್-ಫೋರ್‌ಗಳ ಸುರಿಮಳೆಗೈದರು. ಈ ಮೂಲಕ ಕೇವಲ 59 ಎಸೆತಗಳಲ್ಲಿ 8 ಸಿಕ್ಸ್ ಹಾಗೂ 9 ಫೋರ್‌ಗಳೊಂದಿಗೆ 101 ರನ್ ಚಚ್ಚಿದರು. ನಿಕೋಲಸ್ ಪೂರನ್ ಅವರ ಈ ಭರ್ಜರಿ ಶತಕದ ನೆರವಿನಿಂದ ಟ್ರಿನ್‌ಬಾಗೊ ನೈಟ್ ರೈಡರ್ಸ್ ತಂಡವು 20 ಓವರ್‌ಗಳಲ್ಲಿ 5 ವಿಕೆಟ್ ಕಳೆದುಕೊಂಡು 211 ರನ್ ಕಲೆಹಾಕಿತು. ಈ ಗುರಿಯನ್ನು ಬೆನ್ನತ್ತಿದ ಗಯಾನಾ ಅಮೆಝೂನ್ ವಾರಿಯರ್ಸ್ ತಂಡವು ಕೇವಲ 137 ರನ್‌ಗಳಿಗೆ ಆಲೌಟ್ ಆಗಿದೆ. ಈ ಮೂಲಕ ಟ್ರಿನ್‌ಬಾಗೊ ನೈಟ್ ರೈಡರ್ಸ್ ತಂಡವು 74 ರನ್‌ಗಳ ಭರ್ಜರಿ ಜಯ ಸಾಧಿಸಿದೆ. ವಿಶೇಷ ಎಂದರೆ ಈ ಪಂದ್ಯದಲ್ಲಿ 8 ಭರ್ಜರಿ ಸಿಕ್ಸ್ ಸಿಡಿಸುವ ಮೂಲಕ ನಿಕೋಲಸ್ ಪೂರನ್ ತಮ್ಮ ಸಿಕ್ಸ್‌ಗಳ ಸಂಖ್ಯೆಯನ್ನು 160 ಕ್ಕೇರಿಸಿದ್ದಾರೆ. ಈ ಮೂಲಕ ಟಿ20 ಕ್ರಿಕೆಟ್ ಇತಿಹಾಸದಲ್ಲೇ ಒಂದೇ ವರ್ಷ ಅತ್ಯಧಿಕ ಸಿಕ್ಸ್ ಬಾರಿಸಿದ ಬ್ಯಾಟರ್ ಎಂಬ ವಿಶ್ವದಾಖಲೆ ಪಟ್ಟಿಯಲ್ಲಿ ಅಗ್ರಸ್ಥಾನ ಅಲಂಕರಿಸಿದ್ದಾರೆ.



# ಬ್ರೂಕ್ ಸಿಡಿಲಬ್ಬರಕ್ಕೆ ಕೊಹ್ಲಿ ದಾಖಲೆ ಧೂಳೀಪಟ



**ಹ್ಯಾರಿ ಬ್ರೂಕ್ ಎರಡು ಭರ್ಜರಿ ದಾಖಲೆ**

ಆಸ್ಟ್ರೇಲಿಯಾ ವಿರುದ್ಧದ ಏಕದಿನ ಸರಣಿಯ ಮೂಲಕ ಇಂಗ್ಲೆಂಡ್ ತಂಡದ ಹಂಗಾಮಿ ನಾಯಕ ಹ್ಯಾರಿ ಬ್ರೂಕ್ ಹೊಸ ವಿಶ್ವದಾಖಲೆ ನಿರ್ಮಿಸಿದ್ದಾರೆ. ಅದು ಸಹ ದಾಖಲೆಗಳ ಸರದಾರ ವಿರಾಟ್ ಕೊಹ್ಲಿಯ ಹೆಸರಿನಲ್ಲಿದ್ದ ವಿಶ್ವದಾಖಲೆಯನ್ನು ಅಳಿಸಿ ಹಾಕುವ ಮೂಲಕ ಎಂಬುದು ವಿಶೇಷ.

ಏಕದಿನ ಕ್ರಿಕೆಟ್ ಇತಿಹಾಸದಲ್ಲೇ ಸರಣಿವೊಂದರಲ್ಲಿ ಅತ್ಯಧಿಕ ರನ್ ಕಲೆಹಾಕಿದ ನಾಯಕನೆಂಬ ವಿಶ್ವದಾಖಲೆ ವಿರಾಟ್ ಕೊಹ್ಲಿ ಹೆಸರಿನಲ್ಲಿತ್ತು. 2019 ರಲ್ಲಿ ಇಂಗ್ಲೆಂಡ್ ವಿರುದ್ಧದ 5 ಪಂದ್ಯಗಳ ಸರಣಿಯಲ್ಲಿ ಕಿಂಗ್ ಕೊಹ್ಲಿ 310 ರನ್ ಬಾರಿಸಿ ಈ ವಲ್ಡ್ ರೆಕಾರ್ಡ್ ನಿರ್ಮಿಸಿದ್ದರು. ಇದೀಗ ಕ್ಯಾಪ್ಟನ್ ಕೊಹ್ಲಿಯ ಹೆಸರಿನ ಈ ದಾಖಲೆಯನ್ನು ಬ್ರೂಕ್ ಮುರಿದಿದ್ದಾರೆ. ಆಸ್ಟ್ರೇಲಿಯಾ ವಿರುದ್ಧದ ಸರಣಿಯಲ್ಲಿ ಇಂಗ್ಲೆಂಡ್ ಏಕದಿನ ತಂಡದ ನಾಯಕನಾಗಿ ಪಾದಾರ್ಪಣೆ ಮಾಡಿದ್ದ ಹ್ಯಾರಿ ಬ್ರೂಕ್ ಭರ್ಜರಿ ಪ್ರದರ್ಶನ ನೀಡಿದ್ದಾರೆ. ಐದು ಇನಿಂಗ್ಸ್‌ಗಳಲ್ಲಿ ಬ್ಯಾಟ್ ಬೀಸಿದ್ದ ಬ್ರೂಕ್ ಒಂದು ಶತಕ ಹಾಗೂ ಎರಡು ಅರ್ಧಶತಕಗೊಂದಿಗೆ ಒಟ್ಟು 312 ರನ್ ಕಲೆಹಾಕಿದ್ದಾರೆ. ಈ ಮೂಲಕ ಏಕದಿನ ಸರಣಿಯವೊಂದರಲ್ಲಿ ಅತ್ಯಧಿಕ ರನ್ ಕಲೆಹಾಕಿದ ಕ್ಯಾಪ್ಟನ್ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ.

ಹಾಗೆಯೇ ಇದೇ ಸರಣಿಯ ಮೂರನೇ ಪಂದ್ಯದಲ್ಲಿ ಭರ್ಜರಿ ಶತಕ ಸಿಡಿಸುವ ಮೂಲಕ ಹ್ಯಾರಿ ಬ್ರೂಕ್ ಇಂಗ್ಲೆಂಡ್ ಪರ ಒನ್‌ಡೇ ಕ್ರಿಕೆಟ್‌ನಲ್ಲಿ ಶತಕ ಸಿಡಿಸಿದ ಅತ್ಯಂತ ಕಿರಿಯ ನಾಯಕನೆಂಬ ದಾಖಲೆ ಬರೆದಿ ದ್ದಾರೆ. ಅದು ಸಹ ತಮ್ಮ 25ನೇ ವಯಸ್ಸಿನಲ್ಲಿ ಎಂಬುದು ವಿಶೇಷ.

ಇದಕ್ಕೂ ಮುನ್ನ ಈ ದಾಖಲೆ ಮಾಜಿ ನಾಯಕ ಅಲೆಸ್ಟರ್ ಕುಕ್ ಹೆಸರಿನಲ್ಲಿತ್ತು. 2011 ರಲ್ಲಿ ಶ್ರೀಲಂಕಾ ವಿರುದ್ಧದ ಏಕದಿನ ಪಂದ್ಯದಲ್ಲಿ ಶತಕ ಸಿಡಿಸುವ ಮೂಲಕ 26 ವರ್ಷದ ಕುಕ್, ಇಂಗ್ಲೆಂಡ್ ಪರ ಒನ್‌ಡೇನಲ್ಲಿ ಸೆಂಚುರಿ ಬಾರಿಸಿದ ಅತ್ಯಂತ ಕಿರಿಯ ನಾಯಕ ಎನಿಸಿಕೊಂಡಿದ್ದರು. ಇದೀಗ ಏಕದಿನ ಕ್ರಿಕೆಟ್‌ಗೆ ನಾಯಕನಾಗಿ ಪಾದಾರ್ಪಣೆ ಮಾಡಿದ ಸರಣಿಯಲ್ಲೇ ಹ್ಯಾರಿ ಬ್ರೂಕ್ ಎರಡು ಭರ್ಜರಿ ದಾಖಲೆಗಳನ್ನು ತಮ್ಮದಾಗಿಸಿಕೊಂಡಿದ್ದಾರೆ. ಅದರಲ್ಲೂ ಕಳೆದ 5 ವರ್ಷಗಳಿಂದ ವಿರಾಟ್ ಕೊಹ್ಲಿ ಹೆಸರಿನಲ್ಲಿದ್ದ ವಿಶ್ವದಾಖಲೆಯನ್ನು ಮುರಿಯುವಲ್ಲಿ ಯಶಸ್ವಿಯಾಗಿದ್ದಾರೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com, epaper.udayavahini.in, www.udayavahini.in, Udaya vahini news, Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966